ಸಂಪುಟ: 22, ಸಂಚಿಕೆ: 40, ಪುಟಗಳು: 8, ಬುಧವಾರ, 20 ನವೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡವೇ ಸತ್ಯ, ಕನ್ನಡವೇ ನಿತ್ಯ
ವೇಣು ಸಾರಥ್ಯದಲ್ಲಿ...
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



### ಸುಭಾಷಿತ

ನಿಜವಾದ ಸಂತೋಷವು ಒಳಗಿನಿಂದ ಬರುತ್ತದೆ. ಯಾವುದೇ ಸಂದರ್ಭದಲ್ಲಿಯೂ ಸಂತೋಷವನ್ನು ತಿರಸ್ಕರಿಸದಿರಿ.

### ಪಂಚಾಂಗ

(ಬುಧವಾರ 20, ನವೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು,
- ಕಾರ್ತಿಕ ಮಾಸ, ಕೃಷ್ಣ ಪಕ್ಷ,
- ಬುಧವಾರ, ಪಂಚಮಿ ತಿಥಿ,
- ಪುನರ್ವಸು ನಕ್ಷತ್ರ
- ರಾಹುಕಾಲ : 12:09 ರಿಂದ 1:36
- ಗುಳಿಕಕಾಲ : 10:43 ರಿಂದ 12:09
- ಯಮಗಂಡಕಾಲ : 7:50 ರಿಂದ 9:16

## ಸಂಕ್ಷಿಪ್ತ ಸುದ್ದಿ

### ರೈಲು ನಿಲ್ದಾಣದಲ್ಲಿ ಟಿಕೆಟ್‌ಗಾಗಿ ನಿಲ್ಲಬೇಕಿಲ್ಲ ಕ್ಯೂ: ನಿಂತಿದ್ದಲ್ಲೇ ಸಿಗಲಿದೆ ಟಿಕೆಟ್!



**ಬೆಂಗಳೂರು:** ರೈಲ್ವೆ ಸ್ಟೇಷನ್ ಅಂದರೆ ಮೊದಲಿಗೆ ನೆನಪಾಗುವುದೇ ಟಿಕೆಟ್ ಕೌಂಟರ್ ಮುಂದಿನ ಸರದಿ ಸಾಲು. ಅದರಲ್ಲೂ ಹಬ್ಬಗಳ ಸೀಸನ್ ಬಂದರೆ ಸಾಕು, ಹೆಜ್ಜೆ ಹೆಜ್ಜೆಗೂ ಪ್ರಯಾಣಿಕರಿರುತ್ತಾರೆ. ಕ್ಯೂ ಉದ್ದ ಇರುತ್ತದೆ. ಕೆಲವರು ಟಿಕೆಟ್ ಸಿಗದೆ ವಾಪಸ್ ಆಗುವ ಘಟನೆಯೂ ಕೂಡ ನಡೆಯುತ್ತವೆ. ಆದರೆ, ಇದೀಗ ಪ್ರಯಾಣಿಕರ ಸಂಕಷ್ಟ ತಪ್ಪಿಸಲು ನೈರುತ್ಯ ರೈಲ್ವೆ ಹೊಸ ಯೋಜನೆ ಶುರು ಮಾಡುತ್ತಿದೆ.

**ಪ್ರಯಾಣಿಕರಿದ್ದ ಜಾಗಕ್ಕೇ ಬಂದು ಕೊಡಲಿದ್ದಾರೆ ಟಿಕೆಟ್!:** ಇನ್ಮುಂದೆ ರೈಲ್ವೆ ಪ್ರಯಾಣಿಕರು ಟಿಕೆಟ್‌ಗಾಗಿ ಕೌಂಟರ್ ಮುಂದೆ ಸರದಿಯಲ್ಲಿ ನಿಂತು ಕಾಯಬೇಕಿಲ್ಲ, ಪ್ರಯಾಣಿಕರ ದಟ್ಟಣೆಯ ಪುಟ 2

### ನೋಟಿಸ್ ಇಲ್ಲದೇ ರಾತ್ರಿ ದಿಢೀರ್ ಲೋಕಾ ಎಸ್‌ಪಿ ಕಚೇರಿಗೆ ಭೇಟಿ ನೀಡಿದ ಸಿಎಂ ಬಾಮೈದ!

**ಮೈಸೂರು:** ರಾತ್ರೋರಾತ್ರಿ, ನೋಟಿಸ್ ಇಲ್ಲದೇ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಸೈಟ್ ಹಂಚಿಕೆ ಅಕ್ರಮದ ತನಿಖೆ ನಡೆಸುತ್ತಿರುವ ಲೋಕಾಯುಕ್ತ ಎಸ್‌ಪಿ ಟಿ.ಜೆ. ಉದೇಶ್ ಅವರನ್ನು ಸಿಎಂ ಸಿದ್ದರಾಮಯ್ಯ ಭಾಮೈದ ಮಲ್ಲಿಕಾರ್ಜುನ ಸ್ವಾಮಿ ಭೇಟಿ ಮಾಡಿದ್ದು ಹಲವು ಅನುಮಾನಗಳನ್ನು ಸೃಷ್ಟಿಸಿದೆ. ಹೌದು. ಮಂಗಳವಾರ ಮುಡಾದ ಹಿಂದಿನ ಆಯುಕ್ತ ಡಿ.ಬಿ. ನಟೇಶ್ ಲೋಕಾಯುಕ್ತ ಎಸ್‌ಪಿ ಕಚೇರಿಯಲ್ಲಿ ವಿಚಾರಣೆಗೆ ಹಾಜರಾಗಿದ್ದರು. ನಟೇಶ್ ವಿಚಾರಣೆ ಮುಗಿದ ಅರ್ಧಗಂಟೆಯ ಬಳಿಕ ಮಲ್ಲಿಕಾರ್ಜುನ ಸ್ವಾಮಿ ಅವರು ಉದೇಶ್ ಅವರನ್ನು ಭೇಟಿಯಾಗಿದ್ದಾರೆ. ಪುಟ 2



### ದಿನಸಿಗೆಂದು ಬಂದಿದ್ದ ವಿಕ್ರಂಗೌಡ ಉಡೀಸ್

# ಎನ್‌ಕೌಂಟರ್‌ಗೂ ಮುನ್ನ ಪೊಲೀಸರಿಂದ ಮನೆಯವರ ಶಿಫ್ಟ್



**ಉಡುಪಿ:** ಪಶ್ಚಿಮ ಘಟ್ಟದ ತಪ್ಪಲಿನಲ್ಲಿ ನಡೆದ ರಣರೋಚಕ ಕಾರ್ಯಾಚರಣೆಯಲ್ಲಿ ಕರ್ನಾಟಕ, ಕೇರಳ ಹಾಗೂ ತಮಿಳುನಾಡು ರಾಜ್ಯಗಳ ಮೋಸ್ಟ್ ವಾಂಟೆಡ್ ನಕ್ಸಲ್ ನಾಯಕ ವಿಕ್ರಂಗೌಡ ಹತನಾಗಿದ್ದಾನೆ. ಈ ರೋಚಕ ಕಾರ್ಯಾಚರಣೆಗೆ ಪೊಲೀಸರು ಸುಮಾರು ಒಂದು ತಿಂಗಳ ಹೋಂವರ್ಕ್ ಮಾಡಿದ್ದರು. ಕಂಪ್ಲೀಟ್ ಚಲನವಲನಗಳ ಮೇಲೆ ನಿಗಾ ಇಟ್ಟಿದ್ದ ನಿಗ್ರಹದಳ, ಆತ ಬರುವ ಮೊದಲೇ ಮನೆಯನ್ನು ಹೊಕ್ಕಿ ಕುಳಿತಿತ್ತು.

ಸೋಮವಾರ ರಾತ್ರಿ ಉಡುಪಿ ಜಿಲ್ಲೆ ಹೆಬ್ರಿ ತಾಲೂಕಿನ ಕಬ್ಬಿನಾಲೆ ಪೇಟೆಯಿಂದ ಸುಮಾರು 10 ಕಿ.ಮೀ ದೂರದ ಉಡುಪಿ-ಚಿಕ್ಕಮಗಳೂರು ಜಿಲ್ಲೆಗಳ ಗಡಿಯಾಗಿರುವ ಪೀತಬೈಲು ದಟ್ಟ ಕಾಡಂಚಿನಲ್ಲಿ ಈ ಕಾರ್ಯಾಚರಣೆ ನಡೆದಿದೆ. ನಕ್ಸಲ್ ಹಾಗೂ ಪೊಲೀಸರ ನಡುವಿನ ಗುಂಡಿನ ಚಕಮಕಿಯಲ್ಲಿ 61 ಪ್ರಕರಣಗಳಲ್ಲಿ ಬೇಕಾಗಿದ್ದ ನಕ್ಸಲ್ ನಾಯಕ ವಿಕ್ರಂಗೌಡನನ್ನು ಪೊಲೀಸರು ಹೊಡೆದುರುಳಿಸಿದ್ದಾರೆ. ಈತನ ತಲೆಗೆ ಕರ್ನಾಟಕ ಸರ್ಕಾರ 5 ಲಕ್ಷ ರೂ. ಬಹುಮಾನ ಘೋಷಿಸಿತ್ತು.

ಹೆಬ್ರಿ ತಾಲೂಕು ಬಚ್ಚಪ್ಪು ಪೀತಬೈಲ್‌ನಲ್ಲಿ ನಾರಾಯಣ, ಜಯಂತ, ಸುಧಾಕರ ಎಂಬವರ ಮನೆಯಿದೆ. ನವೆಂಬರ್ 11ರಂದು ಬಂದು ರೇಷನ್ ತೆಗೆದಿರಿಸುವಂತೆ ನಕ್ಸಲ್ ಟೀಂ ತಾಕೀತು ಮಾಡಿತ್ತು. ರೇಷನ್ ಪಡೆಯಲು ಸೋಮವಾರ ಬರುವುದಾಗಿ ನಕ್ಸಲ್ ಟೀಂ ತಿಳಿಸಿತ್ತು. ವಾರದ ಹಿಂದೆಯೂ ಪೀತಬೈಲು ಮಲೆಕುಡಿಯರಿಂದ ಅಕ್ಕಿ, ಬೇಳೆ ಸಂಗ್ರಹಿಸಿತ್ತು ಎಂಬ ಮಾಹಿತಿ ದೊರೆತಿದೆ. ಈ ಬಗ್ಗೆ ಖಚಿತ ಮಾಹಿತಿ ಪಡೆದಿದ್ದ ಎಎನ್‌ಎಫ್ ಯೋಧರು ಆ ಮನೆಯವರನ್ನು ತೆರವುಗೊಳಿಸಿ ಆ ಪ್ರದೇಶದಲ್ಲಿ ಕಾದು ಕುಳಿತಿದ್ದರು. ವಿಕ್ರಂಗೌಡ ಮತ್ತು ತಂಡ ಮನೆಯ ಅಂಗಳಕ್ಕೆ ಬರುತ್ತಿದ್ದಂತೆ ಪೊಲೀಸರು ಶರಣಾಗುವಂತೆ ಕೇಳಿದ್ದಾರೆ. ಪೊಲೀಸರನ್ನು ಕಂಡು ವಿಕ್ರಂ ಬಂದೂಕು ತೆಗೆದಿದ್ದಾನೆ. ಈ ವೇಳೆ ವಿಕ್ರಂ ತಂಡ ಹಾಗೂ ಪೊಲೀಸರ ನಡುವೆ ಗುಂಡಿನ ಚಕಮಕಿ ನಡೆದಿದೆ. ಪುಟ 2

# ಇಂದು ದೆಹಲಿಗೆ ಸಿಎಂ ಪ್ರಯಾಣ

## ಸಂಪುಟ ಪುನಾರಚನೆ ಬಗ್ಗೆ ಹೈಕಮಾಂಡ್ ಜೊತೆ ಚರ್ಚೆ?



**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ಹಲವು ಬೆಳವಣಿಗೆಗಳ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ರಾತ್ರಿ ದೆಹಲಿಗೆ ತೆರಳುತ್ತಿದ್ದಾರೆ. ಗುರುವಾರ ಬೆಳಗ್ಗೆ ಕೆಎಂಎಫ್ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿರುವ ಸಿಎಂ, ಬಳಿಕ ಹೈಕಮಾಂಡ್ ನಾಯಕರನ್ನ ಭೇಟಿ ಮಾಡಲಿದ್ದಾರೆ ಎಂದು ಹೇಳಲಾಗುತ್ತಿದೆ.

ಮುಡಾ ಪ್ರಕರಣ, ವಕ್ಫ್ ವಿವಾದ ಮತ್ತು ರಾಜ್ಯದ ಮೂರು ವಿಧಾನಸಭೆ ಕ್ಷೇತ್ರಗಳಿಗೆ ನಡೆದ ಉಪಚುನಾವಣೆ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೈ ಕಮಾಂಡ್ ನಾಯಕರ ಜೊತೆಗೆ ಚರ್ಚೆ ನಡೆಸಲಿದ್ದಾರೆ ಎಂಬ ಮಾತು ಕೇಳಿಬಂದಿದೆ.

**ಮುಡಾ ಪ್ರಕರಣದ ಬಗ್ಗೆ ಕಾನೂನು ತಜ್ಞರ ಸಲಹೆ!:** ಗುರುವಾರ ಬೆಳಗ್ಗೆ ಕೆಎಂಎಫ್ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಬಳಿಕ ಸಿದ್ದರಾಮಯ್ಯ ಅವರು ಹೈ ಕಮಾಂಡ್ ನಾಯಕರ ಜೊತೆಗೆ ಮಾತುಕತೆ ನಡೆಸಲಿದ್ದಾರೆ. ಕಪಿಲ್ ಸಿಬಲ್, ಅಭಿಷೇಕ್ ಮನು ಸಿಂಘ್ವಿ ಅವರನ್ನು ಸಿಎಂ ಭೇಟಿ ಮಾಡುವ ಸಾಧ್ಯತೆ ಇದೆ. ಮುಡಾ ಪ್ರಕರಣ ಸಂಬಂಧಿಸಿದಂತೆ ಇಡಿಯಿಂದ ನೋಟಿಸ್ ಜಾರಿ ಮಾಡುವ ಸಾಧ್ಯತೆ ಇದೆ. ಹೀಗಾಗಿ ಒಂದು ವೇಳೆ ಇಡಿಯಿಂದ ನೋಟಿಸ್ ಜಾರಿಯಾದರೆ ಯಾವ ರೀತಿಯ ಕಾನೂನು ಹೋರಾಟ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚರ್ಚೆ ನಡೆಸಲಿದ್ದಾರೆ ಎನ್ನಲಾಗಿದೆ. ತಮಗೆ ಅಥವಾ ಪತ್ನಿ ಪಾರ್ವತಿ ಅವರಿಗೆ ಇಡಿ ನೋಟಿಸ್ ಜಾರಿ ಮಡುವ ಬಗ್ಗೆ ಚರ್ಚೆ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ಸಿಎಂ, ಕಾನೂನು ತಜ್ಞರಿಂದ ಒಂದಷ್ಟು ಸಲಹೆ ಪಡೆಯುವ ಸಾಧ್ಯತೆ ಇದೆ.

### ಸಂಪುಟ ಪುನಾರಚನೆ ಕುರಿತು ಸಲಹೆ?

ಹೈಕಮಾಂಡ್ ಭೇಟಿ ವೇಳೆ ರಾಜ್ಯದ ಇತ್ತೀಚಿನ ರಾಜಕೀಯ ವಿದ್ಯಮಾನ ಕುರಿತು ಸಿಎಂ ಮಾಹಿತಿ ನೀಡಲಿದ್ದಾರೆ. ಮೂರು ಕ್ಷೇತ್ರಗಳ ಉಪ ಚುನಾವಣೆ , ವಕ್ಫ್ ವಿವಾದ ಹಾಗೂ ಸಂಪುಟ ಪುನಾರಚನೆ ಕುರಿತು ಚರ್ಚೆ ನಡೆಸುವ ಸಾಧ್ಯತೆ ಇದೆ ಎನ್ನಲಾಗಿದೆ. ಸಂಪುಟ ಪುನಾರಚನೆ ಕುರಿತು ಸಾಕಷ್ಟು ಒತ್ತಾಯ ಕೇಳಿ ಬರುತ್ತಿರುವ ಹಿನ್ನಲೆ ಹೈ ಕಮಾಂಡ್ ಜೊತೆಗೆ ಚರ್ಚಿಸಿ ಸಂಪುಟ ಪುನಾರಚನೆ ಕುರಿತು ಸಿಎಂ ಸಲಹೆ ಪಡೆಯಲಿದ್ದಾರೆ ಎಂದು ಹೇಳಲಾಗುತ್ತಿದೆ.

ರಾಜ್ಯದಲ್ಲಿ ವಕ್ಫ್ ವಿವಾದ ಸಾಕಷ್ಟು ಸದ್ದು ಮಾಡುತ್ತಿದೆ. ವಕ್ಫ್ ವಿಚಾರವನ್ನೇ ಅಸ್ತ್ರವನ್ನಾಗಿ ಮಾಡಿಕೊಂಡಿರುವ ವಿರೋಧ ಪಕ್ಷ ಬಿಜೆಪಿ ರಾಜ್ಯಾದ್ಯಂತ ಜನಾಂದೋಲನಕ್ಕೆ ಸಿದ್ಧತೆ ಮಾಡಿಕೊಂಡಿದೆ. ಹೀಗಾಗಿ ವಕ್ಫ್ ವಿವಾದ ಬಗ್ಗೆ ಕೂಡ ಸಿಎಂ, ಹೈಕಮಾಂಡ್ ಜೊತೆ ಚರ್ಚೆ ನಡೆಸಲಿದ್ದಾರೆ. ವಕ್ಫ್ ವಿವಾದ ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಹೈಕಮಾಂಡ್‌ಗೆ ಸಿಎಂ ಮಾಹಿತಿ ನೀಡಲಿದ್ದಾರೆ. ಇದೇ ವೇಳೆ ಸರ್ಕಾರದ ಮೇಲೆ ಕೇಳಿ ಬಂದಿರುವ ಹಗರಣಗಳ ಕುರಿತು ಕೂಡ ದೆಹಲಿ ನಾಯಕರಿಗೆ ಸಿಎಂ ಸಿದ್ದರಾಮಯ್ಯ ಮಾಹಿತಿ ನೀಡಲಿದ್ದಾರೆ ಎಂದು ಹೇಳಲಾಗುತ್ತಿದೆ.

### ಅರ್ಹ ಪತ್ರಕರ್ತರಿಗೆ ರಾಜ್ಯೋತ್ಸವ ಪ್ರಶಸ್ತಿಗಳು ಸಂದಿವೆ: ಕೆವಿ ಪ್ರಭಾಕರ್



**ಬೆಂಗಳೂರು:** ಮಾಧ್ಯಮ ಕ್ಷೇತ್ರದಲ್ಲಿ ಸಾಧನೆಗೈಯುತ್ತಿರುವ ನೂರಾರು ಪತ್ರಕರ್ತರಿದ್ದಾರೆ. ಇಚ್ಛಾಶಕ್ತಿ ಮತ್ತು ಬದ್ಧತೆಯಿಂದ ಕಾರ್ಯಪ್ರವೃತ್ತರಾಗಿರುವ ಅರ್ಹ ಪತ್ರಕರ್ತರಿಗೆ ಈ ಬಾರಿ ರಾಜ್ಯೋತ್ಸವ-ಸುವರ್ಣ ಮಹೋತ್ಸವ ಪ್ರಶಸ್ತಿಗಳು ಸಂದಿವೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟರು. ಪುಟ 2

### ಮಹಾರಾಷ್ಟ್ರದಲ್ಲಿ ಇಂದು ಮಹಾ ಚುನಾವಣೆ

## ಎಂವಿಎ-ಮಹಾಯುತಿ ಭರ್ಜರಿ ಕದನ



**ಮುಂಬೈ:** ಮಹಾರಾಷ್ಟ್ರ ವಿಧಾನಸಭೆಯ ಎಲ್ಲಾ 288 ಕ್ಷೇತ್ರಗಳು, ಜಾರ್ಖಂಡ್‌ನಲ್ಲಿ 2ನೇ ಮತ್ತು ಅಂತಿಮ ಹಂತದಲ್ಲಿ 38 ಕ್ಷೇತ್ರಗಳಿಗೆ ಇಂದು ಮತದಾನ ನಡೆಯಲಿದೆ.

ಮಹಾರಾಷ್ಟ್ರದಲ್ಲಿ ಮಹಾ ವಿಕಾಸ್ ಅಘಾಡಿ-ಮಹಾಯುತಿ ಮೈತ್ರಿಕೂಟಗಳ ನಡುವೆ ನೇರಾನೇರ ಹಣಾಹಣಿ ಏರ್ಪಟ್ಟಿದೆ. ಜಾರ್ಖಂಡ್‌ನಲ್ಲಿ ಬಿಜೆಪಿ ಮತ್ತು ಇಂಡಿಯಾ ಮೈತ್ರಿಕೂಟದ ನಡುವೆ ಫೈಟ್ ಇದೆ. ಸುಗಮ ಮತದಾನಕ್ಕೆ ಚುನಾವಣಾ ಆಯೋಗ ಸಕಲ ಸಿದ್ಧತೆ ನಡೆಸಿದೆ. ಷೇರುಪೇಟೆ, ಬ್ಯಾಂಕ್, ಶಾಲೆ-ಕಾಲೇಜು, ಕಚೇರಿಗಳಿಗೆ ರಜೆ ಘೋಷಿಸಲಾಗಿದೆ. ಈ ಹೊತ್ತಲ್ಲೇ, ಪಾಲ್ಘರ್‌ನ ವಿರಾರ್ ನಲ್ಲಿ ಬಿಜೆಪಿ ಪ್ರಧಾನ ಕಾರ್ಯದರ್ಶಿ ವಿನೋದ್ ತಾವ್ಡೆ ಮತದಾರರಿಗೆ ಹಣ ಹಂಚಿಕೆ ಮಾಡ್ತಿದ್ದಾರೆ ಎಂದು ಆರೋಪಿಸಿ ಬಿವಿಎ ಕಾರ್ಯಕರ್ತರು ಮುತ್ತಿಗೆ ಹಾಕಿ ಗದ್ದಲ ಎಬ್ಬಿಸಿದ್ದಾರೆ.

ಬಿಜೆಪಿ ಡೈರಿ, ಹಣದ ಕವರ್‌ಗಳು ಸಿಕ್ಕಿವೆ ಎನ್ನಲಾಗಿದೆ. ಈ ವೀಡಿಯೋ ಹಂಚಿಕೊಂಡ ಕಾಂಗ್ರೆಸ್ ಆಕ್ರೋಶ ಹೊರಹಾಕಿದೆ. ಆಯೋಗಕ್ಕೆ ದೂರು ನೀಡಿದೆ. ಇದನ್ನು ಗಂಭೀರವಾಗಿ ಪರಿಗಣಿಸಿದ ಆಯೋಗ, ವಿನೋದ್ ತಾವ್ಡೆ ವಿರುದ್ಧ ಎಫ್‌ಐಆರ್ ದಾಖಲಿಸಿದೆ. ಆದರೆ, ಈ ಆರೋಪವನ್ನು ಬಿಜೆಪಿ ತಳ್ಳಿ ಹಾಕಿದೆ. ಇನ್ನು, ಬಿಜೆಪಿ, ಸಂಘಪರಿವಾರವನ್ನು ವಿಷದ ಹಾವಿಗೆ ಹೋಲಿಸಿದ್ದ ಮಲ್ಲಿಕಾರ್ಜುನ ಖರ್ಗೆಯನ್ನು ಹುಚ್ಚು ನಾಯಿಗೆ ಸಿ.ಟಿ.ರವಿ ಹೋಲಿಕೆ ಮಾಡಿದ್ದಾರೆ.

## ಚೆಂಡು ಹೂವು ಬೆಲೆ ಕುಸಿತ ರಸ್ತೆಬದಿ ಸುರಿದು ರೈತ ಆಕ್ರೋಶ



**ಕೋಲಾರ:** ಸಾಲು ಸಾಲು ಹಬ್ಬಗಳು ಮುಗಿದ ಬಳಿಕ ಚೆಂಡು ಹೂವಿನ ಬೆಲೆ ತೀವ್ರ ಕುಸಿತವಾಗಿದೆ. ಈ ಹಿನ್ನೆಲೆ ರೈತರೊಬ್ಬರು ತಾವು ಬೆಳೆದ ಹೂವನ್ನು ರಸ್ತೆಬದಿ ಸುರಿದು ಆಕ್ರೋಶ ವ್ಯಕ್ತಪಡಿಸಿದ ಘಟನೆ ಕೋಲಾರದಲ್ಲಿ ನಡೆದಿದೆ.

ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲೂಕಿನ ನೆರ್ನಹಳ್ಳಿಯ ನಾರಾಯಣಪ್ಪ ಎಂಬ ರೈತ ದೇವರ ಪಾದದ ಬಳಿ ಇರಬೇಕಾದ ಹೂವನ್ನು ರಸ್ತೆಯಲ್ಲಿ ಚೆಲ್ಲಿ ಬೇಸರ ವ್ಯಕ್ತಪಡಿಸಿದ್ದಾರೆ. ವ್ಯಾಪಾರಿಗಳು ಕೆಜಿಗೆ 10 ರೂ.ನಂತೆ ಕೇಳುತ್ತಿದ್ದಾರೆ. ಮಾರುಕಟ್ಟೆಯಲ್ಲಿ ಹೂವಿನ ಬೆಲೆ ಇಲ್ಲದೆ ಹೂವಿನ ಬೆಳೆಗಾರರು ಕಂಗಾಲಾಗಿದ್ದಾರೆ.

ನಾರಾಯಣಪ್ಪ ಸುಮಾರು ನಾಲ್ಕು ಎಕರೆ ಪ್ರದೇಶದಲ್ಲಿ ಎಕರೆಗೆ 50 ಸಾವಿರದಂತೆ ಖರ್ಚು ಮಾಡಿ ಚೆಂಡು ಹೂವು ಬೆಳೆದಿದ್ದರು. ಆದರೆ ಚೆಂಡು ಹೂವು ಬೆಲೆ ಕುಸಿತ ಕಂಡ ಹಿನ್ನೆಲೆ ಕೋಲಾರ ಮುಖ್ಯರಸ್ತೆ ಬದಿಯಲ್ಲಿ ಸುರಿದು ಆಕ್ರೋಶ ಹೊರಹಾಕಿದ್ದಾರೆ. ಅಲ್ಲದೇ ಸರ್ಕಾರ ರೈತರ ನೆರವಿಗೆ ಧಾವಿಸುವಂತೆ ಒತ್ತಾಯಿಸಿದ್ದಾರೆ.

### ಆಹಾರ ಸುರಕ್ಷತಾ ಇಲಾಖೆಯಿಂದ 127 ಪಿಜಿಗಳಿಗೆ ನೋಟಿಸ್

## 4 ಪಿಜಿಗೆ ದಂಡ

**ಬೆಂಗಳೂರು:** ಪಿಜಿಗಳಲ್ಲಿ ಆಹಾರ ಸುರಕ್ಷತೆ ಕಾಪಾಡಿಕೊಳ್ಳದ ಹಿನ್ನೆಲೆ ರಾಜ್ಯದ 127 ಪಿಜಿಗಳಿಗೆ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಇಲಾಖೆ ನೋಟಿಸ್ ನೀಡಿದೆ. ಪುಟ 2



### ಬಿರೇನ್ ಸರ್ಕಾರಕ್ಕೆ ಸಂಕಷ್ಟ

## ಬಿಜೆಪಿಯ 37ರ ಪೈಕಿ 17 ಶಾಸಕರು ಸಭೆಗೆ ಗೈರು

**ಇಂಫಾಲ:** ಸಂಘರ್ಷಪೀಡಿತ ಮಣಿಪುರದಲ್ಲಿ ಬಿರೇನ್ ಸಿಂಗ್ ನೇತೃತ್ವದ ಎನ್‌ಡಿಎ ಸರ್ಕಾರ ಸಂಕಷ್ಟಕ್ಕೆ ಸಿಲುಕಿದೆ. ಹಿಂಸಾಚಾರ ನಿಯಂತ್ರಿಸುವಲ್ಲಿ ವಿಫಲವಾಗಿರುವ ಮುಖ್ಯಮಂತ್ರಿ ಬಿರೇನ್ ಸಿಂಗ್ ಅವರ ವಿರುದ್ಧವೇ ಪಕ್ಷದೊಳಗೆ ಅಸಮಾಧಾನ ಬಹಿರಂಗವಾಗಿಯೇ ಸ್ಫೋಟಗೊಂಡಿದೆ.



ಎನ್‌ಡಿಎಗೆ ನೀಡಿದ್ದ ಬೆಂಬಲವನ್ನು ಎನ್‌ಪಿಪಿ ಹಿಂಪಡೆದ ಹಿನ್ನೆಲೆಯಲ್ಲಿ ಮುಂದಿನ ಕಾರ್ಯತಂತ್ರದ ಕುರಿತು ಚರ್ಚಿಸಲು ಸಿಎಂ ಬಿರೇನ್ ಸಿಂಗ್ ಕರೆದಿದ್ದ ಎನ್‌ಡಿಎ ಶಾಸಕಾಂಗ ಪಕ್ಷದ ಸಭೆಯಲ್ಲಿ 27 ಮಂದಿ ಹಾಜರಾಗಿದ್ದರೆ 19 ಮಂದಿ ಗೈರಾಗಿದ್ದರು. ಈ ಪೈಕಿ ಬಿಜೆಪಿಯ 37 ಶಾಸಕರ ಪೈಕಿ 17 ಮಂದಿ ಗೈರಾಗಿದ್ದು ಭಾರೀ ಚರ್ಚೆಗೆ ಗ್ರಾಸವಾಗಿದೆ.

19ರಲ್ಲಿ 7 ಶಾಸಕರು ವೈದ್ಯಕೀಯ ಕಾರಣ ಹೇಳಿ ಗೈರು ಹಾಜರಾದರೆ ಉಳಿದ 12 ಜನ ಹೇಳದೇ ಕೇಳದೇ ಗೈರು ಹಾಜರಾಗಿದ್ದಾರೆ. ಈಗ ಬಂದಿರುವ ಮಾಹಿತಿ ಪ್ರಕಾರ 7 ಮಂದಿ ಶಾಸಕರು ಮಣಿಪುರವನ್ನೇ ತೊರೆದಿದ್ದಾರೆ. ಸಭೆಗೆ ಗೈರಾಗಿದ್ದಕ್ಕೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ. ಪುಟ 2

### ಸರ್ಕಾರಿ ಶಾಲೆಗೆ ಮಂಜೂರಾದ ಜಾಗದಲ್ಲಿ ದೇಗುಲ

## ಬಂದೋಬಸ್ತ್‌ನಲ್ಲಿ ತೆರವು



**ರಾಯಚೂರು:** ನಗರದಲ್ಲಿ ಮಧ್ಯರಾತ್ರಿ ಜೆಸಿಬಿಗಳು ಘರ್ಜಿಸಿದ್ದು, ಇಲ್ಲಿನ ಸಂತೋಷ ನಗರದಲ್ಲಿ ಅಕ್ರಮವಾಗಿ ಸಿಎ ಸೈಟ್‌ನಲ್ಲಿ ನಿರ್ಮಿಸಿದ್ದ ಶಿವ ಮತ್ತು ಗಣೇಶನ ದೇಗುಲ ತೆರವು ಮಾಡಲಾಗಿದೆ. ರಾಯಚೂರು ಎಸಿ ಗಜಾನನ ಬಾಳೆ ನೇತೃತ್ವದಲ್ಲಿ ಮಧ್ಯರಾತ್ರಿ ಪೊಲೀಸ್ ಬಿಗಿ ಬಂದೋಬಸ್ತ್‌ನಲ್ಲಿ ಕಾರ್ಯಾಚರಣೆ ಮಾಡಲಾಯಿತು.

ಎಲ್‌ಬಿಎಸ್ ನಗರ ಪ್ರೌಢ ಶಾಲೆಗೆ ಮಂಜೂರಾಗಿದ್ದ ಜಾಗದಲ್ಲಿ ದೇಗುಲ ನಿರ್ಮಿಸಲಾಗಿತ್ತು. ಮನೆ ಕಟ್ಟುವ ವೇಳೆ ಸಿಮೆಂಟ್ ಹಾಗೂ ಇತರೆ ಸಾಮಾಗ್ರಿಗಳು ಇಡಲು ಕಟ್ಟಿದ್ದ ಶೆಡ್‌ನ್ನೇ ದೇಗುಲವಾಗಿ ಪರಿವರ್ತಿಸಲಾಗಿತ್ತು. ಶಾಲಾ ಕಟ್ಟಡ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿದ್ದ ಬಡಾವಣೆ ಜನ ದೇಗುಲ ನಿರ್ಮಿಸಿದ್ದರು.

2022 ಜೂನ್ 1 ರಲ್ಲಿ ಪ್ರೌಢಶಾಲೆ ಕಟ್ಟಡಕ್ಕೆ ಸಿ.ಎ. ಸೈಟ್ ಮಂಜೂರಾಗಿತ್ತು. ಜಾಗ ಮಂಜೂರು ಆದ ಬಳಿಕ ನಾಲ್ಕು ಕೊಠಡಿ ನಿರ್ಮಾಣಕ್ಕೆ ಅನುದಾನ ಸಹ ಬಿಡುಗಡೆಯಾಗಿತ್ತು. ಶಾಲೆ ಕಟ್ಟಡಕ್ಕೆ ಅನುದಾನ ಬಿಡುಗಡೆ ಆಗಿದ್ದರೂ ಸ್ಥಳೀಯರು ದೇಗುಲ ತೆರವಿಗೆ ವಿರೋಧ ವ್ಯಕ್ತಪಡಿಸಿದ್ದರು.

ಸ್ಥಳೀಯರ ವಿರೋಧದ ನಡುವೆಯೂ ಪೊಲೀಸ್ ಭದ್ರತೆಯಲ್ಲಿ ದೇಗುಲ ತೆರವು ಕಾರ್ಯಾಚರಣೆ ಮಾಡಲಾಗಿದೆ. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಇರಲು ಸದ್ಯ ಸ್ಥಳದಲ್ಲಿ ಪೊಲೀಸ್ ಬಿಗಿ ಬಂದೋಬಸ್ತ್ ಹಾಕಲಾಗಿದೆ.

### ಗಂಡು ಮಗುವಿಗೆ ಜನ್ಮ ನೀಡಿದ ತಾಯಿ ಸಾವು

## ಬಿಮ್ಸ್ ಮುಂದೆ ಪ್ರತಿಭಟನೆ



**ಬೆಳಗಾವಿ:** ವೈದ್ಯರ ನಿರ್ಲಕ್ಷ್ಯದಿಂದ ಬಾಣಂತಿ ಸಾವನ್ನಪ್ಪಿರುವ ಆರೋಪ ಕೇಳಿ ಬಂದಿದ್ದು, ರೊಚ್ಚಿಗೆದ್ದ ಕುಟುಂಬಸ್ಥರು ಬೆಳಗಾವಿ ಬಿಮ್ಸ್ ಆಸ್ಪತ್ರೆ ಎದುರು ದಿಢೀರ್ ಪ್ರತಿಭಟನೆ ನಡೆಸಿ, ತಪ್ಪಿತಸ್ಥ ವೈದ್ಯರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ರಾಮದುರ್ಗ ತಾಲೂಕಿನ ನಾಗನೂರ ತಾಂಡಾದ ಬಾಣಂತಿ ಕಲ್ಪನಾ ಅನಿಲ ಲಮಾಣಿ (26) ಮೃತ ಮಹಿಳೆ. ಸುದ್ದಿ ತಿಳಿಯುತ್ತಿದ್ದಂತೆ ಆಸ್ಪತ್ರೆ ಮುಂದೆ ಬಾಣಂತಿ ಕುಟುಂಬಸ್ಥರು ಮತ್ತು ಸಂಬಂಧಿಕರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿ ಪ್ರತಿಭಟಿಸಿದರು.

ಮಂಗಳವಾರ ನಸುಕಿನ 2:30ರ ಸುಮಾರಿಗೆ ಶಸ್ತ್ರಚಿಕಿತ್ಸೆ ಮೂಲಕ ಗಂಡು ಮಗುವಿಗೆ ಕಲ್ಪನಾ ಜನ್ಮ ನೀಡಿದ್ದರು. ಈ ವೇಳೆ ಮಗು ಮತ್ತು ತಾಯಿ ಆರೋಗ್ಯ ಇರುವುದಾಗಿ ವೈದ್ಯರು ಹೇಳಿದ್ದರಂತೆ. ಬೆಳಗ್ಗೆ 8:30ರವರೆಗೂ ಆರೋಗ್ಯವಾಗಿದ್ದ ಕಲ್ಪನಾ ಅವರ ಆರೋಗ್ಯದಲ್ಲಿ ಏಕಾಏಕಿ ಏರುಪೇರಾಗಿ ಸಾವುನ್ನಪ್ಪಿರುವುದಾಗಿ ವೈದ್ಯರು ತಿಳಿಸಿದ್ದಾರೆ. ವೈದ್ಯರ ನಿರ್ಲಕ್ಷ್ಯದಿಂದಲೇ ಬಾಣಂತಿ ಸಾವಾಗಿದೆ. ಎರಡು ಬಾರಿ ಸಿಸೇರಿಯನ್ ಮಾಡಿದ್ದಾರೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಇನ್ನು ತಾಯಿ ಮೃತರಾಗಿದ್ದರೆ, ಹಸಗೂಸು ಆಸ್ಪತ್ರೆಯ ಐಸಿಯು ಘಟಕದಲ್ಲಿದೆ.

ಆಪರೇಷನ್ ಸಂದರ್ಭದಲ್ಲಿ ಧರಿಸುವ ವಸ್ತ್ರ ಧರಿಸಿಲ್ಲ, ತರಾತುರಿಯಲ್ಲಿ ಸಿಸೇರಿಯನ್ ಮಾಡಿದ್ದಾರೆ. ಆರೋಗ್ಯದಲ್ಲಿ ಏರುಪೇರು ಆದಾಗ ಬೇರೆಡೆ ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತೇವೆ ಎಂದು ಕುಟುಂಬಸ್ಥರು ಮನವಿ ಮಾಡಿದರೂ, ಪುಟ 2

## ರಾಜ್ಯದಲ್ಲಿ ಕಾಂಗ್ರೆಸ್ ಮುಳುಗುತ್ತಿರುವ ಹಡುಗಿನ ತರಹ ಆಗಿದೆ

**ಹುಬ್ಬಳ್ಳಿ:** ರಾಜ್ಯದಲ್ಲಿ ಕಾಂಗ್ರೆಸ್ ಮುಳುಗುತ್ತಿರುವ ಹಡುಗಿನ ತರಹ ಆಗಿದೆ. ಆ ಪಕ್ಷ ತನ್ನಿಂದ ತಾನೇ ಪತನವಾಗುವುದು ಗೋಚರವಾಗುತ್ತಿದೆ ಎಂದು ಶಾಸಕ ಮಹೇಶ್ ಟೆಂಗಿನಕಾಯಿ ಟೀಕಿಸಿದ್ದಾರೆ.ಬಿಜೆಪಿ ಆಫರ್ ವಿಚಾರವಾಗಿ ರವಿ ಗಣಿಗ ಆರೋಪಕ್ಕೆ ಪ್ರತಿಕ್ರಿಯಿಸಿ, ಕೇವಲ ಪ್ರಚಾರಕ್ಕಾಗಿ ರವಿ ಗಣಿಗ ಅವರು ಇಲ್ಲದ ಸಲ್ಲದ ಹೇಳಿಕೆಗಳನ್ನು ನೀಡಿ ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಶಾಸಕರನ್ನು ಖರೀದಿಸುವ ಅವಶ್ಯಕತೆ ಬಿಜೆಪಿಗೆ ಇಲ್ಲ. 100 ಕೋಟಿ ರೂ. ಕೊಟ್ಟು ಕಾಂಗ್ರೆಸ್ ಶಾಸಕರನ್ನು ಬಿಜೆಪಿ ಖರೀದಿಸಲು ಯತ್ನಿಸುತ್ತಿದೆ ಎಂಬ ರವಿ ಗಣಿಗ ಅವರ ಹೇಳಿಕೆ ಬಾಲಿಶತನದಿಂದ ಕೂಡಿದೆ ಎಂದರು. ಈ ಹಿಂದೆ ಬೆಳಗಾವಿ ಶಾಸಕ ರಾಜು ಕಾಗೆ ಅವರು, ಕ್ಷೇತ್ರದ ಅಭಿವೃದ್ಧಿಗೆ ಹಣ ನೀಡದಿದ್ದರೆ ನಾನು ರಾಜೀನಾಮೆ ನೀಡಲು ಸಿದ್ಧವೆಂಬ ಹೇಳಿಕೆ ನೀಡಿದ್ದನ್ನು ರವಿ ಗಣಿಗ ಅವರು ಸ್ಮರಿಸಿಕೊಳ್ಳಬೇಕಾಗುತ್ತದೆ. ಈಗಾಗಲೇ ಹತ್ತು ಹಲವಾರು ಶಾಸಕರು ಕಾಂಗ್ರೆಸ್‌ನಿಂದ ಒಂದು ಕಾಲನ್ನು ಹೊರಗಿಟ್ಟಿದ್ದಾರೆ. ಈ ರೀತಿ ಹಿಟ್ ಆಂಡ್ ರನ್ ರೀತಿ ಇಲ್ಲಸಲ್ಲದ ಹೇಳಿಕೆ ನೀಡುವುದರಿಂದ ಮಂತ್ರಿ ಸ್ಥಾನ ಸಿಗುವುದಿಲ್ಲ ಎಂಬುದನ್ನು ಅರಿತುಕೊಳ್ಳಬೇಕು ಎಂದು ಹರಿಹಾಯ್ದರು.

## ಬಿಪಿಎಲ್, ಎಪಿಎಲ್ ಯಾವ ಕಾರ್ಡ್ ರದ್ದಾಗಲ್ಲ: ಕೆ.ಹೆಚ್. ಮುನಿಯಪ್ಪ

**ಬೆಂಗಳೂರು:** ಬಿಪಿಎಲ್ ಹಾಗೂ ಎಪಿಎಲ್ ಯಾವ ಕಾರ್ಡ್ ರದ್ದಾಗಲ್ಲ. ಈ ಬಗ್ಗೆ ಯಾರೂ ಭಯ ಪಡುವುದು ಬೇಡ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ ಹೇಳಿದ್ದಾರೆ, ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ



ವೇಳೆ, 20–25% ಅರ್ಹರಲ್ಲದವರು ಬಿಪಿಎಲ್ ಗೆ ಸೇರಿಕೊಂಡಿದ್ದಾರೆ. ಬಡವರಲ್ಲದವರು ಹಾಗೂ ಅರ್ಹರಲ್ಲದವರೂ ಕೂಡ ಇದರಲ್ಲಿ ಸೇರಿಕೊಂಡಿದ್ದಾರೆ. 80% ರಾಜ್ಯದಲ್ಲಿ ಬಡವರ ಪ್ರಮಾಣ ಇದೆ. ಇದು ಸಾಧ್ಯವಾ ಕರ್ನಾಟಕ ರಾಜ್ಯದಲ್ಲಿ 80% ಬಡವರಿದ್ದಾರಾ ಎಂದು ಪ್ರಶ್ನಿಸಿದ್ದಾರೆ. ಯಾವುದೇ ಕಾರಣಕ್ಕೂ ಬಿಪಿಎಲ್ ರದ್ದು ಮಾಡುವುದಿಲ್ಲ. ಇದಕ್ಕೆ ರಾಜಕೀಯ ಬೆರೆಸಿ ದೊಡ್ಡ ಗದ್ದಲ ಮಾಡ್ತಿದ್ದಾರೆ. ಯಾರು ಬಡತನ ರೇಖೆಗಿಂತ ಕೆಳಗಿದ್ದಾರೆ, ಯಾರು ಮೇಲಿದ್ದಾರೆ ಸತ್ಯವಾದ ಮಾಹಿತಿ ಹೊರಗೆ ಬಿಡುತ್ತೇನೆ. ಬಿಜೆಪಿಯವರು ಸುಮ್ಮನೆ ತರಲೆ ಮಾಡ್ತಿದ್ದಾರೆ. ಬಿಪಿಎಲ್ ನವರು ಯಾರೂ ಕೂಡ ಭಯ ಪಡಬೇಕಿಲ್ಲ ಎಂದು ಅವರು ಸ್ಪಷ್ಟನೆ ನೀಡಿದ್ದಾರೆ.ನಿಜವಾದ ಬಿಪಿಎಲ್‌ನವರಿಗೆ ಯಾರಿಗೂ ತೊಂದರೆ ಆಗುವುದಿಲ್ಲ. ಅಕಸ್ಮಾತ್ ಅರ್ಹರಿದ್ದು ಬಿಪಿಎಲ್‌ನಿಂದ ಕೈ ಬಿಟ್ಟರೆ, ಅಂತವರಿಗೆ ಪುನಃ ಬಿಪಿಎಲ್ ಕಾರ್ಡ್ ಸಿಗುವ ವ್ಯವಸ್ಥೆ ಮಾಡುತ್ತೇವೆ. 15–20 ದಿನಗಳಲ್ಲಿ ಸಂಪೂರ್ಣ ಪರಿಷ್ಕರಣೆ ಆಗುತ್ತದೆ. ಈ ಬಗ್ಗೆ ಬುಧವಾರ ಮಾತಾಡುತ್ತೇನೆ. ಈ ಬಗ್ಗೆ ಅಂಕಿ ಅಂಶ ಕೊಡುತ್ತೇನೆ. ಹೊಸ ಕಾರ್ಡ್ ಕೂಡ ಬಿಡುಗಡೆ ಮಾಡುತ್ತೇವೆ ಎಂದು ಮಾಹಿತಿ ನೀಡಿದ್ದಾರೆ.

# ಮೋದಿ ಉದ್ಯೋಗ ಸೃಷ್ಟಿಸುವ ಕೆಲಸ ಮಾಡ್ಲಿ ನಾನೇ ನಿಂತು ಜಾಗ ಕೊಡಿಸ್ತೀನಿ: ಡಿಕೆಶಿ

**ಬೆಂಗಳೂರು:** ವಿಪಕ್ಷಗಳು ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿವೆ. ವಿಷಯ ಇಲ್ಲದೇ ನಮ್ಮ ಸರ್ಕಾರದ ವಿರುದ್ಧ ಸುಳ್ಳು ಆರೋಪ ಮಾಡುತ್ತಿವೆ. ಮೋದಿ ಅವರು ಮೊದಲು ಕೊಟ್ಟಿರುವ ಭರವಸೆ ಈಡೇರಿಸುವ ಕೆಲಸ ಮಾಡಲಿ. ಉದ್ಯೋಗ ಸೃಷ್ಟಿ ಮಾಡೋ ಕೆಲಸ ಮಾಡಲಿ ರಾಜ್ಯದಲ್ಲಿ ಜಾಗ ಬೇಕಿದ್ರೆ ಹೇಳಲಿ, ನಾನೇ ನಿಂತು ಜಾಗ ಕೊಡಿಸುತ್ತೇನೆ ಉದ್ಯೋಗ ನೀಡಲಿ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದರು. ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಗೆ, ಕುಮಾರಸ್ವಾಮಿಗೆ ನಮ್ಮ ಸರ್ಕಾರದ ಬಗ್ಗೆ ಹೇಳೋದಕ್ಕೆ ಏನೂ ಇಲ್ಲ. ಅವರ ಕಾಲದಲ್ಲಿ ಏನೇನು ಅನ್ಯಾಯ ಮಾಡಬೇಕೋ ಮಾಡಿದ್ರು. ಯಾವ ಬಡವರಿಗೂ ಸಹಾಯ ಮಾಡಲಿಲ್ಲ, ಒಂದು ಕಾರ್ಯಕ್ರಮ ಕೋಡೋದಕ್ಕೆ ಆಗಲಿಲ್ಲ ಎಂದು ತಿವಿದರು. ಅನ್ನಭಾಗ್ಯ ಕಾರ್ಯಕ್ರಮ ಅವರು ಮಾಡಿದ್ರಾ? ಪಿಂಚಣಿ ಕೊಡೋ ಕಾರ್ಯಕ್ರಮ ಅವರು ಮಾಡಿದ್ರಾ? ಸೈಟ್ ಕೊಡೋ ಕಾರ್ಯಕ್ರಮ ಅವರು ಮಾಡಿದ್ರಾ, ಜಮೀನು ಕೊಟ್ರಾ..? ಈಗ ಕೆಲವರು ಸರ್ಕಾರಿ ನೌಕರರಿದ್ದಾರೆ. ಅನುಕೂಲಸ್ಥರಿದ್ದಾರೆ ಅವರಿಗೆ ಎಲ್ಲಾ ಸಿಗ್ತಿದೆ. ಅದನ್ನ ಸರ್ವೇ ಮಾಡ್ತಿದ್ದೇವೆ. ನಮ್ಮ ರಾಜ್ಯದಲ್ಲಿ ಅನುಕೂಲ ಇದೆ. ಬಡವರು ಯಾರು ಅನ್ನೋದು ಲಿಮಿಟೇಷನ್ ರಾಜ್ಯ ಸರ್ಕಾರವೇ ಮಾಡಿದೆ. ಕೆಲವರು ಜಿಎಸ್‌ಟಿ ಟ್ಯಾಕ್ಸ್ ಕಟ್ಟುತ್ತಿದ್ದಾರೆ. ಅದರಲ್ಲಿ ಬಡವರು ಇದ್ದಾರೆ ಅಂದ್ರೆ ಮತ್ತೆ ಅವರಿಗೆ ಬಿಪಿಎಲ್ ಕಾರ್ಡ್ ಕೊಡಬೇಕು ಎಂದು ನಿರ್ಧರಿಸಿದ್ದೇವೆ. ಈ ಬಗ್ಗೆ ನಿನ್ನೆಯೇ ಸಿಎಂ ಅವರು ಸೂಚನೆ ಕೊಟ್ಟಿದ್ದಾರೆ ಎಂದು ತಿಳಿಸಿದರು. ಯಾವ ಬಡವರಿಗೂ ತೊಂದ್ರೆ ಆಗಲ್ಲ, ವಿಪಕ್ಷಗಳು ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿವೆ. ಕುಮಾರಸ್ವಾಮಿ ರಾಜ್ಯಕ್ಕೆ ಏನು ಮಾಡಿದ್ದಾರೆ ರೀ? ಅವರ ಕೊಡುಗೆ ರಾಜ್ಯಕ್ಕೆ ಏನಿದೆ..? ಗಾಳಿಯಲ್ಲಿ ಗುಂಡು ಹೊಡೆಯೋದೇ ಕೊಡುಗೆನಾ?



ನಾವು ಆರ್ಥಿಕ ಪರಿಸ್ಥಿತಿ ಸುಧಾರಿಸುತ್ತಿದ್ದೇವೆ. ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮಾಡುವ ಕೆಲಸ ಮಾಡುತ್ತಿದ್ದೇವೆ. ಯಾರು ಏನೂ ಗಾಬರಿ ಪಡಬೇಕಾಗಿಲ್ಲ, ಮೋದಿ ಅವರು ಕೊಟ್ಟಿರುವ ಭರವಸೆ ಈಡೇರಿಸುವ ಕೆಲಸ ಮಾಡಲಿ. ಉದ್ಯೋಗ ಸೃಷ್ಟಿ ಮಾಡೋ ಕೆಲಸ ಮಾಡಲಿ ರಾಜ್ಯದಲ್ಲಿ ಜಾಗ ಬೇಕಿದ್ರೆ ಹೇಳಲಿ, ನಾನೇ ನಿಂತು ಜಾಗ ಕೊಡಿಸುತ್ತೇನೆ ಉದ್ಯೋಗ ನೀಡಲಿ ಎಂದು ಗುಡುಗಿದರು.

## ನಾನು ಬಹಳ ದುಭಾರಿ, 50, 100 ಕೋಟಿಗೆಲ್ಲ ಸೇಲ್ ಆಗಲ್ಲ

**ಕಾರವಾರ:** ನಾನು ಬಹಳ ದುಬಾರಿ ಇದ್ದೇನೆ. 50, 100 ಕೋಟಿಗೆಲ್ಲ ನಾನು ಸೇಲ್ ಆಗಲ್ಲ. ಹಾಗಾಗಿ ನನ್ನನ್ನು ಬಿಜೆಪಿಯಯವರು ಸಂಪರ್ಕ ಮಾಡಿಲ್ಲ ಎಂದು ಮೀನುಗಾರಿಕಾ ಸಚಿವ ಮಂಕಾಳು ವೈದ್ಯ ಹೇಳಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲೂಕಿನ ಮುರುಡೇಶ್ವರದಲ್ಲಿ ಮಾತನಾಡಿದ ಅವರು, 2,500 ಕೋಟಿಗೆ ಸಿಎಂ ಹುದ್ದೆ, 100 ಕೋಟಿಗೆ ಶಾಸಕ ಸ್ಥಾನ ಬಿಜೆಪಿಯ ಸಂಪ್ರದಾಯ. ಈ ಮಾತಿನ ಹಿಂದೆ ಬಿಜೆಪಿಯ ನಾಯಕರೇ ಹೇಳಿದ್ರು. ಹಾಗಾಗಿ, ದುಡ್ಡಿನಲ್ಲಿ ಮತ್ತೆ ಸರ್ಕಾರ ಮಾಡುವ ಕನಸು ಕಾಣುತ್ತಿದ್ದಾರೆ. ನನಗಂತೂ ಇದುವರೆಗೂ ಬಿಜೆಪಿ ಯಾವ ನಾಯಕರೂ ಸಂಪರ್ಕ ಮಾಡಿಲ್ಲ ಎಂದರು.

ಕೋವಿಡ್ ಹಗರಣ ಕುರಿತು ಪ್ರಸ್ತಾಪಿಸಿದ ಅವರು, ರಾಜ್ಯದಲ್ಲಿ ಅಥವಾ ದೇಶದಲ್ಲಿ ವಸ್ತುವನ್ನ ಖರೀದಿ ಮಾಡಬೇಕಿತ್ತು. ಆದರೆ ಅಂದಿನ ಬಿಜೆಪಿ ಸರ್ಕಾರದಲ್ಲಿ ವಿದೇಶದಿಂದ ವಸ್ತು ಖರೀದಿ ಮಾಡಿದ್ದಾರೆ. ಇಲ್ಲಿ ರೇಟ್ 350 ರೂ. ಇಂಪೋರ್ಟ್ ರೇಟ್, 350 ರೂ. ಸ್ವದೇಶಿ ಎಂದು ಬಿಜೆಪಿಗರು ದೊಡ್ಡದಾಗಿ ಹೇಳುತ್ತಾರೆ. ಇದಕ್ಕಿಂತ ಪ್ರೂಫ್ ಏನು ಬೇಕು. ಈ ಹಗರಣದ ನೇರ ಕೈವಾಡ ಅಂದಿನ ಬಿಜೆಪಿ ಸರ್ಕಾರದ ಸಿಎಂ ಹಾಗೂ ಸಚಿವರಾಗಿದ್ದ ಶ್ರೀರಾಮುಲು, ಅದನ್ನು ಮುಚ್ಚಿಹಾಕಲು ಸುಧಾಕರ್‌ಗೆ ಸಚಿವರನ್ನಾಗಿ ಮಾಡಿದರು. ನಮ್ಮ ಸರ್ಕಾರ ಯಾರನ್ನೂ ಬಿಡುವ ಪ್ರಶ್ನೆಯೇ ಇಲ್ಲ ಎಂದರು.

ವಕ್ಫ್ ಬಗ್ಗೆ ಮಾತನಾಡಿವ ಬಿಜೆಪಿಗರು ಈ ಹಿಂದೆ ಸಿಎಂ ಆಗಿದ್ದ ಬೊಮ್ಮಾಯಿ ವಕ್ಫ್ ಆಸ್ತಿ ಯಾರಾದರು ದುರುಪಯೋಗ ಮಾಡಿಕೊಂಡರೆ ದೇವರಿಗೆ ಅನ್ಯಾಯ ಮಾಡಿದಂತೆ ಎಂದರು. ಈಗ ವಕ್ಫ್ ಆಸ್ತಿ ದುರುಪಯೋಗ ಮಾಡಿಕೊಂಡಿದ್ದಾರೆ ಎನ್ನುತ್ತಾರೆ. ನಮ್ಮ ಜಿಲ್ಲೆಯಲ್ಲಿ ಯಾವುದೇ ದುರುಪಯೋಗ ಆಗಿದ್ದರೆ ಸರಿಪಡಿಸುತ್ತೇನೆ. ಎಲ್ಲೂ ದುರುಪಯೋಗ ಆಗದಿದ್ದರೆ ಇವರು ಹೇಳುವುದು ಸುಳ್ಳು ಎಂದು ತರಾಟೆಗೆ ತೆಗೆದುಕೊಂಡರು.

## ಕಾಂಗ್ರೆಸ್ ಸರ್ಕಾರ ಬಂದ್ಮೇಲೆ ಮತ್ತೆ ನಕ್ಸಲರ ಚಟುವಟಿಕೆಗಳು ಶುರುವಾಗಿದೆ

**ಬೆಂಗಳೂರು:** ಈಗಿನ ಸರ್ಕಾರ ಬಂದ್ಮೇಲೆ ಮತ್ತೆ ನಕ್ಸಲರ ಚಟುವಟಿಕೆಗಳು ಶುರುವಾಗಿದೆ ಎಂದು ಕಾರ್ಕಳ ಶಾಸಕ ಸುನೀಲ್ ಕುಮಾರ್ ಹೇಳಿದರು.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಮತ್ತು ಪೊಲೀಸರ ಕಾರ್ಯಾಚರಣೆಯನ್ನು ಸ್ವಾಗತ ಮಾಡುತ್ತೇನೆ. ಅನೇಕ ವರ್ಷಗಳಿಂದ ನಕ್ಸಲ್ ಚಟುವಟಿಕೆಗಳು ಸ್ತಬ್ದವಾಗಿತ್ತು. ಆದರೆ ಕಳೆದ ಒಂದೂವರೆ ವರ್ಷದಿಂದ ಮತ್ತೆ ನಕ್ಸಲ್ ಚಟುವಟಿಕೆಗಳು ಶುರುವಾಗಿದೆ. ನಗರ ನಕ್ಸಲ್‌ಗಳು ಸಹ ಇದ್ದಾರೆ. ಕಾಡಿನಲ್ಲಿ ಕೂತು ಬಂದೂಕು ಹಿಡಿದು ಕಾರ್ಯಾಚರಣೆ ಮಾಡುವವರು ಇದ್ದಾರೆ. ನಮ್ಮ ಸರ್ಕಾರದ ಅವಧಿಯಲ್ಲಿ ನಕ್ಸಲ್ ಚಟುವಟಿಕೆಯನ್ನು ಮಟ್ಟ ಹಾಕಿದ್ದೆವು. ಇವರೆಲ್ಲ ಹೊರ ರಾಜ್ಯಗಳಲ್ಲಿ ತಲೆಮರಿಸಿಕೊಂಡಿದ್ದರು. ಈಗಿನ ಸರ್ಕಾರ ಬಂದ್ಮೇಲೆ ಮತ್ತೆ ತಮ್ಮ ಚಟುವಟಿಕೆಗಳನ್ನು ಮಾಡಲು ಬಂದಿದ್ದಾರೆ. ನಗರ ನಕ್ಸಲ್‌ಗಳ ಚಟುವಟಿಕೆಗಳನ್ನ ಸರ್ಕಾರ ಗಮನಿಸಬೇಕು. ವಿಶ್ವವಿದ್ಯಾಲಯ, ಸಾಹಿತಿಗಳು ಎಂದು ಹೇಳಿಕೊಳ್ಳುವವರು, ಬುದ್ಧಿ ಜೀವಿಗಳು ಈ ನಕ್ಸಲ್ ಚಟುವಟಿಕೆಗಳಿಗೆ ಬೆಂಬಲ ನೀಡುತ್ತಾರೆ ಎಂದರು.

ನಕ್ಸಲರ ಮಟ್ಟ ಹಾಕಬೇಕು. ಕ್ಷಮೆ ಕೋರಿ ಬರುವ ವಿಚಾರದಲ್ಲಿ ಸರ್ಕಾರ ಚರ್ಚೆ ಮಾಡಬೇಕು. ನಕ್ಸಲ್ ಚಟುವಟಿಕೆಯನ್ನ ಮತ್ತೆ ನಗರಕ್ಕೆ ಬಂದು ಮುಂದುವರಿಸುವವರಿದ್ದಾರೆ. ಅದರ ಬಗ್ಗೆ ನಿಗಾವಹಿಸಬೇಕು. ನಕ್ಸಲ್ ನಿಗ್ರಹ ಚಟುವಟಿಕೆಗಳನ್ನು ಇನ್ನಷ್ಟು ಪರಿಣಾಮ ಕಾರಿಯಾಗಿ ಮಾಡಬೇಕು ಎಂದು ತಿಳಿಸಿದರು.

ವಿಜಯಪುರ ಶಾಸಕ ಗವಿಯಪ್ಪ ಹೇಳಿಕೆ ವಿಚಾರವಾಗಿ ಮಾತನಾಡಿದ ಅವರು, ನಮ್ಮ ಶಾಸಕರಿಗೆ ಮಾತ್ರ ಅನುದಾನ ನೀಡುತ್ತಿಲ್ಲ ಅಂದುಕೊಂಡಿದ್ದೆ. ರಾಜ್ಯದ 224 ಕ್ಷೇತ್ರದ ಅಭಿವೃದ್ಧಿಗೆ ಈ ಸರ್ಕಾರ ಒಂದು ರೂಪಾಯಿ ನೀಡುತ್ತಿಲ್ಲ. ಅವರ ಶಾಸಕರೇ ತಮ್ಮ ಅಸಮಾಧಾನವನ್ನು ಹೊರ ಹಾಕಿದ್ದಾರೆ. ನಮ್ಮ ಸರ್ಕಾರದ ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಕ್ರಮಗಳ ಉದ್ಘಾಟನೆಯಾಗುತ್ತಿದೆ. ಉಡುಪಿ, ಕಾರ್ಕಳ, ಮೂಡಿಗೆರೆ ಸೇರಿದಂತೆ ಈ ಭಾಗದಲ್ಲಿ ಅಭಿವೃದ್ಧಿ ಕೆಲಸಗಳು ಆಗಿದೆ. ಇನ್ನೂ ಅಭಿವೃದ್ಧಿ ಕೆಲಸಗಳನ್ನ ಸರ್ಕಾರ ಮಾಡಬೇಕು. ಅದಕ್ಕಾಗಿ ವಿಶೇಷ ಪ್ಯಾಕೇಜ್ ನೀಡಬೇಕು. ಆದರೆ ಇವರು ಒಂದೇ ಒಂದು ಅಭಿವೃದ್ಧಿ ಕಾರ್ಯಕ್ರಮದ ಶಂಕುಸ್ಥಾಪನೆಯನ್ನು ಇಲ್ಲಿಯವರೆಗೆ ಮಾಡಿಲ್ಲ. ಈ ಸರ್ಕಾರ ಹಗರಣಗಳಲ್ಲಿ, ಭ್ರಷ್ಟಾಚಾರದಲ್ಲಿ ಮುಳುಗಿದೆ. ಎರಡು ವರ್ಷಗಳ ಅವಧಿಯಲ್ಲಿ ಒಂದೇ ಒಂದು ಅಭಿವೃದ್ಧಿ ಕಾರ್ಯವನ್ನೂ ಮಾಡಿಲ್ಲ ಎಂದು ಆಗ್ರಹಿಸಿದರು.

## ಸರ್ಕಾರದ ಬೊಕ್ಕಸ ಖಾಲಿ ಮಾಡಿರೋದೆ ಸಿದ್ದರಾಮಯ್ಯ ಸಾಧನೆ

**ಬೆಂಗಳೂರು:** ಅನುದಾನ ಸಿಗುತ್ತಿಲ್ಲ ಎಂಬ ಕಾಂಗ್ರೆಸ್ ಶಾಸಕರ ಅಳಲು ವಿಚಾರಕ್ಕೆ ಸರ್ಕಾರ ಮತ್ತು ಸಿದ್ದರಾಮಯ್ಯ ವಿರುದ್ಧ ಜೆಡಿಎಸ್ ಕಿಡಿಕಾರಿದೆ. ಈ ಬಗ್ಗೆ ಎಕ್ಸ್‌ನಲ್ಲಿ ಸರಣಿ ಟ್ವೀಟ್ ಮಾಡಿರುವ ಜೆಡಿಎಸ್ ಅನುದಾನ ಕೊಡಿ ಸಿಎಂ ಎಂದು ಸಿದ್ದರಾಮಯ್ಯ ವಿರುದ್ಧ ಲೇವಡಿ ಮಾಡಿದೆ.

**ಜೆಡಿಎಸ್ ಟ್ವೀಟ್‌ನಲ್ಲೇನಿದೆ?:** ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಕಾಂಗ್ರೆಸ್ ಶಾಸಕ ಹೆಚ್.ಆರ್.ಗವಿಯಪ್ಪ ಕಣ್ಣೀರು ಹಾಕಿ ಆಕ್ರೋಶ ಹೊರಹಾಕಿದ್ದಾರೆ. ಬೊಕ್ಕಸದಲ್ಲಿ ಹಣವಿಲ್ಲದ ಅನುದಾನ ಕಡಿತ. ವಿಜಯನಗರ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳು ಸ್ಥಗಿತ. ಇದೇನಾ ಕಾಂಗ್ರೆಸ್ ನ್ಯಾಯ? ವಚನ ಭ್ರಷ್ಟ ಕಾಂಗ್ರೆಸ್ ಸರ್ಕಾರದ ಹುಸಿ ಭರವಸೆಗಳಿಗೆ ಸ್ವಪಕ್ಷೀಯ ಶಾಸಕರೇ ಬೇಸತ್ತಿದ್ದಾರೆ.

ಅಭಿವೃದ್ಧಿಗೆ ಅಡ್ಡಿಯಾದ ಕಾಂಗ್ರೆಸ್ ಅವೈಜ್ಞಾನಿಕ ಗ್ಯಾರಂಟಿ. ಸಿದ್ದರಾಮಯ್ಯನವರ ಸುಳ್ಳುಗಳನ್ನು ಸ್ವತಃ ಕಾಂಗ್ರೆಸ್ ಶಾಸಕರೇ ಬಯಲಿಗೆಳೆಯುತ್ತಿದ್ದಾರೆ. ವಿಜಯನಗರ ವಿಧಾನಸಭಾ ಕ್ಷೇತ್ರದ ಶಾಸಕ ಗವಿಯಪ್ಪ ನನ್ನ ಬಳಿ ಹಣವಿಲ್ಲ ನನ್ನ ಕ್ಷೇತ್ರದ ಜನರು ನನ್ನನ್ನು ಪ್ರಶ್ನಿಸುತ್ತಿದ್ದಾರೆ. ನಾನೇನು ಮಾಡಲಿ ಎಂದು ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಬಗ್ಗೆ ಅಸಹಾಯಕತೆ ಹೊರಹಾಕಿದ್ದಾರೆ.

ರಾಜ್ಯದ ಹಣ ಯಾರ ಯಾರ ಜೇಬು ಸೇರುತ್ತಿದೆ? ಕರ್ನಾಟಕ ಕಾಂಗ್ರೆಸ್ ಸರ್ಕಾರ ದಿವಾಳಿಯಾಗಿದೆ. ದುಡ್ಡಿಲ್ಲದ ಖಾಲಿ 'ಕೈ' ಆಡಳಿತ. ರಾಜು ಕಾಗೆ ಬಳಿಕ ಈಗ ಮತ್ತೊಬ್ಬ ಕಾಂಗ್ರೆಸ್ ಶಾಸಕರಾದ ಗವಿಯಪ್ಪ, ನಮ್ಮ ಕ್ಷೇತ್ರಕ್ಕೆ ಅನುದಾನ ಕೊಡ್ತಿಲ್ಲ ಎಂದು ಕಣ್ಣೀರು ಹಾಕುತ್ತಿರುವುದು ಸಿದ್ದರಾಮಯ್ಯ ಸರ್ಕಾರದ ದಿವಾಳಿತನಕ್ಕೆ ಸಾಕ್ಷಿ.

ಹೊಸದಾಗಿ ರಚನೆಯಾದ ವಿಜಯನಗರ ಜಿಲ್ಲೆಗೆ ಬರೀ 10 ಕೋಟಿ ರೂ. ಅನುದಾನ ಕೊಡಲಾಗಿದೆ ಎಂದು ಗವಿಯಪ್ಪ ಅಸಮಾಧಾನ ತೋಡಿಕೊಂಡಿದ್ದಾರೆ. ಹಿಂದಿನ ಸರ್ಕಾರ ಸಾಕಷ್ಟು ಅಭಿವೃದ್ಧಿ ಮಾಡಿದೆ. ಆದರೆ ಈ ಬಾರಿ ಅನುದಾನ ಸಿಗದೆ, ಕ್ಷೇತ್ರದಲ್ಲಿ ಆಸ್ಪತ್ರೆಗಳು, ರಸ್ತೆಗಳ ಸಮಸ್ಯೆಗಳು ಸಾಕಷ್ಟಿದೆ. ಜನರು ಕೇಳುವ ಪ್ರಶ್ನೆಗಳಿಗೆ ಉತ್ತರಿಸಲು ಆಗುತ್ತಿಲ್ಲ ಎಂದು ತಮ್ಮ ಸರ್ಕಾರದ ವಿರುದ್ಧವೇ ಕಿಡಿಕಾರಿರುವುದು ಭ್ರಷ್ಟ ಕಾಂಗ್ರೆಸ್ ಸರ್ಕಾರದ ಅಧ್ಯಕ್ಷ ಆಡಳಿತಕ್ಕೆ ಉದಾಹರಣೆಯಾಗಿದೆ.

ಗ್ಯಾರಂಟಿ ಯೋಜನೆಗಳಿಗೆ ಹಣಹೊಂದಿಸಲು ಹೆಣಗಾಡುತ್ತಿರುವ ಸಿಎಂ, ಶಾಸಕರ ಕ್ಷೇತ್ರಗಳಿಗೆ ಅನುದಾನ ಕೊಡುತ್ತಿಲ್ಲ. ಸ್ವತಃ ಕಾಂಗ್ರೆಸ್ ಶಾಸಕರೇ ತಮ್ಮ ಕ್ಷೇತ್ರಕ್ಕೆ ಅನುದಾನ ಕೊಡಿ ಎಂದು ಕಣ್ಣೀರಿಡುತ್ತಿದ್ದರೂ ಮುಖ್ಯಮಂತ್ರಿಗಳು ಕಿವಿಗೊಡುತ್ತಿಲ್ಲ. ಯಾಕಂದರೆ ಸರ್ಕಾರದ ಬೊಕ್ಕಸ ಖಾಲಿ ಮಾಡಿರುವುದೇ ಸಿದ್ದರಾಮಯ್ಯ ಅವರ ಸಾಧನೆ. ಅವೈಜ್ಞಾನಿಕ ಗ್ಯಾರಂಟಿಯಿಂದಾಗಿ ನಿಜವಾದ ಅಭಿವೃದ್ಧಿ ಯೋಜನೆಗಳಿಗೆ ಹಣವಿಲ್ಲದಂತೆ ಮಾಡಿದೆ ಭ್ರಷ್ಟ ಕಾಂಗ್ರೆಸ್. ವೇದಿಕೆಯಲ್ಲಿ ದೊಡ್ಡ ದೊಡ್ಡ ಹುಸಿ ಭಾಷಣಗಳನ್ನು ಮಾಡುವ ಸಿದ್ದರಾಮಯ್ಯ ಸರ್ಕಾರ ನ್ಯಾಯಯುತವಾಗಿ ಕ್ಷೇತ್ರಗಳಿಗೆ ನಿಧಿ ಹಂಚಿಕೆ ಮಾಡಲು ಕೈಲಾಗದ ದುಸ್ಥಿತಿ ತಲುಪಿದೆ. ಈ ಸತ್ಯವನ್ನು ಕಾಂಗ್ರೆಸ್ ಶಾಸಕ ಗವಿಯಪ್ಪ ಬಿಚ್ಚಿಟ್ಟಿದ್ದಾರೆ.

ಕೊಟ್ಟಿರುವ 12 ಕೋಟಿ ರೂ.ಆಸ್ಪತ್ರೆಗೆ ಸಾಲುತ್ತಿಲ್ಲ. ಇನ್ನಿತರ ಯೋಜನೆಗಳಿಗೆ ನಾವೇನು ಮಾಡುವುದು ಎಂದು ಪ್ರಶ್ನಿಸಿದ್ದಾರೆ. ಆದರೆ ಹಗರಣಗಳಲ್ಲಿ ಸಿಲುಕಿರುವ ಭ್ರಷ್ಟ ಸಿಎಂ ಸಿದ್ದರಾಮಯ್ಯ ಇದ್ಯಾವುದಕ್ಕೂ ತಲೆಕೆಡಿಸಿಕೊಳ್ಳುತ್ತಿಲ್ಲ. ಇದು ನಾಡಿನ ದುರಂತ. ಅನುದಾನದ ಕೊರತೆಯಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿಕೊಳ್ಳುತ್ತಾರೆ. ಮತ್ಯಾಕೆ ಅನುದಾನ ಹಂಚಿಕೆ ವಿಚಾರದಲ್ಲಿ ತಾರತಮ್ಯ ಹಾಗೂ ಪಕ್ಷಪಾತ ಮಾಡುತ್ತಿರುವುದು? ಇತರರು ಕೋಟಿ ಕೋಟಿ ಹಣ ಪಡೆಯುತ್ತಿರುವಾಗ ವಿಜಯನಗರವನ್ನೇಕೆ ಕಡೆಗಣಿಸಲಾಗುತ್ತಿದೆ? ಖಾಲಿ 'ಕೈ' ಸರ್ಕಾರದ ಹುಸಿ ಭರವಸೆಗಳ ವಿರುದ್ಧ ಕಾಂಗ್ರೆಸ್ ಶಾಸಕ ಗವಿಯಪ್ಪ ಅವರ ಅಸಹನೆ ಮತ್ತು ಆಕ್ರೋಶ ನ್ಯಾಯಯೋಚಿತವಾಗಿಯೇ ಇದೆ ಎಂದು ಜೆಡಿಎಸ್ ಗವಿಯಪ್ಪ ಪರ ಬ್ಯಾಟ್ ಬೀಸಿದೆ.

## ಮೊದಲನೇ ಪುಟದಿಂದ...

### ಮನೆಯವರ ಶಿಫ್ಟ್

ಈ ವೇಳೆ ವಿಕ್ರಂಗೌಡನ ಎದೆಗೆ 3 ಗುಂಡುಗಳು ತಗುಲಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಇದರಿಂದ ಗಾಬರಿಗೊಂಡ ತಂಡದ ಸದಸ್ಯರು ಕತ್ತಲಲ್ಲಿ ಕಾಡಿನೊಳಗೆ ಪರಾರಿಯಾಗಿದ್ದಾರೆ. ಮಂಗಳವಾರ ಇಡೀ ರಾತ್ರಿ ಕೂಂಬಿಂಗ್ ನಡೆಸಿದರೂ ತಪ್ಪಿಸಿಕೊಂಡ ನಕ್ಸಲರ ಸುಳಿವು ಪತ್ತೆಯಾಗಿಲ್ಲ.

ಸುಮಾರು 20 ಗಂಟೆಗಳ ಪೊಲೀಸರ ಮಹಜರು ಪ್ರಕ್ರಿಯೆ ಮತ್ತಿತರ ದಾಖಲೆಗಳ ಸಂಗ್ರಹದ ಬಳಿಕ ವಿಕ್ರಂಗೌಡ ಮೃತ ದೇಹವನ್ನು ಮಣಿಪಾಲ ಕೆಎಂಸಿ ಆಸ್ಪತ್ರೆಗೆ ರವಾನಿಸಲಾಯಿತು. ನ್ಯಾಯಾಧೀಶರ ಸಮ್ಮುಖದಲ್ಲಿ ಮಹಜರು ನಡೆಸಿ, ಕುಟುಂಬಕ್ಕೆ ಇಂದು ಮೃತದೇಹ ಹಸ್ತಾಂತರ ಆಗಲಿದೆ. ಘಟನಾ ಸ್ಥಳಕ್ಕೆ ಬೆಂಗಳೂರಿನಿಂದ ಎಫ್‌ಎಸ್‌ಎಲ್ ತಂಡ ಬಂದು ಮಹತ್ವದ ದಾಖಲೆಗಳನ್ನು ಪರಿಶೀಲನೆ ಮಾಡಲಿದೆ. ಮರಣೋತ್ತರ ಪರೀಕ್ಷೆ ನಡೆದ ನಂತರ ಪ್ರಕರಣದ ಖಚಿತ ಮಾಹಿತಿಗಳು ಲಭ್ಯವಾಗಲಿದೆ.

### ಕೆವಿ ಪ್ರಭಾಕರ್

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂ ಜೆ) ಮತ್ತು ಪ್ರೆಸ್‌ಕ್ಲಬ್ ವತಿಯಿಂದ ಕನ್ನಡ ರಾಜ್ಯೋತ್ಸವ ಹಾಗೂ ಸುವರ್ಣ ಮಹೋತ್ಸವ ಪ್ರಶಸ್ತಿ ಪುರಸ್ಕೃತ ಪತ್ರಕರ್ತರಿಗೆ ಏರ್ಪಡಿಸಿದ್ದ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯೋತ್ಸವ ಪುಸ್ಕೃತರಾಗಿರುವ ಹಿರಿಯರಾದ ಸನತ್ ಕುಮಾರ್ ಬೆಳಗಲಿ, ಎನ್.ಎಸ್.ಶಂಕರ್, ಎ.ಜಿ.ಕಾರಟಗಿ, ರಾಮಕೃಷ್ಣ ಅವರೆಲ್ಲರೂ ನನಗೆ ಅಷ್ಟೆ ಅಲ್ಲ, ಪತ್ರಿಕಾ ವೃತ್ತಿಯ ಸಾಕ್ಷಿಪ್ರಜ್ಞೆಯಾಗಿದ್ದಾರೆ ಎಂದರು.

ಸುವರ್ಣ ಮಹೋತ್ಸವ ಪ್ರಶಸ್ತಿ ಪುರಸ್ಕೃತರಲ್ಲಿ ನನ್ನ ಸಹದ್ಯೋಗಿಗಳು, ಸಮಕಾಲೀನರೂ ಇದ್ದಾರೆ. ನಾವೆಲ್ಲಾ ಒಟ್ಟೊಟ್ಟಿಗೇ ಒಡನಾಡಿಕೊಂಡು ಪತ್ರಿಕೋದ್ಯಮದ ಭಾಗ ಆಗಿದ್ದವರು. ಬೇರೆ ಬೇರೆ ಸಾಮಾಜಿಕ ಹಿನ್ನೆಲೆಯಿಂದ ಬಂದು ಪತ್ರಿಕಾ ವೃತ್ತಿಯನ್ನು ಅರ್ಥಪೂರ್ಣಗೊಳಿಸಿದ್ದಾರೆ, ಪತ್ರಿಕಾ ವೃತ್ತಿಯ ವಿಶ್ವಾಸಾರ್ಹತೆ ಕಾಪಾಡಲು ಇಷ್ಟೂ ಮಂದಿ ತಮ್ಮ ಪಾಲನ್ನು ಒದಗಿಸಿದ್ದಾರೆ ಎಂದರು.

**ಪತ್ರಕರ್ತರಿಗೆ ಆರೋಗ್ಯ ಸಂಜೀವಿನಿ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಹೋರಾಟದ ಫಲವಾಗಿ ಗ್ರಾಮೀಣ ಪತ್ರಕರ್ತರಿಗೆ ಬಸ್‌ಪಾಸ್ ಯೋಜನೆಯನ್ನು ಸರ್ಕಾರ ಜಾರಿಗೊಳಿಸಿದೆ. ಸದ್ಯದಲ್ಲೇ ಅದು ಪತ್ರಕರ್ತರಿಗೆ ಸಿಗಲಿದೆ. ಮತ್ತೊಂದು ಬೇಡಿಕೆಯಾಗಿರುವ ಆರೋಗ್ಯ ಸೌಲಭ್ಯ ಕಲ್ಪಿಸಲು ಪ್ರತಯತ್ನ ನಡೆದಿದೆ. ಪತ್ರಕರ್ತ ಸಮುದಾಯಕ್ಕೆ ಮತ್ತು ಪತ್ರಕರ್ತರ ಕುಟುಂಬಗಳಿಗೆ ಆರೋಗ್ಯ ಸಂಜೀವಿನಿ ಸೌಲಭ್ಯವನ್ನು ಆದಷ್ಟು ಬೇಗ ಒದಗಿಸಿಕೊಡುವ ನಿಟ್ಟಿನಲ್ಲಿ ಸಿಎಂ ಜೊತೆಗೆ ಮಾತನಾಡಿ ಕ್ರಮ ವಹಿಸಲಾಗುವುದು ಎಂದರು. ಒತ್ತಡದ ವೃತ್ತಿಜೀವನದ ಪತ್ರಕರ್ತರ ಹಿತದೃಷ್ಟಿಯಿಂದ ಪತ್ರಕರ್ತರಿಗೆ ಆರೋಗ್ಯ ವಿಮಾ ಸೌಲಭ್ಯವನ್ನು ಕಲ್ಪಿಸಬೇಕೆಂದು ಕೆಯುಡಬ್ಲ್ಯೂ ಜೆ ನಿರಂತರವಾಗಿ ಮನವಿ ಸಲ್ಲಿಸುತ್ತಿದೆ. ಪ್ರೆಸ್ ಕಲ್ಬ್ ಕೂಡ ಈ ಬಗ್ಗೆ ಗಮನ ಸೆಳೆದಿದೆ ಎಂದರು.

**ಪತ್ರಕರ್ತರ ಶಕ್ತಿ ಕೆ.ವಿ.ಪ್ರಭಾಕರ್:** ಪ್ರಾಸ್ತಾವಿಕ ಮಾತುಗಳನ್ನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಈ ಬಾರಿ ರಾಜ್ಯೋತ್ಸವದಲ್ಲಿ ಹೆಚ್ಚು ಪತ್ರಕರ್ತರಿಗೆ ರಾಜ್ಯೋತ್ಸವ ಮತ್ತು ಸುವರ್ಣ ಮಹೋತ್ಸವ ಪ್ರಶಸ್ತಿ ಸಿಗಲಿ ಎನ್ನುವುದು ಸಂಘದ ಹಕ್ಕೊತ್ತಾಯವಾಗಿತ್ತು. ಈ ನಿಟ್ಟಿನಲ್ಲಿ ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಅದಕ್ಕೆ ನ್ಯಾಯ ಒದಗಿಸಿದ್ದಾರೆ. ಅದಕ್ಕಾಗಿ ಸಂಘಟನೆಯಿಂದ ಸಿಎಂ ಮತ್ತು ಅವರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಸ್ವತಃ ಪತ್ರಕರ್ತರಾಗಿದ್ದ ಪ್ರಭಾಕರ್ ಅವರಿಗೆ ಪತ್ರಕರ್ತರ ನಿಜಸ್ಥಿತಿ ಗೊತ್ತಿದೆ. ಹಾಗಾಗಿ ನಮ್ಮ ಮನವಿಗಳಿಗೆ ನಿರಂತರವಾಗಿ ಸ್ಪಂದಿಸಿ ಸರ್ಕಾರದಿಂದ ಪತ್ರಕರ್ತರಿಗೆ ಸೌಲಭ್ಯ ದೊರಕಿಸಿಕೊಡಲು ತೋರುತ್ತಿರುವ ಇಚ್ಛಾಶಕ್ತಿ ನಿಜಕ್ಕೂ ಶ್ಲಾಘನೀಯ ಎಂದರು.

**ಸೂಕ್ತ ಆಯ್ಕೆ:** ಕರ್ನಾಟಕ ಮಾಧ್ಯಮ ಅಕಾಡಮಿಯ ಅಧ್ಯಕ್ಷೆ ಆಯೇಷಾ ಖಾನಂ ಮಾತನಾಡಿ, ಈ ಸಲದ ರಾಜ್ಯೋತ್ಸವ ಮತ್ತು ಸುವರ್ಣ ಮಹೋತ್ಸವ ಪ್ರಶಸ್ತಿ ಆಯ್ಕೆ ಪ್ರಕ್ರಿಯೆಯಲ್ಲಿ ವಿವಿಧ ಜಾತಿ–ಪಂಗಡ, ವಿವಿಧ ಪ್ರದೇಶಗಳಿಗೂ ಸೂಕ್ತ ನ್ಯಾಯ ದೊರೆತಿದೆ ಎಂದರು.

**ಅಭಿನಂದನೆ:** ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪತ್ರಕರ್ತರಾದ ಎನ್.ಎಸ್.ಶಂಕರ್, ಎ.ಜಿ.ಕಾರಟಗಿ, ರಾಮಕೃಷ್ಣ ಬಡಶೇಷಿ ಹಾಗೂ ಸುವರ್ಣ ಮಹೋತ್ಸವ ಪ್ರಶಸ್ತಿ ಪುರಸ್ಕೃತರಾದ ಎಚ್.ಬಿ.ಮದನಗೌಡ, ಎಂ.ಸಿದ್ಧರಾಜು, ಆರ್.ಜಿ.ಹಳ್ಳಿ ನಾಗರಾಜ್, ಭಾರತಿ ಹೆಗಡೆ, ಶಾಂತಕುಮಾರಿ, ಮಂಜುನಾಥ ಅದ್ದೆ, ರಾಜು ಮಳವಳ್ಳಿ, ಪತ್ರಿಕಾ ವಿತರಕ ಲಕ್ಷ್ಮೀನರಸಪ್ಪ ಮುಂತಾದವರನ್ನು ಅಭಿನಂದಿಸಲಾಯಿತು.

**ಸ್ಮರಣ ಸಂಚಿಕೆ ಬಿಡುಗಡೆ:** ಇದೇ ಸಂದರ್ಭದಲ್ಲಿ ಪತ್ರಕರ್ತರ ಸಮ್ಮೇಳನ ಸಂದರ್ಭದಲ್ಲಿ ಹೊರ ತಂದಿರುವ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸ್ಮರಣ ಸಂಚಿಕೆಯನ್ನು ಬಿಡುಗಡೆಗೊಳಿಸಲಾಯಿತು.

**ಅಮ್ಮ ಪ್ರಶಸ್ತಿಗೆ ಗೌರವ:** ಇದೇ ಸಂದರ್ಭದಲ್ಲಿ ಕೋವಿಡ್ ಕಥೆಗಳ ಪುಸ್ತಕಕ್ಕೆ ಅಮ್ಮ ಪ್ರಶಸ್ತಿ ಲಭ್ಯವಾಗಿರುವ ಹಿನ್ನೆಲೆಯಲ್ಲಿ ಕೆಯುಡಬ್ಲ್ಯೂ ಜೆ ಅಧ್ಯಕ್ಷ ಶಿವಾನಂದ ತಗಡೂರು ಅವರನ್ನು, ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಖಾನಂ ಅವರನ್ನು ಸನ್ಮಾನಿಸಲಾಯಿತು.

ಪ್ರೆಸ್‌ಕ್ಲಬ್ ಅಧ್ಯಕ್ಷ ಆರ್.ಶ್ರೀಧರ್, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಕೆಯುಡಬ್ಲ್ಯೂ ಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಕಾರ್ಯದರ್ಶಿ ಸೋಮಶೇಖರ್ ಕೆರೆಗೋಡು, ನಿಂಗಪ್ಪ ಚಾವಡಿ, ಖಜಾಂಚಿ ವಾಸುದೇವ ಹೊಳ್ಳ, ಪದಾಧಿಕಾರಿಗಳಾದ ದೇವರಾಜು, ವಿ.ಮುನಿರಾಜು, ನಗರ ಜಿಲ್ಲಾ ಘಟಕದ ಪದಾಧಿಕಾರಿಗಳಾದ ನರೇಂದ್ರ, ಪಾರೇಕಟ್, ಕೆ.ಎಂ. ಜಕ್ರಿಯಾ, ಶಿವರಾಜು, ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### 4 ಪಿಜಿಗೆ ದಂಡ

ರಾಜ್ಯದ 305 ಪಿಜಿಗಳಿಗೆ ಇಲಾಖೆ ಅಧಿಕಾರಿಗಳು ದಾಳಿ ಮಾಡಿ ಪರಿಶೀಲನೆ ನಡೆಸಿದ್ದಾರೆ. ಈ ವೇಳೆ 127 ಪಿಜಿಗಳಲ್ಲಿ ಆಹಾರ ಪದಾರ್ಥಗಳನ್ನು ಸಂಗ್ರಹ ಮಾಡಲಾಗಿದೆ.

ಸಂಗ್ರಹಿಸಿದ ಆಹಾರ ಪದಾರ್ಥಗಳನ್ನು ಪರೀಕ್ಷಿಸಿದ ವೇಳೆ ಸುರಕ್ಷತೆ ಕಾಪಾಡದೇ ಇರುವುದು ಪತ್ತೆಯಾಗಿದೆ. ಈ ಹಿನ್ನೆಲೆ 127 ಪಿಜಿಗಳಿಗೆ ನೋಟಿಸ್ ನೀಡಲಾಗಿದೆ. ಅದರಲ್ಲಿ ನಾಲ್ಕು ಪಿಜಿಗಳಿಗೆ ಸೇರಿ ಒಟ್ಟು 21,000 ರೂ. ದಂಡ ಹಾಕಲಾಗಿದೆ.

### ಬಿಮ್ಸ್ ಮುಂದೆ ಪ್ರತಿಭಟನೆ

ಬೇರೆ ಆಸ್ಪತ್ರೆಗೆ ಕಳುಹಿಸದೇ ನಿರ್ಲಕ್ಷ್ಯ ವಹಿಸಿದ್ದಾರೆ. ನಿರ್ಲಕ್ಷ್ಯ ತೋರಿದ ವೈದ್ಯರನ್ನು ಈ ಕೂಡಲೇ ವಜಾ ಮಾಡುವಂತೆ ಕಲ್ಪನಾ ಕುಟುಂಬಸ್ಥರು ಪಟ್ಟು ಹಿಡಿದಿದ್ದರು.

ಹೆರಿಗೆ ಶಾಸ್ತ್ರ ಮತ್ತು ಶಿಶುವೈದ್ಯಶಾಸ್ತ್ರ ವಿಭಾಗಕ್ಕೆ ಬಿಮ್ಸ್ ನಿರ್ದೇಶಕ ಡಾ. ಅಶೋಕ ಶೆಟ್ಟಿ ಆಗಮಿಸುತ್ತಿದ್ದಂತೆ ಆಸ್ಪತ್ರೆ ಬಾಗಿಲಿನಲ್ಲಿಯೇ ಅವರನ್ನು ಕಲ್ಪನಾ ಕುಟುಂಬಸ್ಥರು ಘೇರಾವ್ ಹಾಕಿದರು. ಮಗಳ ಸಾವಿಗೆ ನ್ಯಾಯ ಸಿಗಬೇಕು, ನಮಗೆ ಆದಂತಹ ಪರಿಸ್ಥಿತಿ ಯಾರಿಗೂ ಆಗಬಾರದು. ಈ ಕೂಡಲೇ ನಿರ್ಲಕ್ಷ್ಯ ತೋರಿದ ವೈದ್ಯರ ವಜಾ ಮಾಡುವಂತೆ ಒತ್ತಾಯಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಡಾ. ಅಶೋಕ ಶೆಟ್ಟಿ ಮೂವರು ಜನರ ನೇತೃತ್ವದಲ್ಲಿ ಸಮಿತಿ ರಚಿಸಿ ತನಿಖೆ ಮಾಡಿಸುತ್ತೇನೆ. ತಪ್ಪಿತಸ್ಥ ವೈದ್ಯರ ವಿರುದ್ಧ ಪೊಲೀಸ್ ಕೇಸ್ ದಾಖಲಿಸಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಭರವಸೆ ನೀಡಿದರು.

ಯಾವುದೇ ಅಹಿತಕರ ಘಟನೆ ಆಗದಂತೆ ಆಸ್ಪತ್ರೆ ಮುಂಭಾಗದಲ್ಲಿ ಪೊಲೀಸ್ ಸಿಬ್ಬಂದಿಗಳ ನಿಯೋಜಿಸಲಾಗಿದೆ. ಬೆಳಗಾವಿ ಎಪಿಎಂಸಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಸಂಭವಿಸಿದೆ.

### ಟಿಕೆಟ್!

ಸಮಯದಲ್ಲಿ, ಪ್ರಯಾಣಿಕರಿದ್ದ ಜಾಗಕ್ಕೆ ಹೋಗಿ ಟಿಕೆಟ್ ಕೊಡಲು ನೈರುತ್ಯ ರೈಲ್ವೆ ಎಂ–ಯುಟಿಎಸ್ ವ್ಯವಸ್ಥೆ ಪರಿಚಯಿಸಿದೆ. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ, ಸರ್. ಎಂ.ವಿಶ್ವೇಶರಯ್ಯ ನಿಲ್ದಾಣ, ಯಶವಂತಪುರ ರೈಲು ನಿಲ್ದಾಣಗಳಲ್ಲಿ ಪ್ರಾಯೋಗಿಕವಾಗಿ ಹೊಸ ವ್ಯವಸ್ಥೆ ಜಾರಿಗೆ ಬಂದಿದೆ.

**ಯಾವೆಲ್ಲ ಟಿಕೆಟ್, ಎಲ್ಲೆಲ್ಲಿ ಸಿಗಲಿದೆ?:** ಎಂ–ಯುಟಿಎಸ್ ಯಂತ್ರಗಳ ಮೂಲಕ ಕಾಯ್ದಿರಿಸದ ಟಿಕೆಟ್, ಪ್ಲಾಟ್ ಫಾರ್ಮ್ ಟಿಕೆಟ್‌ಗಳನ್ನು ಪ್ರಯಾಣಿಕರು ನಿಂತಿರುವ ಜಾಗಕ್ಕೆ ಹೋಗಿ ಸಿಬ್ಬಂದಿ ಕೊಡಲಿದ್ದಾರೆ. ನಿಲ್ದಾಣದಿಂದ 500–ಮೀಟರ್ ಅಂತರದಲ್ಲಿ ಎಂ–ಯುಟಿಎಸ್ ಟಿಕೆಟ್ ವಿತರಿಸಲು ಅವಕಾಶವಿದೆ ಎಂದು ನೈರುತ್ಯ ರೈಲ್ವೇ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕರಾದ ತ್ರಿನೇತ್ರ ಕೆಆರ್ ತಿಳಿಸಿದ್ದಾರೆ.

**ಏನಿದು ಎಂ ಯುಟಿಎಸ್ ಸೇವೆ?:** ಎಂ–ಯುಟಿಎಸ್ ಎಂಬುದು ಯುಟಿಎಸ್ ಆಪ್ ಸೇವೆಗಿಂತ ತುಸು ವಿಭಿನ್ನವಾಗಿದೆ. ಯುಟಿಎಸ್ ಆಪ್ ಮೂಲಕ ನಾವೇ ಟಿಕೆಟ್ ಪಡೆಯಬೇಕು. ಆದರೆ, ಎಂ–ಯುಟಿಎಸ್‌ನಲ್ಲಿ ರೈಲ್ವೆ ಸಿಬ್ಬಂದಿ ಟಿಕೆಟ್ ನೀಡುತ್ತಾರೆ. ನೈರುತ್ಯ ರೈಲ್ವೆಯ ಈ ಹೊಸ ಸೇವೆಗೆ ಪ್ರಯಾಣಿಕರು ಖುಷಿಯಾಗಿದ್ದು, ತುಂಬಾ ಸಮಯ ಉಳಿಯುತ್ತೆಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಪ್ರಯಾಣಿಕರಿಗೆ ನಿಂತಲ್ಲಿಯೇ ಟಿಕೆಟ್ ಸಿಗುವುದರಿಂದ ದಟ್ಟಣೆ ತಗ್ಗಲಿದೆ. ಇಷ್ಟು ದಿನ ಹಬ್ಬಗಳ ಸಂದರ್ಭದಲ್ಲಿ ಕೆಲವರು ಸರದಿಯಲ್ಲಿ ನಿಂತು ಟಿಕೆಟ್ ಸಿಗದೆ ವಾಪಾಸಾಗುತ್ತಿದ್ದರು. ಇನ್ನು ಕೆಲವರು ಟಿಕೆಟ್ ಸಿಗದ ಕಾರಣ ಟಿಕೆಟ್ ರಹಿತ ಪ್ರಯಾಣಿಸಿ ಸಿಕ್ಕಿ ಬೀಳುತ್ತಿದ್ದರು. ಆದರೆ, ಈ ಎಲ್ಲಾ ಸಮಸ್ಯೆಗಳಿಗೆ ಎಂ–ಯುಟಿಎಸ್ ಆಪ್ ಮುಕ್ತಿಕೊಟ್ಟಿದ್ದು, ಆದಷ್ಟು ಬೇಗ ಈ ವ್ಯವಸ್ಥೆ ಎಲ್ಲಾ ರೈಲು ನಿಲ್ದಾಣಗಳಲ್ಲಿ ಬರಲಿ ಎಂದು ಪ್ರಯಾಣಿಕರು ಆಶಯ ವ್ಯಕ್ತಪಡಿಸಿದ್ದಾರೆ. ಸದ್ಯ ಬೆಂಗಳೂರಿನ ರೈಲು ನಿಲ್ದಾಣಗಳಲ್ಲಿ ಪ್ರಾಯೋಗಿಕವಾಗಿ ಜಾರಿಯಾಗಿರುವ ಈ ವ್ಯವಸ್ಥೆ ಯಶಸ್ವಿಯಾದರೆ ಇತರ ರೈಲು ನಿಲ್ದಾಣಗಳಿಗೂ ಬರುವ ದಿನ ದೂರವಿಲ್ಲ.

### ಬಾಮೈದ!

ಮಲ್ಲಿಕಾರ್ಜುನ ಸ್ವಾಮಿ ಸಿಎಂ ಪತ್ನಿ ಸೈಟ್ ಪಡೆದ ಪ್ರಕರಣದಲ್ಲಿ ಮೂರನೇ ಆರೋಪಿಯಾಗಿದ್ದಾರೆ. ರಾತ್ರಿ 7:30ಕ್ಕೆ ಲೋಕಾಯುಕ್ತ ಕಚೇರಿಗೆ ದಿಢೀರ್ ಎಂಟ್ರಿ ನೀಡಿದ ಅವರು 8 ಗಂಟೆಯವರೆಗೆ ಕಚೇರಿ ಒಳಗಡೆಯೇ ಇದ್ದರು.

ವಿಚಾರಣೆಗೆ ಹಾಜರಾಗುವಂತೆ ಲೋಕಾಯುಕ್ತರಿಂದ ನೋಟಿಸ್ ನೀಡಿದ್ದರೆ ಸಾಧಾರಣವಾಗಿ ಆರೋಪಿಗಳು ಬೆಳಗ್ಗೆ ಅಥವಾ ಮಧ್ಯಾಹ್ನದ ನಂತರ ಹಾಜರಾಗುತ್ತಾರೆ. ಆದರೆ ಇಲ್ಲಿ ವಿಚಾರಣೆಯೂ ಇಲ್ಲ, ನೋಟಿಸ್ ಇಲ್ಲದೇ ಇದ್ದರೂ ರಾತ್ರಿ ವೇಳೆ ತನಿಖಾಧಿಕಾರಿಯನ್ನು ಆರೋಪಿ ಭೇಟಿ ಮಾಡಿದ್ದರಿಂದ ಹಲವು ಅನುಮಾನಗಳು ಹುಟ್ಟಿಕೊಂಡಿದೆ.

ಮಲ್ಲಿಕಾರ್ಜುನಸ್ವಾಮಿ ಅವರನ್ನು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ನ.18 ರಂದು ವಿಚಾರಣೆಗೆ ಒಳಪಡಿಸಿದ್ದರು.

### ಸಭೆಗೆ ಗೈರು

ಬಹಿರಂಗವಾಗಿಯೇ ಅಸಮಾಧಾನ ಸ್ಫೋಟಗೊಂಡ ಬೆನ್ನಲ್ಲೇ ಸರ್ಕಾರ ಉಳಿಯುತ್ತಾ? ಅಥವಾ ಮುಖ್ಯಮಂತ್ರಿ ಬದಲಾಗುತ್ತಾರಾ ಎಂಬ ಪ್ರಶ್ನೆ ಎದ್ದಿದೆ. ಬಿಜೆಪಿ ಹೈಕಮಾಂಡ್ ನಾಯಕರು ಇಲ್ಲಿಯವರೆಗೆ ಮಹಾರಾಷ್ಟ್ರ ಮತ್ತು ಜಾರ್ಖಂಡ್ ಚುನಾವಣೆಯಲ್ಲಿ ಬ್ಯುಸಿ ಇದ್ದ ಕಾರಣ ಮಣಿಪುರ ಸರ್ಕಾರದ ವಿಚಾರಕ್ಕೆ ತಲೆ ಹಾಕಿರಲಿಲ್ಲ. ಇಂದು ಚುನಾವಣೆ ಮುಗಿದ ಬಳಿಕ ಬಿಜೆಪಿ ಹೈಕಮಾಂಡ್ ಮಣಿಪುರ ವಿಚಾರದಲ್ಲಿ ಸ್ಪಷ್ಟ ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ. ಸಿಎಂ ಬಿರೇನ್ ಸಿಂಗ್ ಕಾರ್ಯವೈಖರಿಗೆ ಕುಕಿ ಬುಡಕಟ್ಟು ಸಮುದಾಯಕ್ಕೆ ಸೇರಿದ 10 ಬಿಜೆಪಿ ಶಾಸಕರು ಅಸಮಾಧಾನ ವ್ಯಕ್ತಪಡಿಸಿ, ಸಭೆಯಿಂದ ದೂರ ಉಳಿದಿದ್ದಾರೆ ಎಂದು ವರದಿಯಾಗಿದೆ.

## ಲಂಡನ್ ನಲ್ಲಿ ಹರ್ಷಿತಾ ಕೊಲೆ ಪ್ರಕರಣ

# ಕತ್ತು ಹಿಸುಕಿ ಶವವನ್ನು ಕಾರಿನ ಡಿಕ್ಕಿಯಲ್ಲಿಟ್ಟು ಪತಿ ಪರಾರಿ

**ಲಂಡನ್:** ಲಂಡನ್ ನ ಇಲ್ಫೋರ್ಡ್ ನಲ್ಲಿ ಪಾರ್ಕ್ ಮಾಡಲಾಗಿದ್ದ ಕಾರಿನ ಡಿಕ್ಕಿಯಲ್ಲಿ ಭಾರತೀಯ ಮಹಿಳೆಯ ಶವ ಪತ್ತೆಯಾಗಿದೆ. ಆಕೆಯನ್ನು ಹರ್ಷಿತಾ ಎಂದು ಗುರುತಿಸಲಾಗಿದೆ. ಆಕೆ ಕಳೆದ ಆಗಸ್ಟ್ ನಲ್ಲಿ ಪಂಕಜ್ ಲಂಬಾ ಎಂಬುವವರನ್ನು ಮದುವೆಯಾಗಿದ್ದರು, ಆಕೆ ಹುಟ್ಟಿ ಬೆಳೆದಿದ್ದೆಲ್ಲಾ ದೆಹಲಿಯಲ್ಲೇ. ಮದುವೆಯಾದ ಬಳಿಕ ಏಪ್ರಿಲ್ ನಲ್ಲಿ ಯುಕೆಗೆ ಹೋಗಿದ್ದರು. ಕೆಲವು ದಿನಗಳ ಹಿಂದೆ ನಾರ್ಥಾಂಪ್ಟನ್ ಶೈರ್‌ನಲ್ಲಿರುವ ತನ್ನ ಮನೆಯಿಂದ ನಾಪತ್ತೆಯಾಗಿದ್ದಳು.

ನವೆಂಬರ್ 11 ರಂದು ಮೃತ ದೇಹ ಪತ್ತೆಯಾದ ನಂತರ ಸಂಚಲನ ಉಂಟಾಗಿತ್ತು. ಮೃತದೇಹದ ಮರಣೋತ್ತರ ಪರೀಕ್ಷೆಯಲ್ಲಿ ಕತ್ತು ಹಿಸುಕಿ ಕೊಲೆ ಮಾಡಿರುವುದು ಬೆಳಕಿಗೆ ಬಂದಿದೆ. ಹರ್ಷಿತಾಳನ್ನು ಆಕೆಯ 23 ವರ್ಷದ ಪತಿ ಪಂಕಜ್ ಹತ್ಯೆ ಮಾಡಿರಬಹುದು, ಅವರು



ಅಪರಾಧ ಮಾಡಿದ ಕೂಡಲೇ ದೇಶದಿಂದ ಪರಾರಿಯಾಗಿದ್ದರು. ಮನೆಯಿಂದ 145 ಕಿ.ಮೀ ದೂರ ಇಲ್ಫೋರ್ಡ್ ಗೆ ಆಕೆಯ ಶವವನ್ನು ತೆಗೆದುಕೊಂಡು ಹೋಗಲಾಗಿತ್ತು.

ಈ ತಿಂಗಳ ಆರಂಭದಲ್ಲಿ ನಾರ್ಥಾಂಪ್ಟನ್ ಶೈರ್‌ನಲ್ಲಿ ಹರ್ಷಿತಾಳನ್ನು ಆಕೆಯ ಪತಿ ಪಂಕಜ್ ಲಂಬಾ ಹತ್ಯೆ ಮಾಡಿದ್ದಾರೆ, ಈಗ ದೇಶಬಿಟ್ಟು ಪರಾರಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ನವೆಂಬರ್ 10ರಂದು ರಾತ್ರಿ ಮನೆಗೆ ಕರೆ ಮಾಡಿದ್ದ ಆಕೆ ತಾನು ಪತಿಗಾಗಿ ಊಟ ಸಿದ್ಧಪಡಿಸುತ್ತಿರುವುದಾಗಿ ಹೇಳಿದ್ದಳು.

ಅದಾದ ಬಳಿಕ ಎರಡು ದಿನಗಳ ಕಾಲ ಫೋನ್ ಸ್ವಿಚ್ಡ್ ಆಫ್ ಆಗಿತ್ತು. ನವೆಂಬರ್ 13ರಂದು ಆಕೆಯ ಕುಟುಂಬದವರು ನಾರ್ಥಾಂಪ್ಟನ್‌ಶೈರ್ ಪೊಲೀಸರನ್ನು ಸಂಪರ್ಕಿಸಿದರು. ಮನೆಗೆ ಭೇಟಿ ನೀಡಿದ ಅಧಿಕಾರಿಗಳಿಗೆ ಯಾವುದೇ ಕುರುಹು ಪತ್ತೆಯಾಗಿಲ್ಲ, ಬಳಿಕ ತನಿಖೆ ಮುಂದುವರೆಸಿದರು.

ಮರುದಿನ ನವೆಂಬರ್ 14 ರಂದು ಇಲ್ಫೋರ್ಡ್‌ನಲ್ಲಿ ಆಕೆಯ ಶವ ಪತ್ತೆಯಾಗಿದೆ. ಅಷ್ಟೊತ್ತಿಗಾಗಲೇ ಪಂಕಜ್ ಅಧಿಕಾರಿಗಳ ಕಣ್ತಪ್ಪಿಸಿ ನಾಪತ್ತೆಯಾಗಿದ್ದ. ತನಿಖೆಯಿಂದ ಆಕೆ ಕೌಟುಂಬಿಕ ದೌರ್ಜನ್ಯಕ್ಕೆ ಒಳಗಾಗಿದ್ದಳು ಎಂಬುದು ತಿಳಿದುಬಂದಿದೆ. ಈ ಸಂಬಂಧ ಸೆಪ್ಟೆಂಬರ್‌ನಲ್ಲಿ ಪತಿ ವಿರುದ್ಧ ಕೌಟುಂಬಿಕ ದೌರ್ಜನ್ಯ ಪ್ರಕರಣ ದಾಖಲಿಸಿದ್ದರು. ಪಂಕಜ್ ಅವರನ್ನು ಮದುವೆಯಾದ ನಂತರ ಅವರು ಏಪ್ರಿಲ್ 2023 ರಲ್ಲಿ ಯುಕೆಗೆ ಹೋಗಿದ್ದರು.

## ಬರೀ ಟವೆಲ್ ಸುತ್ತಿಕೊಂಡು ಇಂಡಿಯಾ ಗೇಟ್ ಬಳಿ ಯುವತಿಯ ಬೋಲ್ಡ್ ಡಾನ್ಸ್

**ನವದೆಹಲಿ:** ಇತ್ತೀಚಿನ ದಿನಗಳಲ್ಲಿ ಸೋಷಿಯಲ್ ಮೀಡಿಯಾದಲ್ಲಿ ಲೈಕ್ಸ್, ವೀವ್ಸ್ ಗಿಟ್ಟಿಸಿಕೊಳ್ಳಲು ಮತ್ತು ಫೇಮಸ್ ಆಗಲು ಕೆಲವರು ಯಾವ ಮಟ್ಟಕ್ಕೂ ಬೇಕಾದ್ರೂ ಹೋಗುವವರಿದ್ದಾರೆ. ಅದರಲ್ಲೂ ಕೆಲ ಹೆಣ್ಣು ಮಕ್ಕಳು ವೀವ್ಸ್‌ಗಾಗಿ ಅರೆಬರೆ ಬಟ್ಟೆ ತೊಟ್ಟು ರೀಲ್ಸ್ ಮಾಡುತ್ತಿರುತ್ತಾರೆ. ಇಂತಹ ಕೆಲವೊಂದು ಅತಿರೇಕದ ವರ್ತನೆಗಳು ನೆಟ್ಟಿಗರ ಕೆಂಗಣ್ಣಿಗೆ ಗುರಿಯಾಗುತ್ತಿರುತ್ತವೆ. ಇದೀಗ ಅಂತಹದ್ದೇ ವಿಡಿಯೋವೊಂದು ವೈರಲ್ ಆಗಿದ್ದು, ಯುವತಿಯೊಬ್ಬಳು ಸಾವಿರಾರು ಪ್ರವಾಸಿಗರು ಭೇಟಿ ನೀಡುವಂತಹ ಇಂಡಿಯಾ ಗೇಟ್ ಬಳಿ ಬರೀ ಟವೆಲ್ ಸುತ್ತಿಕೊಂಡು ಬೋಲ್ಡ್ ಡಾನ್ಸ್ ಮಾಡಿದ್ದಾಳೆ. ಈಕೆಯ ಈ ಮಿತಿಮೀರಿದ ವರ್ತನೆಗೆ ಭಾರೀ ಆಕ್ರೋಶ ವ್ಯಕ್ತವಾಗುತ್ತಿದೆ.

ಕೋಲ್ಕತ್ತಾ ಮೂಲದ ಮಾಡೆಲ್ ಸನ್ನತಿ ಮಿಶ್ರಾ, ಎಂಬಾಕೆ ದೆಹಲಿಯ ಐಕಾನಿಕ್ ಇಂಡಿಯಾ ಗೇಟ್ ಬಳಿ ಬರೀ ಟವೆಲ್ ಸುತ್ತಿ ರೀಲ್ಸ್ ಮಾಡಿದ್ದಾಳೆ. ನಿನ್ನೆ ಅಂತರಾಷ್ಟ್ರೀಯ ಪುರುಷರ ದಿನದ ಅಂಗವಾಗಿ ಆಕೆ ಈ ರೀಲ್ಸ್ ಮಾಡಿ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾಳೆ. ಸಾವಿರಾರು ಪ್ರವಾಸಿಗರು ಭೇಟಿ ನೀಡುವಂತಹ ಸಾರ್ವಜನಿಕ ಸ್ಥಳದಲ್ಲಿ ಆಕೆ ನಡೆದುಕೊಂಡ ರೀತಿಗೆ ಭಾರೀ ಟೀಕೆಗಳು ವ್ಯಕ್ತವಾಗುತ್ತಿದೆ.




ಈ ವಿಡಿಯೋವನ್ನು ಸನ್ನತಿ ಮಿಶ್ರಾ ತನ್ನ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಹಂಚಿಕೊಂಡಿದ್ದು, ''ಅಂತರಾಷ್ಟ್ರೀಯ ಪುರುಷರ ದಿನದ ಶುಭಾಶಯಗಳು'' ಎಂಬ ಶೀರ್ಷಿಕೆಯನ್ನು ಬರೆದುಕೊಂಡಿದ್ದಾಳೆ. ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿರುವ ಈ ವಿಡಿಯೋದಲ್ಲಿ ಸನ್ನತಿ ಒಂದು ಬಿಳಿ ಟವೆಲ್ ಸುತ್ತಿಕೊಂಡು ಡಾನ್ಸ್ ಮಾಡುವ ದೃಶ್ಯವನ್ನು ಕಾಣಬಹುದು. ಸಾವಿರಾರು ಪ್ರವಾಸಿಗರು ಭೇಟಿ ನೀಡುವಂತಹ ಇಂಡಿಯಾ ಗೇಟ್ ಮುಂದೆ ಬರೀ ಟವೆಲ್ ಸುತ್ತಿ ನಿಂತ ಸನ್ನತಿ ಹಿಂದಿ ಹಾಡೊಂದಕ್ಕೆ ಲಿಪ್ ಸಿಂಕ್ ಮಾಡುತ್ತಾ ಡಾನ್ಸ್ ಮಾಡಿದ್ದಾಳೆ.

ಒಂದು ದಿನದ ಹಿಂದೆ ಹಂಚಿಕೊಳ್ಳಲಾದ ಈ ವಿಡಿಯೋ 6.2 ಲಕ್ಷ ವೀಕ್ಷಣೆಗಳನ್ನು ಹಾಗೂ ಹಲವಾರು ಕಾಮೆಂಟ್ಸ್‌ಗಳನ್ನು ಪಡೆದುಕೊಂಡಿದೆ. ಒಬ್ಬ ಬಳಕೆದಾರರು ಮೊದಲು ಆಕೆಯನ್ನು ಅರೆಸ್ಟ್ ಮಾಡಿ ಎಂದು ಕಿಡಿ ಕಾರಿದ್ದಾರೆ. ಮತ್ತೊಬ್ಬ ಬಳಕೆದಾರರು ಆಕೆ ತನ್ನ ಎಲ್ಲಾ ಮಿತಿಗಳನ್ನು ಮೀರಿ ವರ್ತಿಸುತ್ತಿದ್ದಾಳೆ ಎಂಬ ಕಾಮೆಂಟ್ ಬರೆದುಕೊಂಡಿದ್ದಾರೆ.

### ಸಂಸ್ಥೆಯ ಸಂಯೋಜನಾಧಿಕಾರಿ ಸಂತೋಷ್ ಅನಂತಪುರ ಹೇಳಿಕೆ

# ಸಮಾನ ಶಿಕ್ಷಣ ಹಂಚುವ ಜವಾಬ್ದಾರಿ ಹೊಂದಿದೆ ಇನ್ಫೋಸಿಸ್



**ಚಾಮರಾಜನಗರ:** ಪ್ರಜಾಪ್ರಭುತ್ವದ ಆಶಯದಡಿ ಶಿಕ್ಷಣವನ್ನು ಎಲ್ಲಾ ಮಕ್ಕಳಿಗೂ ಸಮಾನವಾಗಿ ಹಂಚುವ ಸಾಮಾಜಿಕ ಜವಾಬ್ದಾರಿಯನ್ನು ಇನ್‌ಫೋಸಿಸ್ ಸಂಸ್ಥೆ ಹೊಂದಿದೆ ಎಂದು ಸಂಸ್ಥೆಯ ಸಂಯೋಜನಾಧಿಕಾರಿ ಸಂತೋಷ್ ಅನಂತಪುರ ಅವರು ತಿಳಿಸಿದರು.

ನಗರದ ಜೆ.ಎಚ್. ಪಟೇಲ್ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಸರ್ಕಾರಿ ಶಾಲೆಯಲ್ಲಿ ಡಿಜಿಟಲ್ ಶಿಕ್ಷಣ ಬಲವರ್ಧನೆ ಹಾಗೂ 3ನೇ ಹಂತದ ಟ್ಯಾಬ್ ವಿತರಣಾ ಕಾರ್ಯಕ್ರಮದಲ್ಲಿ ಜಿಲ್ಲೆಯ ಕೆಲ ಶಾಲೆಗಳಿಗೆ ಸಾಂಕೇತಿಕವಾಗಿ ಟ್ಯಾಬ್ ವಿತರಿಸಿ ಅವರು ಮಾತನಾಡಿದರು.

ಜಿಲ್ಲೆಯ ಶೈಕ್ಷಣಿಕ ಪ್ರಗತಿಗಾಗಿ ಇನ್‌ಫೋಸಿಸ್ ಸಂಸ್ಥೆ ಕಟಿಬದ್ಧವಾಗಿದೆ. ಈ ನಿಟ್ಟಿನಲ್ಲಿ ಜಿಲ್ಲೆಯ ವಿವಿಧ ಸರ್ಕಾರಿ ಶಾಲೆಗಳಿಗೆ ಸ್ಪ್ರಿಂಗ್‌ಬೋರ್ಡ್ ಮೂಲಕ ಕಲಿಯಲು ಅನುಕೂಲವಾಗುವಂತೆ ಈಗಾಗಲೇ 120 ಸ್ಮಾರ್ಟ್ ಟಿ.ವಿ ಹಾಗೂ 1800 ಟ್ಯಾಬ್‌ಗಳನ್ನು ವಿತರಿಸಲಾಗಿದೆ. ಸ್ಮಾರ್ಟ್ ಟಿವಿ, ಟ್ಯಾಬ್ ನೀಡಿದರೇ ಸಂಸ್ಥೆಯ ಜವಾಬ್ದಾರಿ ಪೂರ್ಣಗೊಳ್ಳುವುದಿಲ್ಲ. ಕಲಿಕಾ ಪ್ರಗತಿ ಆಧಾರದ ಮೇಲೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಕೊಡುಗೆ ನೀಡಲಾಗುವುದು. ಜಿಲ್ಲೆಯ ವಿದ್ಯಾರ್ಥಿಗಳು, ಶಿಕ್ಷಕರು ಈ ಸದಾವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಲಿಕೆ ನಿರಂತರ ಪ್ರಕ್ರಿಯೆಯಾಗಿದ್ದು, ವಿದ್ಯಾರ್ಥಿಗಳು ಒಂದೇ ಚೌಕಟ್ಟಿನೊಳಗೆ ಕಲಿಯಲು ಸಾಧ್ಯವಿಲ್ಲ. ತುಂಬಾ ವೇಗವಾಗಿ ಕಲಿಕಾ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುತ್ತಿರುವ ಇಂದಿನ ವಿದ್ಯಾರ್ಥಿಗಳಂತೆ ಶಿಕ್ಷಕರು ಕಲಿಯಬೇಕಾದ ಅವಶ್ಯವಿದೆ. ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚು ಪ್ರತಿಭಾನ್ವಿತ ವಿದ್ಯಾರ್ಥಿಗಳಿದ್ದಾರೆ. ಟ್ಯಾಬ್‌ನಲ್ಲಿರುವ ಆಪ್‌ಗಳ ಕಲಿಕೆಗೆ ಭಾಷೆ ತೊಡಕಾಗುವುದಿಲ್ಲ. ಮುಖ್ಯವಾಗಿ ವಿದ್ಯಾರ್ಥಿಗಳು, ಶಿಕ್ಷಕರಿಗೆ ಕಲಿಯುವ ಆಸಕ್ತಿ ಇರಬೇಕು. ಸ್ಪ್ರಿಂಗ್‌ಬೋರ್ಡ್ ಮೂಲಕ ಕಲಿಯಲು ಪ್ರತಿದಿನ ಒಂದು ಗಂಟೆ ಮೀಸಲು ಅವಕಾಶ ಸಾಕಾಗಲಿದೆ. ಸಂಸ್ಥೆಯ ಅಧಿಕಾರಿಗಳ ತಂಡವು ಆಗಾಗ್ಗೆ ಶಾಲೆಗಳಿಗೆ ಭೇಟಿ ನೀಡಿ ಶಿಕ್ಷಕರಿಗೆ, ಮಕ್ಕಳಿಗೆ ಅಗತ್ಯ ಮಾರ್ಗದರ್ಶನ ನೀಡಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ರಾಮಚಂದ್ರರಾಜೇ ಅರಸ್ ಅವರು ಸ್ಪ್ರಿಂಗ್‌ಬೋರ್ಡ್ ಮೂಲಕ ಕಲಿಯಲು ಸಂಸ್ಥೆಯು ಸ್ಮಾರ್ಟ್ ಟಿವಿ, ಟ್ಯಾಬ್ ವಿತರಿಸಿ ಜಿಲ್ಲೆಯ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಉತ್ತಮ ನೆರವು ನೀಡುತ್ತಿದೆ. ಸ್ಮಾರ್ಟ್ ಟಿವಿ, ಟ್ಯಾಬ್ ವಿತರಣೆ ಮಾತ್ರವಲ್ಲ. ಶಾಲಾ ಕಟ್ಟಡ, ಶೌಚಾಲಯ ನಿರ್ಮಾಣ ಇನ್ನಿತರ ಅಭಿವೃದ್ಧಿ ಕಾರ್ಯಗಳಲ್ಲಿ ಸಂಸ್ಥೆ ಇಲಾಖೆಯ ಜೊತೆ ಕೈಜೋಡಿಸಿದೆ. ಈಗಾಗಲೇ ಮೊದಲ ಹಂತದಲ್ಲಿ ವೆಂಕಟಯ್ಯನ ಛತ್ರ ಶಾಲೆಯಲ್ಲಿ ಹಾಗೂ 2ನೇ ಹಂತದಲ್ಲಿ ಮಲ್ಲಯ್ಯನಪುರದ ಆದರ್ಶ ಶಾಲೆಯಲ್ಲಿ ಸ್ಮಾರ್ಟ್ ಟಿವಿ, ಟ್ಯಾಬ್ ವಿತರಿಸಲಾಗಿದೆ. ಇದು 3ನೇ ಹಂತದ ವಿತರಣಾ ಕಾರ್ಯಕ್ರಮವಾಗಿದೆ ಎಂದರು.

ಎಸ್.ಎಸ್.ಎಲ್.ಸಿ ಫಲಿತಾಂಶವನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ನಮ್ಮ ಕಲಿಕಾ ವೇಗ ಇನ್ನೂ ಹೆಚ್ಚಾಗಬೇಕು. ಈ ದಿಸೆಯಲ್ಲಿ ವಿದ್ಯಾರ್ಥಿಗಳು ಕಠಿಣ ಪರಿಶ್ರಮ ಹಾಕಬೇಕು. ಇನ್‌ಫೋಸಿಸ್ ಸಂಸ್ಥೆಯ ಅಧಿಕಾರಿಗಳು ಸಹ ಆಗಿಂದ್ದಾಗ್ಗೆ ಶಾಲೆಗಳಿಗೆ ಭೇಟಿನೀಡಿ ವಿದ್ಯಾರ್ಥಿಗಳ ಕಲಿಕಾ ಪ್ರಕ್ರಿಯೆಯನ್ನು ಪರಿಶೀಲಿಸಲಿದ್ದಾರೆ. ಶಿಕ್ಷಕರು, ಮಕ್ಕಳೊಂದಿಗೆ ಸಂವಾದ ನಡೆಸಲಿದ್ದಾರೆ. ಜಿಲ್ಲೆಯ ಶೈಕ್ಷಣಿಕ ಅಭಿವೃದ್ಧಿಗಾಗಿ ಇಲಾಖೆಯು ಸಂಸ್ಥೆಯೊಂದಿಗೆ 5 ವರ್ಷಗಳವರೆಗೆ ಒಪ್ಪಂದ ಮಾಡಿಕೊಂಡಿದೆ.

ಸ್ಮಾರ್ಟ್ ಟಿವಿ, ಟ್ಯಾಬ್‌ಗಳ ವೇಗ ಬಳಕೆಗಾಗಿ ಮುಂದಿನ ದಿನಗಳಲ್ಲಿ ಬಿ.ಎಸ್.ಎನ್.ಎಲ್ ಉಚಿತ ಹಾಗೂ ಅನಿಯಮಿತ ಅಂತರ್ಜಾಲ ವ್ಯವಸ್ಥೆ ಒದಗಿಸಲು ಕ್ರಮ ವಹಿಸಲಾಗಿದೆ ಎಂದು ರಾಮಚಂದ್ರರಾಜೇ ಅರಸ್ ಅವರು ತಿಳಿಸಿದರು.

ಸ್ಮಾರ್ಟ್ ಟಿವಿ, ಟ್ಯಾಬ್‌ಗಳ ಬಳಕೆ ಕುರಿತು ಕಾರ್ಯಕ್ರಮದಲ್ಲಿ ಮಾತನಾಡಿದ ಮಲ್ಲಯ್ಯನಪುರದ ಆದರ್ಶ ಶಾಲೆಯ ಸಹ ಶಿಕ್ಷಕರಾದ ಶಾಲಿನಿ ಅವರು ವಿದ್ಯಾರ್ಥಿಗಳು ಪುಸ್ತಕದಿಂದ ಎಲ್ಲವನ್ನು ಕಲಿಯಲು ಸಾಧ್ಯವಿಲ್ಲ. ಕಲಿಕೆಗೆ ಇರುವ ಇತರೆ ಅವಕಾಶಗಳು ಹಾಗೂ ಪುಸ್ತಕಕ್ಕೆ ಪೂರಕವಾದ ಬೇರೆಬೇರೆ ಕೋರ್ಸ್‌ಗಳ ಬಗ್ಗೆಯು ಚಿಂತನೆ ನಡೆಸಬೇಕು. 3933 ಬ್ಲಾಗ್‌ಗಳು, 2 ಲಕ್ಷಕ್ಕೂ ಹೆಚ್ಚಿನ ಕೋರ್ಸ್‌ಗಳು, ಮಕ್ಕಳಿಗಾಗಿ 7 ಸಾವಿರ ಕಂಟೆಂಟ್‌ಗಳಿರುವ ಸ್ಪ್ರಿಂಗ್‌ಬೋರ್ಡ್ ಆಪ್ ಬಹುದೊಡ್ಡ ಸಾಗರವಾಗಿದೆ. ಆಪ್ ಅನ್ನು ಪರಿಪೂರ್ಣವಾಗಿ ಅರಿಯಲು ಶಿಕ್ಷಕರಿಗೆ ಪರಿಣಾಮಕಾರಿ ತರಬೇತಿಯ ಅಗತ್ಯವಿದೆ. ಅಂತರ್ಜಾಲ ವ್ಯವಸ್ಥೆಗೆ ವೇಗ ನೀಡಬೇಕು. ಸ್ಪ್ರಿಂಗ್‌ಬೋರ್ಡ್ ಆಪ್ ಸುಲಭೀಕರಣಗೊಳಿಸಬೇಕು. ಇದರಿಂದ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ ಸಾಧ್ಯವಾಗಲಿದೆ ಎಂದರು.

ಸ್ಪ್ರಿಂಗ್‌ಬೋರ್ಡ್ ಮೂಲಕ ಕಲಿಯಲು ಇನ್‌ಫೋಸಿಸ್ ಸಂಸ್ಥೆಯು ನೀಡಿರುವ ಸ್ಮಾರ್ಟ್ ಟಿವಿ, ಟ್ಯಾಬ್ ಬಳಕೆ ಹಾಗೂ ಉಪಯೋಗ ಕುರಿತು ಚಾಮರಾಜನಗರದ ಮಲ್ಲಯ್ಯನಪುರದ ಆದರ್ಶ ಶಾಲೆ ಹಾಗೂ ಕೊಳ್ಳೇಗಾಲದ ಎಸ್.ವಿ.ಕೆ. ಶಾಲೆಯ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಅನುಭವ ಹಂಚಿಕೊಂಡರು. ಇನ್‌ಫೋಸಿಸ್ ಸಂಸ್ಥೆಯ ವ್ಯವಸ್ಥಾಪಕರಾದ ಡಾ. ಮೀನಾಕ್ಷಿ, ಪ್ರಶಾಂತ್ ಆಚಾರ್ಯ, ಬಿಳಿಗಿರಿರಂಗ, ದೀಪ್ತಾ ಪದ್ಮನಾಭನ್, ವಿನಯ್ ಸಂತು, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಮನೆಗೊಂದು ಶೌಚಾಲಯದಿಂದ ಪ್ರತಿಯೊಬ್ಬರ ಆರೋಗ್ಯ ಸುರಕ್ಷಿತ

**ಬೆಂಗಳೂರು ಗ್ರಾಮಾಂತರ:** ದೇವನಹಳ್ಳಿ ತಾಲ್ಲೂಕು ಕುಂದಾಣ ಕೊಪ್ಪಲಿನಲ್ಲಿ ವಿಶ್ವ ಶೌಚಾಲಯ ದಿನ ನಮ್ಮ ಶೌಚಾಲಯ ನಮ್ಮ ಗೌರವ ಆಂದೋಲನಾವು ಶಾಲಾ ವಿದ್ಯಾರ್ಥಿ ಜಾಗೃತಿ ಜಾಥ ಕಾರ್ಯಕ್ರಮ ನೇತ್ರಾವತಿ ನಾಗೇಶ್ ಅವರ ಅಧ್ಯಕ್ಷೆಯಲ್ಲಿ ನಡೆಯಿತು.

ಕಾರ್ಯಕ್ರಮದ ಮುಖ್ಯ ಅತಿಥಿ ಬಯಪ ಅಧ್ಯಕ್ಷ ಶಾಂತ ಕುಮಾರ್ ಮಾತನಾಡಿ, ಸ್ವಚ್ಚತಾ ಆಂದೋಲನಾ ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆಯಲು ಗ್ರಾಮಸ್ಥರ ಸಹಕಾರ ಅತ್ಯಗತ್ಯ. ನಾವು ಧರಿಸಿದ ಬಟ್ಟೆಯಷ್ಟೇ ನಮ್ಮ ಮನೆಗಳ ಶೌಚ ಗೃಹಗಳ ಸುಚಿತ್ವ ಕಾಪಾಡಿಕೊಳ್ಳಬೇಕು ಎಂದು ಬಯಪ ಅಧ್ಯಕ್ಷ ಶಾಂತಕುಮಾರ್ ಗ್ರಾಮಸ್ಥರಿಗೆ ತಿಳುವಳಿಕೆ ನೀಡಿದರು. ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ರಮೇಶ್ ಕುಮಾರ್ ಮಾತನಾಡಿ, ಪ್ರತಿ ಫಲಾನುಭವಿಗೆ 20ಸಾವಿರ ಹಣ ಶೌಚಾಲಯ ನಿರ್ಮಿಸಲು ಸರ್ಕಾರ ನೀಡುತ್ತಿದೆ. 2018 ರಲ್ಲಿ ಕಡ್ಡಾಯ ಶೌಚಾಲಯ ನಿರ್ಮಾಣ ಸರ್ಕಾರದ ಆದೇಶವಾಯಿತು. ಬಯಲು ಮಲ ವಿಸರ್ಜನೆಯಿಂದ ಅನಾರೋಗ್ಯ ಹೆಚ್ಚಾಗಲಿದೆ. ಶೌಚಾಲಯವನ್ನು ದೇವಾಲಯವೆಂದು ಭಾವಿಸಿ ಸ್ವಚ್ಚವಾಗಿಟ್ಟುಕೊಳ್ಳಬೇಕು. ಅತಿ ಹೆಚ್ಚು ಸಾಂಕ್ರಾಮಿಕ ರೋಗ ಬರುವುದೇ.. ಶೌಚಾಲಯ ನೀಟಾಗಿಲ್ಲದಿರುವುದು. ಸಾರ್ವಜನಿಕ ಶೌಚಾಲಯಗಳ ಸುಚಿತ್ವ ಆಗಬೇಕೆಂದರು. ಕುಂದಾಣ ಪಂಚಾಯಿತಿ ಅಧ್ಯಕ್ಷೆ ನೇತ್ರಾವತಿ ನಾಗೇಶ್, ಜಿ.ಪಂ.ಉಪ ಕಾರ್ಯದರ್ಶಿ ರಮೇಶ್ ಕುಮಾರ್, ಜಿಲ್ಲಾ ಯೋಜನೆ ಅದಿಕಾರಿ ವಿಟಲ್ ಕವಳೇಕರ್, ಇಒ ಶ್ರೀನಾಥ್ ಗೌಡ, ಡಿಟಿ ಚೈತ್ರ, ಜಿಲ್ಲಾ ಆರೋಗ್ಯದಿಕಾರಿ ಸುನೀಲ್, ಮೈತ್ರ ಸೇವಸಂಸ್ಥೆ ಹರೀಶ್,ಬಿಇಒ ಸುಮಾ, ಅಕ್ಷರ ದಾಸೋಹ ಲಲಿತಮ್ಮ, ಪಂಸದಸ್ಯರಾದ ಕೆವಿ.ಸ್ವಾಮಿ, ವೀಣಾರಾಣಿ, ರಾಮ ಚಂದ್ರಪ್ಪ, ಕ್ಯಾತೇಗೌಡ, ವರಲಕ್ಷ್ಮೀ, ಮುನಿಯಪ್ಪ, ಸುಬ್ರಮಣಿ, ಮುಖಂಡ ಗಣೇಶ್, ಚಂದ್ರಪ್ಪ,ಮುಖ್ಯ ಶಿಕ್ಷಕಿ ಶಾಂತಲಾ, ವಿದ್ಯಾರ್ಥಿ/ವಿದ್ಯಾರ್ಥಿನಿಯರು ಹಾಜರಿದ್ದರು.



### ಸ್ವಚ್ಚತೆಗೆ ಮಹತ್ವ ನೀಡಿ : ಶಾಸಕ ಎ.ಆರ್. ಕೃಷ್ಣಮೂರ್ತಿ

## ಶೌಚಾಲಯ ದಿನದ ವಿಶೇಷ ಆಂದೋಲನ

**ಚಾಮರಾಜನಗರ:** ಪ್ರತಿಯೊಂದು ಕುಟುಂಬವು ಶೌಚಾಲಯ ನಿರ್ಮಿಸಿಕೊಳ್ಳಿ ಮತ್ತು ಅದನ್ನು ಬಳಸಿ ಸ್ವಚ್ಚತೆಯಿಂದ ನಿರ್ವಹಣೆ ಮಾಡಬೇಕು. ಜೀವನ ಶೈಲಿಯಲ್ಲಿ ಶೌಚಾಲಯದ ಮಹತ್ವ ಅತೀ ಮುಖ್ಯ ಹಾಗೂ ಅವಶ್ಯಕವೂ ಆಗಿದೆ ಎಂದು ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ತಿಳಿಸಿದರು.

ಚಾಮರಾಜನಗರ ತಾಲೂಕಿನ ಕುದೇರು ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿಂದು ವಿಶ್ವ ಶೌಚಾಲಯ ದಿನಾಚರಣೆಯ ಪ್ರಯುಕ್ತ ಜಿಲ್ಲಾಮಟ್ಟದ ನಮ್ಮ ಶೌಚಾಲಯ ನಮ್ಮ ಗೌರವ ಹಾಗೂ ಅಂದದ ಶೌಚಾಲಯ ಆನಂದದ ಜೀವನ ಎಂಬ ಘೋಷವಾಕ್ಯದೊಂದಿಗೆ ವಿಶೇಷ ಆಂದೋಲನವನ್ನು ಉದ್ಘಾಟಿಸಿ ಮಾತನಾಡಿದರು.



ಸ್ವಚ್ಚತೆಯನ್ನು ನಮ್ಮಿಂದಲೇ ಪ್ರಾರಂಭಿಸಿ ಕುಟುಂಬದವರು ಹಾಗೂ ಸಮುದಾಯಕ್ಕೆ ಇದರ ಬಗ್ಗೆ ಹೆಚ್ಚಿನ ಅರಿವು ಮತ್ತು ಜ್ಞಾನವನ್ನು ಮೂಡಿಸಬೇಕಾಗಿದೆ. ಶೌಚಾಲಯದ ಬಳಕೆಯಿಂದ ಢಯೇರಿಯ, ಕಾಲರ, ಟೈಫಾಯಿಡ್, ಡೆಂಗ್ಯೂ, ಮಲೇರಿಯಾದಂತಹ ಕಾಯಿಲೆಗಳಿಂದ ಪಾರಾಗಬಹುದಾಗಿದೆ. ಎಲ್ಲರೂ ವೈಯಕ್ತಿಕ, ಕೌಟುಂಬಿಕ ಹಾಗೂ ಸಾಮಾಜಿಕ ಸ್ವಚ್ಚತೆಗೆ ಮಹತ್ವ ನೀಡಿ ಆರೋಗ್ಯಯುತ ಜೀವನ ನಡೆಸಬೇಕು ಎಂದು ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಮಾತನಾಡಿ ಗ್ರಾಮ ಪಂಚಾಯಿತಿಗಳು ಜವಾಬ್ದಾರಿಯುತವಾಗಿ ಸರ್ಕಾರದ ಮಾರ್ಗಸೂಚಿಗಳ ಅನ್ವಯ ಕರ್ತವ್ಯನಿರ್ವಹಿಸಿ ಶೌಚಾಲಯ ರಹಿತ ಫಲಾನುಭವಿಗಳನ್ನು ಗುರುತಿಸಬೇಕು. ಅವರ ಮನವೊಲಿಸಿ ಶೌಚಾಲಯಗಳನ್ನು ನಿರ್ಮಿಸಿ ಬಳಕೆ ಮಾಡಿಕೊಳ್ಳಲು ಪ್ರೇರೆಪಿಸುವಂತಹ ವಿವಿಧ ಮಾಹಿತಿ ಶಿಕ್ಷಣ ಸಂವಹನ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಕೈಗೊಳ್ಳುವಂತೆ ತಿಳಿಸಿದರು.

ನಮ್ಮ ಶೌಚಾಲಯ-ನಮ್ಮ ಗೌರವ ಅಭಿಯಾನದ ಉದ್ದೇಶ ಸಮುದಾಯಗಳ ಭಾಗವಹಿಸುವಿಕೆ ಈ ಆಂದೋಲನ ಅವಧಿಯಲ್ಲಿ ಗ್ರಾಮ ಪಂಚಾಯಿತಿಗಳು ನಿರ್ವಹಿಸಬೇಕಾದ ಕರ್ತವ್ಯ ಮತ್ತು ಚಟುವಟಿಕೆಗಳ ಬಗ್ಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ವಿವರಿಸಿದರು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರು ಹಾಗೂ ಸ್ವಚ್ಚ ಭಾರತ್ ಮಿಷನ್ (ಗ್ರಾಮೀಣ) ಜಿಲ್ಲಾ ನೋಡಲ್ ಅಧಿಕಾರಿ ಕಿರಣ್ ಫಡ್ನೇಕರ್ ಅವರು ಮಾತನಾಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ನೀಡಿರುವ ಮಾರ್ಗಸೂಚಿ ಅಭಿಯಾನದ ಉದ್ದೇಶಗಳನ್ನ ತಿಳಿದುಕೊಳ್ಳಬೇಕು. ಅಭಿಯಾನದ ಸ್ಪರ್ಧೆ ಆಯೋಜನೆ ಸ್ಪರ್ಧೆಯ ನೀಲನಕ್ಷೆ, ಪ್ರಮುಖ ಚಟುವಟಿಕೆಗಳನ್ನು ನಿರ್ವಹಿಸಬೇಕು ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಸಾರ್ವಜನಿಕ ಶಿಕ್ಷಣ ಇಲಾಖೆಗಳು ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್ ಜವಾಬ್ದಾರಿಗಳು ಅಭಿಯಾನದಲ್ಲಿ ಹೆಚ್ಚಿದೆ. ಸದರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಕಿರಣ್ ಫಡ್ನೇಕರ್ ಅವರು ತಿಳಿಸಿದರು. ಇದೇ ವೇಳೆ ಫಲಾನುಭವಿಗಳಿಗೆ ಹೊಸದಾಗಿ ಶೌಚಾಲಯ ನಿರ್ಮಿಸಿಕೊಳ್ಳಲು ಗಣ್ಯರು ಕಾರ್ಯದೇಶ ಮಂಜೂರಾತಿ ಪತ್ರಗಳನ್ನು ವಿತರಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಾಲ್ಯ ಇಲಾಖೆ ಕಾರ್ಯಪಾಲಕ ಎಂಜಿನಿಯರ್ ಆನಂದಮೂರ್ತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮಂಜುನಾಥ್, ಕುದೇರು ಗ್ರಾಮಪಂಚಾಯಿತಿ ಉಪಾಧ್ಯಕ್ಷರಾದ ಶಿವಣ್ಣ, ಗ್ರಾಮ ಪಂಚಾಯಿತಿ ಸದಸ್ಯರು, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಇಡ್ಲಿ ಕಾಂತಮ್ಮನವರಿಗೆ ಸನ್ಮಾನ

**ಹುಳಿಯಾರು:** ಮಹಿಳಾ ಸಬಲೀಕರಣಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಸೃಜನ ಮಹಿಳಾ ಸಂಘಟನೆಯ ವತಿಯಿಂದ ಹುಳಿಯಾರಿನ ನಿವಾಸಿ ಕಾಂತಮ್ಮನವರನ್ನು ಸನ್ಮಾನಿಸಲಾಯಿತು.

ಕಳೆದ 25 ವರ್ಷಗಳಿಂದ ಮನೆಯಲ್ಲೇ ಕೇವಲ ಒಂದು ರೂಪಾಯಿಗೆ ಒಂದರಂತೆ ಇಡ್ಲಿಯನ್ನು ಮಾರಿ ಜೀವನ ಕಟ್ಟಿಕೊಂಡು ಸಂಸಾರವನ್ನು ನಿರ್ವಹಿಸುತ್ತಿರುವ ಮತ್ತು ಇಬ್ಬರು ಹೆಣ್ಣುಮಕ್ಕಳನ್ನು ಓದಿಸಿ, ಒಬ್ಬಳು ಮಗಳ ಮದುವೆಯನ್ನು ಮಾಡಿರುವ ಕಾಂತಮ್ಮನವರ ಸಾಧನೆಗಾಗಿ ಅವರನ್ನು ಗೌವರವಿಸಲಾಯಿತು. ಇದೇ ಸಂದರ್ಭದಲ್ಲಿ ಕೈಬರಹದ ಸೃಜನ ಮಾಸಿಕ ಪತ್ರಿಕೆಯನ್ನು ಬಿಡುಗಡೆ ಮಾಡಲಾಯಿತು. ಸಭೆಯ ಅಧ್ಯಕ್ಷತೆಯನ್ನು ಸೃಜನ ಸಂಘಟನೆಯ ಸಂಸ್ಥಾಪಕರು ಮತ್ತು ಅಧ್ಯಕ್ಷರಾದ ಎನ್.ಇಂದಿರಮ್ಮ ವಹಿಸಿದ್ದರು. ವಿಶ್ರಾಂತ ಪ್ರಾಂಶುಪಾಲರು ಯು.ಪಿ.ಉಮಾದೇವಿ, ನಿಕಟಪೂರ್ವ ಸೃಜನ ಅಧ್ಯಕ್ಷೆ ಶಶಿಕಲಾ, ನಿರ್ಗತಿಕರ ಮಹಿಳೆಯರ ಸಂಘಟನೆಯ ಅಧ್ಯಕ್ಷೆ ಜಯಲಕ್ಷ್ಮೀ, ಕಾರ್ಯದರ್ಶಿ ಚಂದ್ರಕಲಾ, ಸೃಜನ ಉಪಾಧ್ಯಕ್ಷೆ ಶುಭ, ಖಜಾಂಚಿ ರಾಜಮ್ಮ, ಸೃಜನ ನಿಕಟ ಪೂರ್ವ ಕಾರ್ಯದರ್ಶಿ ರೂಪ, ಸಾವಿತ್ರಿಬಾಯಿ ಫುಲೆ ಸಮಿತಿಯ ಸುವರ್ಣ, ಹಿರಿಯ ಸದಸ್ಯೆ ಅನ್ನಪೂರ್ಣಮ್ಮ, ಸಾಮಾಜಿಕ ಕಾರ್ಯಕರ್ತೆ ಮಂಜುಳಾ, ಹುಳಿಯಾರು ಮತ್ತು ಚಿಕ್ಕನಾಯಕನಹಳ್ಳಿ ಸೃಜನ ಸಂಘಟನೆಯ ಸದಸ್ಯರು ಹಾಜರಿದ್ದರು.



## ರೈನ್ ಬೋ ಇನ್ನೊವೇಟ್ ಅಕಾಡೆಮಿಯಲ್ಲಿ ಕನಕ ಜಯಂತಿ

**ಹೊಸಕೋಟೆ:** ಕನಕದಾಸರು ಸುಮಾರು 15 – 16ನೇ ಶತಮಾನದಲ್ಲಿ ಕರ್ನಾಟಕದಲ್ಲಿ ಜನಪ್ರಿಯವಾಗಿದ್ದ ಭಕ್ತಿ ಪಂಥದ ಮುಖ್ಯ ಹರಿದಾಸರಲ್ಲಿ ಒಬ್ಬರಾಗಿದ್ದಾರು. ಎಂದು ರೈನ್ ಬೋ ಇನ್ನೊವೇಟ್ ಅಕಾಡೆಮಿ ಶಾಲೆ ಮತ್ತು ರೈನ್ ಬೋ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಸಂಸ್ಥಾಪಕರಾದ ವರಲಕ್ಷ್ಮಿ.ಬಿ.ಎಸ್.ರವರು ತಿಳಿಸಿದ್ದಾರೆ.



ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆಯ ರೈನ್ ಬೋ ಇನ್ನೊವೇಟ್ ಅಕಾಡೆಮಿ ಶಾಲೆ ಬೂದಿಗೆರೆ ಕ್ರಾಸ್ ಇಲ್ಲಿ ಹಮ್ಮಿಕೊಂಡಿದ್ದ ಕನಕದಾಸರ ಜಯಂತೋತ್ಸವ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕನಕದಾಸರು ವ್ಯಾಸರಾಯರ ಅಚ್ಚುಮೆಚ್ಚಿನ ಶಿಷ್ಯರಾಗಿದ್ದರು. ಅವರಿಂದಲೇ ಮಧ್ವತತ್ವಶಾಸ್ತ್ರವನ್ನ ಕಲಿತರು. ಒಂದು ಸಲ ವ್ಯಾಸರಾಯರ ಜೊತೆ ಉಡುಪಿ ಶ್ರೀಕೃಷ್ಣನ ಮಠಕ್ಕೆ ಆಗಮಿಸಿದ್ದರು. ಆದರೆ ಅವರು ಕೆಳಜಾತಿಯವರು ಎಂಬ ಕಾರಣಕ್ಕೆ ದೇಗುಲದ ಒಳಗೆ ಪ್ರವೇಶ ಸಿಗಲಿಲ್ಲ. ಕನಕದಾಸರು ಅಲ್ಲೇ ದೇಗುಲದ ಹಿಂದೆ ನಿಂತು ಶ್ರೀಕೃಷ್ಣನ ಪ್ರಾರ್ಥನೆಯಲ್ಲಿ ತೊಡಗಿದ್ದರು. ಆಗ ಸಾಕ್ಷಾತ್ ಕೃಷ್ಣ ದೇಗುಲದ ಹಿಂದಿನ ಗೋಡೆ ಒಡೆದು ಕನಕದಾಸರಿಗೆ ದರ್ಶನ ನೀಡಿದ್ದರು. ಅದನ್ನು ಇಂದಿಗೂ ಕನಕನ ಕಿಂಡಿ ಎಂದೇ ಕರೆಯಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಚಿತವಾಗಿ ಆರೋಗ್ಯ ಶಿಬಿರವನ್ನು ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಡಾಕ್ಟರ್. ವಿನಯ್ ಕುಮಾರ್, ಪ್ರೋಟೀಸ್ ಆಸ್ಪತ್ರೆ, ಡಾಕ್ಟರ್. ಸೇವಂತಿ ನ್ಯೂರೋ ಕೇರ್ ನಾಗರಬಾವಿ, ಓ ಆರ್ ಡಬ್ಲ್ಯೂಆನಂದ್ ಮತ್ತು ಮ್ಯಾಥ್ಯೂ ಇವರು ಆರೋಗ್ಯ ಶಿಬಿರದಲ್ಲಿ ಪಾಲ್ಗೊಂಡು ಅನೇಕ ಮಾಹಿತಿಯನ್ನು ಹಂಚಿಕೊಂಡು ಆರೋಗ್ಯ ತಪಾಸಣೆ ಮಾಡಿದರು. ಈ ಸಂದರ್ಭದಲ್ಲಿ ಸಂಸ್ಥಾಪಕರಾದ ವರಲಕ್ಷ್ಮಿ.ಬಿ.ಎಸ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಿತ.ಎಸ್ ಮತ್ತು ಪ್ರಾಂಶುಪಾಲರಾದ ಮಂಜುನಾಥ್.ಆರ್.ಎ ಸೇರಿದಂತೆ ಶಾಲೆ ಮತ್ತು ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ಮಕ್ಕಳು ಇದ್ದರು.

## ಅಂಧಕಾರದ ಕತ್ತಲು ಅಳಿಸಿ ಜ್ಞಾನದ ಜ್ಯೋತಿ ಬೆಳಗಿಸಿ

**ನಾಗಮಂಗಲ :** ಜ್ಯೋತಿಯ ಜ್ಞಾನದ ಸಂಕೇತ ಪ್ರತಿ ಮನೆ ಮನದಲ್ಲಿಯೂ ಅಜ್ಞಾನದ ಕತ್ತಲು ಓಡಿಸಿ ಜ್ಞಾನದ ಜ್ಯೋತಿ ಬೆಳಗುವುದೇ ದೀಪೋತ್ಸವ ಎಂದು ನಿವೃತ್ತ ಪ್ರಾಂಶುಪಾಲರಾದ ಬಿ.ನಾಗರಾಜು ತಿಳಿಸಿದರು. ನಾಗಮಂಗಲ ತಾಲೂಕು ದೇವಲಾಪುರ ಹೋಬಳಿ ಸಮೀಪ ಇರುವ ಕುಂಟಾನುಕೊಪ್ಪಲು ಗ್ರಾಮದಲ್ಲಿ ಬಸವಣ್ಣ ದೇವರ ಕಾರ್ತಿಕ ಮಾಸದ ದೀಪೋತ್ಸವ ಚಾಲನೆ ನೀಡುತ್ತಾ ಮಾತನಾಡಿದರು. ಶ್ರೀ ಬಸವಣ್ಣ ಸ್ವಾಮಿ ಸೇವಾ ಸಮಿತಿ ಮತ್ತು ಸ್ವಾಸ್ಥ್ಯ ಜೀವನಮಾರ್ಗ ಯೋಗ ಪ್ರತಿಷ್ಠಾನ ಟ್ರಸ್ಟ್ ನ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ದೀಪೋತ್ಸವಕ್ಕೆ ಸ್ವಾಸ್ಥ್ಯ ಭಜನಾ ಮಂಡಳಿಯ ಮುಖ್ಯಸ್ಥರಾದ ನಿವೃತ್ತ ಪ್ರಾಂಶುಪಾಲರು ಯಲಾದಹಳ್ಳಿಯ ಬಿ.ನಾಗರಾಜು ರವರು ಜ್ಯೋತಿ ಬೆಳಗಿಸಿ ಚಾಲನೆ ನೀಡಿದರು. ಜ್ಯೋತಿ ಜ್ಞಾನದ ಸಂಕೇತ ಪ್ರತಿ ಮನೆ ಮನದಲ್ಲೂ ಜ್ಞಾನ ಜ್ಯೋತಿ ಬೆಳಗಿ ಅಜ್ಞಾನದ ಕತ್ತಲು ಕಳೆಯಬೇಕೆಂಬುದೇ ದೀಪೋತ್ಸವ ಆಚರಣೆಯ ಉದ್ದೇಶ. ದೀಪ ಬೆಳಗುವುದರಿಂದ ನಮ್ಮಲ್ಲಿ ಆಧ್ಯಾತ್ಮಿಕ ಚಿಂತನೆ ಮೊಳಕೆ ಹೊಡೆದು ಅಂದಕಾರ ದೂರವಾಗುವುದರ ಜೊತೆಗೆ ವಾತಾವರಣ ಶುದ್ಧಿಯಾಗಿ ರೋಗ ಕಾರಕಗಳು ನಿವಾರಣೆಯಾಗುತ್ತವೆ ಎಂದು ತಿಳಿಸಿ ಮತ್ತೋರ್ವ ಭಜನಾ ಮಂಡಳಿ ಸದಸ್ಯರಾದ ತಿರುಮಲೇಗೌಡರ ಜೊತೆಗೂಡಿ ಕೆಲವು ಭಜನಾವಳಿಗಳನ್ನು ಹಾಡಿದರು. ಇದೇ ಸಂದರ್ಭದಲ್ಲಿ ಗೋ ಮಾತೆಗೆ ಪೂಜೆಯನ್ನು ಸಲ್ಲಿಸಿ ಮಾತನಾಡಿದ ಲಕ್ಷ್ಮಣ್ ಜೀ ಯವರು ಆಧುನಿಕ ಯುಗದಲ್ಲಿ ಗೋವಿನಿಂದ ದೂರವಾಗಿರುವ ನಾವು ಆಸ್ಪತ್ರೆಗೆ ಹತ್ತಿರವಾಗಬೇಕಾದ ಅನಿವಾರ್ಯ ಎದುರಾಗಿದೆ, ಮನೆಯಲ್ಲಿ ಒಂದು ದೇಶಿ ಹಸುವಿದ್ದರೆ ಒಬ್ಬ ವೈದ್ಯನಿದ್ದಂತೆ. ಗೋವಿನ ಉತ್ಪನ್ನಗಳಾದ ಹಾಲು, ಮೊಸರು, ಬೆಣ್ಣೆ, ತುಪ್ಪ, ಸೆಗಣಿ, ಗೋ ಮೂತ್ರ ಸೇರಿದಂತೆ ಪ್ರತಿಯೊಂದು ಉತ್ಪನ್ನಗಳು ಔಷಧೀಯ ಆಗರ ಪ್ರತಿಯೊಂದು ಮನೆ ಮನೆಯಲ್ಲೂ ದೇಶಿ ಹಸುಗಳನ್ನು ಸಾಕಿ ಗೋವಿನ ಜೊತೆಗೆ ಒಡನಾಟ ಇರಿಸಿಕೊಂಡರೆ ಕ್ಯಾನ್ಸರ್ ನಂತಹ ಮಾರಣಾಂತಿಕ ರೋಗಗಳು ಬಾದಿಸಲಾರವು ಹಾಗಾಗಿ ಪ್ರತಿಯೊಂದು ಮನೆಯಲ್ಲೂ ಗೋವುಗಳನ್ನು ಸಾಕುವ ಮೂಲಕ ಗೋ ಸಂತತಿಯನ್ನು ಉಳಿಸೋಣ ಬೆಳೆಸೋಣ ಎಂದು ಕರೆ ನೀಡಿದರು. ಶ್ರೀ ಬಸವಣ್ಣ ದೇವಸ್ಥಾನದ ಅರ್ಚಕರಾದ ರಾಜು, ಶನೇಶ್ಚರ ದೇವಸ್ಥಾನದ ಅರ್ಚಕರಾದ ಸಣ್ಣಮರಿಯಪ್ಪ, ದೇವಸ್ಥಾನ ಸೇವಾ ಸಮಿತಿಯ ಅಧ್ಯಕ್ಷರಾದ ಗುರು ಪ್ರಸಾದ್, ಕಾರ್ಯದರ್ಶಿ ರಾಮಚಂದ್ರು, ಸೇರಿದಂತೆ ಬೆಟ್ಟೇಗೌಡ, ನಿಂಗೇಗೌಡ, ನಂಜೇಗೌಡ, ಶಿವಕುಮಾರ್ ಹಾಗೂ ಇನ್ನೂ ಹಲವರು ಉಪಸ್ಥಿತರಿದ್ದರು.



## ಕೋಮು ಏಕತಾ ದಿವಸ

**ಮಂಡ್ಯ :** ಜಾತಿ, ಧರ್ಮ, ಜನಾಂಗ ಮತ್ತು ಪ್ರದೇಶದ ಶ್ರೇಷ್ಠತೆಯಿಂದ ಬಳಲುತ್ತಾ ನಮ್ಮೊಳಗೆ ಹಿಂಸೆಯನ್ನು ಬೆಳೆಸಿಕೊಳ್ಳುತ್ತಿರುವುದು ಅಪಾಯಕಾರಿ ಬೆಳವಣಿಗೆ. ಸಮಾಧಾನ ಮತ್ತು ಸಮಾನತೆ ಕಡೆಗೆ ಸಾಗಬೇಕಾದ ಅನಿವಾರ್ಯತೆ ಇದೆ ಎಂದು ಕವಿ, ಉಪನ್ಯಾಸಕ ಕೆ.ಪಿ.ಮೃತ್ಯುಂಜಯ ಆಶಿಸಿದರು. ಸಮೀಪದ ಬೇಲೂರು ಸರ್ಕಾರಿ ಪ್ರೌಢಶಾಲೆಯಲ್ಲಿ ಜೈಭಾರತ್, ಮಂಡ್ಯ, ನೆಹರು ಯುವಕೇಂದ್ರ, ಭಾರತ್ ಸೇವಾದಳ ಸರ್ಕಾರಿ ಪ್ರೌಢಶಾಲೆ ಬೇಲೂರು ವತಿಯಿಂದ ಕೋಮು ಏಕತಾ ದಿವಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ನಮ್ಮಲ್ಲಿ ಜಾತಿ-ಜಾತಿಗಳ ನಡುವೆ ದೇಶ-ದೇಶಗಳ ನಡುವೆ ಹಿಂಸೆಯ ಮತ್ತು ಅಸಹನೆಯ ಮನೋಭಾವ ಹೆಚ್ಚಾಗುತ್ತಿರುವುದರಿಂದ ಯುದ್ಧದಂತಹ ಸನ್ನಿವೇಶಗಳು ಸೃಷ್ಟಿಯಾಗುತ್ತಾ ನಮ್ಮನ್ನು ನಾವೇ ನಾಶಮಾಡಿಕೊಳ್ಳುವ ವಿನಾಶದ ಕಡೆಗೆ ಸಾಗುತ್ತಿದ್ದೇವೆ. ಈ ಹಂತದಲ್ಲಿ ಎಚ್ಚೆತ್ತುಕೊಂಡು ಪರಸ್ಪರ ಪ್ರೀತಿಯನ್ನು ಹಂಚಿಕೊಳ್ಳುತ್ತಾ ಅಹಿಂಸಾ ಮಾರ್ಗದಲ್ಲಿ ಸಾಗಬೇಕಾದ ಅನಿವಾರ್ಯತೆ ಇದೆ ಎಂದು ಪ್ರತಿಪಾದಿಸಿದರು.

ರಾಷ್ಟ್ರದಲ್ಲಿ ಇಂದಿರಾಗಾಂಧಿ, ರಾಜೀವ್ಗಾಂಧಿ ಮತ್ತು ಮಹಾತ್ಮಗಾಂಧಿ ಸೇರಿದಂತೆ ಅನೇಕರ ಹತ್ಯೆಗಳು ರಾಜಕೀಯ ಪ್ರೇರಿತವಾಗಿಯೇ ನಡೆದಿವೆ. ಈ ಹತ್ಯೆಗಳನ್ನು ಆಳವಾಗಿ ಅಧ್ಯಯನ ಮಾಡುತ್ತಾ ಹೋದರೆ ಅಸಂಖ್ಯಾತ ಹಿಂಸೆಯ ಬೇರುಗಳು ನಮಗೆ ಸಿಗುತ್ತವೆ. ಆ ಬೇರುಗಳು ಇಂದು ಗಿಡವಾಗಿ ಮರವಾಗಿ, ಹೆಮ್ಮರವಾಗಿ ಬೆಳೆದು ಆವರಿಸಿಕೊಳ್ಳುತ್ತಿದ್ದು, ದೇಶದಲ್ಲಿ ಜಾತಿ, ಧರ್ಮ ಮತ್ತು ಅಧಿಕಾರದ ಹಿಂಸೆಯನ್ನು ತೊಲಗಿಸಲು ಪ್ರೀತಿ ಮತ್ತು ಸಮಾನತೆಯ ಅಹಿಂಸಾ ಧರ್ಮವನ್ನು ಅನುಸರಿಸಬೇಕು ಎಂದರು. ಜೈ ಕರ್ನಾಟಕ ಪರಿಷತ್ ರಾಜ್ಯಾಧ್ಯಕ್ಷ ಎಸ್ ನಾರಾಯಣ್ ಮಾತನಾಡಿ ಮಹನೀಯರು ಎಲ್ಲ ವರ್ಗದ ಜನರನ್ನು ಒಂದುಗೂಡಿಸಲು ಪ್ರಯತ್ನಿಸಿದರೆ ರಾಜಕೀಯ ವ್ಯಕ್ತಿಗಳು ಮತ ಹಾಕಿಸಿಕೊಳ್ಳಲು ಕೋಮುಗಳನ್ನು ಸೃಷ್ಟಿಸುತ್ತಾರೆ ಎಂದರು. ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕಿ ಶಿವಕುಮಾರಿ ಅಧ್ಯಕ್ಷತೆ ವಹಿಸಿದ್ದರು ಶಾಲಾ ಅಭಿವೃದ್ಧಿ ಅಧ್ಯಕ್ಷ ಕೃಷ್ಣ ನೆಹರು ಯುವ ಕೇಂದ್ರ ಲೆಕ್ಕ ಮತ್ತು ಕಾರ್ಯಕ್ರಮ ಸಹಾಯಕ ಸಿ. ರವಿಚಂದ್ರನ್. ಭಾರತ್ ಸೇವಾದಳದ ಜಿಲ್ಲಾ ಸಂಘಟಕ ಸಿ ಎಸ್ ಗಣೇಶ್ ದೈಹಿಕ ಶಿಕ್ಷಕಿ ಉಷಾರಾಣಿ ಭಾಗವಹಿಸಿದ್ದರು.

## ನಿವೇಶನ ಹಕ್ಕುಪತ್ರಕ್ಕೆ ಆಗ್ರಹಿಸಿ ಅಹೋರಾತ್ರಿ ಧರಣಿ

**ಮಂಡ್ಯ:** ಹುಲಿವಾನ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿವೇಶನ ರಹಿತರಿಗೆ ಮಂಜೂರು ಮಾಡಿರುವ ಭೂಮಿ ಹದ್ದು ಬಸ್ತು ಮಾಡಿ ಹಕ್ಕು ಪತ್ರ ವಿತರಿಸುವಂತೆ ಒತ್ತಾಯಿಸಿ ತಾಲೂಕಿನ ಹುಲಿವಾನ ಗ್ರಾಮ ಪಂಚಾಯಿತಿ ಎದುರು ವಿವಿಧ ಗ್ರಾಮದ ನಿವೇಶನ ರಹಿತರು ಅಹೋರಾತ್ರಿ ಧರಣಿ ಆರಂಭಿಸಿದ್ದಾರೆ.



ದಲಿತ ಹಕ್ಕುಗಳ ಸಮಿತಿ ನೇತೃತ್ವದಲ್ಲಿ ಹುಲಿವಾನ, ಚಾಮಲಾಪುರ, ಎಸ್ .ಐ.ಕೋಡಿಹಳ್ಳಿ, ಬೊಕ್ಕೇಗೌಡನದೊಡ್ಡಿ ಗ್ರಾಮದ ನೂರಾರು ಜನತೆ ಧರಣಿ ನಿರತರಾಗಿ ನಿವೇಶನದ ಹಕ್ಕು ಪತ್ರ ವಿತರಿಸಲು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮೂಲಕ ಸರ್ಕಾರ ಮತ್ತು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಹುಲಿವಾನ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ. ನಂ. 44/ಪಿ14 ರಲ್ಲಿ 8.09 ಎಕರೆ ಭೂಮಿಯನ್ನು ನಿವೇಶನ ರಹಿತರಿಗೆ ನಿವೇಶನ ನೀಡಲು ಎಂಟು ವರ್ಷಗಳ ಹಿಂದೆ ಮಂಜೂರು ಮಾಡಲಾಗಿದೆ. ಪಂಚಾಯಿತಿ ವ್ಯಾಪ್ತಿಯ ಹುಲಿವಾನ, ಚಾಮಲಾಪುರ, ಎಸ್.ಐ.ಕೋಡಿಹಳ್ಳಿ, ಬೊಕ್ಕೇಗೌಡನದೊಡ್ಡಿ ಗ್ರಾಮದ ಸುಮಾರು 500ಕ್ಕೂ ಫಲಾನುಭವಿಗಳು ನಿವೇಶನಕ್ಕೆ ಅರ್ಜಿ ಸಲ್ಲಿಸಿದ್ದು,ಗ್ರಾಮ ಪಂಚಾಯಿತಿ ಸಭೆಯಲ್ಲಿ ಸುಮಾರು 285 ಜನರು ನಿವೇಶನ ಪಡೆಯಲು ಅರ್ಹರಿದ್ದಾರೆ ಎಂದು ತೀರ್ಮಾನಿಸಿ ನಿವೇಶನ ಹಂಚಿಕೆ ಮಾಡಲು ನಡೆದ ವಿಶೇಷ ಗ್ರಾಮ ಸಭೆಯಲ್ಲಿ ಫಲಾನುಭವಿಗಳಾಗಿ ಆಯ್ಕೆ ಮಾಡಲಾಗಿದೆ ಆದರೆ ಇದುವರೆಗೂ ನಿವೇಶನ ಹಂಚಿಕೆ ಮಾಡಿಲ್ಲ ಎಂದು ಪ್ರತಿಭಟನಾಕಾರರು ಹೇಳಿದರು. ನಿವೇಶನ ಹಂಚಿಕೆ ಮಾಡಲು ಮಂಜೂರಾಗಿರುವ 8.09 ಎಕರೆ ಭೂಮಿಯನ್ನು ಇದುವರೆಗೂ ಅಳತೆ ಮಾಡಿ ಹದ್ದುಬಸ್ತು ಮಾಡಿಲ್ಲ, ಇದರಿಂದ ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಲಾಗಿಲ್ಲ, ನಿವೇಶನ ರಹಿತರು ಹಕ್ಕುಪತ್ರಕ್ಕಾಗಿ ಕಾಯುತ್ತಿದ್ದಾರೆ ತುರ್ತಾಗಿ ನಿವೇಶನ ಹಂಚಿಕೆ ಮಾಡಿ ಹಕ್ಕುಪತ್ರ ವಿತರಿಸಿ ಮೂಲಸೌಕರ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಹುಲಿವಾನ ಗ್ರಾಮದ ಜನತಾ ಕಾಲೋನಿಯಲ್ಲಿ ಪರಿಶಿಷ್ಟರು ಹಾಗೂ ದಲಿತೇತರ 200 ಕುಟುಂಬ ವಾಸ ಮಾಡುತ್ತಿದ್ದು ಆದರೆ ಇಲ್ಲಿನ ಜನತೆಗೆ ಯಾರಾದರೂ ಸಾವನ್ನಪ್ಪಿದ್ದರೆ ಅಂತ್ಯಕ್ರಿಯೆ ಮಾಡಲು ಸ್ಮಶಾನ ಇರುವುದಿಲ್ಲ. ಯಾರಾದರೂ ಸಾವನ್ನಪ್ಪಿದ್ದರೆ ವಿಶ್ವೇಶ್ವರಯ್ಯ ನಾಲೆ ಜಾಗದಲ್ಲಿ ಅಂತ್ಯಕ್ರಿಯೆ ಮಾಡಲಾಗುತ್ತಿದೆ, ಸ್ಮಶಾನಕ್ಕೆ ಗುರುತಿಸಲಾಗಿದ್ದ ಸ. ನಂ 93 ರ ಜಾಗವನ್ನು ಪಟ್ಟಭದ್ರರು ಅತಿಕ್ರಮ ಮಾಡಿರುವುದರಿಂದ ವಿವಾದ ನ್ಯಾಯಾಲಯದ ಮೆಟ್ಟಿಲೇರಿದೆ,ಪ್ರಕರಣ ಇತ್ಯರ್ಥಪಡಿಸಿ ಗ್ರಾಮದ ಜನರಿಗೆ ಸ್ಮಶಾನ ಕಲ್ಪಿಸಿಕೊಡಬೇಕೆಂದು ಒತ್ತಾಯಿಸಿದರು.

ದಲಿತ ಹಕ್ಕುಗಳ ಸಮಿತಿಯ ಜಿಲ್ಲಾಧ್ಯಕ್ಷ ಆರ್ ಕೃಷ್ಣ,ತಾಲೂಕು ಅಧ್ಯಕ್ಷ ಅಂಬೂಜಿ, ಕೆ ಎಸ್ ಶಿವಲಿಂಗಯ್ಯ, ಉಮೇಶ್, ವರಲಕ್ಷ್ಮಿ, ಶಿವಮಾದು ನೇತೃತ್ವ ವಹಿಸಿದ್ದರು.

## ದಾಸರ ಕೀರ್ತನೆ ಅಳವಡಿಸಿಕೊಳ್ಳಲು ಕರೆ

**ನಾಗಮಂಗಲ:** ಈ ನಾಡು ಕಂಡ ಅಪ್ರತಿಮ ದಾಸ ಶ್ರೇಷ್ಠ, ಕೀರ್ತನೆಗಳ ಮೂಲಕ ಜೀವನ ಸಾರವನ್ನು ತಿಳಿಸಿದ ವೈರಾಗ್ಯ ಯೋಗಿ, ಶ್ರೇಷ್ಠ ಸಂತ ಕನಕದಾಸರು ಎಂದು ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಬ್ರಹ್ಮಚಾರಿ ಶ್ರೀ ಸಾಯಿ ಕೀರ್ತಿ ನಾಥ ಜೀ ನುಡಿದರು.

ನಾಗಮಂಗಲ ತಾಲೂಕು ಬಿ.ಜಿ ನಗರದ ಆದಿಚುಂಚನಗಿರಿ ವಿಶ್ವವಿದ್ಯಾನಿಲಯದ ಪಾಂಚಜನ್ಯ ಸಂಸ್ಥೆಗಳ ವತಿಯಿಂದ ನಡೆದ ಕರ್ನಾಟಕ ಸಂಗೀತ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




15-16ನೇ ಶತಮಾನದ ಭಕ್ತಿ ಪಂಥದ ಪ್ರಮುಖ ರೂವಾರಿ ಈ ನಾಡು ಕಂಡ ಅಪ್ರತಿಮ ದಾಸ ಶ್ರೇಷ್ಠ, ಕೀರ್ತನೆಗಳ ಮೂಲಕ ಜೀವನ ಸಾರವನ್ನು ತಿಳಿಸಿದ ವೈರಾಗ್ಯ ಯೋಗಿ, ಶ್ರೇಷ್ಠ ಸಂತ ಕನಕದಾಸರು ಎಂದು ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಬ್ರಹ್ಮಚಾರಿ ಶ್ರೀ ಸಾಯಿ ಕೀರ್ತಿ ನಾಥ ಜೀ ನುಡಿದರು.

15-16ನೇ ಶತಮಾನದ ಭಕ್ತಿ ಪಂಥದ ಪ್ರಮುಖ ರೂವಾರಿ ಹರಿದಾಸರಾದ ಶ್ರೀ ಕನಕದಾಸರ ಜಯಂತಿಯನ್ನು ಕಾರ್ತಿಕ ಮಾಸದ 18ನೇ ದಿನದಂದು ನಾಡಿನಾದ್ಯಂತ ಆಚರಿಸಿ ಆರಾಧಿಸುತ್ತೇವೆ. ಇವರು ಭಗವಂತನ ಧ್ಯಾನ, ಚಿಂತನೆ, ಸಂಕೀರ್ತನೆ, ಭಕ್ತಿ ಪಾರಮ್ಯದಿಂದ ಅನನ್ಯ ಜ್ಞಾನ ಸಂಪಾದಿಸಿ ಪಾರಮಾರ್ಥವನ್ನು ಕಂಡವರು. ವಿದ್ಯಾರ್ಥಿಗಳಾದ ನೀವು ಇಂಥ ಪರಮ ಶ್ರೇಷ್ಠರ ಚಿಂತನೆಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಭಕ್ತಿಯ ಹಾದಿಯಲ್ಲಿ ನಡೆದು ಜ್ಞಾನವಂತರಾಗಿ ಎಂದು ಭಕ್ತಿ ಮಾರ್ಗದ ಮಹತ್ವವನ್ನು ತಿಳಿಸಿದರು.

ಕನಕದಾಸರು ಕರ್ನಾಟಕ ಸಂಗೀತ ಕ್ಷೇತ್ರಕ್ಕೆ ನೀಡಿದ ಕೊಡುಗೆ, ಸಮಾಜ ಸುಧಾರಣೆಗಾಗಿ ನೀಡೀದ ಅನೇಕ ನೀತಿಮಾರ್ಗದ ಕೃತಿಗಳು, ಕೀರ್ತನೆಗಳು ನಾಡಿನಾದ್ಯಂತ ಹಾಸುಹೊಕ್ಕಾಗಿವೆ. ಕರ್ನಾಟಕ ಸಂಗೀತದ ಸಂಯೋಜಕರು, ಸುಧಾರಕರು, ಸಂಗೀತಗಾರರೂ ಆದ ಕನಕದಾಸ ವಿರಚಿತ ಕೀರ್ತನೆಗಳ ಗಾಯನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು .

ಹಾರ್ಮೋನಿಯಂ ಮತ್ತು ಗಾಯನದಲ್ಲಿ ವಿದ್ವಾನ್ ಶ್ರೀ ಸಾಯಿ ಕೀರ್ತಿನಾಥ ಜೀ, ಮೃದಂಗ: ವಿದ್ವಾನ್ ಭಾನುಪ್ರಕಾಶ್, ಘಟಂ: ವಿದ್ವಾನ್ ಶ್ರೀಶೈಲಂ ಇವರು ಪಕ್ಕ ವಾದ್ಯಗಳಲ್ಲಿ ಸಹಕರಿಸಿದರು.

ಕಾರ್ಯಕ್ರಮದಲ್ಲಿ ಬಿಜಿಎಸ್ ಮಾಡೆಲ್ ಪಬ್ಲಿಕ್ ಸ್ಕೂಲ್‌ನ ಪ್ರಾಂಶುಪಾಲ ವಿ ಪುಟ್ಟಸ್ವಾಮಿ, ಪಿಯು ಕಾಲೇಜಿನ ಪ್ರಾಂಶುಪಾಲೆ ಟಿ ಎನ್ ಶಿಲ್ಪ, ಉಪ ಪ್ರಾಂಶುಪಾಲೆ ದರ್ಶಿನಿ ಸಿ, ಗೀತಾಮಣಿ, ವಿಶ್ವನಾಥ್ ಕೆ, ಸಂಗೀತ ಶಿಕ್ಷಕ ಚಂದ್ರಪ್ಪ, ರೇಣುಕ ಕಲಾ, ಶೀಲಾ ಎಂ ಎನ್, ದಿವ್ಯ, ರಮ್ಯಾ ಹಾಗೂ ಇತರರಿದ್ದರು.

ಹರಿದಾಸರಾದ ಶ್ರೀ ಕನಕದಾಸರ ಜಯಂತಿಯನ್ನು ಕಾರ್ತಿಕ ಮಾಸದ 18ನೇ ದಿನದಂದು ನಾಡಿನಾದ್ಯಂತ ಆಚರಿಸಿ ಆರಾಧಿಸುತ್ತೇವೆ. ಇವರು ಭಗವಂತನ ಧ್ಯಾನ, ಚಿಂತನೆ, ಸಂಕೀರ್ತನೆ, ಭಕ್ತಿ ಪಾರಮ್ಯದಿಂದ ಅನನ್ಯ ಜ್ಞಾನ ಸಂಪಾದಿಸಿ ಪಾರಮಾರ್ಥವನ್ನು ಕಂಡವರು. ವಿದ್ಯಾರ್ಥಿಗಳಾದ ನೀವು ಇಂಥ ಪರಮ ಶ್ರೇಷ್ಠರ ಚಿಂತನೆಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಭಕ್ತಿಯ ಹಾದಿಯಲ್ಲಿ ನಡೆದು ಜ್ಞಾನವಂತರಾಗಿ ಎಂದು ಭಕ್ತಿ ಮಾರ್ಗದ ಮಹತ್ವವನ್ನು ತಿಳಿಸಿದರು.

ಕನಕದಾಸರು ಕರ್ನಾಟಕ ಸಂಗೀತ ಕ್ಷೇತ್ರಕ್ಕೆ ನೀಡಿದ ಕೊಡುಗೆ, ಸಮಾಜ ಸುಧಾರಣೆಗಾಗಿ ನೀಡೀದ ಅನೇಕ ನೀತಿಮಾರ್ಗದ ಕೃತಿಗಳು, ಕೀರ್ತನೆಗಳು ನಾಡಿನಾದ್ಯಂತ ಹಾಸುಹೊಕ್ಕಾಗಿವೆ. ಕರ್ನಾಟಕ ಸಂಗೀತದ ಸಂಯೋಜಕರು, ಸುಧಾರಕರು, ಸಂಗೀತಗಾರರೂ ಆದ ಕನಕದಾಸ ವಿರಚಿತ ಕೀರ್ತನೆಗಳ ಗಾಯನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು .

ಹಾರ್ಮೋನಿಯಂ ಮತ್ತು ಗಾಯನದಲ್ಲಿ ವಿದ್ವಾನ್ ಶ್ರೀ ಸಾಯಿ ಕೀರ್ತಿನಾಥ ಜೀ, ಮೃದಂಗ: ವಿದ್ವಾನ್ ಭಾನುಪ್ರಕಾಶ್, ಘಟಂ: ವಿದ್ವಾನ್ ಶ್ರೀಶೈಲಂ ಇವರು ಪಕ್ಕ ವಾದ್ಯಗಳಲ್ಲಿ ಸಹಕರಿಸಿದರು.

ಕಾರ್ಯಕ್ರಮದಲ್ಲಿ ಬಿಜಿಎಸ್ ಮಾಡೆಲ್ ಪಬ್ಲಿಕ್ ಸ್ಕೂಲ್ ನ ಪ್ರಾಂಶುಪಾಲ ವಿ ಪುಟ್ಟಸ್ವಾಮಿ, ಪಿಯು ಕಾಲೇಜಿನ ಪ್ರಾಂಶುಪಾಲೆ ಟಿ ಎನ್ ಶಿಲ್ಪ, ಉಪ ಪ್ರಾಂಶುಪಾಲೆ ದರ್ಶಿನಿ ಸಿ, ಗೀತಾಮಣಿ, ವಿಶ್ವನಾಥ್ ಕೆ, ಸಂಗೀತ ಶಿಕ್ಷಕ ಚಂದ್ರಪ್ಪ, ರೇಣುಕ ಕಲಾ, ಶೀಲಾ ಎಂ ಎನ್, ದಿವ್ಯ, ರಮ್ಯಾ ಹಾಗೂ ಇತರರಿದ್ದರು.

## ಕನಕ ಸಾಹಿತ್ಯದಲ್ಲಿ ನೈತಿಕ ಮೌಲ್ಯ

**ಹುಳಿಯಾರು:** ಕನಕದಾಸರ ಸಾಹಿತ್ಯದಲ್ಲಿ ನೈತಿಕ ಮೌಲ್ಯಗಳು ಬೀಜ ಮಂತ್ರದಂತೆ ಬಿತ್ತರಗೊಂಡಿವೆ ಎಂದು ಹುಳಿಯಾರಿನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಸಿ.ಜಿ.ಶೈಲಜಾ ಹೇಳಿದರು.ಅವರು ಕಾಲೇಜಿನಲ್ಲಿ ಆಯೋಜಿಸಿದ್ದ ಕನಕದಾಸರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಇಂದಿನ ಆಧುನಿಕ ಸಮಾಜಕ್ಕೆ ಕನಕದಾಸರ ತತ್ವ ಸಂದೇಶಗಳ ಅವಶ್ಯಕತೆ ಇದೆ. ಸಮಾಜದ ಜನರು ಸಂಕುಚಿತ ಮನೋಭಾವನೆ ತೊರೆದು ವಿಶಾಲವಾಗಿ ಯೋಚಿಸುವುದರ ಮೂಲಕ ಕನಕದಾಸರ ಚಿಂತನೆಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರಲ್ಲದೆ ಭಕ್ತ ಕನಕದಾಸರು ತಮ್ಮಲ್ಲಿನ ಭಕ್ತಿಯನ್ನು ಸಾಮಾಜೀಕರಣಗೊಳಿಸಿರುವ ಒಬ್ಬ ಮಹಾನ್ ಕವಿಯಾಗಿದ್ದಾರೆ ಎಂದು ಹೇಳಿದರು. ಉಪನ್ಯಾಸಕರುಗಳಾದ ಎಂ.ಕೆ. ಮಂಗಳಗೌರಮ್ಮ, ಮಧುಶ್ರೀ, ವಿ.ಲೋಕೇಶ್, ಎಚ್.ಎಸ್.ನಾರಾಯಣ ಹಾಗೂ ವಿಜಯಕುಮಾರಿ ಸೇರಿದಂತೆ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.



## ಸಮಾಜದ ಡೊಂಕು ತಿದಿದ ದಾಸಶ್ರೇಷ್ಟ ಕನಕದಾಸರು

**ಹುಳಿಯಾರು:** ಕನಕದಾಸರು ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಮೂಲಕ ಸಮಾಜಮುಖಿ ಕೆಲಸಗಳನ್ನು ಮಾಡಿದ್ದಾರೆ ಎಂದು ಮುಖ್ಯಶಿಕ್ಷಕ ಎಚ್.ಆರ್.ಸೋಮಶೇಖರ್ ಹೇಳಿದರು. ಹುಳಿಯಾರು ಹೋಬಳಿ ಮಾರುಹೊಳೆಯ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಏರ್ಪಡಿಸಿದ್ದ ಕನಕದಾಸರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ ಕನಕದಾಸರು ಸಮಾಜದಲ್ಲಿ ಬೇರೂರಿದ್ದ ಅನಿಷ್ಟ ಪದ್ಧತಿಗಳನ್ನು ನಿರ್ಮೂಲನೆ ಮಾಡಲು ಶ್ರಮಿಸಿದರು. ಅವರಂತೆಯೇ ನಾವೆಲ್ಲರೂ ಸಮಾಜಮುಖಿ ಕೆಲಸ ಮಾಡಲು ಮುಂದಾಗಬೇಕು ಎಂದರು.

ಕನಕದಾಸರು ಕೇವಲ ದಾಸರಲ್ಲದೆ, ಕೀರ್ತನಕಾರರಾಗಿ ಅವರು ಸಾಂಸ್ಕೃತಿಕ ಜಗತ್ತಿಗೆ ನೀಡಿರುವ ಕೊಡುಗೆ ಅನನ್ಯವಾದುದು. ಅವರು ಸಮಾಜದ ಅಂಕುಡೊಂಕುಗಳನ್ನು ತಿದ್ದಿ ಮಾನವೀಯತೆಯನ್ನು ಮೆರೆದ ಕ್ರಾಂತಿಕಾರಿ ಕವಿ. ತಮ್ಮ ಕೀರ್ತನೆಗಳ ಮೂಲಕ ಸಾಮಾಜಿಕ ಕಳಕಳಿಯನ್ನು ಮೆರೆದವರು. ಅವರು ಪ್ರತಿಪಾದಿಸಿದ ಸತ್ಯಗಳು ಸಾರ್ವಕಾಲಿಕವಾಗಿವೆ ಎಂದರು. ಸಹಶಿಕ್ಷಕಿ ಮಮತ, ಅಂಗನವಾಡಿ ಕಾರ್ಯಕರ್ತೆ ರುದ್ರಮ್ಮ ಸೇರಿದಂತೆ ಶಾಲೆಯ ಮಕ್ಕಳು, ಅಂಗನವಾಡಿ ಮಕ್ಕಳು ಉಪಸ್ಥಿತರಿದ್ದರು.



## ವಿಧವೆಯ ಮೇಲೆ ಅತ್ಯಾಚಾರ : ಪ್ರಕರಣ ದಾಖಲು

**ತಿಪಟೂರು :** ಗಂಡನ ಅಪಘಾತದ ಪರಿಹಾರ ಹಣವನ್ನು ಕೊಡಿಸುವುದಾಗಿ ನಂಬಿಸಿ ವಿಧವೆಯ ಮೇಲೆ ಗಂಡನ ಸ್ನೇಹಿತನಿಂದ ಅತ್ಯಾಚಾರ ಮಾಡಿರುವ ಘಟನೆ ನಡೆದಿದೆ. ಒಂದು ವರ್ಷದಿಂದ ಅಪಘಾತದಲ್ಲಿ ಗಂಡನನ್ನು ಕಳೆದುಕೊಂಡ ವಿಧವೆಗೆ ಗಂಡನ ಸ್ನೇಹಿತ ಅಪಘಾತದ ವಿಮಾ ಮೊತ್ತವನ್ನು ಕೊಡಿಸುವುದಾಗಿ ನಂಬಿಸಿದ್ದಾನೆ. ಕೆಲ ದಿನಗಳ ನಂತರ ನಗರದ ಪ್ರತಿಷ್ಠಿತ ಲಾಡ್ಜ್‌ಗೆ ಕರೆಸಿಕೊಂಡು ಆಕೆಯ ಮೇಲೆ ಅತ್ಯಾಚಾರ ಮಾಡಿ, ಹಣ ಹಾಗೂ ಒಡವೆಗಳನ್ನು ತೆಗೆದುಕೊಂಡು ಹೋಗಿರುತ್ತಾನೆ ಎಂದು ಪೀರ್ಯಾದಿದಾರರು ದೂರಿನಲ್ಲಿ ತಿಳಿಸಿದ್ದಾರೆ. ತಿಪಟೂರು ನಗರ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಿರಿಧಾನ್ಯ ಪಾಕ ಸ್ಪರ್ಧೆ

**ಕೋಲಾರ:** ಕೃಷಿ ಇಲಾಖೆ ವತಿಯಿಂದ ಅಂತರರಾಷ್ಟ್ರೀಯ ಸಿರಿಧಾನ್ಯ ಮೇಳ ಹಾಗೂ ಸಾವಯವ ವಾಣಿಜ್ಯ ಮೇಳವು ಜನವರಿ-23 ರಿಂದ 25 ರವರೆಗೆ ಬೆಂಗೂರು, ತ್ರಿಪುರವಾಸಿನಿ ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದ್ದು, ಈ ಕಾರ್ಯಕ್ರಮದ ಅಂಗವಾಗಿ ಜಿಲ್ಲೆಯಲ್ಲಿ ಪೂರ್ವಭಾವಿಯಾಗಿ ನವೆಂಬರ್ 22 ರಂದು ಬೆಳಿಗ್ಗೆ 11.00 ಗಂಟೆಗೆ ಕೃಷಿ ವಿಜ್ಞಾನ ಕೇಂದ್ರ, ಸಭಾಂಗಣದಲ್ಲಿ ಮರೆತು ಹೋದ ಖಾದ್ಯಗಳ ಹಾಗೂ ಸಿರಿಧಾನ್ಯ ಪಾಕಾ ಸ್ಪರ್ಧೆ ಕಾರ್ಯಕ್ರಮದಲ್ಲಿ ಮಾನ್ಯ ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲೆಯ ಸಾರ್ವಜನಿಕರಿಗೆ ಸ್ಪರ್ಧೆಯನ್ನು ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮದಲ್ಲಿ ಎಲ್ಲಾ ಮಾಧ್ಯಮ ಮಿತ್ರರು ಭಾಗವಹಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ಮನವಿ

# ಸಾಮರಸ್ಯಕ್ಕೆ ದಕ್ಕೆ ಉಂಟು ಮಾಡುವ ವಿಚಾರಗಳಿಗೆ ಕಿವಿಕೊಡದಿರಿ

**ಚಿಕ್ಕಬಳ್ಳಾಪುರ:** ಕಂದವಾರ ಗ್ರಾಮದ ಸರ್ವೆ ನಂಬರ್ ಒಂದರಲ್ಲಿನ 17.12 ಗುಂಟೆ ಜಮೀನು ಸರ್ಕಾರಿ ಶಾಲೆಗೆ ಸೇರಿದ್ದಾಗಿದ್ದು ವಕ್ಫ ಮಂಡಳಿಗೆ ಸೇರಿರುವುದಿಲ್ಲ, ಪಹಣಿಯಲ್ಲಿದ್ದ ತಾಂತ್ರಿಕ ದೋಷವನ್ನು ತ್ವರಿತವಾಗಿ ಸರಿಪಡಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರೂ ಹಾಗೂ ಉನ್ನತ ಶಿಕ್ಷಣ ಸಚಿವರು ಆದ ಡಾ.ಎಂಸಿ ಸುಧಾಕರ್ ಅವರು ಸ್ಪಷ್ಟನೆ ನೀಡಿದರು.

ನಗರದ ಜಿಲ್ಲಾ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡುತ್ತಾ,ಕಂದವಾರ ಗ್ರಾಮದ ಸರ್ವೆ ನಂಬರ್ ಒಂದರಲ್ಲಿನ 19 ಗುಂಟೆ ಜಮೀನಿನ ಪೈಕಿ 17.12 ಗುಂಟೆ ಜಮೀನು ಸರ್ಕಾರಿ ಶಾಲೆಗೂ ಹಾಗೂ 1.04 ಗುಂಟೆ ಜಮೀನು ವಕ್ಫ ಮಂಡಳಿಯ ದರ್ಗಾಕ್ಕೂ ಸೇರಿದ್ದಾಗಿರುತ್ತದೆ. ಆದರೆ ತಾಂತ್ರಿಕ ದೋಷದಿಂದ ಪಹಣಿಯಲ್ಲಿ ತಪ್ಪು ನಮೂದಾಗಿತ್ತು. ಈ ಬಗ್ಗೆ ನಮ್ಮ ಗಮನಕ್ಕೆ ಬಂದ ತಕ್ಷಣವೇ ಸರಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿತ್ತು, ಅದರಂತೆ ಅಧಿಕಾರಿಗಳು ತ್ವರಿತ ಕ್ರಮವಹಿಸಿ ಪಹಣಿಯಲ್ಲಿದ್ದ ದೋಷವನ್ನು ಸರಿಪಡಿಸಿದ್ದಾರೆ ಎಂದು ತಿಳಿಸಿದರು. ಚಿಂತಾಮಣಿ ತಾಲೂಕಿನ ಅಂಬಾಜಿದುರ್ಗ ಹೋಬಳಿಯ ತಿಮ್ಮಸಂದ್ರ, ಗ್ರಾಮದ ಸರ್ವೆ ನಂಬರ್ 13/1, 13/2 ಮತ್ತು 13/3 ರ ಸರ್ವೆ ನಂಬರ್ ಗಳಿಗೆ ಸಂಬಂಧಿಸಿದ ಜಮೀನು ವಿವಾದವು 1974ರಿಂದ ಉಪವಿಭಾಗಾಧಿಕಾರಿಗಳ ನ್ಯಾಯಾಲಯ, ಜಿಲ್ಲಾಧಿಕಾರಿಗಳ ನ್ಯಾಯಾಲಯ ಹಾಗೂ



ವಕ್ಫ ಮಂಡಳಿಯ ನ್ಯಾಯಾಲಯಗಳಲ್ಲಿ ಪ್ರಕರಣ ದಾಖಲಾಗಿ ವಾದ ಪ್ರತಿವಾದ ಸುದೀರ್ಘವಾಗಿ ನಡೆದರೂ ಈ ವರೆಗೂ ಅಂತ್ಯ ಕಂಡಿರುವುದಿಲ್ಲ,ಪ್ರಸ್ತುತ ಮಾನ್ಯ ಹೈಕೋರ್ಟ್ ನಲ್ಲಿ ಪ್ರಕರಣ ನಡೆಯುತ್ತಿದೆ. ಘನ ನ್ಯಾಯಾಲಯವು ನೀಡುವ ತೀರ್ಪಿಗೆ ಒಳಪಟ್ಟು ಜಿಲ್ಲಾಡಳಿತ ಸೂಕ್ತ ಕ್ರಮ ವಹಿಸುತ್ತದೆ ಇಂತಹ ವಿಚಾರಗಳಲ್ಲಿ ಸಮುದಾಯಗಳ ನಡುವೆ ಸಂಘರ್ಷ ತಂದಿಡಲು ಕೆಲವರು ಪ್ರಯತ್ನ ಮಾಡುತ್ತಿರುವುದು ಸರಿಯಲ್ಲ. ಸಂಘರ್ಷದ ಬದಲಾಗಿ ಸಾಮರಸ್ಯವನ್ನು ನಾವೆಲ್ಲರೂ ಸೇರಿ ನಿರ್ಮಿಸಬೇಕು. ಸಾರ್ವಜನಿಕರು ನೈಜ ವಿಷಯಗಳನ್ನು ಅರಿತು ಜಿಲ್ಲಾಡಳಿತದ ಕ್ರಮಗಳಿಗೆ ಕೈಜೋಡಿಸಿ ಶಾಂತಿ ಸುವ್ಯವಸ್ಥೆ ಕಾಪಾಡಲು ಪ್ರತಿಯೊಬ್ಬರು ಸಹಕರಿಸಬೇಕು ಎಂದು ಸಚಿವರು ಮನವಿ ಮಾಡಿದರು.

## ಹೆಚ್ಚಿನ ಆತಂಕ ಬೇಡ

**ಚಿಕ್ಕಬಳ್ಳಾಪುರ** ಜಿಲ್ಲೆಯ 40 ಸಾವಿರ ಎಕರೆಗೂ ಹೆಚ್ಚಿನ ಜಮೀನನ್ನು ಪರಿಭಾವಿತ ಅರಣ್ಯದ ವ್ಯಾಪ್ತಿಗೆ ಸೇರ್ಪಡಿಸಲಾಗಿದೆ ಈ ಜಮೀನಿನ ಪೈಕಿ ಕೆಲವು ಜಮೀನುಗಳು ರೈತರಿಗೆ ನಿಯಮಾವಳಿ ರೀತ್ಯಾ ಮಂಜೂರಾಗಿ ಪಹಣಿಗಳಲ್ಲಿ ರೈತರ ಹೆಸರು ಮತ್ತು ಪರಿಭಾವಿತ ಅರಣ್ಯ ವಲಯ ಎಂದು ಬರುತ್ತಿರುವ ಸಮಸ್ಯೆಯು ಜಿಲ್ಲಾಡಳಿತದ ಗಮನಕ್ಕಿದ್ದು ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರದ ಮಟ್ಟದಲ್ಲಿ ಹಲವು ಯುಕ್ತ ಕ್ರಮಗಳನ್ನು ಕಳೆದ ಒಂದು ವರ್ಷದಿಂದಲೂ ತೆಗೆದುಕೊಳ್ಳಲಾಗುತ್ತಿದೆ ಸಮಸ್ಯೆಯು ಪ್ರಸ್ತುತ ಮಾನ್ಯ ಸುಪ್ರೀಂ ಕೋರ್ಟ್ ನ್ಯಾಯಾಲಯದಲ್ಲಿಯೇ ಬಗೆಹರಿಯ ಬೇಕಾಗಿರುವುದರಿಂದ ಘನ ನ್ಯಾಯಾಲಯಕ್ಕೆ ಸಲ್ಲಿಸಬೇಕಾದ ದಾಖಲೆಗಳು ಮತ್ತು ಮಾಹಿತಿಗಳನ್ನು ಕ್ರೂಢೀಕರಿಸಿ ಸಲ್ಲಿಸುವ ಸಂಬಂಧ ಸಕಲ ಸಿದ್ಧತೆಗಳನ್ನು ಹಾಗೂ ಯುಕ್ತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ರೈತರು ಯಾವುದೇ ರೀತಿಯ ಸಮಸ್ಯೆಗಳಿಗೆ ಸಿಲುಕದಂತೆ ಕ್ರಮವಹಿಸಲು ಪ್ರಾಮಾಣಿಕ ಪ್ರಯತ್ನವನ್ನು ಸರ್ಕಾರ ಮಾಡುತ್ತದೆ.ಯಾವುದೇ ರೈತರು ಹೆಚ್ಚಿನ ಆತಂಕಕ್ಕೆ ಒಳಗಾಗಬಾರದು ಎಂದು ಸಚಿವರು ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್, ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೇಶವರೆಡ್ಡಿ ಹಾಜರಿದ್ದರು.

### ಚಿಕ್ಕಬಳ್ಳಾಪುರ ಜಿಲ್ಲಾಡಳಿತದ ವತಿಯಿಂದ

# ದಾಸ ಶ್ರೇಷ್ಠ ಕನಕದಾಸರ ಜಯಂತಿ

**ಚಿಕ್ಕಬಳ್ಳಾಪುರ:** ಸಮಾಜದಲ್ಲಿ ಜಾತಿ ವ್ಯವಸ್ಥೆಯ ವಿರುದ್ಧವಾಗಿ 500 ವರ್ಷಗಳ ಹಿಂದೆಯೇ ಕೀರ್ತನೆಗಳ ರಚನೆಯ ಮೂಲಕ ಜಾಗೃತಿ ಮೂಡಿಸಿದವರು ದಾಸ ಶ್ರೇಷ್ಠ ಶ್ರೀ ಕನಕದಾಸರು ಎಂದು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ ಸುಧಾಕರ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಗೂ ಕುರುಬರ ಸಂಘದ ವತಿಯಿಂದ ಸೋಮವಾರ ನಗರದ ಶ್ರೀ ಗುರುರಾಜ ಕಲ್ಯಾಣ ಮಂಟಪ ಮುಂಭಾಗದಲ್ಲಿ ನಡೆದ ದಾಸಶ್ರೇಷ್ಠ ಶ್ರೀ ಕನಕದಾಸರ ಜಯಂತಿಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನಕದಾಸರು ಶ್ರೀಕೃಷ್ಣನ ಪರಮ ಭಕ್ತರಾದ್ದರಿಂದ ಅವರಿಗೂ ಉಡುಪಿಯ ಶ್ರೀಕೃಷ್ಣ ಮಠಕ್ಕೂ ಅವಿನಾಭಾವ ಸಂಬಂಧವಿದೆ. ಕನಕದಾಸರು ಮೂಲತಃ ಕುರುಬ ಸಮುದಾಯಕ್ಕೆ ಸೇರಿದ ವ್ಯಕ್ತಿಯಾಗಿದ್ದರು. ಉಡುಪಿ ಶ್ರೀ ಕೃಷ್ಣನ ದೇವಾಸ್ಥಾನದಲ್ಲಿ ವಿಶೇಷವಾಗಿ ಕನಕ ಕಿಂಡಿಯನ್ನು ಈಗಲೂ ಕಾಣಬಹುದು. ದಾಸಶ್ರೇಷ್ಠ ಶ್ರೀ ಕನಕದಾಸ ಅವರ ಕೀರ್ತನೆಗಳು, ಆಚಾರ, ವಿಚಾರಗಳನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಜಾತಿ ಪದ್ಧತಿಯ ವಿರುದ್ಧವಾಗಿ ಕೀರ್ತನೆಗಳ ಮೂಲಕ ತಮ್ಮ ನಿಲುವು ಪ್ರದಿಪಾದಿಸಿ ಪರಿವರ್ತನೆ ಹಾಗೂ ಸುಧಾರಣೆಗೆ ಶ್ರಮಿಸಿದವರು ಕನಕದಾಸರು ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಮಹಾನ್ ನಾಯಕರ ಜಯಂತಿಗಳನ್ನು ಚಿಕ್ಕಬಳ್ಳಾಪುರ ನಗರದಲ್ಲಿನ ಕನ್ನಡ ಭವನ ಕಟ್ಟಡದ ಭವ್ಯವಾದ ಸಭಾಂಗಣದಲ್ಲಿ ನಡೆಸಲಾಗುವುದು. ಜಿಲ್ಲಾ ಕೇಂದ್ರದಲ್ಲಿ ಕುರುಬ ಸಮುದಾಯ ಭವನ ನಿರ್ಮಾಣದ ಭರವಸೆ ನೀಡಿ



ಕನಕದಾಸರ ಜಯಂತಿಯ ಶುಭಾಶಯಗಳನ್ನು ತಿಳಿಸಿದರು.

ಶಾಸಕ ಪಿ. ಇ .ಪ್ರದೀಪ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಸಮುದಾಯದವರು ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು. ಸಮಾಜದ ಹೆಸರು ಉನ್ನತವಾಗಿ ಬೆಳೆಯ ಬೇಕಾದರೆ ಸಮುದಾಯದ ಮಕ್ಕಳು ಸಾಧಕರಾಗಬೇಕು. ಕನಕನನ್ನು ಕೆಣಕ ಬೇಡ, ಕೆಣಕಿ ತಿಣಕ ಬೇಡ ಎಂದು ದಾಸಶ್ರೇಷ್ಠ ಶ್ರೀ ಕನಕದಾಸರ ಕೀರ್ತನೆಯನ್ನು ಹಾಡಿ ಹೊಗಳಿದರು.

ಶಿಕ್ಷಕ ಬಿ. ಮಂಜುನಾಥ ಅವರು ದಾಸಶ್ರೇಷ್ಠ ಶ್ರೀ ಕನಕದಾಸರ ಜಯಂತಿಯ ಕುರಿತು ವಿಶೇಷ ಉಪನ್ಯಾಸವನ್ನು ನೀಡಿದರು.

ಕಾರ್ಯಕ್ರಮದಲ್ಲಿ ಸಮುದಾಯದ ಸಾಧಕರಿಗೆ ಸನ್ಮಾನಿಸಲಾಯಿತು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಉನ್ನತ ಶಿಕ್ಷಣ ಸಚಿವರು ನಗರದ ಎಂ.ಜಿ ರಸ್ತೆಯಲ್ಲಿರುವ ಶ್ರೀ ಮರಳಸಿದ್ದೇಶ್ವರ ದೇವಸ್ಥಾನದ ಮುಂಭಾಗದಲ್ಲಿ ದಾಸಶ್ರೇಷ್ಠ ಶ್ರೀ ಕನಕದಾಸರ ಪಲ್ಲಕ್ಕಿ ಮತ್ತು ಜಾನಪದ ಕಲಾತಂಡದ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆಯು ಎಂ.ಜಿ ರಸ್ತೆ ಮತ್ತು ಬಿ.ಬಿ ರಸ್ತೆ ಮುಖಾಂತರ ವೇದಿಕೆ ಕಾರ್ಯಕ್ರಮದ ಶ್ರೀ ಗುರುರಾಜ ಕಲ್ಯಾಣ ಮಂಟಪದವರೆಗೂ ಅದ್ದೂರಿಯಾಗಿ ಸಾಗಿತು ಮೆರವಣಿಗೆಯು ಜನರ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ. ಟಿ ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಎನ್.ಭಾಸ್ಕರ್, ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಕೇಶವರೆಡ್ಡಿ,ತಹಸೀಲ್ದಾರ್ ಅನಿಲ್ ಕುಮಾರ್, ಕನ್ನಡ ಮತ್ತು ಸಂಸ್ಕತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಿ.ಎಂ ರವಿ ಕುಮಾರ್, ಚಿಕ್ಕಬಳ್ಳಾಪುರ ಜಿಲ್ಲಾ ಕುರುಬರ ಸಂಘದ ಜಿಲ್ಲಾಧ್ಯಕ್ಷರಾದ ಎ.ನಾಗರಾಜ್, ತಾಲ್ಲೂಕು ಅಧ್ಯಕ್ಷರಾದ ಎಂ.ಆನಂದ್ ಸಮುದಾಯದ ಪ್ರಮುಖ ಮುಖಂಡರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಲಾ ಪ್ರತಿಭೆ ಪ್ರದರ್ಶನ

**ಕೋಲಾರ:** ತಾಲೂಕಿನ ತೊಟ್ಲಿ ಚಿಟ್ನಹಳ್ಳಿ ಗೇಟ್ ಬಳಿಯಿರುವ ಶ್ರೀ ಅವದೂತ ದತ್ತಾತ್ರೇಯ ಶಿರಿಡಿ ಸಾಯಿಬಾಬಾ ಆಶ್ರಮದಲ್ಲಿ 3ನೇ ಕಾರ್ತೀಕ ಸೋಮವಾರದ ಪ್ರಯುಕ್ತ ಕಲಾವಿದರಿಗಾಗಿ ಕಲಾ ಪ್ರತಿಬೋತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಕಲಾ ಪ್ರತಿಭೋತ್ಸವದಲ್ಲಿ 52 ಕಲಾ ತಂಡಗಳು ಭಾಗವಹಿಸಿ ತಮ್ಮ ಕಲಾ ಪ್ರತಿಭೆಯನ್ನು ಪ್ರದರ್ಶಿಸಿದರು. ಆಶ್ರಮದ ಧರ್ಮದರ್ಶಿ ಎನ್.ವೆಂಕಟೇಶ್ ಅಧ್ಯಕ್ಷತೆ ವಹಿಸಿದ್ದರು. ಚಿಕ್ಕಬಳ್ಳಾಪುರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ವೆಂಕಟಲಕ್ಷ್ಮಮ್ಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ, ಹಳ್ಳಿಗಾಡಿನ ಕಲಾವಿದರನ್ನು ಇಂತಹ ವೇದಿಕೆಗೆ ಕರೆಸಿ ಅವರ ಪ್ರತಿಭೆಯನ್ನು ಗುರುತಿಸುವ ಕಾರ್ಯ ಬಹಳ ಶ್ಲಾಘನೀಯ. ಹಳ್ಳಿಗಳಲ್ಲಿ ಹಿಂದೆ ಭಾವಡಿಗಳಲ್ಲಿ ಗ್ರಾಮದವರೆಲ್ಲ ಒಂದೆಡೆ ಸೇರಿ ಭಜನೆ, ಹರಿಕಥೆ, ಕೇಳಿಕೆ, ನಾಟಕ, ಜನಪದ, ಸೋಬಾನೆಪದ ಇತ್ಯಾದಿಗಳನ್ನು ಹಾಡುತ್ತಾ ನೆಮ್ಮದಿಯ ಜೀವನ ನಡೆಸುತ್ತಿದ್ದರು. ಇಂದಿನ ಒತ್ತಡದ ಜೀವನ ಶೈಲಿಯು ಮಾನವನ ಆಯಸ್ಸು ಕ್ಷೀಣಿಸುವಂತೆ ಆಗಿದೆ. ಆದ್ದರಿಂದ ವಿದ್ಯಾವಂತರಾದ ನಾವು ಎಂತಹ ಒತ್ತಡವಿದ್ದರೂ ಸಹ ನಮ್ಮ ಆರೋಗ್ಯಕ್ಕಾಗಿ ಸ್ವಲ್ಪ ಸಮಯ ಮೀಸಲಿಟ್ಟು, ಇಂತಹ ಭಜನೆ, ಗೀಗೀಪದ, ಹಾಡುಗಾರಿಕೆಯಲ್ಲಿ ಭಾಗವಹಿಸಿ ಒತ್ತಡದಿಂದ ಮುಕ್ತರಾಗಿ ಎಂದರು.

ಬೆಳಗ್ಗೆ 8-00 ಗಂಟೆಗೆ ಆರಂಭವಾದ ಕಲಾ ಪ್ರತಿಭೋತ್ಸವ ರಾತ್ರಿ 8-00 ಗಂಟೆಯವರೆಗೆ ನಡೆಯಿತು. ಸುಮಾರು 300 ಕ್ಕೂ ಹೆಚ್ಚು ಕಲಾವಿದರು ಭಾಗವಹಿಸಿ ತಮ್ಮ ಪ್ರತಿಭೆಗಳನ್ನು ಪ್ರದರ್ಶಿಸಿದರು.

ಕೋಲಾರ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಮಂಗಳ ಅವರು, ಸಂಜೆ 3-00 ಗಂಟೆಗೆ ವಿಶೇಷ ಆಹ್ವಾನಿತರಾಗಿ ಆಗಮಿಸಿ ಕಾರ್ಯಕ್ರಮದಲ್ಲಿಭಾಗವಹಿಸಿ ವಿಜೇತರಾದ ತಂಡಗಳಿಗೆ ಬಹುಮಾನ ವಿತರಿಸಿದರು. ಚಿಕ್ಕಬಳ್ಳಾಪುರದ ಚನ್ನಕೇಶವ ಕಲಾ ತಂಡ ಪ್ರಥಮ, ಸುಗಟೂರಿನ ಶ್ರೀ ಭುವನೇಶ್ವರಿ ಕಲಾ ತಂಡ ದ್ವಿತೀಯ ಬಹುಮಾನ, ಕಾಡು ಗೌಡಹಳ್ಳಿಯ ಯಲ್ಲಮ್ಮದೇವಿ ಕಲಾ ತಂಡ ತೃತೀಯ, ಕಲ್ಲೂರಿನ ಶ್ರೀ ವೇಣುಗೋಪಾಲಸ್ವಾಮಿ ಕಲಾ ತಂಡ ಸಮಾಧಾನಕರ ಬಹುಮಾನಗಳನ್ನು ಪಡೆದುಕೊಂಡವು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲಾ ಕಲಾವಿದರಿಗೆ ಅಭಿನಂದನಾ ಪತ್ರಗಳನ್ನು ಆಶ್ರಮದ ವತಿಯಿಂದ ನೀಡಲಾಯಿತು. ನೆರೆದ ಎಲ್ಲಾ ಕಲಾವಿದರಿಗೆ ಆಶ್ರಮದ ವತಿಯಿಂದ ಉಪಹಾರ ಮತ್ತು ಊಟದ ವ್ಯವಸ್ಥೆಯನ್ನು ಮಾಡಲಾಗಿತ್ತು. ಹಾರ್ಮೋನಿಯಂ ಮಡಬಹಳ್ಳಿ ಕೆ.ಎಂ.ನರಸಿಂಹಮೂರ್ತಿ, ತಬಲ ಮುಳ್ಳಹಳ್ಳಿ ಎಂ.ಸಿ.ವೆಂಕಟೇಶಪ್ಪ ನುಡಿಸಿದರು. ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಎನ್.ವೆಂಕಟೇಶಪ್ಪ, ಮುಜರಾಯಿ ತಹಸೀಲ್ದಾರ್ ಸುಜಾತಮ್ಮ, ತೊಟ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷ ಮಂಜುನಾಥ್, ಚಿಟ್ನಹಳ್ಳಿ ಸಿ.ಎಲ್. ಗೋಪಾಲಕೃಷ್ಣಪ್ಪ, ಕಲ್ಲೂರು ಶಿಕ್ಷಕ ಪಿ.ನಾಗರಾಜು, ವೆಲಗಲಬುರ್ರೆ, ಶಿಕ್ಷಕ ವಿ.ಎಂ.ರಾಜಣ್ಣ, ಉರಟಿ ಅಗ್ರಹಾರ ಸಂಪತ್ ಕುಮಾರ್, ಸುಗಟೂರು ಬಿ.ಶ್ರೀನಿವಾಸಪ್ಪ, ಚಿಟ್ನಹಳ್ಳಿ ವೆಂಕಟೇಶಪ್ಪ, ಸುಗಟೂರು ನಾರಾಯಣಸ್ವಾಮಿ ಉಪಸ್ಥಿತರಿದ್ದರು.




ಮೈಸೂರಿನ ಬೋಗಾದಿ ಮುಖ್ಯರಸ್ತೆಯಲ್ಲಿರುವ ಗಂಗೋತ್ರಿ, ಪಬ್ಲಿಕ್ ಶಾಲೆಯಲ್ಲಿ ಇತ್ತೀಚೆಗೆ ವಿಜ್ಞಾನ ಹಬ್ಬವನ್ನು ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಟಿ.ರಂಗಪ್ಪ, ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಅಪೋಲೋ ಆಸ್ಪತ್ರೆಯ ನ್ಯೂರೋ ಸರ್ಜನ್ ಡಾ.ಕೆ.ಎಸ್.ಬೋಪಯ್ಯ, ಹೇಮಂತಕುಮಾರ್, ಕುಮಾರಿ ಮರ್ಸಿ ಪಾಲ್, ಕುಮಾರಿ ಎಲ್.ಪೂಜಾ, ಶಾಲಾ ಆಡಳಿತಾಧಿಕಾರಿ ಕಾಂತಿ ನಾಯಕ್, ಮುಖ್ಯೋಪಾಧ್ಯಾಯ ಮೊಹಮ್ಮದ್ ಫಾರೂಕ್, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಮಕ್ಕಳು ಉತ್ತಮ ಮಾದರಿಗಳನ್ನು ತಯಾರು ಮಾಡಿದ್ದರು.

## ಗಾಂಧಿ ಭವನ ವೀಕ್ಷಿಸಿದ ಡಾ.ಕೆ.ಸುಧಾಕರ್



ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ನಿರ್ಮಾಣವಾಗಿ ಇತ್ತೀಚಿಗೆ ಲೋಕಾರ್ಪಣೆಗೊಂಡಿರುವ ಗಾಂಧಿ ಭವನಕ್ಕೆ ಸೋಮವಾರ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ. ಕೆ.ಸುಧಾಕರ್ ಅವರು ಭೇಟಿ ನೀಡಿ ಇಲ್ಲಿನ ಗಾಂಧಿ ಅಂಗಳ,ಛಾಯಾಚಿತ್ರ, ಗ್ಯಾಲರಿ ಹಾಗೂ ಸಭಾಂಗಣವನ್ನು ವೀಕ್ಷಿಸಿದರು. ಈ ವೇಳೆ ಅವರು ಮಾತನಾಡಿ ಗಾಂಧಿ ಭವನದ ಕಟ್ಟಡವು ನಗರದ ಹೃದಯದ ಭಾಗದಲ್ಲಿ ಅದ್ಭುತವಾಗಿ ಮೂಡಿಬಂದಿದ್ದು, ಮಹಾತ್ಮಾ ಗಾಂಧೀಜಿಯವರ ವಿಚಾರ ಧಾರೆಗಳನ್ನು ಇಂದಿನ ಮತ್ತು ಮುಂದಿನ ಪೀಳಿಗೆಗೆ ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ತಿಳಿಸಿ ಕಟ್ಟಡದ ವಿನ್ಯಾಸವು ಸುಂದರವಾಗಿ ಹಾಗೂ ಅರ್ಥ ಪೂರ್ಣವಾಗಿ ಮೂಡಿಬಂದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಚಿಕ್ಕಬಳ್ಳಾಪುರ ನಗರ ಸಭೆ ಅಧ್ಯಕ್ಷ ಎ. ಗಜೇಂದ್ರ, ನಿರ್ಮಿತಿ ಕೇಂದ್ರದ ಅಭಿಯಂತರ ತೇಜಸ್ ಕುಮಾರ್, ಸಹಾಯಕ ಅಭಿಯಂತರ ಏಕಾಂತಪ್ಪ, ನವೀನ್ ಕುಮಾರ್, ಕಣ್ಣೆಜೆನಹಳ್ಳಿ ಆನಂದ್ ಪ್ಪ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಎಮ್.ಜುಂಜಣ್ಣ ಮತ್ತಿತರು ಹಾಜರಿದ್ದರು.

### ದ್ರಾಕ್ಷಿ ಬಿಟ್ಟು ದಾಳಿಂಬೆ ನಂಬಿ ಬಂದ ರೈತನಿಗೆ ಕೈಕೊಟ್ಟ ಬೆಳೆ

# ದಾಳಿಂಬೆ ಬೆಲೆ ಇಳಿಮುಖ

**ವಿಜಯಪುರ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ವಿಜಯಪುರ, ಹಾರೋಹಳ್ಳಿ, ವೆಂಕಟಗಿರಿ ಕೋಟೆ, ಕೊಮ್ಮಸಂದ್ರ, ಕೋರಮಂಗಲ ಈ ಭಾಗಗಳ ಬಹುತೇಕ ರೈತರು ದ್ರಾಕ್ಷಿ ಬೆಳೆಗಳನ್ನು ಬೆಳೆಯುತ್ತಿದ್ದವರು ಇತ್ತೀಚೆಗೆ ಕಳೆದ ಎರಡು ಮೂರು ವರ್ಷಗಳಿಂದ ದಾಳಿಂಬೆ ಬೆಳೆ ಬೆಳೆಯುತ್ತಿದ್ದು ಶೇಕಡ 20ರಷ್ಟು ರೈತರು ದ್ರಾಕ್ಷಿ ಬಿಟ್ಟು ದಾಳಿಂಬೆ ಬೆಳೆ ಬೆಳೆಯಲು ಹೊರಟಿದ್ದು ಇತ್ತೀಚಿನ ದಿನಗಳಲ್ಲಿ ಪ್ರಪಂಚದಲ್ಲಿನ ಯುದ್ಧ ಮತ್ತು ಆರ್ಥಿಕ ವ್ಯವಸ್ಥೆಯಿಂದ, ಬಾಂಗ್ಲಾದೇಶದಲ್ಲಿನ ದಂಗೆ, ಉಕ್ರೇನ್ ನಲ್ಲಿನ ಯುದ್ಧ, ಇದರೊಂದಿಗೆ ಹವಾಮಾನ ವೈಪರೀತ್ಯದಿಂದ ನಿರಂತರ ಮಳೆಯ ವಾತಾವರಣ ಹೀಗೆ ಎಲ್ಲವೂ ಒಮ್ಮೆಲೆ ಕೂಡಿಬಂದಿದ್ದು 250 ರೂಗಳ ವರೆಗೆ ಕೆಜಿಗೆ ಹಣ ದೊರಕುತ್ತಿದ್ದ ದಾಳಿಂಬೆ ಹಣ್ಣಿಗೆ ಇದೀಗ 50 ರಿಂದ 100 ಗಳವರೆಗೆ ಬೆಲೆ ಇಳಿಕೆಯಾಗಿ, ಪ್ರತಿ ಎಕರೆಗೆ ಬೆಳೆ ಬೆಳೆಯಲು ನಾಲ್ಕಾರು ಲಕ್ಷ ರೂಗಳನ್ನು ವ್ಯಯಿಸಿರುವ ರೈತ ಹಾಕಿದ ಬಂಡವಾಳ ಅರ್ಧದಷ್ಟು ಬಾರದೆ ನಷ್ಟದ ಪಾಲಿಗೆ ಈಡಾಗಿರುತ್ತಾನೆ.

ಆದಾಗಿಯೂ ಕಳೆದ ಮೂರು ನಾಲ್ಕು ದಿನಗಳಿಂದ ವಾತಾವರಣ ಶುಭ್ರವಾಗಿರುವ ಕಾರಣ 10-20 ರೂಗಳು ದಾಳಿಂಬೆ ಬೆಲೆಯಲ್ಲಿ ಮುಂದೆ ಹೋಗಿದ್ದರೂ ಸಹ ರೈತ ಎಣಿಸಿದಷ್ಟು ಹಣ ಬಾರದೆ ನಷ್ಟಕ್ಕೊಳಗಾಗಿರುವನು.

ನಾಗನಾಯಕನಹಳ್ಳಿಯ ರೈತ ನಾಗರಾಜಯ್ಯ ಮಾತನಾಡುತ್ತ ದ್ರಾಕ್ಷಿ ಬೆಳೆಗಳಲ್ಲಿ ನಿರಂತರ ಮಳೆ ಹಾಗೂ ಮಾರುಕಟ್ಟೆಯ ಏರಿಳಿತದ ಹೊಡೆತಕ್ಕೆ ಸಿಲುಕಿದ ರೈತ ದಾಳಿಂಬೆ ಕೈ ಹಿಡಿಯುತ್ತದೆ ಎಂದು ದಾಳಿಂಬೆ ಬೆಳೆಗೆ ಬದಲಾಗಿದ್ದು, ಮೊದಲ



ವರ್ಷ ದಾಳಿಂಬೆ ಗಿಡ ನಾಟಿ ಮಾಡಿ ಬೆಳೆ ಬೆಳೆಯಲು ಕನಿಷ್ಠ ಒಂದು ಎಕರೆಗೆ 5 ಲಕ್ಷ ರೂಗಳ ವರೆಗೆ ಖರ್ಚು ಮಾಡಬೇಕಿದ್ದು ನಂತರದ ವರ್ಷಗಳಲ್ಲಿಯೂ ಬೆಳೆ ತುಂಬಾ ಸೂಕ್ಷ್ಮವಾಗಿರುವ ಕಾರಣ ಬೆಳೆಗಳಿಗೆ ಕೀಟನಾಶಕ ಹಾಗೂ ಕಾರ್ಮಿಕರ ಖರ್ಚು ಕೂಡ ಹೆಚ್ಚು ಬರುತ್ತಿದ್ದು ಕನಿಷ್ಠ ಮೂರರಿಂದ ಮೂರುವರೆ ಲಕ್ಷ ರೂಗಳ ವೆಚ್ಚ ಆಗುತ್ತದೆ.

ದ್ರಾಕ್ಷಿ ವರುಷಕ್ಕೆ ಎರಡು ಬೆಳೆ ತೆಗೆದರೆ ದಾಳಿಂಬೆ ವರುಷಕ್ಕೆ ಒಂದು ಬೆಳೆ ಮಾತ್ರ ಬರುತ್ತದೆ ಒಮ್ಮೆ ಗಿಡ ಫಸಲು ನೀಡಲು ಪ್ರಾರಂಭಿಸಿದರೆ ದ್ರಾಕ್ಷಿ 17-18 ವರ್ಷಗಳವರೆಗೆ ಫಸಲು ನೀಡಿದರೆ ದಾಳಿಂಬೆ 15-16 ವರ್ಷ ಫಸಲು ನೀಡುತ್ತದೆ. ಉತ್ತಮವಾದ ರಫ್ತು ಮಾಡಲಾಗುವ ಹಣ್ಣುಗಳಿಗೆ ತೋಟದಲ್ಲಿಯೇ 250ಗಳಿಂದ 270 ರೂಗಳ ವರೆಗೆ ಕೊಳ್ಳುತ್ತಿದ್ದದು, ಇದೀಗ 120 ರಿಂದ 150 ರೂಗಳ ವರೆಗೆ ಇದ್ದು ಸಾಮಾನ್ಯ ಕ್ವಾಲಿಟಿ ದಾಳಿಂಬೆ 150 ರೂಗಳವರೆಗೆ ಹೋಗುತ್ತಿದ್ದು ಇದೀಗ 60-70 ರೂಗಳ ಮಟ್ಟಕ್ಕೆ ಬೆಲೆ ಕುಸಿದಿದೆ.

ಈ ಹಿಂದೆ ವ್ಯಾಪಾರಿಗಳು ತೋಟಕ್ಕೆ ಬಂದು ಸಂಪೂರ್ಣ ಹಣ ಪಾವತಿಸಿ ಬೆಳೆ ಕಟಾವು ಮಾಡುತ್ತಿದ್ದು ಇದೀಗ ಮಾರುಕಟ್ಟೆ ಬೇಡಿಕೆ ಕಡಿಮೆಯಾದ ಕಾರಣ ರೈತರೇ ವ್ಯಾಪಾರಿಗಳ ಬಳಿಗೆ ಹೋಗಿ ಸಾಲವಾದರೂ ತೆಗೆದುಕೊಂಡು ಕಟಾವು ಮಾಡಿಕೊಂಡು ಹೋಗಿ ಎನ್ನುವಂತಹ ಪರಿಸ್ಥಿತಿ ನಿರ್ಮಾಣವಾಗುತ್ತದೆ ಎಂದು ತಿಳಿಸಿದರು.

ಮಾರುಕಟ್ಟೆ ತೊಂದರೆಯಾಗಿ ಬೆಲೆ ಇಳಿಮುಖವಾಗಿದೆಯೇ ಹೊರತು ದಾಳಿಂಬೆ ಹಣ್ಣು ಮಾತ್ರ ಉತ್ತಮ ವಾಗಿದ್ದು, ಉತ್ತಮ ಫಸಲು ಬಂದಿರುವ ಕಾರಣ ಮಾರುಕಟ್ಟೆಯು ಕಡಿಮೆಯಾಗಿದೆ, ಅದರೊಂದಿಗೆ ಈ ಭಾಗದ ಜನ ಇದೀಗ ಹೆಚ್ಚಾಗಿ ದಾಳಿಂಬೆ ಬೆಳೆಯುತ್ತಿರುವುದು ಮತ್ತೊಂದು ಕಾರಣವಾಗಿದೆ ಎಂದು ತಿಳಿಸಿದರು. ಪಟ್ಟಣದ ಅಂಕತಟ್ಟಿ ನಂಜುಂಡಪ್ಪ ವೃತ್ತದಲ್ಲಿನ ಹಣ್ಣುಗಳ ವ್ಯಾಪಾರಿ ಚಲುವರವರು ಮಾತನಾಡಿ ಕಳೆದ ಮೂರು ನಾಲ್ಕು ದಿನಗಳಿಂದ ದಾಳಿಂಬೆ ಹಣ್ಣು ಬೆಲೆಯಲ್ಲಿ ಸ್ವಲ್ಪಮಟ್ಟಿಗೆ ಚೇತರಿಸಿಕೊಂಡಿದ್ದು ವ್ಯಾಪಾರಿಗಳಾದ ನಮಗೂ ಸ್ವಲ್ಪ ಸಂತಸ ಕರ ವಿಷಯವಾಗಿದೆ ಎಂದು ತಿಳಿಸಿದರು.

ವಿಚಿತ್ರವೇನೆಂದರೆ ಮಾರುಕಟ್ಟೆಯಲ್ಲಿ ತರಕಾರಿ-ಸೊಪ್ಪುಗಳು ಏರು ಗತಿಯಲ್ಲಿ ಸಾಗಿದ್ದು ಹಣ್ಣುಗಳು ಮಾತ್ರ ಬೆಲೆಯಲ್ಲಿ ಇಳಿಮುಖವಾಗಿದ್ದು ಬಾಳೆಹಣ್ಣು ಕೆಜಿಗೆ 50 ಸೇಬು ಕೆಜಿಗೆ 60ರೂ, ಕಿತ್ತಳೆ ಕೆಜಿಗೆ 60 ರೂ ಸಹ ಆಗಿದ್ದು ಇಳಿಮುಖವಾಗಿದೆ.

## ಮಿನಿ ಒಲಂಪಿಕ್ ಅಥ್ಲೇಟಿಕ್ಸ್‌ಕ್ರೀಡಾಕೂಟ

**ಕೋಲಾರ:** ಬೆಂಗಳೂರಿನಲ್ಲಿ ನಡೆಯುತ್ತಿರುವ ರಾಜ್ಯ ಮಟ್ಟದ ಮಿನಿ ಒಲಂಪಿಕ್ ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ, 14 ವರ್ಷದ ಬಾಲಕರ ವಿಭಾಗದಲ್ಲಿ ಕೋಲಾರ ಜಿಲ್ಲೆಯಿಂದ ಸ್ಪರ್ಧಿಸಿದ್ದ ಧನುಷ್ ಡಿ.ಆರ್, ಜಾವಲಿನ್ ಎಸೆತದಲ್ಲಿ ಬೆಳ್ಳಿ ಪದಕ ಹಾಗೂ ಸಾಯಿತೇಜ್ ಎನ್, ಚಕ್ರಎಸೆತದಲ್ಲಿ ( ಡಿಸ್ಕಸ್ ಥ್ರೋ) ಕಂಚಿನ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ನ.17 ರಿಂದ ನ.19 ರವರೆಗೆ ಬೆಂಗಳೂರಿನ ಕಂಠೀರವ ಸ್ಟೇಡಿಯಂನಲ್ಲಿ ರಾಜ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಒಲಂಪಿಕ್ ಅಸೋಸಿಯೇಷನ್ ಹಾಗೂ ಕರ್ನಾಟಕ ಅಥ್ಲೆಟಿಕ್ಸ್ ಅಸೋಸಿಯೇಷನ್ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ರಾಜ್ಯಮಟ್ಟದ ಮಿನಿ ಒಲಂಪಿಕ್ ಕ್ರೀಡಾ ಕೂಟದಲ್ಲಿ ಕೋಲಾರದ ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿರುವ ಜಿಲ್ಲಾ ಕ್ರೀಡಾ ವಸತಿ ನಿಲಯದ ವಿದ್ಯಾರ್ಥಿ ಧನುಷ್ ಡಿ.ಆರ್ ಮತ್ತು ಸಾಯಿ ತೇಜ್ ರವರು 14 ವರ್ಷದ ಬಾಲಕರ ವಿಭಾಗದಲ್ಲಿ ಭಾಗವಹಿಸಿ, 2 ಪದಕಗಳನ್ನು ಪಡೆಯುವ ಮುಖಾಂತರ ಜಿಲ್ಲೆಯ ಕೀರ್ತಿ ಪತಾಕೆಯನ್ನು ಹಾರಿಸಿದ್ದಾರೆ. ಈ ಇಬ್ಬರು ಕ್ರೀಡಾ ವಿದ್ಯಾರ್ಥಿಗಳು ಕೋಲಾರದ ಬೆಂಗಳೂರು ರಸ್ತೆಯ ಕೆಂದಟ್ಟಿ ಗೇಟ್ ಸಮೀಪವಿರುವ ಶ್ರೀ ಬಸವೇಶ್ವರ ವಿದ್ಯಾ ಸಂಸ್ಥೆಯ ಶಾಲೆಯಲ್ಲಿ ಧನುಷ್ ಡಿ.ಆರ್ ಹಾಗೂ ಸಾಯಿ ತೇಜ್ ರವರು 8 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಶಾಲೆಯ ಅಚ್ಚುಮೆಚ್ಚಿನ ವಿದ್ಯಾರ್ಥಿಯಾಗಿದ್ದಾರೆ.

ಧನುಷ್ ಡಿ.ಆರ್ ಮತ್ತು ಸಾಯಿತೇಜ್ ಜಿಲ್ಲಾ ಕ್ರೀಡಾ ವಸತಿ ಶಾಲೆಯ ಮುಖ್ಯ ತರಬೇತುದಾರ ಎಂ.ವೆಂಕಟೇಶ್ ಅವರಿಂದ ತರಬೇತಿ ಪಡೆದಿದ್ದಾರೆ. ಜಿಲ್ಲೆಗೆ ಕೀರ್ತಿ ತಂದ ಕ್ರೀಡಾ ವಿದ್ಯಾರ್ಥಿಗಳನ್ನು ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಆರ್. ಗೀತಾ, ಕೋಲಾರ ಜಿಲ್ಲಾ ಅಥ್ಲೆಟಿಕ್ಸ್ ಅಸೋಸಿಯೇಷನ್ ಅಧ್ಯಕ್ಷ ಎನ್.ಮುನಿಯಪ್ಪ, ಪ್ರಧಾನ ಕಾರ್ಯದರ್ಶಿ ಕೆ.ಆರ್.ರಾಘವೇಂದ್ರ, ಹಿರಿಯ ಕ್ರೀಡಾ ಪಟು ಹೆಚ್. ಜಗನ್ನಾಥನ್ ಹಾಗೂ ಶ್ರೀ ಬಸವೇಶ್ವರ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಜಗದೀಶ್, ಮುಖ್ಯೋಪಾಧ್ಯಾಯರು, ಶಿಕ್ಷಕರು ,ಆಡಳಿತ ಮಂಡಳಿ ಸೇರಿದಂತೆ ಇತರರು ಅಭಿನಂದಿಸಿ, ಇನ್ನೂ ಹೆಚ್ಚಿನ ಕ್ರೀಡಾ ಕೂಟಗಳಲ್ಲಿ ಭಾಗವಹಿಸಿ ಜಿಲ್ಲೆಗೆ, ರಾಜ್ಯಕ್ಕೆ ಕೀರ್ತಿ ತರಲೆಂದು ಶುಭ ಹಾರೈಸಿ, ಅಭಿನಂದಿಸಿದ್ದಾರೆ.



# ಸಹಕಾರ ಕ್ಷೇತ್ರದ ಉಳಿವಿಗೆ ಪ್ರತಿಯೊಬ್ಬರ ಸಹಕಾರ ಬಹಳ ಮುಖ್ಯ

**ಕೋಲಾರ:** ಸಹಕಾರ ಕ್ಷೇತ್ರದ ಉಳಿವಿಗೆ ಪ್ರತಿಯೊಬ್ಬರ ಸಹಕಾರ ಬಹಳ ಮುಖ್ಯ. ಆಗ ಮಾತ್ರ ಸಹಕಾರ ಕ್ಷೇತ್ರದ ಮೇಲಿನ ಗೌರವ ಹೆಚ್ಚಾಗುತ್ತದೆ ಎಂದು ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ ಜಯಸಿಂಹಕೃಷ್ಣಪ್ಪ ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಕೋಲಾರ ಜಿಲ್ಲಾ ಸಹಕಾರ ಒಕ್ಕೂಟ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್, ಕೋಲಾರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ, ಸಹಕಾರ ಇಲಾಖೆ, ಕಳ್ಳಿಕುಪ್ಪ ಹಾಲು ಉತ್ಪಾದಕರ ಸಹಕಾರ ಸಂಘ, ಬಂಗಾರಪೇಟೆ ಮತ್ತು ಕೆ.ಜಿ.ಎಫ್ ತಾಲ್ಲೂಕಿನ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳು, ಕೆ.ಜಿ.ಎಫ್ ತಾಲ್ಲೂಕಿನ ಎಲ್ಲಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ಇತರೆ ಎಲ್ಲಾ ಸಹಕಾರ ಸಂಘಗಳ ಸಂಯುಕ್ತಆಶ್ರಯದಲ್ಲಿ ಕೆ.ಜಿ.ಎಫ್ ತಾಲೂಕಿನ ಗ್ರಾಮದ ಡೈರಿ ಸಂಘದ ಆವರಣದಲ್ಲಿ ಹಮ್ಮಿಕೊಂಡಿದ್ದ ಮಹಿಳೆಯರು, ಯುವಕರು ಮತ್ತು ಅಬಲವರ್ಗಗಳಿಗಾಗಿ ಸಹಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಹಕಾರ ಕ್ಷೇತ್ರ ಮಾತ್ರ, ರೈತರು, ಮಹಿಳೆಯರು ಸ್ವಾವಲಂಭಿ ಜೀವನಕ್ಕೆ ದಾರಿದೀಪವಾಗಲಿದೆ ಎಂದರು.

ಬೇತಮಂಗಲ ವ್ಯವಸಾಯ ಸೇವಾ ಸಹಕಾರ ಸಂಘದ ಅಧ್ಯಕ್ಷ ಕೆ.ಎಂ.ವೆಂಕಟಾಚಲಪತಿ ಮಾತನಾಡಿ, ಜೀವವಿಲ್ಲದ



ಡಿ.ಸಿ.ಸಿ ಬ್ಯಾಂಕಿಗೆ ಮರುಜೀವ ತುಂಬಿ ರೈತರ, ಬಡವರ, ಮಹಿಳೆಯರಿಗೆ ಆತ್ಮಸ್ಥೈರ್ಯ ತುಂಬುವ ಮೂಲಕ ದೇಶವೇ ಡಿ.ಸಿ.ಸಿ ಬ್ಯಾಂಕಿನ ಕಡೆ ನೋಡುವಂತೆ ಮಾಡಿದ ಕೀರ್ತಿ ಮಾಜಿ ಅಧ್ಯಕ್ಷ ಬ್ಯಾಲಹಳ್ಳಿ ಗೋವಿಂದಗೌಡರಿಗೆ ಸಲ್ಲುತ್ತದೆ ಎಂದರು.

ಡಿ.ಸಿ.ಸಿ.ಬ್ಯಾಂಕಿಗೆ ಅಧ್ಯಕ್ಷರಾದ ಸಂದರ್ಭದಲ್ಲಿ ಗೋವಿಂದಗೌಡರು ರಾಜಕೀಯ ರಹಿತವಾಗಿ ಯಾರೇ ಸಾಲಕ್ಕೆ ಹೋದರೂ ಸಾಲವನ್ನು ನೀಡುವ ಮೂಲಕ ಬ್ಯಾಂಕಿಗೆ ಜೀವ ತುಂಬಿದ್ದು ಒಂದೆಡೆಯಾದರೆ, ಬ್ಯಾಂಕಿನ ಉಳಿವಿಗಾಗಿ ಶ್ರಮವಹಿಸಿ ಸಾಲ ನೀಡುವಲ್ಲಿ ಪ್ರಾಮಾಣಿವಾಗಿ ನಡೆದುಕೊಂಡಿದ್ದಾರೆ. ಆದರೆ ಇತ್ತೀಚೆಗೆ ಸುಮಾರು ಒಂದೂವರೆ ವರ್ಷದಿಂದ ಬ್ಯಾಂಕಿಗೆ ಅಧ್ಯಕ್ಷರಿಲ್ಲದೆ ಅನಾಥವಾಗಿದೆ. ಮಹಿಳೆಯರು, ರೈತರು, ಬಿದಿ ಬದಿ ವ್ಯಾಪಾರಿಗಳಿಗೆ ಸಾಲ ಸಿಗದೆ ಪರದಾಡುವಂತಾಗಿದೆ. ಹಿರಿಯ ಸಹಕಾರಿಗಳು, ಬುದ್ಧಿಜೀವಗಳು ಸಹಕಾರ ಬ್ಯಾಂಕನ್ನು ಉಳಿಸುವ ನಿಟ್ಟಿನಲ್ಲಿ ಚುನಾವಣೆ ನಡೆಸುವಂತೆ ಹೋರಾಟ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ನಾವೆಲ್ಲಾ ಎಚ್ಚೆತ್ತುಕೊಳ್ಳಬೇಕು ಬ್ಯಾಂಕಿನ ಉಳಿವಿಗಾಗಿ ಹೋರಾಡಬೇಕೆಂದರು.

ಕೋಲಾರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಪಾಕರಹಳ್ಳಿ ಪಿ.ಎಂ.ವೆಂಕಟೇಶಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿ, ರಾಜಕೀಯ ರಹಿತವಾಗಿದ್ದರೆ ಮಾತ್ರ ಸಹಕಾರ ಕ್ಷೇತ್ರ ಉಳಿಯಲು ಸಾಧ್ಯ ಎಂದರು.

ಕೋಲಾರ ಜಿಲ್ಲಾ ಸಹಕಾರ ಒಕ್ಕೂಟದ ಉಪಾಧ್ಯಕ್ಷ ಟಿ.ಕೆ.ಬೈರೇಗೌಡ, ನಿರ್ದೇಶಕರುಗಳಾದ ಅ.ಮು. ಲಕ್ಷ್ಮೀನಾರಾಯಣ, ಕೆ.ಎಂ.ಮಂಜುನಾಥ್, ಎನ್.ನಾಗರಾಜ್, ಮೂರಂಡಹಳ್ಳಿ ಡಾ.ಇ.ಗೋಪಾಲಪ್ಪ, ಪಿ.ಪಾಪಣ್ಣ, ಕೆ.ಜಿ.ಎಫ್ ಎ.ಪಿ.ಎಂ.ಸಿ ಉಪಾಧ್ಯಕ್ಷ ಎಸ್.ಕೆ.ಆನಂದಮೂರ್ತಿ, ಬಂಗಾರಪೇಟೆ ಕೋಮುಲ್ ಉಪ ವ್ಯವಸ್ಥಾಪಕ ಎ.ವಿ.ಶಂಕರರೆಡ್ಡಿ, ಸಹಕಾರ ಅಭಿವೃದ್ಧಿ ಅಧಿಕಾರಿ ಬಾಲಕೃಷ್ಣಪ್ಪ, ಕಳ್ಳಿಕುಪ್ಪ ಡೈರಿ ಅಧ್ಯಕ್ಷರು, ಬೇತಮಂಗಲ ವಿ.ಎಸ್.ಎಸ್.ಎನ್. ಸದಸ್ಯರು, ಬಂಗಾರಪೊಏಟೆ ಕ್ಯಾಂಕ್ ಕಚೇರಿಯ ಸಿಬ್ಬಂದಿ ವರ್ಗ ಇನ್ನಿತರರು ಉಪಸ್ಥಿತರಿದ್ದರು.

# ಅಪಸ್ಮಾರ ಕಾಯಿಲೆ ಔಷಧೋಪಚಾರಗಳಿಂದ ಗುಣಪಡಿಸಬಹುದು

**ಚಾಮರಾಜನಗರ:** ಅಪಸ್ಮಾರ ಖಾಯಿಲೆಯನ್ನು ಸೂಕ್ತ ಔಷದೋಪಚಾರಗಳಿಂದ ಗುಣಪಡಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಚಿದಂಬರ ಅವರು ತಿಳಿಸಿದರು.

ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಭೋಧನಾ ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಪಸ್ಮಾರ ದಿನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಪಸ್ಮಾರವು ವಂಶವಾಹಿನಿ, ಸಂಬಂಧದಲ್ಲಿ ವಿವಾಹವಾಗುವುದು, ಸ್ಟ್ರೋಕ್, ಮೆದುಳಿನಲ್ಲಿ ರಕ್ತ ಹೆಪ್ಪುಗಟ್ಟುವುದು, ಇನ್ನಿತರ ಕಾರಣಗಳಿಂದ ಬರುತ್ತದೆ. ಅಪಸ್ಮರ ಕಾಣಿಸಿಕೊಂಡ 24 ಗಂಟೆಯ ನಂತರ 2ನೇ ಬಾರಿಗೆ ಪದೇ ಪದೇ ಉಂಟಾದರೆ, ದೇಹ ಗಟ್ಟಿಯಾಗಿ ಸೆಳವು ಉಂಟಾಗಿ ಶರೀರ ಅದರುವುದು, ಬಾಯಿಯಲ್ಲಿ ನೊರೆ ಬರುವುದು, ಅಪಸ್ಮರದ ಲಕ್ಷಣವಾಗಿದೆ. ವೈದ್ಯಕೀಯವಾಗಿ ಅಧ್ಯಯನ ನಡೆಸಿದಾಗ ಮೆದುಳಿನ ನ್ಯೂರಾನ್‌ಗಳಲ್ಲಿ ವಿದ್ಯುತ್ ಸಂಚಲನ ಕಾರಣವಿಲ್ಲದೇ ಹೆಚ್ಚುವರಿಯಾಗಿ ಸಿಗ್ನಲ್ ಉಂಟಾಗಿ ಇದರಲ್ಲಿ ಸಂಕೇತಗಳ ಸ್ವೀಕೃತಿ ಕಡಿಮೆಯಾಗಿ ನರಮಂಡಲದಲ್ಲಿ ಏರುಪೇರಾಗಿ ಅಪಸ್ಮರ ಉಂಟಾಗುತ್ತದೆ ಎಂದರು.

ಮೂರ್ಛೆ ರೋಗದಲ್ಲಿ ಸೆಳವು ಉಂಟಾಗಿ ಕೆಲವೇ ಸೆಕೆಂಡಿನ ನಂತರ ತನ್ನಷ್ಟಕ್ಕೇ ತಾನೇ ನಿಲ್ಲುತ್ತದೆ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದಡಿಯಲ್ಲಿ ತಜ್ಞ ವೈದ್ಯರಿಂದ ಚಿಕಿತ್ಸೆ ನೀಡಲಾಗುತ್ತಿದೆ. ನಿರಂತರ ಔಷದೋಪಚಾರ ಒಳ್ಳೆಯ ಆಹಾರ, ಯೋಗ, ಧ್ಯಾನ, ಪ್ರಾಣಾಯಾಮಾ, ಮಧ್ಯಪಾನ ವರ್ಜನೆ ಇತ್ಯಾದಿಗಳಿಂದ ಅಪಸ್ಮಾರವನ್ನು ತಡೆಯಬಹುದು. ಎಂದು ಡಾ. ಎಸ್.



ಚಿದಂಬರ ಅವರು ತಿಳಿಸಿದರು.

ನಗರಸಭಾ ಸದಸ್ಯರಾದ ಎಂ. ಮಹೇಶ್ ಅವರು ಮಾತನಾಡಿ ಅಪಸ್ಮಾರದ ಬಗ್ಗೆ ಜನರಲ್ಲಿ ಇರುವ ತಪ್ಪು ತಿಳಿವಳಿಕೆಯ ಬಗ್ಗೆ ಆರೋಗ್ಯ ಇಲಾಖೆಯು ಜಾಗೃತಿ ಮೂಡಿಸಿಕೊಂಡು ಬರುತ್ತಿದೆ. ಇದರಿಂದ ಜನರಲ್ಲಿರುವ ಮೂಢ ನಂಬಿಕೆ ಹೋಗಲಾಡಿಸಲು ಸಹಕಾರಿಯಾಗಿದೆ. ಇದರ ಬಗ್ಗೆ ಇರುವ ತಪ್ಪು ಕಲ್ಪನೆಯನ್ನು ಜನ ಜಾಗೃತಿ ಮೂಲಕ ಹೋಗಲಾಡಿಸಲು ಸಹಕಾರಿಯಾಗಿದೆ ಎಂದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಜಿಲ್ಲಾ ಮಾನಸಿಕ ಆರೋಗ್ಯ ಮತ್ತು ಕರ್ನಾಟಕ ಮೆದುಳು ಆರೋಗ್ಯ ಉಪಕಾರ್ಯಕ್ರಮ ಅಧಿಕಾರಿ ಡಾ. ಚಂದ್ರಶೇಖರ್ ಅವರು ಮಾತನಾಡಿ ದಿನಕ್ಕೆ ಕನಿಷ್ಠ 8 ಗಂಟೆ ನಿದ್ರೆ, ಮದ್ಯಪಾನ ವರ್ಜನೆ, ಇ.ಇ.ಜಿ ಪರೀಕ್ಷೆ, ವೈದ್ಯರ ಸಲಹೆಯಂತೆ ಔಷಧ ತೆಗೆದುಕೊಳ್ಳಬೇಕು ಎಂದು ತಿಳಿಸಿದರು. ಕಾಲೇಜಿನ ಪ್ರಭಾರ ಪ್ರಾಂಶುಪಾಲರಾದ ನಿರ್ಮಲಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿ ನಾಯಕ್, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದ ಜಿಲ್ಲಾ ಸಂಯೋಜಕರಾದ ನಾಗೇಂದ್ರ, ಸ್ಪೀಚ್ ತೆರಪಿಷ್ಟ್ ಸುಪ್ರೀತ್ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

### ಇಂಧನಸಚಿವ ಕೆ.ಜೆ.ಜಾರ್ಜ್ ಹೇಳಿಕೆ

# ಗ್ಯಾರಂಟಿ ಯೋಜನೆ ನಿಲ್ಲುವ ಪ್ರಶ್ನೆಯಿಲ್ಲ

**ಚಾಮರಾಜನಗರ:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾರಿಮಾಡಿರುವ ಶಕ್ತಿಯೋಜನೆ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ 5 ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿದ್ದು, ಅವು ನಿಲ್ಲುವ ಪ್ರಶ್ನೆಯೇ ಇಲ್ಲ ಎಂದು ಇಂಧನಸಚಿವ ಕೆ.ಜೆ.ಜಾರ್ಜ್ ಹೇಳಿದರು.

ಚಾಮರಾಜನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಮಂಗಳವಾರ ಭೇಟಿನೀಡಿ, ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಆಯೋಜಿಸಿದ್ದ ಮಾಜಿ ಪ್ರಧಾನಿ ಇಂದಿರಾಗಾಂಧಿ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಇಂದಿರಾಗಾಂಧಿ ಅವರು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಇಂದಿರಾಗಾಂಧಿ ಅವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ದೀನದಲಿತರು ಹಿಂದುಳಿದ ವರ್ಗಗಳ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು 20 ಅಂಶಗಳ ಕಾರ್ಯಕ್ರಮವನ್ನು ಜಾರಿಗೊಳಿಸಿದ್ದರು.

ಕರ್ನಾಟಕದ ಮುಖ್ಯಮಂತ್ರಿಯಾಗಿದ್ದ ದಿ.ದೇವರಾಜಅರಸು ಅವರು ಕೂಡಾ ಕರ್ನಾಟಕದಲ್ಲಿ 20ಅಂಶಗಳನ್ನು ಜಾರಿಗೆ ತಂದರು. ಉಕ್ಕಿನ ಮಹಿಳೆ ಎಂದೇ ಖ್ಯಾತಿ ಪಡೆದಿದ್ದ ಇಂದಿರಾಗಾಂಧಿ ಅವರ ಜನಪರ ಕಾರ್ಯಕ್ರಮಗಳು ಇಂದಿಗೂ ಜನಮಾನಸದಲ್ಲಿ ಉಳಿದಿದೆ ಬಡತನ ನಿರ್ಮೂಲನೆ ಕಾರ್ಯಕ್ರಮದ ಮೂಲಕ ಜನರನ್ನು ಆರ್ಥಿಕವಾಗಿ ಮೇಲೆತ್ತುವ ಕೆಲಸ ಮಾಡಿದರು. ಅವರ ಹಾದಿಯಲ್ಲೇ ಇಂದಿನ



ಮುಖ್ಯಮಂತ್ರಿ ಸಿದ್ದರಾಮಯ್ಯ ಬಡವರಿಗಾಗಿ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಯಶಸ್ವಿಯಾಗಿದ್ದಾರೆ. ಆದರೆ ಪ್ರತಿಪಕ್ಷದವರು ಸಿಎಂ ಅವರು ಜಾರಿಗೆ ತಂದ ಅಭಿವೃದ್ಧಿ ಕಾರ್ಯಗಳನ್ನು ಸಹಿಸದೇ, ಮುಡಾಹಗರಣ ಮುಂದಿಟ್ಟು, ಇಕ್ಕಟ್ಟಿಗೆ ಸಿಲುಕಿಸಿದ್ದಾರೆ ಮುಡಾಹಗರಣದಲ್ಲಿ ಸಿಎಂ ಪಾತ್ರವಿಲ್ಲ ಎಂದರು.

ಕಚೇರಿಗೆ ಆಗಮಿಸಿದ ಸಚಿವ ಕೆ.ಜೆ.ಜಾರ್ಜ್ ಅವರನ್ನು ಶಾಸಕ ಸಿ.ಪುಟ್ಟರಂಗಶೆಟ್ಟಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ ಅವರು ಪಕ್ಷದ ವತಿಯಿಂದ ಬರಮಾಡಿಕೊಂಡು, ಸ್ವಾಗತಿಸಿ ಸನ್ಮಾನಿಸಿದರು.

ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವು, ಆರ್,ಮಹದೇವ್, ಚಾಮರಾಜನಗರ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್. ಗುರುಸ್ವಾಮಿ, ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ಲತಾರಾಜಶೇಖರ್‌ಜತ್ತಿ, ಜಿಪಂ ಮಾಜಿ ಸದಸ್ಯ ಸದಾಶಿವಮೂರ್ತಿ, ನಗರಸಭೆ ಸದಸ್ಯರಾದ ಚಿನ್ನಮ್ಮ, ಕಲಾವತಿ, ಗ್ರಾ.ಪಂ.ಅಧ್ಯಕ್ಷ ರೂಪೇಶ್, ಕಾವೇರಿಶಿವಕುಮಾರ್, ಪದ್ಮಪುರುಷೋತ್ತಮ್, ಕಾಗಲವಾಡಿ ಚಂದ್ರು, ನಸ್ರುಲ್ಲಾಖಾನ್, ಬಗರ್ ಹುಕುಂ ಸಾಗುವಳಿ ಸಮಿತಿ ಸದಸ್ಯ ರವಿ, ಆಯೂಬ್ ಖಾನ್, ಆರ್.ಉಮೇಶ್, ನಗರಸಭೆ ಮಾಜಿ ಸದಸ್ಯರಾದ ನಾಗರಾಜು, ಪುಟ್ಟಸ್ವಾಮಿ, ಅಪ್ಸರ್ ಅಹಮದ್, ಮರಿಯಾಲಹುಂಡಿ ಕುಮಾರ್, ಮಹದೇವಸ್ವಾಮಿ, ಸೇವಾದಳ ನಾಗರಾಜು, ಶೇಷಣ್ಣ. ಕರಿನಂಜನಪುರ ಸ್ವಾಮಿ, ದ್ವಾರ್ಕಿ, ರವಿಗೌಡ, ಶ್ರೀನಿವಾಸ್ ಮೂರ್ತಿ ಸೇರಿದಂತೆ ಪಕ್ಷದ ಕಾರ್ಯಕರ್ತರು ಪಾಲ್ಗೊಂಡಿದ್ದರು.

**ತಿಪಟೂರು ನಗರಸಬೆ ವತಿಯಿಂದ ಚಿಕ್ಕಮಾರ್ಪನಹಳ್ಳಿ ಶಾಲಾ ಮಕ್ಕಳಿಗೆ ನಗರಸಭೆಯ ಕಾರ್ಯವೈಖರಿ, ದಿನಚರಿ, ಅಧಿಕಾರಿಗಳ ಕಾರ್ಯ ಮತ್ತು ಕುಡಿಯುವ ನೀರು, ಸ್ವಚ್ಛತೆ, ನೈರ್ಮಲ್ಯದ ಬಗ್ಗೆ ನಗರಸಭಾ ಸಭಾಂಗಣದಲ್ಲಿ ಮಾಹಿತಿ ನೀಡಿದರು. ಈ ಸಂಧರ್ಭದಲ್ಲಿ ಅಧ್ಯಕ್ಷೆ ಯಮುನಾಧರಣೇಶ್, ಅರೋಗ್ಯ ನಿರೀಕ್ಷಕರು ಶ್ರೀನಿವಾಸ್ ಮೂರ್ತಿ ಹಾಗೂ ಸಚಿನ್ ಹಾಜರಿದ್ದು ಮಾಹಿತಿ ನೀಡಿದರು.**





**ಆಂಧ್ರಪ್ರದೇಶದ ತಿರುಮಲ ತಿರುಪತಿ ದೇವಾಲಯದ ನೂತನ ಆಡಳಿತ ಮಂಡಳಿ ಸದಸ್ಯರಾಗಿ ಕರ್ನಾಟಕದಿಂದ ಆಯ್ಕೆಯಾಗಿರುವ ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದ ನಿಕಟ ಪೂರ್ವ ಅಧ್ಯಕ್ಷ ಎಸ್.ನರೇಶ್ ಕುಮಾರ್ ಅವರು ಟಿ.ಟಿ.ಡಿ.ದೇವಾಲಯದ ಮೊದಲನೆ ಆಡಳಿತ ಮಂಡಳಿಯ ಸಭೆಗೆ ತೆರಳುವ ಸಂದರ್ಭದಲ್ಲಿ ಕೋಲಾರ ನಗರದ ಪಿಟೀಲು ಚೌಡಯ್ಯ ರಾಷ್ಟ್ರೀಯ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕಲಾಶ್ರೀ ಪ್ರಶಸ್ತಿ ಪುರಸ್ಕೃತರಾದ ನಾದಸ್ವರ ಚಕ್ರವರ್ತಿ ಆರ್.ಶ್ರೀರಾಮುಲು ಅವರ ಮನೆಗೆ ಆಗಮಿಸಿ ದಂಪತಿಗಳ ಆಶೀರ್ವಾದ ಪಡೆದರು. ಕಲಾ ಪೋಷಕ ಎಸ್.ಮಂಜುನಾಥ್, ನವೀನ್, ನರಸಿಂಹಲು, ನಾಗರಾಜ್, ಏಕಲವ್ಯ, ವೆಂಕಟೇಶ್, ಕ್ರಿಷ್ಣ, ಶಿವಶಂಕರ್,ನಾರಾಯಣಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.**

# ದಾಸ ಪದಗಳು ಉತ್ತಮ ಸಮಾಜಕ್ಕೆ ಮಾರ್ಗದರ್ಶಕ

**ಮಡಿವಾಳ :** ತೊರ್ನಹಳ್ಳಿ ಗ್ರಾ.ಪಂ. ಕಛೇರಿಯಲ್ಲಿ ದಾಸ ಶ್ರೇಷ್ಠ ಕನಕದಾಸರ ತತ್ವ ಸಿದ್ದಂತಗಳು ದಾಸ ಪದಗಳು ಉತ್ತಮ ಸಮಾಜಕ್ಕೆ ಮಾರ್ಗದರ್ಶಕವಾಗಿದೆ ಎಂದು ಪಿಡಿಒ ಚಂಗಲರಾಯಗೌಡ ಹೇಳಿದರು.

ಕಚೇರಿಯ ಆವರಣದಲ್ಲಿ ಹಮ್ಮಿಕೊಂಡಿದ್ದ ದಾಸ ಶ್ರೇಷ್ಠ ಕನಕದಾಸರ 537 ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಅರ್ಪಿಸಿ ಭಾಗವಹಿಸಿ ಮಾತನಾಡಿದರು.

ಪ್ರತಿಯೊಬ್ಬರು ಕನಕದಾಸರ ಚಿಂತನೆಗಳು ಆದರ್ಶಗಳು ದಾಸ ಪದಗಳು ಕುಲಕುಲ ಎಂದು ಹೊಡೆದಾಡದಿರಿ ಕುಲದ ನೆಲೆಯನ್ನು ಏನಾದರೂ ಬಲ್ಲಿರಾ ಎಂಬುದನ್ನು ಅರ್ಥೈಸಿಕೊಂಡು ಸಮಾಜದಲ್ಲಿ ಅಸಮಾನತೆಯನ್ನು ಹೋಗಲಾಡಿಸಿ ಜಾತಿ ಭೇದ ಮಾಡದೆ ಮೇಲು-ಕೀಳು ಎಂದು ಭಾವಿಸದೆ ಉತ್ತಮ ಸಮಾಜ ನಿರ್ಮಾಣಕ್ಕಾಗಿ ಎಲ್ಲರೂ ಒಗ್ಗೂಡಿ ಮಹನೀಯರ ಜಯಂತಿಗಳನ್ನು ಆಚರಣೆ ಮಾಡಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಗ್ರಾ.ಪಂ. ಸದಸ್ಯರಾದ ಬಿ.ಎಂ.ಎನ್.ನಾಗರಾಜ್, ರೂಪಚಂದ್ರಶೇಖರ್, ಸಂತೋಷ್, ಬಿಲ್‌ಕಲೆಕ್ಟರ್ ನಾಗರಾಜ್ ಹಾಗೂ ಸಿಬ್ಬಂದಿ ಹಾಜರಿದ್ದರು.



## ಬಾಲ್ಯವಿವಾಹ ನಿಷೇಧ, ಪೋಕ್ಸೊ, ಬಾಲನ್ಯಾಯ ಕುರಿತು ಅರಿವು ಕಾರ್ಯಕ್ರಮ

**ಚಾಮರಾಜನಗರ:** ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಹಯೋಗದಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆ-2006, ಪೋಕ್ಸೋ ಕಾಯ್ದೆ-2012, ಬಾಲನ್ಯಾಯ (ರಕ್ಷಣೆ ಮತ್ತು ಪೋಷಣೆ) ಕಾಯ್ದೆ-2015 ಕುರಿತು ಅರಿವು ಕಾರ್ಯಕ್ರಮವನ್ನು ನವೆಂಬರ್ 20ರಂದು ಮಧ್ಯಾಹ್ನ 2 ಗಂಟೆಗೆ ನಗರದ ಸೇವಾ ಭಾರತಿ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಏರ್ಪಡಿಸಲಾಗಿದೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್ ಅವರು ಅಧ್ಯಕ್ಷತೆ ವಹಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಮಂಜುನಾಥ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಎನ್. ಚಲುವರಾಜ್, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಸರಸ್ವತಿ, ಸೇವಾ ಭಾರತಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಪಿ.ಬಿ ಲೋಕೇಶ್, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕರಾದ ಎಂ. ಮಹೇಶ್ ಅವರು ಮುಖ್ಯ ಅಥಿತಿಗಳಾಗಿ ಭಾಗವಹಿಸುವರು. ಬಚ್ಚಪನ್ ಬಚಾವೋ ಆಂದೋಲನದ ರಾಜ್ಯ ಸಂಯೋಜಕರಾದ ಬಿನು ವರ್ಗಿಸ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ರಾಜ್ಯಮಟ್ಟದ ಪುಸ್ತಕ ಆಯ್ಕೆಗೆ ಅರ್ಜಿ ಆಹ್ವಾನ

**ಚಾಮರಾಜನಗರ:** 2024ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾದ ಸಾಹಿತ್ಯ, ಮಕ್ಕಳ ಸಾಹಿತ್ಯ, ಕಲೆ ಮತ್ತು ವಿಜ್ಞಾನ ಭಾರತೀಯ ಭಾಷೆಯ ಗ್ರಂಥಗಳ ಆಯ್ಕೆಗೆ ಲೇಖಕರು, ಲೇಖಕ-ಪ್ರಕಾಶಕರು, ಪ್ರಕಾಶಕರಿಂದ ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಪುಸ್ತಕಗಳು 2024ನೇ ವರ್ಷದಲ್ಲಿ ಮುದ್ರಣವಾಗಿ ಪ್ರಕಟಣೆಯಾಗಿರಬೇಕು. ಮರು ಮುದ್ರಣವಾದಲ್ಲಿ 10 ವರ್ಷಗಳ ಅಂತರವಿರಬೇಕು. ಆಯ್ಕೆಗೆ ಒಪ್ಪಿಸಿದ ಯಾವುದೇ ಭಾಷೆಯ ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಿಂತಿರಗಿಸುವುದಿಲ್ಲ. ಕರ್ನಾಟಕದಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾದ ಪುಸ್ತಕಗಳನ್ನು ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ 2025ರ ಜನವರಿ 1 ರೊಳಗೆ ನೋಂದಣಿ ಮಾಡಿಸಬೇಕು. ಪುಸ್ತಕಗಳನ್ನು ರಾಜ್ಯಮಟ್ಟದ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಪರಿಗಣಿಸಲಾಗುವುದು. ನೋಂದಣಿಗಾಗಿ ನಿಗದಿತ ಅರ್ಜಿ ನಮೂನೆ ಹಾಗೂ ಮಾಹಿತಿಗಾಗಿ ಬೆಂಗಳೂರಿನ ಕಬ್ಬನ್ ಉದ್ಯಾನವನದಲ್ಲಿರುವ ರಾಜ್ಯ ಕೇಂದ್ರ ಗ್ರಂಥಾಲಯದ ದೂ.ಸಂ 080-22864990, 22867358 ಮತ್ತು ಚಾಮರಾಜನಗರ ಜಿಲ್ಲಾ ಮುಖ್ಯ ಗ್ರಂಥಾಲಯಾಧಿಕಾರಿಗಳ ಕಚೇರಿ, ಕೇಂದ್ರ ಗ್ರಂಥಾಲಯ ದೂ. ಸಂ 08226-225009 ಗೆ ಸಂಪರ್ಕಿಸುವಂತೆ ಜಿಲ್ಲಾ ಮುಖ್ಯ ಗ್ರಂಥಾಲಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟ

**ಚಾಮರಾಜನಗರ:** ಶಾಲಾ ಶಿಕ್ಷಣ ಇಲಾಖೆಯಿಂದ 2024-25ನೇ ಸಾಲಿನ ವಿಶೇಷಚೇತನ ಮಕ್ಕಳ ಜಿಲ್ಲಾಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟವನ್ನು ನವೆಂಬರ್ 22ರಂದು ನಗರದ ಡಾ. ಬಿ.ಆರ್ ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕ್ರೀಡಾಕೂಟದಲ್ಲಿ 250 ಮಕ್ಕಳು ಭಾಗವಹಿಸುವರು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 22ರಂದು ಪರಿಶೀಲನಾ ಸಭೆ

**ಚಾಮರಾಜನಗರ:** ಚಾಮರಾಜನಗರ ಜಿಲ್ಲಾಮಟ್ಟದ ಜಿಲ್ಲಾ ಅಭಿವೃದ್ದಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ ಪರಿಶೀಲನಾ ಸಭೆಯನ್ನು ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 22ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಯ್ಯಪ್ಪಸ್ವಾಮಿ ಭಕ್ತರ ವ್ರತಾಚರಣೆ

**ಮಡಿವಾಳ :** ತೊರ್ನಹಳ್ಳಿ ಗ್ರಾಮದ ಅಯ್ಯಪ್ಪಸ್ವಾಮಿ ಭಕ್ತರು ಮಾಲೆಯನ್ನು ಧರಿಸಿ ವ್ರತಾಚರಣೆಯಿಂದ ಬಸ್ ಮೂಲಕ ಶಬರಿ ಮಲೆಗೆ ಹೊರಟರು. ತೊರ್ನಹಳ್ಳಿ ಗ್ರಾಮದ ಅಯ್ಯಪ್ಪಸ್ವಾಮಿ ಭಕ್ತರು ಹಲವಾರು ವರ್ಷಗಳಿಂದ ಅಯ್ಯಪ್ಪ ಮಾಲೆಯನ್ನು ದರಿಸಿ ಪ್ರತಿನಿತ್ಯ ಪೂಜೆ, ಭಜನೆ ಮಾಡುತ್ತಿದ್ದರು, ನಂತರ ಇರುಮುಡಿಯನ್ನು ಕಟ್ಟಿಕೊಂಡು ಬಸ್ ಮೂಲಕ ಶಬರಿಮಲೈಗೆ ಹೊರಟರು. ಗುರುಸ್ವಾಮಿಗಳಾದ ನಾರಾಯಣಸ್ವಾಮಿ.ಟಿ.ವಿ, ಕೀರ್ತೀ, ಪ್ರೇಮ್ ಕುಮಾರ್, ಶ್ರೀನಿವಾಸ್, ಪೆರುಮಾಳಪ್ಪ, ಅಯ್ಯಪ್ಪ ಭಕ್ತ ಹೊರಟರು. ಪೋಟೊ 3. ತೊರ್ನಹಳ್ಳಿ ಗ್ರಾಮದ ಅಯ್ಯಪ್ಪಸ್ವಾಮಿ ಭಕ್ತರು ಮಾಲೆಯನ್ನು ದರಿಸಿ ವ್ರತಾಚರಣೆಯಿಂದ ಬಸ್ ಮೂಲಕ ಶಬರಿ ಮಲೆಗೆ ಹೊರಟರು.



## ಪೈಲ್ವಾನ್ ಎಂ.ಮಹದೇವ ಪ್ರಸಾದ್‌ಗೆ ದಿ.ಉಸ್ತಾದ್ ಕರಗಯ್ಯ ಪ್ರಶಸ್ತಿ

**ಮೈಸೂರು:** ಮಾಜಿ ಮೇಯರ್ ಪೈಲ್ವಾನ್ ಪುರುಷೋತ್ತಮ್ ಅವರ ಅಭಿಮಾನಿ ಬಳಗದ ವತಿಯಿಂದ ನ.17ರಂದು ದೊಡ್ಡಕೆರೆ ಮೈದಾನದ ದಿ.ದೇವರಾಜ ಅರಸು ಕ್ರೀಡಾಂಗಣದಲ್ಲಿ ನಡೆದ 42 ಜೊತೆ ರಾಷ್ಟ್ರಮಟ್ಟದ ಅಮೋಘ ನಾಡ ಕುಸ್ತಿ ಪಂದ್ಯಾವಳಿಯಲ್ಲಿ ಅಶೋಕಪುರಂನ ಪೈಲ್ವಾನ್ ಮಹದೇವ ಪ್ರಸಾದ್ ಎಂ.ಅವರು ಭಾಗವಹಿಸಿ ಬೆಂಗಳೂರಿನ ಪೈಲ್ವಾನ್ ಗಣೇಶ್ ಅವರನ್ನು ಪರಾಭವಗೊಳಿಸಿ, ದಿ.ಉಸ್ತಾದ್ ಕರಗಯ್ಯರವರ ಪ್ರಶಸ್ತಿ ಹಾಗೂ ಫಲಕವನ್ನು ಪಡೆದು ಜಯಶೀಲರಾಗಿರುತ್ತಾರೆ. ಪೈಲ್ವಾನ್ ಮಹದೇವ ಪ್ರಸಾದ್ ಅವರು ಅಶೋಕಪುರಂ 12ನೇ ಕ್ರಾಸ್‌ನ ನಿವಾಸಿ ಮಹದೇವು ಹಾಗೂ ಲೇ.ಮಹದೇವಮ್ಮನವರ ಪುತ್ರ. ಅಶೋಕಪುರಂ ಚಿಕ್ಕಗರಡಿ ಪೈಲ್ವಾನ್ ಬಾಲಣ್ಣನವರ ಶಿಷ್ಯರು.





**ತಿಪಟೂರು ತಾಲೂಕು ಗಂಗನಘಟ್ಟ ಗ್ರಾಮದ ಶ್ರೀ ವಡ್ಡಗಲ್ಲು ರಂಗನಾಥಸ್ವಾಮಿ ದೇವಾಲಯದಲ್ಲಿ ಬೆಂಗಳೂರಿನ ಶ್ರೀಮತಿ ಪ್ರಭಾವತಿ ಹಾಗೂ ಶ್ರೀ ಕೃಷ್ಣಪ್ಪರವರ ಸೇವೆಯೊಂದಿಗೆ ಲೋಕ ಕಲ್ಯಾಣಕ್ಕಾಗಿ ಶ್ರೀ ವಡ್ಡಗಲ್ಲು ರಂಗನಾಥಸ್ವಾಮಿಯವರ ತಿರು ಕಲ್ಯಾಣೋತ್ಸವ ಕಾರ್ಯಕ್ರಮವು ಅದ್ದೂರಿಯಾಗಿ ನೇರವೇರಿತು. ಈ ಧಾರ್ಮಿಕ ಸಮಾರಂಭದಲ್ಲಿ ಗಂಗನಘಟ್ಟ ಹಾಗೂ ಸುತ್ತಮುತ್ತಲಿನ ಸಾವಿರಾರು ಭಕ್ತರು ಆಗಮಿಸಿ ಸಮಾರಂಭದಲ್ಲಿ ಭಾಗವಹಿಸಿ ದೇವರ ಕೃಪೆಗೆ ಪಾತ್ರರಾದರು.**

# ಮಾದಕ ವಸ್ತುಗಳಿಂದ ಅಂತರ ಕಾಯ್ದುಕೊಳ್ಳಲು ಸಲಹೆ

**ಚಾಮರಾಜನಗರ:** ಆರೋಗ್ಯಕ್ಕೆ ಮಾರಕವಾಗಿರುವ ಮಾದಕ ವಸ್ತುಗಳಿಂದ ಯುವಜನಾಂಗ ಅಂತರವನ್ನು ಕಾಯ್ದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ ಅವರು ಸಲಹೆ ಮಾಡಿದರು.

ನಗರದ ಜೆ.ಎಸ್.ಎಸ್ ನರ್ಸಿಂಗ್ ಸ್ಕೂಲ್ ಸಭಾಂಗಣದಲ್ಲಿಂದು ಜಿಲ್ಲಾ ಕಾನೂ ಸೇವೆಗಳ ಪ್ರಾಧಿಕಾರ, ನೆಹರು ಯುವ ಕೇಂದ್ರ, ಜೈಭುವನೇಶ್ವರಿ ಕನ್ನಡ ಯುವ ವೇದಿಕೆ ಜೆಎಸ್‌ಎಸ್ ಸ್ಕೂಲ್ ಆಫ್ ನರ್ಸಿಂಗ್ ಸಹಯೋಗದಲ್ಲಿ ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಮಾದಕ ವ್ಯಸನದ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮಾದಕ ವಸ್ತುಗಳನ್ನು ಸೇವನೆ ಮಾಡುವುದರಿಂದ ತಾತ್ಕಾಲಿಕ ಸಂತೋಷಸಿಗಬಹುದೇ ಹೊರತು, ಅದು ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟು ಮಾಡುತ್ತದೆ. ಮಾದಕ ವಸ್ತುಗಳಿಗೆ ದಾಸರಾದರೇ ಅದು ಮಾನಸಿಕ ಮತ್ತು ದೈಹಿಕವಾಗಿ ಹಾಳು ಮಾಡುತ್ತದೆ. ಹೀಗಾಗಿ ಮಾದಕ ವಸ್ತುಗಳಿಂದ ಯುವಜನಾಂಗ ದೂರವಿರಬೇಕು ಎಂದು ಅವರು ತಿಳಿಸಿದರು.

ವಿದ್ಯಾರ್ಥಿಗಳು ದೇಶದ ಮುಂದಿನ ಭವಿಷ್ಯ ರೂಪಿಸಬೇಕಿದೆ. ಈ ನಿಟ್ಟಿನಲ್ಲಿ ಹೆಚ್ಚಾಗಿ ಓದಿನ ಕಡೆ ಗಮನಹರಿಸಬೇಕು. ಅದರಲ್ಲೂ 13 ರಿಂದ 19ರ ವಯೋಮಾನದ ಯುವಕ-ಯುವತಿಯರು ಚಂಚಲವಾದ ಮನಸ್ಸಿಗೆ ಕಡಿವಾಣವನ್ನು ಹಾಕಿಕೊಳ್ಳಬೇಕು. ಈ ವಯಸ್ಸಿನಲ್ಲಿ ಕೆಟ್ಟ ಸ್ನೇಹಿತರು, ಕೆಟ್ಟ ಚಟಗಳ ಸಹವಾಸ ಹಾಗೂ ಪ್ರೀತಿ-ಪ್ರೇಮದ ಹಿಂದೆ ಬಿದ್ದು, ಭವಿಷ್ಯವನ್ನು ಹಾಳುಮಾಡಿಕೊಳ್ಳಬಾರದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ ಅವರು ಸಲಹೆ ನೀಡಿದರು.

ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಡಾ. ಕೆ.ಬಿ. ಅಭಿಷೇಕ್ ಅವರು ಮಾತನಾಡಿ ವಿದ್ಯಾರ್ಥಿ ಜೀವನದಲ್ಲಿ ಶಿಸ್ತು-ಸಂಯಮವನ್ನು ಅಳವಡಿಸಿಕೊಂಡರೆ ಅದೇ ಮೊದಲ ಯಶಸ್ಸು ಇದ್ದಂತೆ. ಹೆಣ್ಣು ಮಕ್ಕಳು ಯಾವುದೇ ವೈಯಕ್ತಿಕ ಸಮಸ್ಯೆಗಳು ಇದ್ದಾಗ, ಶಿಕ್ಷಕರು ಮತ್ತು ಪಾಲಕರ ಜತೆಗೆ ಮುಕ್ತವಾಗಿ



ಹಂಚಿಕೊಳ್ಳಬೇಕು. ಏನೇ ಸಮಸ್ಯೆಗಳು ಇದ್ದರೂ ದುಡುಕಿ ನಿರ್ಧಾರ ತೆಗೆದುಕೊಳ್ಳಬಾರದು ಎಂದರು.

ಜೆ.ಎಸ್.ಎಸ್ ಸ್ಕೂಲ್ ಆಫ್ ನರ್ಸಿಂಗ್ ಪ್ರಾಂಶುಪಾಲರಾದ ಜಿ. ವಿನಯ್ ಕುಮಾರ್ ಅವರು ಮಾತನಾಡಿ ಯಾವುದೇ ಅಪಘಾತ ಮತ್ತು ಆರೋಗ್ಯ ಸಮಸ್ಯೆಗಳು ಕಂಡುಬಂದರೂ ನರ್ಸಿಂಗ್ ವಿದ್ಯಾರ್ಥಿಗಳ ಪಾತ್ರ ಬಹುಮುಖ್ಯವಾಗಿದೆ. ವಿಧ್ಯಾಭ್ಯಾಸದ ಜತೆಗೆ ವಿದ್ಯಾರ್ಥಿಗಳು ಆರೋಗ್ಯದ ಬಗ್ಗೆ ಹೆಚ್ಚಿನ ಗಮನಹರಿಸಬೇಕು. ಮಾದಕ ವಸ್ತುಗಳನ್ನು ಬಳಕೆ ಮಾಡುವವರ ಮನ ಪರಿವರ್ತನೆ ಮಾಡಲು ಪ್ರಯತ್ನಿಸಬೇಕು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಅಧ್ಯಕ್ಷರಾದ ಜಿ. ಬಂಗಾರು, ನೆಹರು ಯುವಕೇಂದ್ರ ಲೆಕ್ಕಾಧಿಕಾರಿ ಸತೀಶ್, ಸಹನಾ, ಉಪನ್ಯಾಸಕರಾದ ಎಂ. ಮಂಜುಳಾ, ಬಿ. ಸಂಧ್ಯಾಶ್ರೀ, ಮಧು, ಎಚ್.ಎಸ್. ಸುಷ್ಮಿತಾ, ಕೆ.ಎಂ. ಮಹದೇವಸ್ವಾಮಿ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಗೀತಂ ವಿಶ್ವವಿದ್ಯಾಲಯದಲ್ಲಿ ತಂತ್ರಜ್ಞಾನ ಪರಿಶೋಧನೆ ಮತ್ತು ಉತ್ಪನ್ನ ಎಂಜಿನಿಯರಿಂಗ್ ಕೇಂದ್ರ ಉದ್ಘಾಟನೆ

ಚೆನ್ನೈನಲ್ಲಿ ಇರುವ ಅಮೆರಿಕದ ಕಾನ್ಸುಲ್ ಜನರಲ್ ಕ್ರಿಸ್ ಹಾಡ್ಜಸ್ ಅವರು ಗೀತಂ ಬೆಂಗಳೂರು ಸ್ವಾಯತ್ತ ವಿಶ್ವವಿದ್ಯಾಲಯದಲ್ಲಿ ತಂತ್ರಜ್ಞಾನ ಪರಿಶೋಧನೆ ಮತ್ತು ಉತ್ಪನ್ನ ಎಂಜಿನಿಯರಿಂಗ್ (ಟಿಇಪಿಇ) ಕೇಂದ್ರವನ್ನು ಉದ್ಘಾಟಿಸಿದ್ದಾರೆ. ಈ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವ ಮೂಲಕ ಕ್ರಿಸ್ ಹಾಡ್ಜಸ್ ಅವರು, ಈ ವರ್ಷದಲ್ಲಿ ಎರಡನೇ ಬಾರಿಗೆ ವಿಶ್ವವಿದ್ಯಾಲಯದ ಕ್ಯಾಂಪಸ್ಗೆ ಭೇಟಿ ನೀಡಿದಂತಾಗಿದೆ. ಈ ವರ್ಷದ ಫೆಬ್ರುವರಿಯಲ್ಲಿ ಅವರು ಭಾಷಾಂತರ ಉಪಕ್ರಮಗಳ ಸಂಶೋಧನೆಯ ಬಹುಶಿಸ್ತೀಯ ಘಟಕದ (ಎಂಯುಆರ್ಟಿಐ) ಉದ್ಘಾಟನೆ ನೇರವೇರಿಸಿದ್ದರು. ಈ ಭೇಟಿಯ ಸಂದರ್ಭದಲ್ಲಿ, ಅವರು ಈ ಸಂಶೋಧನಾ ಕೇಂದ್ರದ ಪ್ರಗತಿ ಪರಿಶೀಲಿಸಿ ಮತ್ತು ಸಹಯೋಗಗಳ ಸಾಧ್ಯತೆಗಳ ಬಗ್ಗೆ ಸಲಹೆಗಳನ್ನು ನೀಡಿದ್ದರು. ಗೀತಂ ಸ್ವಾಯತ್ತ ವಿಶ್ವವಿದ್ಯಾಲಯದಲ್ಲಿನ ?ಟಿಇಪಿಇ? ಕೇಂದ್ರವು ಉತ್ಪನ್ನ ವಿನ್ಯಾಸ, ಮೂಲಮಾದರಿ ಮತ್ತು ನಿಯೋಜನೆಯಲ್ಲಿ ಪ್ರಾಯೋಗಿಕ ಅನುಭವದೊಂದಿಗೆ ಎಂಜಿನಿಯರಿಂಗ್ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಲಿದೆ. ಆರೋಗ್ಯ, ನವೀಕರಿಸಬಹುದಾದ ಇಂಧನ ಮತ್ತು ವಾಹನ ಸಂಚಾರ ಕ್ಷೇತ್ರಗಳಲ್ಲಿ ಅಂತರಶಿಸ್ತೀಯ ವಾಸ್ತವ-ಪ್ರಪಂಚದ ಸವಾಲುಗಳನ್ನು ಪರಿಹರಿಸಲು ವಿದ್ಯಾರ್ಥಿಗಳು ಲೇಸರ್ ಕತ್ತರಿಸುವ ಯಂತ್ರಗಳು, ಟೇಬಲ್ಟಾಪ್ ಯಂತ್ರ ಕೇಂದ್ರಗಳು, ಬಹುಬಗೆಯ 3ಡಿ ಮುದ್ರಣ ಯಂತ್ರಗಳು, ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ ಅಳತೆ ಉಪಕರಣಗಳು, ಡೆವಲಪ್ಮೆಂಟ್ ಬೋರ್ಡ್ಗಳಂತಹ ಸುಧಾರಿತ ಸಾಧನಗಳನ್ನು ಬಳಸಲಿದ್ದಾರೆ. ಈ ಉಪಕ್ರಮವು ಅಂತರಶಿಸ್ತೀಯ ಮತ್ತು ಬಹುಶಿಸ್ತೀಯ ಸಹಯೋಗ, ಗ್ರಾಹಕರ ಮೌಲ್ಯ ವರ್ಧನೆಯಲ್ಲಿ ಉತ್ಪನ್ನ ಅಥವಾ ಸೇವೆಯ ಸಂಕೀರ್ಣತೆ ಹಾಗೂ ವೆಚ್ಚ ತಗ್ಗಿಸುವ ವಿನ್ಯಾಸ ವಿಧಾನ, ಮಿತವ್ಯಯದ ಎಂಜಿನಿಯರಿಂಗ್ ಮತ್ತು ವೆಚ್ಚ ಕಡಿತ ಸಮಸ್ಯೆ ಪರಿಹಾರ ಒತ್ತು ನೀಡುವ ಮೂಲಕ, ಉದ್ಯಮಗಳಿಗೆ ಬಳಕೆಗೆ ಸಿದ್ಧ ಇರುವ ಪರಿಹಾರಗಳನ್ನು ಅಭಿವೃದ್ಧಿಪಡಿಸಲು ವಿದ್ಯಾರ್ಥಿಗಳಿಗೆ ಅನುವು ಮಾಡಿಕೊಡಲಿದೆ.

## ಬಾಳೆಹಣ್ಣು ಪಾಯಸ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ನೇಂದ್ರ ಬಾಳೆಹಣ್ಣು- ½ ಕೆ.ಜಿ, ಬೆಲ್ಲ- ½ ಕೆ.ಜಿ, ತೆಂಗಿನಕಾಯಿ-1, ಕೊಬ್ಬರಿ-ಸ್ವಲ್ಪ, ತುಪ್ಪ, ದ್ರಾಕ್ಷಿ, ಗೋಡಂಬಿ, ಏಲಕ್ಕಿ.

### ಮಾಡುವ ವಿಧಾನ

ಮಾಡುವ ವಿಧಾನ: ಮೊದಲಿಗೆ ಚೆನ್ನಾಗಿ ಹಣ್ಣಾಗಿರುವ ನೇಂದ್ರ ಬಾಳೆಹಣ್ಣನ್ನು ತೆಗೆದುಕೊಂಡು ಚಿಕ್ಕ-ಚಿಕ್ಕ ತುಂಡುಗಳನ್ನಾಗಿ ಮಾಡಿ ತುಪ್ಪ ಮತ್ತು ನೀರು ಹಾಕಿ ಬಾಳೆಹಣ್ಣನ್ನು ಬೇಯಿಸಿ. ಚೆನ್ನಾಗಿ ಬೆಂದ ಮೇಲೆ ತಣಿಯಲು ಇಡಿ. ಒಂದು ಇಡಿ ತೆಂಗಿನಕಾಯಿಯ ಕಾಯಿಹಾಲು ತೆಗೆಯಬೇಕು. ಬಳಿಕ ಬೇಯಿಸಿದ ಬಾಳೆಹಣ್ಣನ್ನು ನುಣ್ಣಗೆ ರುಬ್ಬಿಕೊಳ್ಳಿ. ಬಳಿಕ ಈ ಪೇಸ್ಟ್ನ್ನು ಒಂದು ಪಾತ್ರೆಗೆ ಹಾಕಿ ಬೆಲ್ಲ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಬೇಕು. ಬೆಲ್ಲ ಎಲ್ಲ ಕರಗಿ ಚೆನ್ನಾಗಿ ಕುದಿ ಬಂದ ಬಳಿಕ ಕಾಯಿಹಾಲು ಹಾಕಿ ಮಿಕ್ಸ್ ಮಾಡಿ ಕುದಿ ಬರುವವರೆಗೆ ಹಾಗೆ ಬಿಡಿ, ಬಳಿಕ ಕುಟ್ಟಿ ಪುಡಿ ಮಾಡಿರುವಂತಹ ಏಲಕ್ಕಿ ಸೇರಿಸಿ. ಬಳಿಕ ಇನ್ನೊಂದು ಪಾತ್ರೆಗೆ ಹೆಚ್ಚಿಟ್ಟ ಸ್ವಲ್ಪ ಕೊಬ್ಬರಿ ತುಂಡನ್ನು ತುಪ್ಪದ ಜೊತೆ ಹುರಿಯಬೇಕು. ಇದು ಕೆಂಪಾದಾಗ ಗೋಡಂಬಿ, ದ್ರಾಕ್ಷಿ ಹಾಕಿ ಹುರಿಯಿರಿ. ನಂತರ ಪಾಯಸಕ್ಕೆ ಮಿಕ್ಸ್ ಮಾಡಿಕೊಂಡರೆ ಸವಿಯಲು ಬಾಳೆಹಣ್ಣಿನ ಪಾಯಸ ರೆಡಿ.

## ಅಣಬೆ ಪ್ರಯೋಜನ



### ಹೆಲ್ತ್ ಟಿಪ್ಸ್

ಅಣಬೆಗಳು ಆರೋಗ್ಯಕ್ಕೆ ತುಂಬಾ ಉತ್ತಮ. ಇದು ವಿಟಮಿನ್ ಡಿ ಯ ಆಹಾರದ ಮೂಲವಾಗಿದೆ. ಇದನ್ನು ಸೇವಿಸುವುದರಿಂದ ಏನೆಲ್ಲಾ ಪ್ರಯೋಜನಗಳಿವೆ ಎಂಬುದನ್ನು ತಿಳಿದುಕೊಳ್ಳಿ.

ಅಣಬೆಯಲ್ಲಿರುವ ವಿಟಮಿನ್ ಡಿ ಪೋಷಕಾಂಶ ಮೂಳೆಗಳನ್ನು ಬಲಪಡಿಸುತ್ತದೆ.

ಇದು ಕಡಿಮೆ ಕ್ಯಾಲೋರಿಯನ್ನು ಹೊಂದಿದ್ದು, ಇದನ್ನು ಸೇವಿಸಿದರೆ ಹಸಿವು ಕಡಿಮೆಯಾಗುತ್ತದೆ, ಇದರಿಂದ ತೂಕವನ್ನು ನಿಯಂತ್ರಿಸಬಹುದು.

ಅಣಬೆ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಇದು ಶೀತ, ಕಫದಂತಹ ಸಮಸ್ಯೆಗಳ ವಿರುದ್ಧ ಹೋರಾಡುತ್ತದೆ.

ಅಣಬೆ ಕೂದಲು ಮತ್ತು ಚರ್ಮದ ಆರೋಗ್ಯಕ್ಕೆ ತುಂಬಾ ಒಳ್ಳೆಯದು. ಇದನ್ನು ಸೇವಿಸುವುದರಿಂದ ಇದರಲ್ಲಿರುವ ಪೋಷಕಾಂಶ ಚರ್ಮ ಮತ್ತು ಕೂದಲಿನಿನ ಹೊಳಪಿಗೆ ಕಾರಣವಾಗುತ್ತದೆ. ಅಣಬೆ ಸೇವನೆಯಿಂದ ಕ್ಯಾನ್ಸರ್ ನಂತಹ ಮಾರಕ ಕಾಯಿಲೆಯಿಂದ ದೂರವಿರಬಹುದು. ಇದರಲ್ಲಿರುವ ಪೋಷಕಾಂಶ ಕ್ಯಾನ್ಸರ್ ಗಡ್ಡೆಗಳು ಬೆಳೆಯದಂತೆ ತಡೆಯುತ್ತವೆ.

## ಬೆಣ್ಣೆಯಿಂದ ನುಣುಪಾದ ತ್ವಚೆ

### ಬ್ಯೂಟಿ ಟಿಪ್ಸ್



ಚಳಿಗಾಲದಲ್ಲಿ ತ್ವಚೆ ಆರೈಕೆಗೆ ದುಬಾರಿ ಕ್ರೀಮ್ ಗಳೇ ಆಗಬೇಕಿಲ್ಲ. ಅಡುಗೆ ಮನೆಯಲ್ಲಿ ನಿತ್ಯ ಬಳಸುವ ಕೆಲವು ವಸ್ತುಗಳೂ ಸಾಕು. ಅದರಲ್ಲಿ ಬೆಣ್ಣೆಯೂ ಒಂದು. ಇದೊಂದು ತ್ವಚೆಯ ರಕ್ಷಣೆಯ ಕ್ರೀಮ್ ನಂತೆ ಕಾರ್ಯ ನಿರ್ವಹಿಸುತ್ತದೆ. ಚಳಿಗಾಲದಲ್ಲಿ ತುಟಿ ವಿಪರೀತ ಒಡೆಯುತ್ತಿದ್ದರೆ, ಒಣಗುತ್ತಿದ್ದರೆ ಹಾಗೂ ಸಿಪ್ಪೆ ಬಿಡುತ್ತಿದ್ದರೆ ದಿನಕ್ಕೆ ಮೂರರಿಂದ ನಾಲ್ಕು ಬಾರಿ ಬೆಣ್ಣೆ ಹಚ್ಚಿ. ತೆಳುವಾಗಿ ಹಚ್ಚಿದರೆ ಅಂದರೆ ಪಸೆ ಕಾಣಿಸಿಕೊಳ್ಳುವಂತೆ ಹಚ್ಚಿದರೆ ಸಾಕು. ಇನ್ನು ಚಳಿಗಾಲದಲ್ಲಿ ವಿಪರೀತ ಹಿಮ್ಮಡಿ ಒಡೆಯುವ ಸಮಸ್ಯೆ ಇರುವವರು ಬೆಣ್ಣೆಯನ್ನು ಮಲಗುವ ಮುನ್ನ ಸರಿಯಾಗಿ ಹಚ್ಚಿ ಪ್ಲಾಸ್ಟಿಕ್ ಕವರ್ ಕಟ್ಟಿ ಮಲಗಿ. ಬೆಳಗ್ಗೆದ್ದು ನೋಡಿದರೆ ಸೀಳಿದ ಕಾಲಿನ ಸಮಸ್ಯೆ ಹಾಗೂ ಅದರ ನೋವು ಕಡಿಮೆಯಾಗಿರುತ್ತದೆ. ನಿಮ್ಮ ತ್ವಚೆ ಒಣಗಿದ್ದರೆ, ಬಿರುಕು ಬಿಟ್ಟಿದ್ದರೆ ಅರ್ಧ ಚಮಚ ಬೆಣ್ಣೆಯನ್ನು ಅಂಗೈಯಲ್ಲಿ ಹಾಕಿ ಚೆನ್ನಾಗಿ ತಿಕ್ಕಿ. ಅದು ಕರಗಿ ನೀರಾಗುತ್ತಲೇ ಬಿರುಕು ಬಿಟ್ಟಲ್ಲಿಗೆ ತಿಕ್ಕಿ ನಯವಾಗಿ ಮಸಾಜ್ ಮಾಡಿ. ಇದರಿಂದ ನಿಮ್ಮ ಸಮಸ್ಯೆ ಬಹುತೇಕ ದೂರವಾಗುತ್ತದೆ.

## ಗೋವಾದಲ್ಲಿ ಏರ್ ಬಿಎನ್ ಬಿಯ ವೆಲ್ನೆಸ್, ಯೋಗ ಅಭಿಯಾನಕ್ಕೆ ಬಾಲಿವುಡ್ ಅಭಿನೇತ್ರಿ, ಸಾರಾ ಅಲಿ ಖಾನ್ ಹೋಸ್ಟ್



ಬಾಲಿವುಡ್ ನ ಖ್ಯಾತ ಅಭಿನೇತ್ರಿ, ಫಿಟ್ನೆಸ್ ಮತ್ತು ಟ್ರಾವೆಲ್ ಉತ್ಸಾಹಿಯಾಗಿರುವ ಸಾರಾ ಅಲಿ ಖಾನ್ ಅವರು ಇದೇ ಮೊದಲ ಬಾರಿಗೆ ವಿಶೇಷವಾದ ಯೋಗಕ್ಷೇಮ ಮತ್ತು ಯೋಗ (ವೆಲ್ನೆಸ್ ಮತ್ತು ಯೋಗ ರಿಟ್ರೀಟ್) ಅಭಿಯಾನವನ್ನು ಕ್ಯುರೇಟ್ ಮಾಡಲಿದ್ದಾರೆ. ಗೋವಾದಲ್ಲಿರುವ ಸೆರೆನ್ ಏರ್ ಬಿಎನ್ ಬಿಯಲ್ಲಿನ ಅತಿಥಿಗಳು, ಪ್ರವಾಸಿಗರಿಗಾಗಿ ಈ ಅಭಿಯಾನ ನಡೆಯಲಿದ್ದು, ಇದನ್ನು ಸೂರ್ಯನ ಪ್ರಖರತೆ ರೀತಿಯಲ್ಲೇ ಲ್ಯಾಂಡ್ ಸ್ಕೇಪ್ ಮಾಡಲಾಗಿದೆ. ಈ ರಿಟ್ರೀಟ್ ಅತ್ಯುತ್ತಮವಾಗಿದ್ದು, ಜನರ ಸಮಗ್ರ ಯೋಗಕ್ಷೇಮವನ್ನು ವಿಶ್ರಾಂತಿ ಮತ್ತು ಪೋಷಣೆ ಮಾಡಲು ಪರಿಪೂರ್ಣವಾದ ಪರಿಹಾರವನ್ನು ಒದಗಿಸುತ್ತದೆ.

ಸಾರಾ ಅಲಿಖಾನ್ ಅವರು ತಮ್ಮ ಎಡೆಬಿಡದ ಸಿನಿಮಾದ ವೃತ್ತಿಜೀವನದೊಂದಿಗೆ ಫಿಟ್ನೆಸ್ ಗಾಗಿ ತಮ್ಮ ಅಮೂಲ್ಯವಾದ ಸಮಯವನ್ನು ಮೀಸಲಿಟ್ಟಿದ್ದಾರೆ. ಈ ಮೂಲಕ ಜೀವನದಲ್ಲಿ ಸಮತೋಲನವನ್ನು ಕಾಯ್ದುಕೊಂಡಿರುವ ನಟಿ ಎಂಬ ಹೆಗ್ಗಳಿಕೆಯನ್ನು ಹೊಂದಿದ್ದಾರೆ. ಇದೀಗ ಸಾರಾ ಅವರು ಗೋವಾದಲ್ಲಿ ನಡೆಯುತ್ತಿರುವ ಏರ್ ಬಿಎನ್ ಬಿ ಕ್ಷೇಮ ಮತ್ತು ಯೋಗ ಅಭಿಯಾನದಲ್ಲಿ ಪಾಲ್ಗೊಳ್ಳುತ್ತಿದ್ದು, ಕಾರ್ಯಕ್ರಮಕ್ಕೆ ಅತ್ಯಂತ ಆಸಕ್ತಿ ಮತ್ತು ಉತ್ಸಾಹವನ್ನು ತರಲಿದ್ದಾರೆ. ಇಲ್ಲಿ ಆಗಮಿಸಲಿರುವ ಅತಿಥಿಗಳು ಅದ್ಭುತವಾದ ಪ್ರಕೃತಿ-ಪ್ರೇರಿತವಾದ ಅಭಯಾರಣ್ಯದಲ್ಲಿ ಸಾರಾ ಅವರೊಂದಿಗೆ ಯೋಗಾಭ್ಯಾಸವನ್ನು ಮಾಡಿ ಆನಂದಿಸಲಿದ್ದಾರೆ ಮತ್ತು ಸಾರಾ ಅವರ ವೈಯಕ್ತಿಕ ಸ್ವಾಸ್ಥ್ಯದ ಬಗ್ಗೆ ಆಚರಣೆಗಳ ಬಗ್ಗೆ ಮಾಹಿತಿಗಳನ್ನು ಪಡೆಯಲಿದ್ದಾರೆ. ಈ ಬಗ್ಗೆ ಮಾತನಾಡಿದ ಸಾರಾ ಅಲಿಖಾನ್ ಅವರು, ''ಗೋವಾದಲ್ಲಿ ನಡೆಯುತ್ತಿರುವ ಈ ವಿಶೇಷ ಕ್ಷೇಮ ಮತ್ತು ಯೋಗ ರಿಟ್ರೀಟ್ ಗೆ ಅತಿಥಿಗಳನ್ನು ಸ್ವಾಗತಿಸಲು ನಾನು ಉತ್ಸುಕಳಾಗಿದ್ದೇನೆ ಮತ್ತು ಇದನ್ನು ಕೇವಲ ಏರ್ ಬಿಎನ್ ಬಿ ಪ್ರಸ್ತುತಪಡಿಸುತ್ತಿರುವುದಕ್ಕೆ ನನಗೆ ಸಂತಸವಾಗಿದ್ದೇನೆ. ಪ್ರಕೃತಿಯ ಸೌಂದರ್ಯದಿಂದ ಸುತ್ತುವರಿದಿರುವ ಗೋವಾದ ರಿಟ್ರೀಟ್ ಸ್ಥಳವು ನಾವು ಒಟ್ಟಿಗೆ ಅರ್ಥಪೂರ್ಣವಾದ ನೆನಪುಗಳನ್ನು ಅಚ್ಚಳಿಯದೇ ಉಳಿಸುತ್ತದೆ. ಇಲ್ಲಿ ಮನಸ್ಸು, ದೇಹ ಮತ್ತು ಆತ್ಮವನ್ನು ಆಹ್ಲಾದಕರವಾಗಿಟ್ಟುಕೊಳ್ಳುವತ್ತ ಗಮನಹರಿಸಲು ಸಹಕಾರಿಯಾಗುತ್ತದೆ. ಈಮರೆಯಲಾಗದ ಸನ್ನಿವೇಶದಲ್ಲಿ ಜೀವನದ ಸರಳ ಸಂತೋಷಗಳನ್ನು ಅನುಭವಿಸಲು, ಕ್ಷೇಮ ಮತ್ತು ಯೋಗವನ್ನು ಮರುಸ್ಥಾಪಿಸಲು ಹಾಗೂ ಅದನ್ನು ಅಳವಡಿಸಿಕೊಳ್ಳಲು ಇದೊಂದು ಉತ್ತಮ ಅವಕಾಶವಾಗಿದೆ'' ಎಂದು ತಿಳಿಸಿದರು.

ಈ ಅಭಿಯಾನವನ್ನು ಆಯೋಜಿಸುವ ಸಲುವಾಗಿ ಏರ್ ಬಿಎನ್ ಬಿ ಗೋವಾ ಪ್ರವಾಸೋದ್ಯಮ ಇಲಾಖೆಯೊಂದಿಗೆ 2022 ರಲ್ಲಿ ಒಪ್ಪಂದಕ್ಕೆ ಸಹಿ ಹಾಕಿದೆ. ಈ ಕಾರ್ಯಕ್ರಮದ ಬಗ್ಗೆ ಮಾತನಾಡಿದ ಭಾರತ, ಸೌತ್ ಈಸ್ಟ್ ಏಷ್ಯಾ, ಹಾಂಕಾಂಗ್ ಮತ್ತು ತೈವಾನ್ ನಲ್ಲಿ ಏರ್ ಬಿಎನ್ ಬಿಯ ಪ್ರಧಾನ ವ್ಯವಸ್ಥಾಪಕ ಅಮನ್ ಪ್ರೀತ್ ಬಜಾಜ್ ಅವರು, ''ಏರ್ ಬಿಎನ್ ಬಿಯ ಇತ್ತೀಚಿನ ತಾರೆ ಸಾರಾ ಅವರನ್ನು ಸ್ವಾಗತಿಸಲು ನಮಗೆ ಅತ್ಯಂತ ಸಂತೋಷವಾಗುತ್ತದೆ. ಗೋವಾದಲ್ಲಿನ ಗಮ್ಯಸ್ಥಾನಗಳನ್ನು ಅನ್ವೇಷಣೆ ಮಾಡುವ ಸಂದರ್ಭದಲ್ಲಿ ವಿಶಿಷ್ಟವಾದ ಮತ್ತು ಪ್ರವಾಸಿಗರನ್ನು ತಲ್ಲೀನಗೊಳಿಸುವ ಅನುಭವವನ್ನು ಬಗಯಸುವ ಭಾರತೀಯ ಪ್ರಯಾಣಿಕರಿಗೆ ನೀಡಲು ಬಯಸಿದ್ದೇವೆ. ಇದಕ್ಕೆ ಪೂರಕವಾಗಿ ಇನ್ನಷ್ಟು ಉತ್ತೇಜನ ನೀಡುವ ನಿಟ್ಟನಲ್ಲಿ ನಾವು ಬಾಲಿವುಡ್ ನ ಸಂಸ್ಕೃತಿಯೊಂದಿಗೆ ಸಂಯೋಜನೆ ಮಾಡಲೆಂದೇ ಸಾರಾ ಅವರು ನಮ್ಮ ಜೊತೆ ಕೈಜೋಡಿಸಿದ್ದಾರೆ. ಈ ಮೂಲಕ ರಿಟ್ರೀಟ್ ಇತರರಿಗಿಂತ ಭಿನ್ನವಾದ ಅನುಭವ ಮತ್ತು ಭರವಸೆಯನ್ನು ನೀಡುತ್ತದೆ. ಇದಲ್ಲದೇ, ಈ ರಿಟ್ರೀಟ್ ಒಂದು ಅತ್ಯಾಕರ್ಷಕವಾದ ಉದಯೋನ್ಮುಖವಾದ ಪ್ರವಾಸ ಮತ್ತು ಪ್ರಯಾಣ ಪ್ರವೃತ್ತಿಯನ್ನು ಕ್ಷೇಮ ಪ್ರವಾಸೋದ್ಯಮದ ಒಂದು ಪಕ್ಷಿನೋಟವನ್ನು ನೀಡುತ್ತದೆ'' ಎಂದು ಅಭಿಪ್ರಾಯಪಟ್ಟರು.

ಗೋವಾ ಸರ್ಕಾರದ ಪ್ರವಾಸೋದ್ಯಮ ಸಚಿವ ರೋಹನ್ ಖೌಂಟೆ ಅವರು ಮಾತನಾಡಿ, ''ಒಂದು ವೆಲ್ನೆಸ್ ತಾಣವಾಗಿರುವ ಗೋವಾ ರಾಜ್ಯವು ವಿಕಸನವು ಅಸಾಧಾರಣವಾದ ವೈವಿಧ್ಯತೆಯನ್ನು ಹೊಂದಿದೆ. ಏರ್ ಬಿಎನ್ ಬಿ ಸಹಭಾಗಿತ್ವದಲ್ಲಿ ನಾವು ಗೋವಾ ರಾಜ್ಯವನ್ನು ಉತ್ತಮ ಗುಣಮಟ್ಟದ ಪ್ರವಾಸೋದ್ಯಮ ಮತ್ತು ಪ್ರಯಾಣಿಕರು ಅನ್ವೇಷಿಸಬಹುದಾದ, ಪಾಲನೆ ಮಾಡುವ ಮತ್ತು ಆನಂದಿಸಬಹುದಾದ ಅನುಭವಗಳಿಗಾಗಿ ಉತ್ತೇಜನ ನೀಡಲು ನಾವು ಬದ್ಧರಾಗಿದ್ದೇವೆ'' ಎಂದು ಭರವಸೆ ನೀಡಿದರು.

## ಮಕ್ಕಳ ದಿನಾಚರಣೆ: ಜೀವ ಉಳಿಸಲು 'ಸಹಾಯಕ್ಕೆ ಬರುವವರೆಗೆ ಸಹಾಯ ಮಾಡಿ' ಎಂಬ ಪ್ರತಿಜ್ಞೆಗೈದ 200 ಮಕ್ಕಳು





ಭಾರತದಲ್ಲಿ ಪ್ರತಿದಿನ, 165 ಮಕ್ಕಳು ಉದ್ದೇಶಪೂರ್ವಕವಲ್ಲದ ಗಾಯಗಳಿಂದ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ, ಇವುಗಳಲ್ಲಿ ಹೆಚ್ಚಿನವು ರಸ್ತೆ ಅಪಘಾತಗಳಿಂದ ಸಂಭವಿಸುತ್ತವೆ. ಈ ಸಾವುಗಳಲ್ಲಿ ಶೇ 88 ರಷ್ಟು ಶಾಲೆಗಳಿಗೆ ಹತ್ತಿರದಲ್ಲೇ ನಡೆಯುತ್ತವೆ ಎಂಬುದು ಆಘಾತಕಾರಿಯಾಗಿದೆ.

ಇದು ಸಮಾಜದಲ್ಲಿ ತರಬೇತಿ ಪಡೆದ ಪ್ರತಿಸ್ಪಂದಕರನ್ನು ಸಿದ್ಧವಾಗಿಡುವುದು ಎಷ್ಟು ನಿರ್ಣಾಯಕವಾಗಿದೆ ಎಂಬುದನ್ನು ಎತ್ತಿ ತೋರಿಸುತ್ತದೆ. ಈ ಸಮಸ್ಯೆಯನ್ನು ಪರಿಹರಿಸಲು, ಬೆಂಗಳೂರಿನ ಜೆಪಿ ನಗರದ ಆಸ್ಟರ್ ಆರ್ ವಿ ಆಸ್ಪತ್ರೆಯ ಮಕ್ಕಳ ವಿಭಾಗ ಮತ್ತು ಪಿಐಸಿಯು ವಿಭಾಗ ಮಕ್ಕಳ ದಿನಾಚರಣೆಯನ್ನು ಹೆಚ್ಚು ಪರಿಣಾಮಕಾರಿಯಾಗಿಸಲು ಸಕ್ರಿಯ ರಕ್ತಸ್ರಾವ ನಿಯಂತ್ರಣ (ಎಬಿಸಿ) ಗುರು ಅಭಿಯಾನವನ್ನು ಪ್ರಾರಂಭಿಸಿತು. ಮೈಕೋ ಲೇಔಟ್ನ ಪೊಲೀಸ್ ಇನ್ಸ್ಪೆಕ್ಟರ್ ರಾಜಣ್ಣ ಬಿ, ಸಿಎಂಆರ್ಐ ಗ್ರೀನ್ ಹೆಲ್ತ್ ಸರ್ವೀಸಸ್ನ ಕರ್ನಾಟಕ ರಾಜ್ಯ ಮುಖ್ಯಸ್ಥ ಹನುಮಂತ ಆರ್.ಜಿ, ಜಿವಿಕೆ 108 ಆಂಬ್ಯುಲೆನ್ಸ್ ವಿಭಾಗದ ಡಾ. ಪ್ರಮೋದ್, ಆರ್ ವಿ ನರ್ಸಿಂಗ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ. ಚೇತನ್ ಎಂ. ಆರ್, ಆಸ್ಟರ್ ಆರ್ ವಿಯ ಹೆಸರಾಂತ ವೈದ್ಯರು ಮತ್ತು ಸಿಬ್ಬಂದಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ನಮ್ಮ ದೇಶದ ಭವಿಷ್ಯದ ನಾಯಕರಾದ ವಿವಿಧ ಶಾಲೆಗಳ 200 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸಹಾಯಕ್ಕೆ ಬರುವವರೆಗೆ ಸಹಾಯ ಮಾಡಿ ಎಂದು ಪ್ರತಿಜ್ಞೆ ಮಾಡಿದರು ಮತ್ತು ಜೀವಗಳನ್ನು ಉಳಿಸುವ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸಲು ಎಬಿಸಿ ಸ್ವಯಂಸೇವಕರಾದರು.

ಈ ಸಂದರ್ಭದಲ್ಲಿ ಮಾತನಾಡಿದ ಆಸ್ಟರ್ ಆರ್ ವಿ ಆಸ್ಪತ್ರೆಯ ಮಕ್ಕಳ ಮತ್ತು ಮಕ್ಕಳ ತೀವ್ರ ನಿಗಾ ಘಟಕದ ಹಿರಿಯ ತಜ್ಞೆ ಡಾ. ಸುಜಾತಾ ತ್ಯಾಗರಾಜನ್, ಡಣಠಣ;ಅನಿಯಂತ್ರಿತ ರಕ್ತಸ್ರಾವವು ವೃತ್ತಿಪರರು ಸಹಾಯಕ್ಕೆ ಬರುವ ಮೊದಲು ಸಾವಿಗೆ ಕಾರಣವಾಗಬಹುದು. ಹಾಗಾಗಿ ಈ ರಕ್ತಸ್ರಾವವನ್ನು ತುರ್ತಾಗಿ ನಿಲ್ಲಿಸುವ ಮೂಲಕ ಜೀವಗಳನ್ನು ಉಳಿಸುವುದು ಅಗತ್ಯವಾಗಿದೆ. ಸಕ್ರಿಯ ರಕ್ತಸ್ರಾವ ನಿಯಂತ್ರಣ ಅಭಿಯಾನ ರಕ್ತಸ್ರಾವವನ್ನು ನಿಲ್ಲಿಸಲು ಆರು ಪ್ರಮುಖ ಹಂತಗಳೊಂದಿಗೆ ಪ್ರೇಕ್ಷಕರು ಅಥವಾ ಸಾಮಾನ್ಯ ವ್ಯಕ್ತಿಗಳನ್ನು ಸಜ್ಜುಗೊಳಿಸಲು ವಿನ್ಯಾಸಗೊಳಿಸಲಾದ ಉಚಿತ ತರಬೇತಿ ಕಾರ್ಯಕ್ರಮವಾಗಿದೆ. ಸ್ಪರ್ಧಿಗಳು ಈ ಆರು ಹಂತಗಳಲ್ಲಿ ಪರಿಣಾಮಕಾರಿಯಾಗಿ ಹೇಗೆ ನಿರ್ವಹಿಸುವುದು, ಮಾಡಬೇಕಾದ ಮತ್ತು ಮಾಡಬಾರದ ಕೆಲಸಗಳನ್ನು ಅರ್ಥಮಾಡಿಕೊಳ್ಳುತ್ತಾರೆ ಮತ್ತು ಎಬಿಸಿ ಸ್ವಯಂಸೇವಕರಾಗುತ್ತಾರೆ.

ಮಕ್ಕಳ ತೀವ್ರ ನಿಗಾ ಘಟಕದ ತಜ್ಞನಾಗಿ, ಅನೇಕ ಮಕ್ಕಳು ಆಸ್ಪತ್ರೆಗೆ ಬರುವ ಮೊದಲೇ ಸಾಯುವುದನ್ನು ನಾನು ನೋಡಿದ್ದೇನೆ. ಗಾಯಗೊಂಡ ಸಂತ್ರಸ್ತರನ್ನು ಪ್ರೇಕ್ಷಕರು ಸುತ್ತುವರೆದಿರುವುದನ್ನು ನೋಡುವುದು ನಿರಾಶಾದಾಯಕವಾಗಿದೆ, ಅವರಿಗೆ ಹೇಗೆ ಸಹಾಯ ಮಾಡಬೇಕೆಂದು ತಿಳಿದಿಲ್ಲ ಅಥವಾ ಭಾಗಿಯಾಗಲು ತುಂಬಾ ಹೆದರುತ್ತಾರೆ, ಪೊಲೀಸ್ ಅಥವಾ ಕಾನೂನು ಸಮಸ್ಯೆಗಳ ಬಗ್ಗೆ ಚಿಂತಿಸುತ್ತಾರೆ. ಕೆಲವರು ಜೀವ ಉಳಿಸಲು ಮುಂದಾಗುವ ಬದಲು ತಪ್ಪಾದ ಪ್ರಥಮ ಚಿಕಿತ್ಸೆ ಮಾಡುತ್ತಾರೆ ಅಥವಾ ವೀಡಿಯೊಗಳನ್ನು ತೆಗೆದುಕೊಳ್ಳುತ್ತಾರೆ. ಈ ಕಾರ್ಯಕ್ರಮದ ಮೂಲಕ ಜೀವ ಉಳಿಸಲು ಅಗತ್ಯವಾದ ರಕ್ತಸ್ರಾವ ನಿಯಂತ್ರಣ ವಿಧಾನಗಳೊಂದಿಗೆ ನಮ್ಮ ಸಮಾಜವನ್ನು ಸಬಲೀಕರಣಗೊಳಿಸುವ ಜವಾಬ್ದಾರಿಯನ್ನು ಅವರಿಗೆ ಅರ್ಥಮಾಡಿಸಲಾಗಿದೆ,'' ಎಂದು ಹೇಳಿದರು.

ಎಬಿಸಿ ಕಾರ್ಯಕ್ರಮ ಈಗಾಗಲೇ ಹೈದರಾಬಾದ್ನಲ್ಲಿ ಗಮನಾರ್ಹ ಯಶಸ್ಸು ಕಂಡಿದೆ, ಅಲ್ಲಿ 537 ತರಬೇತಿ ಪಡೆದ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಸೇರಿದಂತೆ 1,076 ಕ್ಕೂ ಹೆಚ್ಚು ಸ್ವಯಂಸೇವಕರು ಒಟ್ಟಾಗಿ 163 ಕ್ಕೂ ಹೆಚ್ಚು ಜೀವಗಳನ್ನು ಉಳಿಸಿದ್ದಾರೆ. ಈ ಪರಿಣಾಮಕಾರಿ ವಿಧಾನ ಗುಣಕ ಪರಿಣಾಮದ ಮೂಲಕ ಕಾರ್ಯನಿರ್ವಹಿಸುತ್ತದೆ, ಏಕೆಂದರೆ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ತಮ್ಮ ತರಬೇತಿಯನ್ನು ಕುಟುಂಬಗಳು ಮತ್ತು ನೆರೆಹೊರೆಯವರೊಂದಿಗೆ ಹಂಚಿಕೊಳ್ಳುತ್ತಾರೆ, ಅಗತ್ಯವಿರುವ ಸಮಯದಲ್ಲಿ ಸಹಾಯ ಮಾಡಲು ಸಿದ್ಧವಾಗಿರುವ 2,700 ಕ್ಕೂ ಹೆಚ್ಚು ಸಕ್ರಿಯ ಪ್ರತಿಸ್ಪಂದಕರ ಬಲವಾದ ಜಾಲವನ್ನು ರಚಿಸುತ್ತಾರೆ.

ಇಎಂಆರ್ಐ ಗ್ರೀನ್ ಹೆಲ್ತ್ ಸರ್ವೀಸಸ್ನ ಕರ್ನಾಟಕ ವಿಭಾಗದ ಮುಖ್ಯಸ್ಥ ಹನುಮಂತ್ ಆರ್. ಜಿ ಮಾತನಾಡಿ, ''ಆಸ್ಟರ್ ಆರ್ ವಿ ಆಸ್ಪತ್ರೆ ಬಿಟಿಎಂ ಲೇಔಟ್ನ ಶಾಂತಿನಿಕೇತನ ಶಿಕ್ಷಣ ಸಂಸ್ಥೆಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮ, ತುರ್ತು ಸಂದರ್ಭಗಳಲ್ಲಿ ಪ್ರತಿ ಕ್ಷಣವೂ ಮುಖ್ಯವಾಗಿದೆ ಮತ್ತು ತ್ವರಿತ ಪ್ರತಿಕ್ರಿಯೆ ಜೀವನ ಮತ್ತು ಸಾವಿನ ನಡುವಿನ ವ್ಯತ್ಯಾಸವನ್ನು ಅರ್ಥೈಸುತ್ತದೆ ಎಂಬ ಇದರ ಪರಿವರ್ತಕ ಸಾಮರ್ಥ್ಯವನ್ನು ಒತ್ತಿಹೇಳಿತು. ಎಬಿಸಿ-ಗುರು ಕಾರ್ಯಕ್ರಮ ಜನರಿಗೆ ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಲು ಅಗತ್ಯವಾದ ಪ್ರಾಯೋಗಿಕ ಕೌಶಲ್ಯಗಳನ್ನು ನೀಡುವ ಗುರಿ ಹೊಂದಿದೆ, ಸಹಾಯದ ವಿಳಂಬದಿಂದಾಗಿ ಯಾವುದೇ ಮಗು ಪ್ರಾಣ ಕಳೆದುಕೊಳ್ಳುವುದಿಲ್ಲ ಎಂದು ಖಚಿತಪಡಿಸುತ್ತದೆ. ನಮ್ಮ ಸಮುದಾಯಗಳನ್ನು ಸಬಲೀಕರಣಗೊಳಿಸುವ ಮೂಲಕ, ನಾವು ಸಾವುನೋವುಗಳ ಸಂಖ್ಯೆಯನ್ನು ಕಡಿಮೆ ಮಾಡಬಹುದು ಮತ್ತು ನಮ್ಮ ಶಾಲೆಗಳು ಮತ್ತು ನೆರೆಹೊರೆಗಳ ಸುತ್ತಲೂ ಸುರಕ್ಷಿತವಾತಾವರಣವನ್ನು ಸೃಷ್ಟಿಸಬಹುದು,'' ಎಂದು ಅಭಿಪ್ರಾಯಪಟ್ಟರು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಅನ್ಯ ಜನರಲ್ಲಿ ಪ್ರೀತಿ, ಅಪರಿಚಿತರಿಂದ ದೂರವಿರಿ, ಮನ ಶಾಂತಿ, ವಿದೇಶ ಯಾನ, ಭೋಜನ.

**ವೃಷಭ:** ವಿದ್ಯಾರ್ಥಿಗಳಲ್ಲಿ ಗೊಂದಲ, ನೀಚ ಜನರ ಸಹವಾಸ, ಅನಗತ್ಯ ತಿರುಗಾಟ, ರಾಜಕೀಯ ಕ್ಷೇತ್ರದಲ್ಲಿ ಮನಸ್ತಾಪ.

**ಮಿಥುನ:** ಮನಸ್ಸಿಗೆ ಚಿಂತೆ, ಕುಟುಂಬದಲ್ಲಿ ಅಶಾಂತಿ, ಕೋಪ ಜಾಸ್ತಿ, ದಾಂಪತ್ಯದಲ್ಲಿ ವಿರಸ, ಪಾಪ ಬುದ್ಧಿ.

**ಕಟಕ:** ವಿನಾಕಾರಣ ದ್ವೇಷ, ಹಣಕಾಸಿನ ತೊಂದರೆ, ಅಧಿಕ ಖರ್ಚು, ವಿದೇಶ ಪ್ರಯಾಣ, ಕೀರ್ತಿ ಲಾಭ.

**ಸಿಂಹ:** ಆಕಸ್ಮಿಕ ಲಾಭ, ವಾದ ವಿವಾದ, ದೇವತಾ ಕಾರ್ಯಗಳಲ್ಲಿ ಭಾಗಿ, ನಿಮ್ಮ ಹಣ ಪರರ ಪಾಲು ಎಚ್ಚರ.

**ಕನ್ಯಾ:** ಮಹಿಳೆಯರಿಗೆ ಲಾಭ, ವಾಸಗೃಹದಲ್ಲಿ ತೊಂದರೆ, ಅಭಿವೃದ್ಧಿ ಕುಂಠಿತ, ವಿಪರೀತ ಹಣವ್ಯಯ, ಅನಾರೋಗ್ಯ.

**ತುಲಾ:** ಆಪ್ತರೊಂದಿಗೆ ಸಂಕಷ್ಟ ಹೇಳಿಕೊಳ್ಳುವಿರಿ, ಮನೋವ್ಯಥೆ, ಸ್ವಯಂಕೃತ ಅಪರಾಧ, ವೈಮನಸ್ಸು.

**ವೃಶ್ಚಿಕ:** ವಿನಾಕಾರಣ ಯೋಚನೆ, ಸರ್ಕಾರಿ ಕೆಲಸಗಳಲ್ಲಿ ಜಯ, ಶತ್ರು ಭಾದೆ, ದೃಷ್ಟಿ ದೋಷದಿಂದ ತೊಂದರೆ.

**ಧನಸ್ಸು:** ಸ್ನೇಹಿತರಿಂದ ಸಹಾಯ, ದೂರ ಪ್ರಯಾಣ, ಸಲ್ಲದ ಅಪವಾದ, ಉದ್ಯಮಿಗಳಿಗೆ ಸುದಿನ.

**ಮಕರ:** ಋಣ ವಿಮೋಚನೆ, ಮನಸ್ಸಿಗೆ ಗೊಂದಲ, ಅನೇಕ ಜನರಿಗೆ ವಿವಾಹ ಯೋಗ, ದ್ರವ್ಯ ನಷ್ಟ.

**ಕುಂಭ:** ಇತರರ ಕಷ್ಟಗಳಿಗೆ ಸ್ಪಂದಿಸುವಿರಿ, ಶ್ರಮವಿಲ್ಲದೆ ಏನೋ ನಡೆಯುವುದಿಲ್ಲ, ತಾಳ್ಮೆಯಿಂದ ಇರಿ.

**ಮೀನ:** ನಿರೀಕ್ಷಿತ ಆದಾಯ, ಸುಖ ಭೋಜನ, ವಿವಾಹ ಯೋಗ, ಕೋಪ ಜಾಸ್ತಿ, ಧಾರ್ಮಿಕ ಕಾರ್ಯಗಳಲ್ಲಿ ಭಾಗಿ.

## ವಿಶ್ವ COPD ದಿನ

ವಿಶ್ವ ಸಿ.ಒ.ಪಿ.ಡಿ. ಪ್ರತಿ ವರ್ಷ ನವೆಂಬರ್ ಮೂರನೇ ಬುಧವಾರದಂದು ದಿನವನ್ನು ಆಚರಿಸಲಾಗುತ್ತದೆ. ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ ಒಂದು ರೀತಿಯ ತಡೆಗಟ್ಟುವ ಮತ್ತು ಚಿಕಿತ್ಸೆ ನೀಡಬಹುದಾದ ಪ್ರಗತಿಶೀಲ ಶ್ವಾಸಕೋಶದ ಕಾಯಿಲೆಯಾಗಿದ್ದು, ಇದು ದೀರ್ಘಾವಧಿಯ ಉಸಿರಾಟದ ಲಕ್ಷಣಗಳು ಮತ್ತು ಗಾಳಿಯ ಹರಿವಿನ ಮಿತಿಯಿಂದ ನಿರೂಪಿಸಲ್ಪಟ್ಟಿದೆ. ಇದರ ಮುಖ್ಯ ಲಕ್ಷಣಗಳೆಂದರೆ ಉಸಿರಾಟದ ತೊಂದರೆ ಮತ್ತು ಕೆಮ್ಮು, ಮತ್ತು ದೀರ್ಘಕಾಲದ ಕಫ ಉತ್ಪಾದನೆ. ಇದು ಪ್ರಗತಿಶೀಲ ಕಾಯಿಲೆಯಾಗಿದ್ದು ಅದು ಕಾಲಾನಂತರದಲ್ಲಿ ಹದಗೆಡುತ್ತದೆ, ದೈನಂದಿನ ಚಟುವಟಿಕೆಗಳಾದ ವಾಕಿಂಗ್ ಅಥವಾ ಡ್ರೆಸ್ಸಿಂಗ್ ಅನ್ನು ಹೆಚ್ಚು ಕಷ್ಟಕರವಾಗಿಸುತ್ತದೆ.

ಹಿಂದೆ, ವೈದ್ಯರು C.O.P.D ಸಾಧ್ಯತೆಯನ್ನು ವಿವರಿಸಲು ವಿಭಿನ್ನ ಪದಗಳನ್ನು ಬಳಸಿದ್ದಾರೆ. 1679 ರಲ್ಲಿ, ಸ್ವಿಸ್ ವೈದ್ಯ ಥಿಯೋಫಿಲ್ ಬೋನೆಟ್ ಬೃಹತ್ ಶ್ವಾಸಕೋಶಗಳು ಎಂದು ಉಲ್ಲೇಖಿಸಿದರು ಮತ್ತು 1769 ರಲ್ಲಿ ಇಟಾಲಿಯನ್ ಅಂಗರಚನಾಶಾಸ್ತ್ರಜ್ಞ ಜಿಯೋವಾನಿ ಮೊರ್ಗಾಗ್ನಿ 19 ಟರ್ಜಿಡ್ ಶ್ವಾಸಕೋಶದ ಪ್ರಕರಣಗಳನ್ನು ವರದಿ ಮಾಡಿದರು. 1814 ರಲ್ಲಿ, ದೀರ್ಘಕಾಲದ ಬ್ರಾಂಕೈಟಿಸ್ ಅನ್ನು ನಿಷ್ಕ್ರಿಯಗೊಳಿಸುವ ಆರೋಗ್ಯ ಸ್ಥಿತಿ ಮತ್ತು C.O.P.D ಯ ಭಾಗವೆಂದು ಮೊದಲು ಗುರುತಿಸಲಾಯಿತು. ಬ್ರಿಟಿಷ್ ವೈದ್ಯ ಚಾರ್ಲ್ಸ್ ಬಾಧಮ್ ಅವರಿಂದ. ನಡೆಯುತ್ತಿರುವ ಕೆಮ್ಮು ಮತ್ತು ಅತಿಯಾದ ಲೋಳೆಯನ್ನು ವಿವರಿಸಲು 'ಕ್ಯಾಟರ್ಹ್' ಎಂಬ ಪದವನ್ನು ಬಳಸಿದ ಮೊದಲ ವ್ಯಕ್ತಿ ಅವರು C.O.P.D ಉತ್ಪಾದಿಸುತ್ತದೆ. 1821 ರಲ್ಲಿ, ಸ್ಟೆತಸ್ಕೋಪ್ನ ಸಂಶೋಧಕ ರೆನೆ ಲಾನೆಕ್, ಸಿಒಪಿಡಿಯ ಮತ್ತೊಂದು ಅಂಶವಾಗಿ ಎಂಫಿಸೆಮಾವನ್ನು ಗುರುತಿಸಿದರು. 1800 ರ ದಶಕದ ಆರಂಭದಲ್ಲಿ ಧೂಮಪಾನವು ಸಾಮಾನ್ಯವಲ್ಲದ ಕಾರಣ, ಅವರು ವಾಯು ಮಾಲಿನ್ಯ ಮತ್ತು ಆನುವಂಶಿಕ ಅಂಶಗಳನ್ನು C.O.P.D ಯ ಬೆಳವಣಿಗೆಗೆ ಪ್ರಮುಖ ಕಾರಣಗಳಾಗಿ ಗುರುತಿಸಿದ್ದಾರೆ. 1846 ರಲ್ಲಿ, ಜಾನ್ ಹಚಿನ್ಸನ್ ಸ್ಪಿರೋಮೀಟರ್ ಅನ್ನು ಕಂಡುಹಿಡಿದರು, ಇದು ಪ್ರಮುಖ ಶ್ವಾಸಕೋಶದ ಸಾಮರ್ಥ್ಯವನ್ನು ಅಳೆಯುತ್ತದೆ ಮತ್ತು ಇದು ಇನ್ನೂ C.O.P.D ರೋಗನಿರ್ಣಯದಲ್ಲಿ ಅತ್ಯಗತ್ಯ ಸಾಧನವಾಗಿದೆ. ಜೂನ್ 1965 ರಲ್ಲಿ 9ನೇ ಆಸ್ಪೆನ್ ಎಂಫಿಸೆಮಾ ಸಮ್ಮೇಳನದಲ್ಲಿ ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಅಸ್ವಸ್ಥತೆ ಎಂಬ ಪದವನ್ನು ಬಳಸುವ ಮೊದಲ ವ್ಯಕ್ತಿ ಡಾ. ವಿಲಿಯಂ ಬ್ರಿಸ್ಕೋ. 1976 ರಲ್ಲಿ, ಚಾರ್ಲ್ಸ್ ಫ್ಲೆಚರ್, ವೈದ್ಯ, ಧೂಮಪಾನವನ್ನು ಸಿ.ಒ.ಪಿ.ಡಿ. ಅವರ ಪುಸ್ತಕದಲ್ಲಿ ದಿ ನ್ಯಾಚುರಲ್ ಹಿಸ್ಟರಿ ಆಫ್ ಕ್ರಾನಿಕ್ ಬ್ರಾಂಕೈಟಿಸ್ ಮತ್ತು ಎಂಫಿಸೆಮಾ. ಅವರು ಮತ್ತು ಅವರ ಸಹೋದ್ಯೋಗಿಗಳು ಧೂಮಪಾನವನ್ನು ನಿಲ್ಲಿಸುವುದು ಅ.ಔ.ಕ.ಆ ಯ ಪ್ರಗತಿಯನ್ನು ನಿಧಾನಗೊಳಿಸಲು ಸಹಾಯ ಮಾಡುತ್ತದೆ ಎಂದು ಕಂಡುಹಿಡಿದರು. ಹಿಂದೆ, ಆಮ್ಲಜನಕ ಚಿಕಿತ್ಸೆ, ಸ್ಟೀರಾಯ್ಡ್ ಚಿಕಿತ್ಸೆ ಮತ್ತು ವ್ಯಾಯಾಮವನ್ನು C.O.P.D ಯೊಂದಿಗಿನ ಜನರಿಗೆ ಅಪಾಯಕಾರಿ ಎಂದು ಪರಿಗಣಿಸಲಾಗಿದೆ. 1960 ರ ದಶಕದ ಆರಂಭದಲ್ಲಿ ಇನ್ಹೇಲರ್ಗಳು ಮತ್ತು ಯಾಂತ್ರಿಕ ವೆಂಟಿಲೇಟರ್ಗಳನ್ನು ಪರಿಚಯಿಸಲಾಯಿತು. ಪಲ್ಮನರಿ ಪುನರ್ವಸತಿ ಮತ್ತು ಮನೆಯ ಆರೈಕೆಯ ಪರಿಕಲ್ಪನೆಯನ್ನು ಒಂಬತ್ತನೇ ಆಸ್ಪೆನ್ ಎಂಫಿಸೆಮಾ ಸಮ್ಮೇಳನದಲ್ಲಿ ಪರಿಚಯಿಸಲಾಯಿತು. ಇಂದು, ಈ ವಿಧಾನಗಳ ಮೂಲಕ ದೀರ್ಘಕಾಲೀನ ಆಮ್ಲಜನಕ ಚಿಕಿತ್ಸೆಯು C.O.P.Dಯ ಕೋರ್ಸ್ ಅನ್ನು ಬದಲಾಯಿಸಲು ತಿಳಿದಿರುವ ಏಕೈಕ ಚಿಕಿತ್ಸೆಯಾಗಿದೆ. 1990 ರ ದಶಕದಲ್ಲಿ C.O.P.Dಅನ್ನು ನಿರ್ವಹಿಸಲು ಔಷಧಿಗಳ ಬಳಕೆಯಲ್ಲಿ ಏರಿಕೆ ಕಂಡುಬಂದಿದೆ.

# ಬ್ರಿಟಿಷ್ ಕೊಲಂಬಿಯಾದ ಡೆಪ್ಯುಟಿ ಪ್ರೀಮಿಯರ್ ಆಗಿ ನಿಕಿ ಶರ್ಮ ನೇಮಕ



**ಟೊರಂಟೊ:** ಕೆನಡಾದ ಬ್ರಿಟಿಷ್ ಕೊಲಂಬಿಯಾ ಪ್ರಾಂತದ ಡೆಪ್ಯುಟಿ ಪ್ರೀಮಿಯರ್ ಆಗಿ ಭಾರತೀಯ ಕೆನಡಿಯನ್ ನಿಕಿ ಶರ್ಮ ನೇಮಕಗೊಂಡಿರುವುದಾಗಿ ವರದಿಯಾಗಿದೆ.

ಬ್ರಿಟಿಷ್ ಕೊಲಂಬಿಯಾದ ಪ್ರೀಮಿಯರ್(ಭಾರತದ ರಾಜ್ಯಗಳಲ್ಲಿ ಮುಖ್ಯಮಂತ್ರಿಯ ಹುದ್ದೆ) ಡೇವಿಡ್ ಎಬಿ ಸೋಮವಾರ ಸಚಿವ ಸಂಪುಟವನ್ನು ಘೋಷಿಸಿದ್ದಾರೆ.

ಈ ಹಿಂದಿನ ಸರಕಾರದಲ್ಲಿ ಅಟಾರ್ನಿ ಜನರಲ್ ಆಗಿದ್ದ ನಿಕಿ ಶರ್ಮ ಆ ಹುದ್ದೆಯಲ್ಲಿ ಮುಂದುವರಿಯುವ ಜತೆಗೆ ಡೆಪ್ಯುಟಿ ಪ್ರೀಮಿಯರ್ ಆಗಿಯೂ ಭಡ್ತಿ ಪಡೆದಿದ್ದಾರೆ. ಬ್ರಿಟಿಷ್ ಕೊಲಂಬಿಯಾ ವಿಧಾನಸಭೆಗೆ ಆಯ್ಕೆಗೊಂಡಿರುವ ಭಾರತೀಯ ಕೆನಡಿಯನ್ ಸಮುದಾಯದ ಇತರ ಮೂವರನ್ನು ಸಚಿವ ಸಂಪುಟಕ್ಕೆ ಸೇರ್ಪಡೆಗೊಳಿಸಲಾಗಿದೆ. ರವಿ ಪರ್ಮಾರ್ಗೆ ಅರಣ್ಯ ಇಲಾಖೆ, ಜಗ್ರೂಪ್ ಬ್ರಾರ್ ಗೆ ಗಣಿ ಮತ್ತು ಖನಿಜ ಸಂಪನ್ಮೂಲ, ರವಿ ಕಹ್ಲಾನ್ಗೆ ವಸತಿ ಮತ್ತು ಪುರಸಭೆ ವ್ಯವಹಾರ ಇಲಾಖೆಯ ಸಚಿವ ಸ್ಥಾನ ನೀಡಲಾಗಿದೆ.



# ಪಾಕಿಸ್ತಾನದಿಂದ ಬಾಂಗ್ಲಾಕ್ಕೆ ಮೊದಲ ನೇರ ಸರಕು ಸಾಗಣೆ

**ಢಾಕ:** ಪಾಕಿಸ್ತಾನದ ಮೊದಲ ನೇರ ಸರಕು ಹಡಗು ಕಳೆದ ವಾರ ಬಾಂಗ್ಲಾದೇಶದ ಚಿತ್ತಗಾಂಗ್ ಬಂದರಿಗೆ ಆಗಮಿಸಿದೆ ಎಂದು ಚಿತ್ತಗಾಂಗ್ ಬಂದರು ಪ್ರಾಧಿಕಾರ ಹೇಳಿದೆ. ಬಾಂಗ್ಲಾದಲ್ಲಿ ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರಕಾರದ ಅಡಿಯಲ್ಲಿ ವಿದೇಶಿ ಸಂಬಂಧಗಳಲ್ಲಿ ಬದಲಾವಣೆಯನ್ನು ಇದು ಸೂಚಿಸುತ್ತದೆ ಎಂದು ವಿಶ್ಲೇಷಿಸಲಾಗಿದೆ. 1971ರಲ್ಲಿ ಸ್ವಾತಂತ್ರ್ಯ ಪಡೆದ ನಂತರ ಬಾಂಗ್ಲಾದೇಶಕ್ಕೆ ಪಾಕಿಸ್ತಾನದಿಂದ ಇದು ಮೊದಲ ನೇರ ಸರಕು ಸಾಗಣೆಯಾಗಿದೆ. ಕರಾಚಿ ಬಂದರಿನಿಂದ ನಮ್ಮ ಜವಳಿ ಮತ್ತು ಸೆರಾಮಿಕ್ ಕೈಗಾರಿಕೆಗಳಿಗೆ ಕಚ್ಚಾವಸ್ತುಗಳನ್ನು ಸಾಗಿಸಲಾಗಿದೆ ಎಂದು ಚಿತ್ತಗಾಂಗ್ ಬಂದರು ಪ್ರಾಧಿಕಾರದ ಅಧಿಕಾರಿ ಹೇಳಿದ್ದಾರೆ. 1971ರಲ್ಲಿ ಪಶ್ಚಿಮ ಪಾಕಿಸ್ತಾನ ಮತ್ತು ಪೂರ್ವ ಪಾಕಿಸ್ತಾನಗಳ ನಡುವೆ ಯುದ್ಧ ನಡೆದು ಪೂರ್ವ ಪಾಕಿಸ್ತಾನವು ಬಾಂಗ್ಲಾದೇಶ ಎಂಬ ಹೆಸರಿನಲ್ಲಿ ಸ್ವತಂತ್ರ ದೇಶವಾಗಿದೆ. ಇದುವರೆಗೆ ಪಾಕಿಸ್ತಾನದಿಂದ ಬಾಂಗ್ಲಾದೇಶಕ್ಕೆ ಸರಕುಗಳನ್ನು ಶ್ರೀಲಂಕಾ, ಸಿಂಗಾಪುರ ಅಥವಾ ಮಲೇಶ್ಯಾದಂತಹ ಮೂರನೇ ದೇಶದ ಮೂಲಕ ಹಡಗಿನಲ್ಲಿ ಸಾಗಿಸಲಾಗುತ್ತಿತ್ತು. ನೇರ ಸರಕು ಸಾಗಣೆಯು ಸಾಗಣೆ ವೆಚ್ಚ ಮತ್ತು ಸಮಯವನ್ನು ಕಡಿಮೆಗೊಳಿಸುತ್ತದೆ. ಇದು ಪ್ರದೇಶದಾದ್ಯಂತ ಹೆಚ್ಚು ಸಂಯೋಜಿತ ವ್ಯಾಪಾರ ಜಾಲಗಳನ್ನು ಹೆಚ್ಚಿಸುವತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಬಾಂಗ್ಲಾದೇಶದಲ್ಲಿರುವ ಹೈಕಮಿಷನರ್ ಅಹ್ಮದ್ ಮರೂಫ್ ಹೇಳಿದ್ದಾರೆ.

# ಹಿಜ್ಬುಲ್ಲಾ ವಿರುದದ ಕಾರ್ಯಾಚರಣೆ ನಿಲ್ಲದು : ನೆತನ್ಯಾಹು

**ಜೆರುಸಲೇಂ:** ಲೆಬನಾನ್ ನಲ್ಲಿ ಕದನ ವಿರಾಮ ಒಪ್ಪಂದ ಏರ್ಪಟ್ಟರೂ ಲೆಬನಾನ್ ಮೂಲದ ಹಿಜ್ಬುಲ್ಲಾ ಗುಂಪಿನ ವಿರುದ್ಧದ ಕಾರ್ಯಾಚರಣೆಯನ್ನು ಇಸ್ರೇಲ್ ಮುಂದುವರಿಸುತ್ತದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. 'ಹಾಳೆಗಳಲ್ಲಿ ಕದನ ವಿರಾಮ ಒಪ್ಪಂದಕ್ಕೆ ಸಹಿ ಹಾಕುವುದು ಮಹತ್ವದ ವಿಷಯವಲ್ಲ. ಉತ್ತರ ಇಸ್ರೇಲ್ನಲ್ಲಿ ನಮ್ಮ ಭದ್ರತೆಯನ್ನು ಖಚಿತಪಡಿಸುವುದು ಮುಖ್ಯವಾಗಿದೆ. ಹಿಜ್ಬುಲ್ಲಾ ದಾಳಿಯ ವಿರುದ್ಧ ಮತ್ತು ಅವರು ಮರು ಸಂಘಟಿತರಾಗದಂತೆ ಖಚಿತಪಡಿಸಿಕೊಳ್ಳಲು ನಮ್ಮ ಕಾರ್ಯಾಚರಣೆಯನ್ನು ವ್ಯವಸ್ಥಿತವಾಗಿ ಮುಂದುವರಿಸಲಿದ್ದೇವೆ. ಕದನ ವಿರಾಮದ ಬಳಿಕವೂ ಕಾರ್ಯಾಚರಣೆ ಮುಂದುವರಿಯಲಿದೆ. ಕದನ ವಿರಾಮ ಏರ್ಪಟ್ಟರೂ ಅದನ್ನು ಹಿಜ್ಬುಲ್ಲಾ ಗೌರವಿಸುತ್ತದೆ ಎಂಬುದಕ್ಕೆ ಯಾವುದೇ ನಿದರ್ಶನಗಳಿಲ್ಲ ' ಎಂದು ಇಸ್ರೇಲ್ ಸಂಸತ್ನಲ್ಲಿ ಮಾತನಾಡಿದ ನೆತನ್ಯಾಹು ಹೇಳಿರುವುದಾಗಿ ವರದಿಯಾಗಿದೆ. ಈ ಮಧ್ಯೆ, ಕದನ ವಿರಾಮದ ಕುರಿತು ಅಮೆರಿಕ ಮುಂದಿರಿಸಿದ ಪ್ರಸ್ತಾಪವನ್ನು ಲೆಬನಾನ್ ಸರಕಾರ ಬಹುತೇಕ ಅನುಮೋದಿಸಿದ್ದು, ಅಮೆರಿಕಕ್ಕೆ ಪ್ರತಿಕ್ರಿಯಿಸುವ ಮೊದಲು ಅಂತಿಮ ಹಂತದ ಪರಿಶೀಲನೆಯಲ್ಲಿ ತೊಡಗಿದೆ ಎಂದು ಲೆಬನಾನ್ ಅಧಿಕಾರಿಯನ್ನು ಉಲ್ಲೇಖಿಸಿ ಎಎಫ್ಪಿ ಸುದ್ದಿಸಂಸ್ಥೆ ವರದಿ ಮಾಡಿದೆ. ಕದನ ವಿರಾಮ ಒಪ್ಪಂದದ ಬಳಿಕ ಇಸ್ರೇಲ್-ಲೆಬನಾನ್ ಗಡಿ ಸನಿಹ ಹಿಜ್ಬುಲ್ಲಾದ ಉಪಸ್ಥಿತಿ ಇರಬಾರದು ಎಂದು ಇಸ್ರೇಲ್ ಪಟ್ಟುಹಿಡಿದಿದೆ.



# ನೈಸರ್ಗಿಕ ವಿಪತ್ತು ನಿರ್ವಹಣೆ: ಒಡಿಶಾದಲ್ಲಿ ರಿಲಯನ್ಸ್ ಫೌಂಡೇಶನ್ - ಯುಎನ್ ಇಂಡಿಯಾ ಸಭೆ

**ಭುವನೇಶ್ವರ:** ನೈಸರ್ಗಿಕ ವಿಪತ್ತುಗಳ ಸಮಯದಲ್ಲಿ ತ್ವರಿತ ಪ್ರತಿಕ್ರಿಯೆಯನ್ನು ಬಲಪಡಿಸಲು ರಿಲಯನ್ಸ್ ಫೌಂಡೇಶನ್ ಮತ್ತು ವಿಶ್ವಸಂಸ್ಥೆ (ಭಾರತ) ಒಡಿಶಾದಲ್ಲಿ ಸಮ್ಮೇಳನವನ್ನು ಆಯೋಜಿಸಿದೆ. ಸಮ್ಮೇಳನದ ವಿಷಯ 'ತ್ವರಿತ ಕ್ರಮಕ್ಕೆ ಆರಂಭಿಕ ಎಚ್ಚರಿಕೆ - ಬಹು ವಿಪತ್ತು, ಬಹು ಮಧ್ಯಸ್ಥಗಾರರ ವಿಧಾನ: ಕರಾವಳಿ ಪರಿಸರ ವ್ಯವಸ್ಥೆಗಳಿಂದ ಕಲಿಕೆಗಳು'. ತಜ್ಞರು ಕರಾವಳಿ ಪರಿಸರ ವ್ಯವಸ್ಥೆಯ ಸೂಕ್ಷ್ಮತೆಗಳ ಬಗ್ಗೆ ತಮ್ಮ ಅನುಭವಗಳು ಮತ್ತು ಸಲಹೆಗಳನ್ನು ಹಂಚಿಕೊಂಡರು.

ಕಾರ್ಯಕ್ರಮದ ಮುಖ್ಯ ಅತಿಥಿ, ಒಡಿಶಾದ ಕಂದಾಯ ಮತ್ತು ವಿಪತ್ತು ನಿರ್ವಹಣಾ ಸಚಿವ ಶ್ರೀ ಸುರೇಶ್ ಪೂಜಾರಿ ಮಾತನಾಡಿ 'ಮುಂಚಿತ ಎಚ್ಚರಿಕೆ ವ್ಯವಸ್ಥೆಯನ್ನು ಬಲಪಡಿಸಲು ನಾವು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿದ್ದೇವೆ. ಒಡಿಶಾ ಸರ್ಕಾರವು ವಿವಿಧ ಮಧ್ಯಸ್ಥಗಾರರ ಸಹಯೋಗದೊಂದಿಗೆ ನೈಸರ್ಗಿಕ ವಿಪತ್ತುಗಳ ಪರಿಣಾಮವನ್ನು ತಗ್ಗಿಸುವ ಪ್ರಯತ್ನಗಳನ್ನು ಮಾಡುತ್ತಿದೆ' ಎಂದರು.

ರಿಲಯನ್ಸ್ ಫೌಂಡೇಶನ್ನ ಸಿಇಒ ಜಗನ್ನಾಥ್ ಕುಮಾರ್ ಮಾತನಾಡಿ, 'ಹವಾಮಾನ ಬದಲಾವಣೆಯಿಂದಾಗಿ ಹೆಚ್ಚುತ್ತಿರುವ ವಿಪತ್ತುಗಳ ಪರಿಣಾಮವನ್ನು ತಗ್ಗಿಸಲು ನಿಖರವಾದ ಎಚ್ಚರಿಕೆಗಳ ಅಗತ್ಯವಿದೆ. ಸಮುದಾಯಗಳನ್ನು ರಕ್ಷಿಸಲು ನಾವು ಹೊಸ ಎಚ್ಚರಿಕೆ ವ್ಯವಸ್ಥೆಗಳನ್ನು ಜಾರಿಗೆ ತರುತ್ತಿದ್ದೇವೆ' ಎಂದು ಹೇಳಿದರು.

ಭಾರತದಲ್ಲಿನ ಯುಎನ್ ರೆಸಿಡೆಂಟ್ ಕೋಆರ್ಡಿನೇಟರ್ ಶೋಂಬಿ ಶಾರ್ಪ್ ಮಾತನಾಡಿ, 'ರಿಲಯನ್ಸ್ ಫೌಂಡೇಶನ್ ಸಹಭಾಗಿತ್ವದಲ್ಲಿ ಯುಎನ್ ಇಂದು ಆಯೋಜಿಸಿರುವ ಸಭೆ ಡಿಆರ್ಆರ್ ಕುರಿತ ಸರಣಿ ಸಭೆಗಳಲ್ಲಿ ಮೊದಲನೆಯದು. ಸಮುದಾಯ ಸುರಕ್ಷತೆಯನ್ನು ಬಲಪಡಿಸಲು ನಾವು ಸರ್ಕಾರ, ನಾಗರಿಕ ಸಮಾಜ ಮತ್ತು ರಿಲಯನ್ಸ್ ಫೌಂಡೇಶನ್ ನಂತಹ ಪಾಲುದಾರರೊಂದಿಗೆ ಕೆಲಸ ಮಾಡುತ್ತಿದ್ದೇವೆ' ಎಂದರು.ಅಸ್ತಿತ್ವದಲ್ಲಿರುವ ಎಚ್ಚರಿಕೆ ವ್ಯವಸ್ಥೆಗಳ ಪರಿಣಾಮಕಾರಿತ್ವ ಮತ್ತು ಅವುಗಳನ್ನು ಮತ್ತಷ್ಟು ಸುಧಾರಿಸುವ ನಿಟ್ಟಿನಲ್ಲಿ ತಜ್ಞರು ಸಮ್ಮೇಳನದಲ್ಲಿ ಚರ್ಚಿಸಿದರು. ತ್ವರಿತ ಪ್ರತಿಕ್ರಿಯೆಗಾಗಿ ಹವಾಮಾನ ದತ್ತಾಂಶವನ್ನು ಸಾಮಾಜಿಕ-ಜನಸಂಖ್ಯಾ ಮಾಹಿತಿಯೊಂದಿಗೆ ಸಂಯೋಜಿಸುವ ಮೂಲಕ ಸಮಗ್ರ ಎಚ್ಚರಿಕೆ ವ್ಯವಸ್ಥೆಯನ್ನು ರಚಿಸಬಹುದು ಎಂದು ತಜ್ಞರು ಅಭಿಪ್ರಾಯ ಪಟ್ಟರು. ಜೀವಗಳು ಮತ್ತು ಜೀವನೋಪಾಯಗಳ ರಕ್ಷಣೆಗಾಗಿ ಉತ್ತಮ ನೀತಿ ಫಲಿತಾಂಶಗಳ ಮೇಲೆ ಕೆಲಸ ಮಾಡುವ ಗುರಿಯನ್ನು ಸಮ್ಮೇಳನ ಹೊಂದಿದೆ.




# ಭಾರತ ರಷ್ಯಾ ಬಂಧ ಮತ್ತಷ್ಟು ದೃಢ

**ರಷ್ಯಾ:** ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಶೀಘ್ರದಲ್ಲೇ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಅವರ ಭೇಟಿಗೆ ನಾವು ದಿನಾಂಕ ನಿಗದಿ ಮಾಡುವ ತಯಾರಿಯಲ್ಲಿದ್ದೇವೆ ಎಂದು ಕ್ರೆಮ್ಲಿನ್ ಪತ್ರಿಕಾ ಕಾರ್ಯದರ್ಶಿ ಡಿಮಿಟ್ರಿ ಪೆಸ್ಕೋವ್ ಹೇಳಿದ್ದಾರೆ. ಪ್ರಧಾನಿಕ್ ಮೋದಿ ರಷ್ಯಾ ಹಾಗೂ ಉಕ್ರೇನ್ ನಡುವಿನ ಯುದ್ಧದ ಕುರಿತು ಮಾಸ್ಕೋದಲ್ಲಿ ಮಾತನಾಡಿದ ನಂತರದಲ್ಲಿ ಇದು ಪುಟಿನ್ ರ ಮೊದಲ ಭೇಟಿಯಾಗಿರಲಿದೆ.

ಭಾರತ ಹಾಗೂ ರಷ್ಯಾ ಎರಡೂ ದೇಶಗಳು ಈ ಭೇಟಿಯ ಸಾಧ್ಯತೆಯನ್ನು ಎದುರು ನೋಡುತ್ತಿದ್ದು, ಆದರೆ ಇನ್ನು ಯಾವುದನ್ನೂ ಅಂತಿಮಗೊಳಿಸಲಾಗಿಲ್ಲ ಎಂದು ಹೇಳಿದ್ದಾರೆ. 2023ರ ಜುಲೈನಲ್ಲಿ ಮಾಸ್ಕೋದಲ್ಲಿ ಉಭಯ ನಾಯಕರು ಭೇಟಿಯಾಗಿ ಮಾತುಕತೆ ನಡೆಸಿದ ವೇಳೆ, ಪ್ರಧಾನಿ ನರೇಂದ್ರ ಮೋದಿ ರಷ್ಯಾ ಅಧ್ಯಕ್ಷರ ಪುಟಿನ್ ರನ್ನ ಭಾರತಕ್ಕೆ ಭೇಟಿ ನೀಡುವಂತೆ ಆಹ್ವಾನಿಸಿದ್ದರು.

ಇದೇ ವೇಳೆ ಯುದ್ಧಭೂಮಿಯಲ್ಲಿ ಶಾಂತಿ ಇಲ್ಲ ಎಂದು ನಾನು ನಂಬುತ್ತೇನೆ ಮತ್ತು ಮಾತುಕತೆಯ ಮೂಲಕ ಮಾತ್ರ ಯುದ್ಧಕ್ಕೆ ಪರಿಹಾರಗಳನ್ನು ಕಂಡುಕೊಳ್ಳಬಹುದು ಎಂದು ಮೋದಿ ಜುಲೈ 9 ರಂದು ತಮ್ಮ ಭಾಷಣದ ಆರಂಭದಲ್ಲಿ ಪುಟಿನ್ ಗೆ ಪರೋಕ್ಷವಾಗಿ ಹೇಳಿದ್ದರು.



# ಪಾಕಿಸ್ತಾನದಲ್ಲಿ ಪೋಲಿಯೋ ಕೇಸ್ ಪತ್ತೆ

**ಇಸ್ಲಾಮಾಬಾದ್:** ಪಾಕಿಸ್ತಾನದ ರಾಷ್ಟ್ರೀಯ ತುರ್ತು ಕಾರ್ಯಾಚರಣೆ ಕೇಂದ್ರ(ಓಇಔಅ) ಮತ್ತೊಂದು ಪೋಲಿಯೊ ಪ್ರಕರಣವನ್ನು ವರದಿ ಮಾಡಿದೆ, ಈ ವರ್ಷ ಒಟ್ಟು ಪ್ರಕರಣಗಳ ಸಂಖ್ಯೆಯನ್ನು 50 ಕ್ಕೆ ಏರಿಕೆಯಾಗಿದೆ.

NEOC ಪ್ರಕಾರ, ನ್ಯಾಷನಲ್ ರೆಫರೆನ್ಸ್ ಲ್ಯಾಬ್ ಖೈಬರ್ ಪಖ್ತುಂಕ್ವಾದಲ್ಲಿನ ಟ್ಯಾಂಕ್ ಜಿಲ್ಲೆಯ 20 ತಿಂಗಳ ಹುಡುಗಿಯನ್ನು ಒಳಗೊಂಡ ಇತ್ತೀಚಿನ ಪ್ರಕರಣವನ್ನು ಗುರುತಿಸಿದೆ.

ವೈಲ್ಡ್ ಪೋಲಿಯೊವೈರಸ್ ಟೈಪ್ 1ಇರುವಿಕೆಯನ್ನು ಪರೀಕ್ಷೆಗಳು ದೃಢಪಡಿಸಿವೆ. ಇದು ಈ ವರ್ಷ ಟ್ಯಾಂಕ್ನಿಂದ ವರದಿಯಾದ ಎರಡನೇ ಪೋಲಿಯೊ ಪ್ರಕರಣವಾಗಿದೆ, ಅದೇ ಜಿಲ್ಲೆಯಲ್ಲಿ ಜುಲೈನಿಂದ ಪ್ರಕರಣಕ್ಕೆ ಅನುವಂಶಿಕ ಸಂಪರ್ಕವನ್ನು ಸ್ಥಾಪಿಸಲಾಗಿದೆ. ಬಲೂಚಿಸ್ತಾನ್ ಪ್ರಾಂತ್ಯವು ಈ ವರ್ಷ 24 ಪ್ರಕರಣಗಳು ವರದಿಯಾಗಿವೆ, ನಂತರ ಸಿಂಧ್ 13, ಖೈಬರ್ ಪಖ್ತುಂಖ್ವಾ 11, ಮತ್ತು ಪಂಜಾಬ್ ಮತ್ತು ಇಸ್ಲಾಮಾಬಾದ್ ತಲಾ ಒಂದು ಪ್ರಕರಣವನ್ನು ದಾಖಲಿಸಿದೆ. ವೈರಸ್ ಹರಡುವಿಕೆಯನ್ನು ನಿಗ್ರಹಿಸಲು, ವಿಶೇಷವಾಗಿ ಹೆಚ್ಚಿನ ಅಪಾಯದ ಪ್ರದೇಶಗಳಲ್ಲಿ ಪೋಲಿಯೊ ಲಸಿಕೆ ಅಭಿಯಾನದ ಕೈಗೊಳ್ಳಲು ಅಧಿಕಾರಿಗಳು ಮುಂದಾಗಿದ್ದಾರೆ. ಪಾಕಿಸ್ತಾನದಲ್ಲಿ ಪೋಲಿಯೊ ಪ್ರಕರಣಗಳ ಹೆಚ್ಚಳವು ಜಾಗತಿಕ ಕಳವಳಕ್ಕೆ ಕಾರಣವಾಗಿದೆ. ಅಂತರರಾಷ್ಟ್ರೀಯ ಸಂಸ್ಥೆಗಳು ವೈರಸ್ ಹರಡುವುದನ್ನು ತಡೆಯಲು ತುರ್ತು ಕ್ರಮಗಳನ್ನು ಜಾರಿಗೆ ತರಲು ಪಾಕಿಸ್ತಾನಕ್ಕೆ ಕರೆ ನೀಡಿವೆ. ನವೆಂಬರ್ 15 ರಂದು ಪಾಕಿಸ್ತಾನವು 49 ನೇ ಪ್ರಕರಣವನ್ನು ವರದಿ ಮಾಡಿದೆ.



# ಶ್ರೀ ಭೂಮಿ ಎಂದು ಹೆಸರು ಬದಲಿಸಿದ ಅಸ್ಸಾಂ ಸರ್ಕಾರ !

**ಅಸ್ಸಾಂ :** ಇಲ್ಲಿನ ಕರೀಮ್ ಗಂಜ್ ಜಿಲ್ಲೆಗೆ ಅಸ್ಸಾಂ ಸರ್ಕಾರ ಹೆಸರು ಬದಲಾವಣೆ ಮಾಡಿದ್ದು, ಇನ್ಮುಂದೆ ಈ ಜಿಲ್ಲೆಯನ್ನು ಶ್ರೀ ಭೂಮಿ ಎಂದು ಮರುನಾಮಕರಣ ಮಾಡಲಾಗಿದೆ ಎಂದು ಅಧಿಕೃತವಾಗಿ ಘೋಷಿಸಲಾಗಿದೆ.

ಅಸ್ಸಾಂ ಮುಖ್ಯಮಂತ್ರಿ ಡಾ.ಹಿಮಂತ ಬಿಸ್ವಾ ಶರ್ಮಾ ಇಂದು (ನ.19) ನಡೆಸಿದ ಕ್ಯಾಬಿನೆಟ್ ಸಭೆಯಲ್ಲಿ ಈ ನಿರ್ಣಯ ಕೈಗೊಂಡಿದ್ದು, ಸಭೆಯ ನಂತರ ಈ ನಿರ್ಧಾರವನ್ನು ಪ್ರಕಟಿಸಿದ್ದಾರೆ. ಇಷ್ಟು ಮಾತ್ರವಲ್ಲದೆ ಅಸ್ಸಾಂ ನ ಇನ್ನು ಹಲವು ಗ್ರಾಮಗಳ ಹೆಸರುಗಳನ್ನು ಇದೇ ರೀತಿಯ ಬದಲಾವಣೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಅಸ್ಸಾಂ ಮುಖ್ಯಮಂತ್ರಿ ಡಾ. ಹಿಮಂತ ಬಿಸ್ವಾ ಶರ್ಮಾ, 100 ವರ್ಷಗಳ ಹಿಂದೆ ಗುರು ರವೀಂದ್ರನಾಥ ಠಾಗೋರ್ ಅವರು ಅಸ್ಸಾಂನ ಆಧುನಿಕ ಕರೀಂಗಂಜ್ ಜಿಲ್ಲೆಯನ್ನು ಶ್ರೀಭೂಮಿ, ಅಂದ್ರೆ ಮಹಾ ಲಕ್ಷ್ಮಿಯ ನಾಡು ಎಂದು ಬಣ್ಣಿಸಿದ್ದಾರೆ. ಇಂದು ಅಸ್ಸಾಂ ಕ್ಯಾಬಿನೆಟ್ ನಮ್ಮ ಜನರ ಈ ಬಹುಕಾಲದ ಬೇಡಿಕೆಯನ್ನು ಈಡೇರಿಸಿದೆ ಎಂದು ತಿಳಿಸಿದ್ದಾರೆ.




# ಯುದ್ಧ ಸನ್ನದ್ಧರಾಗಿ: ನಾಗರಿಕರಿಗೆ ಸ್ವೀಡನ್, ಫಿನ್ ಲ್ಯಾಂಡ್ ಎಚ್ಚರಿಕೆ!

**ಸ್ಟಾಕ್ಹೋಮ್:** ರಷ್ಯಾ ಮತ್ತು ಉಕ್ರೇನ್ ನಡುವಿನ ಕಾಳಗ ತೀವ್ರಗೊಂಡಿರುವಂತೆಯೇ ''ಯುದ್ಧಕ್ಕೆ ಸನ್ನದ್ಧರಾಗಿ' ಎಂದು ಸ್ವೀಡನ್, ಫಿನ್ಲ್ಯಾಂಡ್ ತಮ್ಮ ದೇಶದ ನಾಗರಿಕರಿಗೆ ಮನವಿ ಮಾಡಿವೆ. ಸ್ವೀಡನ್ನಲ್ಲಿ 50 ಲಕ್ಷ ಕೈಪಿಡಿಗಳನ್ನು ಸಿದ್ಧಗೊಳಿಸಿ ಹಂಚಲು ಶುರು ಮಾಡಿದ್ದರೆ, ಫಿನ್ ಲ್ಯಾಂಡ್ ಸರ್ಕಾರ ಈ ಉದ್ದೇಶಕ್ಕಾಗಿಯೇ ಪ್ರತ್ಯೇಕ ವೆಬ್ಸೈಟ್ ಅನ್ನು ಶುರು ಮಾಡಿದೆ. 2ನೇ ಪ್ರಪಂಚ ಮಹಾಯುದ್ಧ ವೇಳೆ ಮೊದಲ ಬಾರಿಗೆ ಅದನ್ನು ಸಿದ್ಧಪಡಿಸಲಾಗಿತ್ತು. ಮುಂದಿನ 2 ವಾರಗಳಲ್ಲಿ ಸ್ವೀಡನ್ ನಿವಾಸಿಗಳಿಗೆ 32 ಪುಟಗಳ ಪರಿಷ್ಕೃತ ಕೈಪಿಡಿ ಮನೆಗಳಿಗೆ ತಲುಪಲಿದೆ.2022ರಲ್ಲಿ ಉಕ್ರೇನ್ ವಿರುದ್ಧ ರಷ್ಯಾ ದಾಳಿ ನಡೆಸಿದ ಸಂದರ್ಭದಿಂದಲೇ ಸ್ವೀಡನ್ನಲ್ಲಿ ''ತುರ್ತಾಗಿ ಯುದ್ಧದ ಸಂದರ್ಭ ಬಂದರೆ ಮಾಡಬೇಕಾಗಿರುವುದೇನು' ಎಂಬ ಶೀರ್ಷಿಕೆ ಇರುವ ಕರಪತ್ರ ಸಿದ್ಧಗೊಳಿಸಿತ್ತು.



# ರಷ್ಯಾ ಮೇಲೆ ಉಕ್ರೇನ್ ದಾಳಿ

**ಮಾಸ್ಕೋ/ಕೈವ್:** ರಷ್ಯಾದ ಮೇಲೆ ದೀರ್ಘ ಶ್ರೇಣಿಯ ಕ್ಷಿಪಣಿಗಳನ್ನು ಬಳಸಲು ಅಮೆರಿಕ ಒಪ್ಪಿಗೆ ನೀಡಿದ ಬೆನ್ನಲ್ಲೇ ಉಕ್ರೇನ್ ಅಮೆರಿಕ ನಿರ್ಮಿತ ಕ್ಷಿಪಣಿಗಳಿಂದ ದಾಳಿ ನಡೆಸಿದೆ. ಒಟ್ಟು 6 ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ತನ್ನ ಮೇಲೆ ಹಾರಿಸಿದೆ ಎಂದು ರಷ್ಯಾದ ರಕ್ಷಣಾ ಸಚಿವಾಲಯ ಹೇಳಿಕೊಂಡಿದೆ.

ಉಕ್ರೇನ್ ಗಡಿಯಿಂದ ಸುಮಾರು 130 ಕಿಮೀ ದೂರದಲ್ಲಿರುವ ಬ್ರಿಯಾನ್ಸ್ಕ ಪ್ರದೇಶದ ಕರಾಚೆವ್ ನಗರದಲ್ಲಿರುವ ರಷ್ಯಾದ ಮಿಲಿಟರಿ ಸೌಲಭ್ಯ ಗುರಿಯಾಗಿಸಿ ಈ ದಾಳಿ ನಡೆದಿದೆ. ರಷ್ಯಾ ಸೇನೆಯನ್ನ ಗುರಿಯಾಗಿಸಿ ಉಕ್ರೇನ್ ಇದೇ ಮೊದಲ ಬಾರಿಗೆ ಈ ೦ಖಿಂಅಒಖ ಬ್ಯಾಲಿಸ್ಟಿಕ್ ಕ್ಷಿಪಣಿ ಪ್ರಯೋಗ ಮಾಡಿದ್ದು, ಕಾರ್ಯಾಚರಣೆ ಯಶಸ್ವಿಯಾಗಿದೆ ಎಂದು ಉಕ್ರೇನ್ ಹೇಳಿಕೊಂಡಿರುವುದಾಗಿ ವರದಿಗಳು ತಿಳಿಸಿವೆ.

ಉಕ್ರೇನ್ನ ಇಂಧನ ಮೂಲಸೌಕರ್ಯವನ್ನು ಗುರಿಯಾಗಿಸಿ ರಷ್ಯಾ ಸೇನೆ ಭಾನುವಾರ 120 ಕ್ಷಿಪಣಿಗಳನ್ನು ಹಾರಿಸಿತ್ತು. ಇದರಿಂದ ಇಬ್ಬರು ನಾಗರಿಕರು ಮೃತಪಟ್ಟಿದ್ದರು.

**1,000 ದಿನಗಳಲ್ಲಿ 10 ಲಕ್ಷ ಮಂದಿ ಸಾವು:** 2022ರ ಫೆಬ್ರವರಿ 24ರಂದು ಶುರುವಾದ ರಷ್ಯಾ-ಉಕ್ರೇನ್ ನಡುವಿನ ಯುದ್ಧ ಬರೋಬ್ಬರಿ ಒಂದು ಸಾವಿರ ದಿನಗಳನ್ನು ಪೂರೈಸಿದೆ. ಈ ಘನಘೋರ ಯುದ್ಧದಲ್ಲಿ ಈವರೆಗೂ ಅಂದಾಜು 10 ಲಕ್ಷ ಮಂದಿ ಬಲಿ ಆಗಿದ್ದಾರೆ. ಲಕ್ಷಾಂತರ ಮಂದಿ ಗಾಯಗೊಂಡಿದ್ದಾರೆ. ಉಕ್ರೇನ್ ಜನಸಂಖ್ಯೆ ಶೇ.25ರಷ್ಟು ಮಂದಿ ಇಲ್ಲವಾಗಿದ್ದಾರೆ. ರಷ್ಯಾ ಜನಸಂಖ್ಯೆಯೂ ಇಳಿಮುಖವಾಗಿದೆ ಎಂದು ಸ್ಥಳೀಯ ಸುದ್ದಿಸಂಸ್ಥೆಗಳು ವರದಿ ಮಾಡಿವೆ. ಉಕ್ರೇನ್ನ 40 ಲಕ್ಷ ಮಂದಿ ನಿರಾಶ್ರಿತರಾಗಿದ್ದಾರೆ. 60 ಲಕ್ಷ ಮಂದಿ ವಿದೇಶಗಳಲ್ಲಿ ಆಶ್ರಯ ಪಡೆದಿದ್ದಾರೆ. ಇಷ್ಟೆಲ್ಲಾ ಆದ್ರೂ ಈ ಭೀಕರ ಯುದ್ಧ ನಿಲ್ಲುವಂತೆ ಕಾಣ್ತಿಲ್ಲ. ಇದು ಯುರೋಪ್ ಇತರೆಡೆಗಳಿಗೂ ಹಬ್ಬುವ ಆತಂಕವಿದೆ. ರಷ್ಯಾ ದಾಳಿ ನಡೆಸಬಹುದು.. ಔಷಧಿ, ಬೇಬಿ ಫುಡ್ ಸ್ಟಾಕ್ ಮಾಡಿಕೊಳ್ಳಿ ಎಂದು ನ್ಯಾಟೋ ಕೂಟ ಅಲರ್ಟ್ ಮಾಡಿದೆ.

ಈ ಹೊತ್ತಲ್ಲೇ ಅಣ್ವಸ್ತ್ರಗಳ ಬಳಕೆಗೆ ಅನುಮತಿಸುವ ನಿಯಮಗಳನ್ನು ಸರಳೀಕರಿಸುವ ಕಡತಕ್ಕೆ ರಷ್ಯಾ ಅಧ್ಯಕ್ಷ ಪುಟಿನ್ ಸಹಿ ಹಾಕಿದ್ದಾರೆ. ಅಂದ ಹಾಗೇ, ಜನವರಿ ಆರಂಭದಲ್ಲಿ ಪುಟಿನ್ ಭಾರತ ಪ್ರವಾಸ ಕೈಗೊಳ್ಳಲಿದ್ದಾರೆ. ಆದ್ರೆ, ದಿನಾಂಕ ಇನ್ನೂ ನಿಗದಿ ಆಗಿಲ್ಲ ಎಂದು ಕ್ರೆಮ್ಲಿನ್ ತಿಳಿಸಿದೆ.

# 100 ಕೋಟಿ ರೂ. ಸ್ಕ್ಯಾಮ್: ದೆಹಲಿಯಲ್ಲಿ ಚೀನಾ ಪ್ರಜೆ ಅರೆಸ್ಟ್

**ನವದೆಹಲಿ:** 100 ಕೋಟಿ ರೂ. ಮೊತ್ತದ ಬೃಹತ್ ಸೈಬರ್ ವಂಚನೆ ಪ್ರಕರಣದಲ್ಲಿ ಭಾಗಿಯಾಗಿರುವ ಚೀನಾ ಪ್ರಜೆ ಫಾಂಗ್ ಚೆಂಜಿನ್ನನ್ನು ದೆಹಲಿಯಲ್ಲಿ ಇಂದು (ಮಂಗಳವಾರ) ಸೈಬರ್ ಸೆಲ್ ಪೊಲೀಸರು ಬಂಧಿಸಿದ್ದಾರೆ.

ಪೊಲೀಸರ ಮಾಹಿತಿ ಪ್ರಕಾರ, ಆರೋಪಿ ಫಾಂಗ್ ಚೆಂಜಿನ್ ವಾಟ್ಸಾಪ್ ಗ್ರೂಪ್ಗಳ ಮೂಲಕ ಆನ್ಲೈನ್ ಸ್ಟಾಕ್ ಟ್ರೇಡಿಂಗ್ ಹಗರಣಗಳಲ್ಲಿ ಭಾಗಿಯಾಗಿದ್ದ. ಸಂತ್ರಸ್ತರಲ್ಲಿ ಒಬ್ಬರಾದ ಸುರೇಶ್ ಕೋಳಿಚಿಯಿಲ್ ಅಚ್ಯುತನ್ ಅವರು ಸೈಬರ್ ಕ್ರೈಂ ಪೋರ್ಟಲ್ನಲ್ಲಿ 43.5 ಲಕ್ಷ ರೂ. ವಂಚಿಸಿದ್ದಾನೆ ಎಂದು ದೂರು ನೀಡಿದ ನಂತರ ಈ ಘಟನೆ ಬೆಳಕಿಗೆ ಬಂದಿದೆ. ದೂರಿನ ಪ್ರಕಾರ, ಅವರನ್ನು ವಂಚನೆಯ ಷೇರು ಮಾರುಕಟ್ಟೆಯ ತರಬೇತಿ ಅವಧಿಗಳಿಗೆ ಆಮಿಷವೊಡ್ಡಲಾಯಿತು. ನಂತರ ಹಣವನ್ನು ಹಲವಾರು ವಹಿವಾಟುಗಳಲ್ಲಿ ಹೂಡಿಕೆ ಮಾಡುವಂತೆ ಹೇಳಿ ವಂಚನೆ ಎಸಗಲಾಗಿದೆ. ನಂತರ ಈ ಹಣವನ್ನು ವಂಚಕರು ನಿಯಂತ್ರಿಸಲ್ಪಡುವ ಹಲವು ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಲಾಯಿತು ಎಂದು ಹೇಳಿದ್ದಾರೆ. ಏಪ್ರಿಲ್ನಲ್ಲಿ 1.25 ಲಕ್ಷ ರೂ. ವಂಚನೆ ಮಾಡಲಾಗಿದೆ. ರಾಷ್ಟ್ರ ರಾಜಧಾನಿಯ ಮುಂಡ್ಕಾದಲ್ಲಿರುವ ಮಹಾಲಕ್ಷ್ಮಿ ಟ್ರೇಡರ್ಸ್ ಹೆಸರಿನಲ್ಲಿ ಬ್ಯಾಂಕ್ ಖಾತೆ ಇತ್ತು. ಅಪರಾಧಕ್ಕೆ ಸಂಬಂಧಿಸಿದ ಮೊಬೈಲ್ ಫೋನ್ ಕೂಡ ಪತ್ತೆಯಾಗಿದೆ. ಇದು ಆರೋಪಿ ಚೆಂಜಿನ್ನನ್ನು ಗುರುತಿಸಲು ಸಹಾಯವಾಯಿತು. ಆರೋಪಿಗಳು ದೆಹಲಿಯ ಸಫ್ದರ್ಜಂಗ್ ಎನ್ಕ್ಲೇವ್ನಲ್ಲಿ ವಾಸವಾಗಿದ್ದರು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಅಪರಾಧಗಳನ್ನು ನಡೆಸಲು ಬಳಸಲಾದ ಫೋನ್ನಲ್ಲಿ ಚೆಂಜಿನ್ ಮತ್ತು ಅವನ ಸಹಚರರ ನಡುವೆ ವಾಟ್ಸಾಪ್ ಸಂಭಾಷಣೆಗಳು ಸೇರಿದಂತೆ ಹಲವಾರು ಸಾಕ್ಷಿಗಳು ಸಿಕ್ಕಿದೆ. ಈ ಸಾಕ್ಷಿ ಮೇರೆಗೆ ಆತನನ್ನು ಬಂಧಿಸಲಾಗಿದೆ. ಆರೋಪಿಯು ವಂಚನೆಗೆ ಬಳಸಲಾದ ಮೊಬೈಲ್ ಸಂಖ್ಯೆಗೆ ರೀಚಾರ್ಜ್ ಮಾಡುವಂತೆ ತನ್ನ ಸಹಾಯಕನಿಗೆ ಸೂಚಿಸಿದ್ದಾನೆ. ಸೈಬರ್ ಕ್ರೈಮ್ ಪೋರ್ಟಲ್ನಲ್ಲಿ ಕನಿಷ್ಠ 17 ದೂರುಗಳನ್ನು ದಾಖಲಿಸಲಾಗಿದೆ.



# ತಿರುಮಲದಲ್ಲಿ ಅನ್ಯಧರ್ಮೀಯರಿಗೆ ಗೇಟ್ಪಾಸ್

**ತಿರುಮಲ:** ಹಿಂದೂಗಳ ಪಾಲಿನ ಪವಿತ್ರ ಪುಣ್ಯಕ್ಷೇತ್ರ.. ಪ್ರತಿ ಹಿಂದೂ ಕೂಡ ಜೀವನದಲ್ಲಿ ಒಮ್ಮೆಯಾದ್ರೂ ಈ ತಿರುಮಲದ ವೆಂಕಟೇಶ್ವರನ ದರ್ಶನ ಮಾಡೇ ಮಾಡ್ತಾನೆ.. ಸಂಕಟ ಬಂದಾಗಂತೂ ಮೊದಲ ನೆನಪಾಗೋದು ವೆಂಕಟರಮಣನೇ.. ಆದ್ರೆ ಕೆಲ ದಿನಗಳ ಹಿಂದೆ ಇದೇ ವೆಂಕಟೇಶ್ವರನಿಗೇ ಸಂಕಷ್ಟ ಎದುರಾಗಿತ್ತು. ಇಡೀ ತಿರುಮಲವೇ ಅಪವಿತ್ರ ಆಗಿತ್ತು. ಭಕ್ತರ ನಂಬಿಕೆಗೆ ಭಾರಿ ಪೆಟ್ಟುಬಿದ್ದಿತ್ತು.. ಇದಾದ ಬಳಿಕ ಟಿಟಿಡಿ ಹೊಸ ನಿರ್ಧಾರವೊಂದನ್ನ ಕೈಗೊಂಡಿದೆ.. ತಿಮ್ಮಪ್ಪನ ಸನ್ನಿಧಿಯಲ್ಲಿ ಇನ್ಮುಂದೆ ಹಿಂದೂಗಳಷ್ಟೇ ಕೆಲಸ ಮಾಡ್ತಾರೆ.. ಅನ್ಯಧರ್ಮೀಯರಿಗೆ ಗೇಟ್ಪಾಸ್ ಕೊಡಲಾಗಿದೆ? ತಿರುಪತಿ ದೇವಸ್ಥಾನ ಭಾರತದ ಪ್ರಸಿದ್ಧ ದೇವಸ್ಥಾನ. ಇಷ್ಟೇ ಅಲ್ಲ ಶ್ರೀಮಂತ ದೇವಸ್ಥಾನ ಅನ್ನೋ ಹೆಗ್ಗಳಿಕೆಗೂ ಪಾತ್ರವಾಗಿದೆ. ಆದರೆ ಕೆಲ ತಿಂಗಳ ಹಿಂದೆ ತಿರುಪತಿಯ ಪ್ರಸಾದ ಲಡ್ಡುವಿನಲ್ಲಿ ದನದ ಕೊಬ್ಬು, ಮೀನಿನ ಎಣ್ಣೆ ಬಳಸಲಾಗಿದೆ ಅನ್ನೋ ಆರೋಪ ಕೋಲಾಹಲ ಸೃಷ್ಟಿಸಿತ್ತು. ಇದಕ್ಕೆ ಹಿಂದೂಯೇತರ ಸರ್ಕಾರ, ಆಡಳಿತ ಮಂಡಳಿ ಸದಸ್ಯರು ಕಾರಣ ಅನ್ನೋ ಆರೋಪವೂ ಕೇಳಿಬಂದಿತ್ತು. ಈ ವಿವಾದದ ಬಳಿಕ ಹಿಂದೂ ದೇವಸ್ಥಾನದಲ್ಲಿ ಹಿಂದೂಯೇತರ ನೌಕರರು, ಸದಸ್ಯರಿಗೆ ಅವಕಾಶ ನೀಡಬಾರದು ಅನ್ನೋ ಕೂಗು ಜೋರಾಗಿತ್ತು. ಇದೀಗ ದೇಗುಲದಲ್ಲಿನ ಹಿಂದೂಯೇತರ ನೌಕರರು, ಆಡಳಿತ ಮಂಡಳಿ ಸದಸ್ಯರಿಗೆ ಗೇಟ್ ಪಾಸ್ ನೀಡಲು ಆದೇಶಿಸಿದೆ. ಈ ಕುರಿತು ಸರ್ಕಾರಕ್ಕೆ ಸೂಚಿಸಿದೆ. ಶೀಘ್ರದಲ್ಲೇ ಈ ಕುರಿತು ಸರ್ಕಾರ ಅಧಿಕೃತ ಪ್ರಕಟಣೆ ಹೊರಡಿಸುವಂತೆ ಕೋರಿದೆ. ಹಿಂದೂ ದೇವಸ್ಥಾನದಲ್ಲಿ ಹಿಂದೂಯೇತರರಿಗೆ ಅವಕಾಶ ನೀಡುವುದು ಸರಿಯಲ್ಲ. ಹಿಂದೂ ದೇವರ ಮೇಲೆ ನಂಬಿಕೆ ಇಲ್ಲದವರು ದೇಗುಲದಲ್ಲಿ ಶ್ರದ್ಧಾ ಭಕ್ತಿಯಿಂದ ಕೆಲಸ ಮಾಡಲು ಸಾಧ್ಯವಿಲ್ಲ ಎಂದು ಟಿಟಿಡಿ ಚೇರ್ಮನ್ ಬಿಆರ್ ನಾಯ್ಡು ಹೇಳಿದ್ದಾರೆ. ಟಿಟಿಡಿ ಈ ನಿರ್ಧಾರದಿಂದ ದೇವಸ್ಥಾನದ 700 ಖಾಯಂ ಉದ್ಯೋಗಿಗಳ ಪೈಕಿ 300 ಮಂದಿ ಅನ್ಯ ಧರ್ಮೀಯ ಉದ್ಯೋಗಿಗಳು ಕೆಲಸ ಕಳೆದುಕೊಳ್ಳಲಿದ್ದಾರೆ.

# ನ್ಯೂಜಿಲ್ಯಾಂಡ್ನಲ್ಲಿ ಸರ್ಕಾರದ ವಿರುದ್ಧ ತಿರುಗಿಬಿದ್ದ ಮಾವೋರಿಗಳು



**ವೆಲ್ಲಿಂಗ್ಟನ್:** ಸ್ಥಳೀಯ ಜನಾಂಗವಾದ ಮಾವೋರಿ ಹಾಗೂ ನ್ಯೂಜಿಲ್ಯಾಂಡ್ ಸರ್ಕಾರದ ನಡುವೆ ಭಾರೀ ತಿಕ್ಕಾಟ ಏರ್ಪಟ್ಟಿದೆ. ಮಾವೋರಿ ಜನಸಂಖ್ಯೆಯ ಮೇಲೆ ಪರಿಣಾಮ ಬೀರುವ ಸರ್ಕಾರದ ನೀತಿಗಳಿಗಾಗಿ ಸಮುದಾಯದ ಸದಸ್ಯರ ಬೃಹತ್ ಪ್ರತಿಭಟನೆ ನಡೆದಿದೆ

ಇಲ್ಲಿನ ಪಾರ್ಲಿಮೆಂಟ್ ಎದುರು ನಡೆದ ಪ್ರತಿಭಟನೆಯಲ್ಲಿ ಸಾವಿರಾರು ಜನರು ಧ್ವಜಗಳೊಂದಿಗೆ ಬೀದಿಗಿಳಿದು ಪ್ರತಿಭಟಿಸಿದರು.ಅದಲ್ಲದೇ ವಿಶೇಷ ಮಾವೋರಿ ಉಡುಗೆ ತೊಟ್ಟು, ಗರಿಗಳಿರುವ ಶಿರಸ್ತ್ರಾಣ ಧರಿಸಿ, ಮಾವೋರಿ ಆಯುಧಗಳನ್ನು ಹಿಡಿದು ಪ್ರತಿಭಟನೆ ನಡೆಸಿದರು.

ಪ್ರತಿಭಟನಾಕಾರರು ಬ್ರಿಟಿಷ್ ಕಾಲದ ಟ್ರೀಟಿ ಆಫ್ ವೈತಾಂಗಿಯ ತಿದ್ದುಪಡಿಯನ್ನು ವಿರೋಧಿಸಿ ಬೀದಿಗಿಳಿದಿದ್ದು, ನೂರಾರು ಮಾವೊರಿ ಬುಡಕಟ್ಟು ಜನರ ಹಕ್ಕುಗಳನ್ನು ಕಸಿಯಲಾಗಿದೆ ಎಂದು ಆರೋಪಿಸಿ ಪ್ರತಿಭಟಿಸಿದ್ದಾರೆ

184 ವರ್ಷ ಹಳೆಯ ಒಪ್ಪಂದದ ತಿದ್ದುಪಡಿಯನ್ನು ವಿರೋಧಿಸುತ್ತಿರುವ ಮಾವೋರಿಗಳು ಇದು ನಮ್ಮ ಅಸ್ಮಿತೆಗೆ ಧಕ್ಕೆಯುಂಟುಮಾಡುವ ಪ್ರಯತ್ನ ಎಂದು ಕಿಡಿಕಾರಿದ್ದಾರೆ. ಇಲ್ಲಿನ ಹೆಚ್ಚಿನ ಪಕ್ಷಗಳು ಈ ಮಸೂದೆಗೆ ಮತ ಹಾಕುವ ನಿರೀಕ್ಷೆ ಇಲ್ಲದಿರುವುದರಿಂದ ಇದು ಅಂಗೀಕಾರವಾಗುವ ನಿರೀಕ್ಷೆಯಿಲ್ಲ. ಆದರೂ ಮಸೂದೆಯ ತಿದ್ದುಪಡಿಯ ವಿಚಾರವೇ ನ್ಯೂಜಿಲ್ಯಾಂಡ್ನಲ್ಲಿ ರಾಜಕೀಯ ಕ್ರಾಂತಿಯನ್ನು ಹುಟ್ಟುಹಾಕಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ತೆಲುಗು ನಟ ಸತ್ಯದೇವ್ ಮೀಟ್ಸ್ ಶಿವಣ್ಣ

ತೆಲುಗು ನಟ ಸತ್ಯದೇವ್ ಮತ್ತು ಡಾಲಿ ನಟನೆಯ 'ಜೀಬ್ರಾ' ಸಿನಿಮಾ ಇದೇ ನ.22ರಂದು ರಿಲೀಸ್‌ಗೆ ಸಜ್ಜಾಗಿದೆ. ಪ್ರಚಾರ ಕಾರ್ಯದಲ್ಲಿ ಬ್ಯುಸಿಯಿರುವ 'ಜೀಬ್ರಾ' ಚಿತ್ರತಂಡ ಇದೀಗ ಬೆಂಗಳೂರಿನ ಶಿವಣ್ಣ ನಿವಾಸಕ್ಕೆ ಭೇಟಿ ಕೊಟ್ಟಿದೆ. ಶಿವಣ್ಣರನ್ನು ನಟ ಸತ್ಯದೇವ್ ಭೇಟಿಯಾಗಿದ್ದಾರೆ.

ನಿನ್ನೆ ಸಂಜೆ ಬೆಂಗಳೂರಿನಲ್ಲಿ 'ಜೀಬ್ರಾ' ಸಿನಿಮಾದ ಪ್ರೀ ರಿಲೀಸ್ ಕಾರ್ಯಕ್ರಮವನ್ನು ಚಿತ್ರತಂಡ ಆಯೋಜಿಸಿದೆ. ಹಾಗಾಗಿ ಇಡೀ ಟೀಮ್ ಬೆಂಗಳೂರಿಗೆ ಆಗಮಿಸಿದೆ. ಇದರ ನಡುವೆ ಸತ್ಯದೇವ್ ಟೀಮ್ ಶಿವಣ್ಣರನ್ನು ಭೇಟಿಯಾಗಿ ಕುಶಲೋಪರಿ ವಿಚಾರಿಸಿದ್ದಾರೆ. ಈ ವೇಳೆ, ಶಿವಣ್ಣ ಅವರು ಸತ್ಯದೇವ್ ನಟನೆಯ 'ಜೀಬ್ರಾ' ಸಿನಿಮಾಗೆ ಶುಭಹಾರೈಸಿದ್ದಾರೆ.

ಇನ್ನೂ 'ಜೀಬ್ರಾ' ಸಿನಿಮಾ ಇದೇ ನ.22ಕ್ಕೆ ಬಹಭಾಷೆಗಳಲ್ಲಿ ರಿಲೀಸ್ ಆಗುತ್ತಿದೆ. ಸಿನಿಮಾದಲ್ಲಿ ಡಾಲಿ, ಸತ್ಯದೇವ್, ಅಮೃತಾ ಅಯ್ಯಂಗಾರ್ ಸೇರಿದಂತೆ ಅನೇಕರು ನಟಿಸಿದ್ದಾರೆ.



# ಗುಲಾಬಿ ಹಿಡಿದು ಪೋಸ್ ಕೊಟ್ಟ 'ಸಿಂಗಾರ ಸಿರಿ' ಸಪ್ತಮಿ

'ಕಾಂತಾರ' ಚಿತ್ರದ ನಟಿ ಸಪ್ತಮಿ ಗೌಡ ಅವರು ಸದಾ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಸೋಶಿಯಲ್ ಮೀಡಿಯಾದಲ್ಲಿ ಮೋಡಿ ಮಾಡುತ್ತಲೇ ಇರುತ್ತಾರೆ. ಇದೀಗ ಕೈಯಲ್ಲಿ ಗುಲಾಬಿ ಹಿಡಿದು ಸ್ಟೈಲೀಶ್ ಆಗಿ 'ಸಿಂಗಾರ ಸಿರಿ' ಸಪ್ತಮಿ ಫೋಟೋಶೂಟ್ ಮಾಡಿದ್ದಾರೆ.



ನೀಲಿ ಬಣ್ಣದ ಗೌನ್ ಧರಿಸಿ ಕೈಯಲ್ಲಿ ಗುಲಾಬಿ ಹಿಡಿದು ನಟಿ ಕ್ಯೂಟ್ ಆಗಿ ಪೋಸ್ ನೀಡಿದ್ದಾರೆ. ಸಪ್ತಮಿ ಮುದ್ದಾಗಿ ಬೀರಿರುವ ನಗುವಿಗೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ನಟಿಯ ಫೋಟೋಗೆ ಏಂಜಲ್, ಸಿಂಗಾರ ಸಿರಿ ಹೀಗೆ ನಾನಾ ಕಾಮೆಂಟ್‌ಗಳು ನೆಟ್ಟಿಗರಿಂದ ಹರಿದು ಬರುತ್ತಿವೆ.

ಇನ್ನೂ 2020ರಲ್ಲಿ ಡಾಲಿ ಧನಂಜಯ ನಟನೆಯ 'ಪಾಪ್ ಕಾರ್ನ್ ಮಂಕಿ ಟೈಗರ್' ಸಿನಿಮಾಗೆ ಸಪ್ತಮಿ ಹೀರೋಯಿನ್ ಆಗಿ ಸಿನಿಮಾರಂಗಕ್ಕೆ ಪಾದಾರ್ಪಣೆ ಮಾಡಿದರು. ಈ ಚಿತ್ರದ ಕುರಿತು ಅಭಿಮಾನಿಗಳಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿತ್ತು.

ಆ ನಂತರ 2022ರಲ್ಲಿ ರಿಷಬ್ ಶೆಟ್ಟಿ ನಟನೆಯ 'ಕಾಂತಾರ' ಸಿನಿಮಾಗೆ ಸಪ್ತಮಿ ಗೌಡ ನಾಯಕಿಯಾಗಿ ಗಮನ ಸೆಳೆದರು. ಈ ಸಿನಿಮಾದ ಭರ್ಜರಿ ಸಕ್ಸಸ್ ನಂತರ ಪ್ಯಾನ್ ಇಂಡಿಯಾ ಹೀರೋಯಿನ್ ಆಗಿ ಸಪ್ತಮಿ ಗುರುತಿಸಿಕೊಂಡರು.

ಬಳಿಕ ಬಾಲಿವುಡ್‌ನ 'ದಿ ವ್ಯಾಕ್ಸಿನ್ ವಾರ್' ಚಿತ್ರದಲ್ಲಿ ಸಪ್ತಮಿ ಪ್ರಮುಖ ಪಾತ್ರದಲ್ಲಿ ನಟಿಸಿದರು. ಈ ಚಿತ್ರವನ್ನು 'ದಿ ಕಾಶ್ಮೀರ್ ಫೈಲ್ಸ್' ನಿರ್ದೇಶಕ ವಿವೇಕ್ ಅಗ್ನಿಹೋತ್ರಿ ನಿರ್ದೇಶನ ಮಾಡಿದರು. ಬಳಿಕ ಯುವರಾಜ್‌ಕುಮಾರ್‌ಗೆ ನಾಯಕಿಯಾಗಿ 'ಯುವ' ಚಿತ್ರದಲ್ಲಿ ನಟಿಸಿದರು. ಈ ಸಿನಿಮಾಗೂ ಉತ್ತಮ ರೆಸ್ಪಾನ್ಸ್ ಸಿಕ್ಕಿತ್ತು.

ಈಗ ಟಾಲಿವುಡ್‌ನತ್ತ ಸಪ್ತಮಿ ಮುಖ ಮಾಡಿದ್ದಾರೆ. ನಿತಿನ್ ನಟನೆಯ ಹೊಸ ಸಿನಿಮಾಗೆ ನಾಯಕಿಯಾಗಿದ್ದಾರೆ. ಈ ಸಿನಿಮಾಗಾಗಿ ನಟಿ ಕುದುರೆ ಸವಾರಿ ಅಭ್ಯಾಸ ಮಾಡಿದ್ದರು. ಈ ತೆರೆಮರೆಯಲ್ಲಿ ಸಾಕಷ್ಟು ತಯಾರಿ ಮಾಡಿಕೊಂಡ್ಮೇಲೆ ಸಿನಿಮಾ ಸೆಟ್‌ಗೆ ನಟಿ ಎಂಟ್ರಿ ಕೊಟ್ಟರು. ಅಂದಹಾಗೆ, ಈ ಚಿತ್ರ ಮುಂದಿನ ವರ್ಷ ರಿಲೀಸ್ ಆಗಲಿದೆ.

ಈಗಾಗಲೇ ಸಪ್ತಮಿ 'ಕಾಂತಾರ' ಸಿನಿಮಾ ಮೂಲಕ ತೆಲುಗು ಮಂದಿಗೆ ಪರಿಚಿತರಾಗಿದ್ದಾರೆ. ನಿತಿನ್ ಜೊತೆಗಿನ ಚಿತ್ರದ ಮೂಲಕ ಮತ್ತೆ ತೆಲುಗು ಜನರ ಮನಗೆಲ್ಲುತ್ತಾರಾ? ಕಾದುನೋಡಬೇಕಿದೆ.





# ಬೇಬಿ ಬಂಪ್ ಫೋಟೋಶೂಟ್ ಹಂಚಿಕೊಂಡ ಹರಿಪ್ರಿಯಾ

ಸ್ಯಾಂಡಲ್‌ವುಡ್ ನಟಿ ಹರಿಪ್ರಿಯಾ ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ. ಇದೇ ಖುಷಿಯಲ್ಲಿ ನಟಿ ಬೇಬಿ ಬಂಪ್ ಫೋಟೋಶೂಟ್ ಮಾಡಿಸಿದ್ದಾರೆ. ಪತಿ ಜೊತೆ ನಿಂತು ನಟಿ ಬೇಬಿ ಬಂಪ್ ಫೋಟೋಶೂಟ್ ಮಾಡಿಸಿದ್ದು, ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ.



ಫೋಟೋಶೂಟ್‌ಗೆ ಕನ್ನಡ ಹಬ್ಬದ ಸಲುವಾಗಿ.. ನಾವು ಎಂದು ಹರಿಪ್ರಿಯಾ ದಂಪತಿ ಕ್ಯಾಪ್ಷನ್ ನೀಡಿದ್ದಾರೆ. ನಟಿ ಕೆಂಪು ಬಣ್ಣದ ಚೂಡಿದಾರ್‌ನಲ್ಲಿ ಮಿಂಚಿದ್ದಾರೆ. ಪತ್ನಿಯ ಬೇಬಿ ಬಂಪ್ ಹಿಡಿದು ವಸಿಷ್ಠ ಪೋಸ್ ನೀಡಿದ್ದಾರೆ. ಅವರು ಹಳದಿ ಬಣ್ಣದ ಶೇರ್ವಾನಿ ಧರಿಸಿದ್ದಾರೆ. ಈ ಫೋಟೋಶೂಟ್‌ಗೆ ಅಭಿಮಾನಿಗಳು ಮೆಚ್ಚುಗೆ ಸೂಚಿಸಿದ್ದಾರೆ.

ಅಂದಹಾಗೆ, ಹರಿಪ್ರಿಯಾ ಮತ್ತು ವಸಿಷ್ಠ ಕೆಲವು ವರ್ಷಗಳಿಂದ ಪ್ರೀತಿಸುತ್ತಿದ್ದರು. ಕಳೆದ ವರ್ಷ ಜ.26ರಂದು ಮೈಸೂರಿನಲ್ಲಿ ಮದುವೆಯಾದರು. ಈ ಮದುವೆಗೆ ಡಾಲಿ ಧನಂಜಯ, ಅಮೃತಾ ಅಯ್ಯಂಗಾರ್, ಶಿವಣ್ಣ ಸೇರಿದಂತೆ ಹಲವು ಭಾಗಿಯಾಗಿ ವಸಿಷ್ಠ ದಂಪತಿಗೆ ಶುಭಕೋರಿದ್ದರು.

## ಈ ವಾರವೇ ವೇಳಾಪಟ್ಟಿ ಬಿಡುಗಡೆ ಸಾಧ್ಯತೆ

# ಐಸಿಸಿ ಚಾಂಪಿಯನ್ ಟ್ರೋಫಿ

2025ರ ಫೆಬ್ರವರಿ 19 ರಿಂದ ಮಾರ್ಚ್ 9ರ ವರೆಗೆ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿ ಟೂರ್ನಿಯ ವೇಳಾಪಟ್ಟಿಯು ಇದೇ ವಾರದಲ್ಲಿ ಬಿಡುಗಡೆಯಾಗುವ ಸಾಧ್ಯತೆಯಿದೆ ಎಂದು ವರದಿಯಾಗಿದೆ.

50 ಓವರ್‌ಗಳ ಏಕದಿನ ಮಾದರಿಯ ಪಂದ್ಯ ಇದಾಗಿದೆ. ಈಗಾಗಲೇ ಪಾಕಿಸ್ತಾನ ಐಸಿಸಿ ಅನುಮತಿಗಾಗಿ ತಾತ್ಕಾಲಿಕ ವೇಳಾಪಟ್ಟಿ ಸಲ್ಲಿಸಿದ್ದು, ಅಂತಿಮ ವೇಳಾಪಟ್ಟಿ ಇದೇ ವಾರ ಬಿಡುಗಡೆಯಾಗುವ ಸಾಧ್ಯತೆಯಿದೆ. ಪ್ರಸಕ್ತ ಟೂರ್ನಿಗೆ ಪಾಕಿಸ್ತಾನದ ಮುಲ್ತಾನ್, ರಾವಲ್ಪಿಂಡಿ ಹಾಗೂ ಲಾಹೋರ್ ಕ್ರೀಡಾಂಗಣಗಳು ಆತಿಥ್ಯ ವಹಿಸಲಿವೆ. ತಾತ್ಕಾಲಿಕ ವೇಳಾಪಟ್ಟಿಯಲ್ಲಿ ಪಾಕ್, ಭಾರತದ ಎಲ್ಲ ಪಂದ್ಯಗಳನ್ನು ಲಾಹೋರ್ ಕ್ರೀಡಾಂಗಣದಲ್ಲಿ ನಿಗದಿಪಡಿಸಿದೆ.

**ಹೈಬ್ರಿಡ್ ಮಾದರಿಗೆ ಒಪ್ಪಲು ಒತ್ತಡ:** 2025ರ ಚಾಂಪಿಯನ್ಸ್ ಟ್ರೋಫಿಗಾಗಿ ಟೀಂ ಇಂಡಿಯಾ ಪಾಕಿಸ್ತಾನಕ್ಕೆ ಪ್ರಯಾಣಿಸುವುದಿಲ್ಲ ಎಂದು ಸ್ಪಷ್ಟವಾಗಿ ಹೇಳಿದೆ. ಹಾಗಾಗಿ ಹೈಬ್ರಿಡ್ ಮಾದರಿಗೆ ಒಪ್ಪಿಕೊಳ್ಳುವಂತೆ ಐಸಿಸಿಯ ಉನ್ನತ ಅಧಿಕಾರಿಗಳು ಪಾಕಿಸ್ತಾನ ಕ್ರಿಕೆಟ್ ಮಂಡಳಿ ಮೇಲೆ ಒತ್ತಡ ಹೇರುತ್ತಿದ್ದಾರೆ ಎನ್ನಲಾಗಿದೆ. ಆದ್ರೆ, ಇದ್ಯಾವುದಕ್ಕೂ ಕಿವಿಗೊಡದ ಪಿಸಿಬಿ ಈ ಬಾರಿ ಭಾರತ, ಬರಲಿ ಬರದೇ ಇರಲಿ, ಪಾಕ್ ನಲ್ಲೇ ಟೂರ್ನಿ ನಡೆಯಲಿದೆ ಎಂದು ಹೇಳಿದೆ.



**ಸಮಸ್ಯೆಯಿದ್ದರೆ ಮಾತನಾಡಿ ಬಗೆಹರಿಸೋಣ:** ಇನ್ನೂ ಪಾಕ್‌ಗೆ ಬರಲು ಒಪ್ಪದ ಬಿಸಿಸಿಐ ನಿರ್ಧಾರಕ್ಕೆ ಪ್ರತಿಕ್ರಿಯೆ ನೀಡಿರುವ ಪಿಸಿಬಿ ಮುಖ್ಯಸ್ಥ ಮೊಹ್ಸಿನ್, ಪಾಕಿಸ್ತಾನಕ್ಕೆ ಬರಲು ಸಮಸ್ಯೆಯಿದ್ದರೆ ಮಾತನಾಡಿ ಬಗೆಹರಿಸೋಣ ಎಂದು ಹೇಳಿದ್ದಾರೆ.

ಪಿಸಿಬಿ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿ ಆಯೋಜಿಸಲು ಉತ್ಸುಕವಾಗಿಲ್ಲ. ಚಾಂಪಿಯನ್ಸ್ ಟ್ರೋಫಿ ವಿಚಾರದಲ್ಲಿ ಐಸಿಸಿ ನಿರ್ಧಾರಕ್ಕಾಗಿ ಕಾಯುತ್ತಿದ್ದೇವೆ. ಈಗಾಗಲೇ ಟ್ರೋಫಿ ಆಯೋಜಿಸುವ ಸಲುವಾಗಿ ಕರಾಚಿ, ಲಾಹೋರ್ ಮತ್ತು ರಾವಲ್ಪಿಂಡಿ ಕ್ರೀಡಾಂಗಣಗಳನ್ನು ನವೀಕರಿಸಲು ಪಾಕಿಸ್ತಾನವು 17 ಶತಕೋಟಿ ರೂ.ಗಳನ್ನ (ಪಾಕಿಸ್ತಾನ ರೂಪಾಯಿ) ವಿನಿಯೋಗಿಸಿದೆ. ಅಲ್ಲದೇ ಇದು ಪಾಕಿಸ್ತಾನದ ಪ್ರತಿಷ್ಠೆಯಾಗಿದ್ದು, ಭಾರತ ತಂಡಕ್ಕಾಗಿ ಎದುರು ನೋಡುತ್ತಿದ್ದೇವೆ. ಕ್ರೀಡೆ ಮತ್ತು ರಾಜಕೀಯ ಪ್ರತ್ಯೇಕ ವಿಷಯಗಳು, ನಾವು ಎರಡನ್ನು ಒಟ್ಟಿಗೆ ಸೇರಿಸುವುದಿಲ್ಲ. ಚಾಂಪಿಯನ್ಸ್ ಟ್ರೋಫಿಗೆ ಅರ್ಹತೆ ಪಡೆದಿರುವ ಎಲ್ಲಾ ತಂಡಗಳು ಬರಲು ಸಿದ್ಧವಾಗಿವೆ. ಭಾರತಕ್ಕೆ ಕಾಳಜಿ ಇದ್ದರೆ ಬರಲಿ ಎಂದು ತಿಳಿಸಿದ್ದಾರೆ.

**ಬಿಸಿಸಿಐ ಷರತ್ತು ಏನು?:** ಚಾಂಪಿಯನ್ಸ್ ಟ್ರೋಫಿಗಾಗಿ ಭಾರತ ತಂಡವು ಪಾಕಿಸ್ತಾನಕ್ಕೆ ಬರುವುದಿಲ್ಲ ಎಂದು ಬಿಸಿಸಿಐ ಹೇಳಿದೆ. ಜೊತೆಗೆ ಭಾರತದ ಎಲ್ಲಾ ಪಂದ್ಯಗಳನ್ನು ದುಬೈಗೆ ಸ್ಥಳಾಂತರಿಸುವಂತೆ ಬೇಡಿಕೆಯಿಟ್ಟಿದೆ.

**ಐಸಿಸಿ ಮುಂದಿರುವ ಆಯ್ಕೆಗಳೇನು?**

**ಆಯ್ಕೆ 1:** ಬಿಸಿಸಿಐಯ ಹೈಬ್ರಿಡ್ ಮಾದರಿಯ ಪ್ರಸ್ತಾಪ ಒಪ್ಪಿಕೊಳ್ಳಲು ಪಾಕಿಸ್ತಾನ ಕ್ರಿಕೆಟ್ ಮಂಡಳಿಗೆ ಮನವರಿಕೆ ಮಾಡಿ, 15 ಪಂದ್ಯಗಳಲ್ಲಿ ಐದು ಪಂದ್ಯಗಳನ್ನು ಯುಎಇಗೆ ಸ್ಥಳಾಂತರಿಸುವುದು.

**ಆಯ್ಕೆ 2:** ಚಾಂಪಿಯನ್ಸ್ ಟ್ರೋಫಿ ಟೂರ್ನಿಯನ್ನು ಸಂಪೂರ್ಣವಾಗಿ ಪಾಕಿಸ್ತಾನದಿಂದ ತೆಗೆದುಹಾಕುವುದು. ಇದರಿಂದ ಟ್ರೋಫಿಯಿಂದ ಪಾಕ್ ತಂಡ ದೂರ ಉಳಿಯಲಿದೆ.

**ಆಯ್ಕೆ 3:** ಅನಿರ್ದಿಷ್ಟಾವಧಿವರೆಗೆ ಚಾಂಪಿಯನ್ಸ್ ಟ್ರೋಫಿ ಮುಂದೂಡುವುದು. ಈ ನಿರ್ಧಾರವು ಐಸಿಸಿ ಮತ್ತು ಪಿಸಿಬಿ ಎರಡರ ಆದಾಯದ ಮೇಲೆ ಭಾರಿ ಪರಿಣಾಮ ಬೀರಬಹುದು ಎಂದು ಹೇಳಲಾಗಿದೆ.

# ವಕ್ಫ್ ಬೋರ್ಡ್ ರಾಕ್ಷಸನನ್ನ ಮೋದಿ ಸಂಹಾರ ಮಾಡ್ತಾರೆ

**ಚಿಕ್ಕಬಳ್ಳಾಪುರ:** ಮುಂದಿನ ಸಂಸತ್ ಅಧಿವೇಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ವಕ್ಫ್ ಬೋರ್ಡ್ ಎಂಬ ರಾಕ್ಷಸನನ್ನ ಸಂಹಾರ ಮಾಡ್ತಾರೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಗುಡುಗಿದರು.

ನಗರದಲ್ಲಿ ವಕ್ಫ್ ಬೋರ್ಡ್‌ನಿಂದ ಶಾಲೆ, ದೇವಸ್ಥಾನ ಆಸ್ತಿ ಅತಿಕ್ರಮಣ ಖಂಡಿಸಿ ಚಿಕ್ಕಬಳ್ಳಾಪುರ ಬಿಜೆಪಿ ಘಟಕ ಬೃಹತ್ ಪ್ರತಿಭಟನೆ ನಡೆಸಿತು. ಈ ವೇಳೆ ಮಾತನಾಡಿದ ಆರ್. ಅಶೋಕ್, ವಕ್ಫ್ ಬೋರ್ಡ್ ಎಂಬುದು ತಿಮಿಂಗಲ, ಪಿಶಾಚಿ, ಕೊಳ್ಳಿ ದೆವ್ವ, ರಾಕ್ಷಸ ಇದ್ದ ಹಾಗೆ. ಈ ವಕ್ಫ್ ಬೋರ್ಡ್ ಎಂಬ ರಾಕ್ಷಸನನ್ನು ಪ್ರಧಾನಿ ಮೋದಿ ಸಂಹಾರ ಮಾಡ್ತಾರೆ ಎಂದು ವಾಗ್ದಾಳಿ ನಡೆಸಿದರು.

ವಕ್ಫ್ ಕೊಳ್ಳಿ ದೆವ್ವ ಇದ್ದ ಹಾಗೆ, ಅವರು ಕಾಲಿಟ್ಟ ಜಾಗವೆಲ್ಲ ಅವರದ್ದೇ ಅಂತಾರೆ. ಇಂತಹ ಬೋರ್ಡ್ ಇರಬೇಕಾ? ಖಂಡಿತಾ ವಜಾ ಆಗಬೇಕು. ಹಿಂದೂ, ಬೌದ್ಧರು, ಕ್ರೈಸ್ತರಿಗಿಲ್ಲದ ವಿಶೇಷ ಸ್ಥಾನಮಾನ ಇವರಿಗೆ ಯಾಕೆ? ಅಂಬೇಡ್ಕರ್ ಸಂವಿಧಾನ ಇವರಿಗೆ ಅನ್ವಯ ಆಗಲ್ವಾ? ಇದು ಕಾಂಗ್ರೆಸ್ ಮನೆಹಾಳು ಬುದ್ಧಿ ಹಾಗಾಗಿ ಅಧಿವೇಶನದಲ್ಲಿ ನಾವು ಸಹ ವಕ್ಫ್ ಬೋರ್ಡ್ ವಜಾ ಮಾಡಬೇಕು ಅಂತ ಹೋರಾಟ ಮಾಡ್ತೇವೆ ಎಂದು ಗುಡುಗಿದರು.



ವಕ್ಫ್ ಬೋರ್ಡ್‌ಗೆ ತಿಮಿಂಗಲ ಬೋರ್ಡ್ ಅಂತ ಹೆಸರಿಡಬೇಕು. ತಿಮಿಂಗಲದ ಕೆಲಸ ಎಲ್ಲವನ್ನೂ ನುಂಗಿ ಹಾಕೋದು. ಅದೇ ರೀತಿ ವಕ್ಫ್ ಬೋರ್ಡ್ ಸಹ ರೈತರ ಎಲ್ಲರ ಜಮೀನು ನುಂಗಿ ಹಾಕುತ್ತಿದೆ. ಹಾಗಾಗಿ ಅಧಿವೇಶನದ ಸಮಯದಲ್ಲಿ ಜನ ಬೀದಿಗಿಳಿದು ಹೋರಾಟ ಮಾಡಿ, ಸಂಸತ್ ಅಧಿವೇಶನದಲ್ಲಿ ವಕ್ಫ್ ಬೋರ್ಡ್ ರಾಕ್ಷಸನನ್ನ ಮೋದಿ ಸಂಹಾರ ಮಾಡ್ತಾರೆ ಎಂದು ನುಡಿದರು.

ಇನ್ನೂ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಸಂಸದ ಡಾ.ಕೆ ಸುಧಾಕರ್, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಲ್ಯಾಂಡ್ ಜಿಹಾದ್ ಘೋಷಣೆ ಮಾಡಿದೆ. ರೈತರ ಜಮೀನು ಉಳಿಸುವ ಸಲುವಾಗಿ ಬಿಜೆಪಿ ವತಿಯಿಂದ ಹೋರಾಟ ಮಾಡ್ತಿದ್ದೇವೆ. ಮರಳಿ ರೈತರಿಗೆ ವಾಪಾಸ್ ಕೊಡಿಸುವ ಕ್ರಮ ವಹಿಸುತ್ತಿದ್ದೇವೆ. ಬ್ರಿಟಿಷರು ಹೊಡೆದು ಆಳುತ್ತಿದ್ದರು ಅದನ್ನೇ ಕಾಂಗ್ರೆಸ್ ಸರ್ಕಾರ ಕಲಿತಿದೆ. ಜನರನ್ನ ಹೊಡೆದು ಆಳುವ ನೀತಿ ಅನುಸರಿಸುತ್ತಿದ್ದಾರೆ ಎಂದು ಕಿಡಿಕಾರಿದರು.

**ಹಿಂದೂಗಳನ್ನ 2ನೇ ದರ್ಜೆ ಪ್ರಜೆಗಳನ್ನಾಗಿ ಕಾಣ್ತಿದೆ:** ಹನುಮ ಧ್ವಜ ಕಟ್ಟಿದರೆ ಇಳಿಸ್ತಾರೆ, ಅಯೋಧ್ಯೆ ರಾಮಮಂದಿರ ಕಟ್ಟಿದ್ರೆ ಹೋಗಲ್ಲ ಅಂತಾರೆ, ಕರ ಸೇವಕರನ್ನ ಬಂಧಿಸ್ತಾರೆ, ವಿನಾಯಕ ಮೆರವಣಿಗೆ ಮಾಡಿದ್ರೆ, ಗಣೇಶನನ್ನ ಬಂಧಿಸ್ತಾರೆ. ಡಿಜೆ ಹಾಕೋ ಆಗಿಲ್ಲ ಅಂತ ಆಕ್ರೋಶ ಹೊರ ಹಾಕಿದರು. ಎಸ್ಪಿ, ಡಿವೈಎಸ್ಪಿ, ಎಸ್‌ಐ ಕಾಂಗ್ರೆಸ್‌ನವರ ತರ ಆಳ್ವಿಕೆ ಮಾಡ್ತಿದ್ದಾರೆ. ರೈತರ ಜಮೀನು ವಕ್ಫ್ ಆಸ್ತಿ ಆಗ್ತಿದೆ, ದೇವಾಲಯ ಖಬರಸ್ತಾನ್ ಆಗ್ತಿದೆ. ಇದಕ್ಕೆ ಪುಷ್ಟಿ ಕೊಡ್ತಿರೋದು ಕಾಂಗ್ರೆಸ್ ಸರ್ಕಾರ. ಹಿಂದೂಗಳ ಮೇಲೆ ವಕ್ಫ್ ಗಧಾಪ್ರಹಾರ ಮಾಡ್ತಿದೆ, ವಕ್ಫ್‌ಗೆ ಸಾವಿರಾರು ಎಕರೆಗಳಿವೆ ನೂರಾರು ಕೋಟಿ ಆದಾಯ ಇದೆ. ಆದ್ರೆ ಅವರಿಗೊಂದು ನ್ಯಾಯ ನಮಗೊಂದು ನ್ಯಾಯ ಎಂಬಂತೆ ಹಿಂದೂಗಳನ್ನು 2ನೇ ದರ್ಜೆ ಪ್ರಜೆಗಳನ್ನಾಗಿ ಸರ್ಕಾರ ಕಾಣ್ತಿದೆ ಅಂತ ತೀವ್ರ ವಾಗ್ದಾಳಿ ನಡೆಸಿದರು.

# ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಗೆ

## ಶಫಾಲಿ ವರ್ಮಾ, ಶ್ರೇಯಾಂಕಾ ಪಾಟೀಲ್ ಕೈಬಿಟ್ಟ ಭಾರತ

ಆಸ್ಟ್ರೇಲಿಯಾ ವಿರುದ್ಧ ನಡೆಯಲಿರುವ ಏಕದಿನ ಸರಣಿಗಾಗಿ ಬಿಸಿಸಿಐ ಆಟಗಾರ್ತಿಯರ ತಂಡವನ್ನು ಪ್ರಕಟಿಸಿದ್ದು, ಶಫಾಲಿ ವರ್ಮಾ ಹಾಗೂ ಶ್ರೇಯಾಂಕಾ ಪಾಟೀಲ್‌ನ್ನು ಕೈಬಿಟ್ಟಿದೆ.

ಡಿ.5 ರಿಂದ 11 ರವರೆಗೆ ನಡೆಯಲಿರುವ ಭಾರತ ಹಾಗೂ ಆಸ್ಟ್ರೇಲಿಯಾ ಮೂರು ಪಂದ್ಯಗಳ ಏಕದಿನ ಸರಣಿಗಾಗಿ ಬಿಸಿಸಿಐ ಆಟಗಾರ್ತಿಯರ ಪಟ್ಟಿಯನ್ನು ಪ್ರಕಟಿಸಿದೆ.

ಡಿ.5 ಹಾಗೂ ಡಿ.8 ರಂದು ಮೊದಲ ಎರಡು ಪಂದ್ಯಗಳು ಆಸ್ಟ್ರೇಲಿಯಾದ ಬ್ರಿಸ್ಬೇನ್‌ನ ಅಲನ್ ಬಾರ್ಡರ್ ಫೀಲ್ಡ್‌ನಲ್ಲಿ ಹಾಗೂ ಡಿ.11 ರಂದು ಫೈನಲ್ ಪಂದ್ಯ ವೆಸ್ಟರ್ನ್ ಆಸ್ಟ್ರೇಲಿಯನ್ ಕ್ರಿಕೆಟ್ ಅಸೋಸಿಯನ್ ಸ್ಟೇಡಿಯಂನಲ್ಲಿ ನಡೆಯಲಿದೆ.

ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ತನ್ನ ಎಕ್ಸ್ ಖಾತೆಯಲ್ಲಿ ಆಸ್ಟ್ರೇಲಿಯಾ ವಿರುದ್ಧ ನಡೆಯಲಿರುವ ಮೂರು ಪಂದ್ಯಗಳ ಏಕದಿನ ಸರಣಿಗಾಗಿ 15 ಸ್ಪರ್ಧಿಗಳನ್ನು ಪ್ರಕಟಿಸಿದೆ. ಸ್ಪರ್ಧಿಗಳ ಪಟ್ಟಿಯಲ್ಲಿ ಭಾರತ ಮಹಿಳಾ ತಂಡದ ಓಪನಿಂಗ್ ಬ್ಯಾಟರ್ ಶಫಾಲಿ ವರ್ಮಾ ಹಾಗೂ ಸ್ಪಿನ್ನರ್ ಶ್ರೇಯಾಂಕಾ ಪಾಟೀಲ್ ಅವರನ್ನು ಕೈಬಿಟ್ಟಿದೆ.



ಇನ್ನೂ ಕಳೆದ ತಿಂಗಳು ನಡೆದ ನ್ಯೂಜಿಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಭಾರತ ಗೆಲುವನ್ನು ಸಾಧಿಸಿತ್ತು. ಈ ಗೆಲುವಿನ ಭಾಗವಾಗಿದ್ದ ಐವರು ಆಟಗಾರರನ್ನು ಮುಂಬರುವ ಪಂದ್ಯಗಳಿಗೆ ಬಿಸಿಸಿಐ ಆಯ್ಕೆ ಮಾಡಿಲ್ಲ. ಆದರೆ ಹರ್ಲೀನ್ ಡಿಯೋಲ್, ಪ್ರಿಯಾ ಪುನಿಯಾ ಮತ್ತು ವಿಕೆಟ್ ಕೀಪರ್-ಬ್ಯಾಟರ್ ರಿಚಾ ಘೋಷ್ ತಂಡದಲ್ಲಿದ್ದಾರೆ.

ನ್ಯೂಜಿಲೆಂಡ್ ಸರಣಿಯ ವೇಳೆ 12ನೇ ತರಗತಿಯ ಬೋರ್ಡ್ ಪರೀಕ್ಷೆಗಳಿಗೆ ಹಾಜರಾಗಬೇಕಾಗಿದ್ದರಿಂದ ರೀಚಾ ಘೋಷ್ ಆ ಪಂದ್ಯದಲ್ಲಿರಲಿಲ್ಲ. ಇಲ್ಲಿಯವರೆಗೆ ಶಫಾಲಿ ವರ್ಮಾ ಆಡಿದ 29 ಏಕದಿನ ಸರಣಿಯಲ್ಲಿ ಒಟ್ಟು 644 ರನ್ ಗಳಿಸಿದ್ದಾರೆ. ಇನ್ನೂ ಕಳೆದ ತಿಂಗಳು ನ್ಯೂಜಿಲೆಂಡ್ ವಿರುದ್ಧ ಆಡಿದ ಮೂರು ಪಂದ್ಯಗಳಲ್ಲಿ 33, 11 ಮತ್ತು 12 ರನ್ ಗಳಿಸಿದ್ದರು.

**ಭಾರತ ತಂಡ:** ಹರ್ಮನ್‌ಪ್ರೀತ್ ಕೌರ್ (ನಾಯಕಿ), ಸ್ಮೃತಿ ಮಂಧಾನ (ಉಪನಾಯಕಿ), ಪ್ರಿಯಾ ಪುನಿಯಾ, ಜೆಮಿಮಾ ರೋಡ್ರಿಗಸ್, ಹರ್ಲೀನ್ ಡಿಯೋಲ್, ಯಾಸ್ತಿಕಾ ಭಾಟಿಯಾ (ವಿಕೆಟ್ ಕೀಪರ್), ರಿಚಾ ಘೋಷ್ (ವಿಕೆಟ್ ಕೀಪರ್), ತೇಜಲ್ ಹಸಬ್ನಿಸ್, ದೀಪ್ತಿ ಶರ್ಮಾ, ಮಿನ್ನು ಮಣಿ , ಪ್ರಿಯಾ ಮಿಶ್ರಾ, ರಾಧಾ ಯಾದವ್, ಟಿಟಾಸ್ ಸಾಧು, ಅರುಂಧತಿ ರೆಡ್ಡಿ, ರೇಣುಕಾ ಸಿಂಗ್ ಠಾಕೂರ್, ಸೈಮಾ ಠಾಕೂರ್.

## ಸರ್ಕಾರದ ವಿರುದ್ಧವೇ ಕೈ ಶಾಸಕ ಗವಿಯಪ್ಪ ಆಕ್ರೋಶ

# ಕ್ಷೇತ್ರದ ಅಭಿವೃದ್ಧಿಗೆ ಅನುದಾನವೇ ಸಿಗುತ್ತಿಲ್ಲ

**ಬಳ್ಳಾರಿ:** ಇಲ್ಲಿಯವರೆಗೆ ನಮ್ಮ ಕ್ಷೇತ್ರಕ್ಕೆ ಅನುದಾನ ಕೊಡುತ್ತಿಲ್ಲ ಎಂದು ಬಿಜೆಪಿ ಶಾಸಕರು ಕಾಂಗ್ರೆಸ್ ಸರ್ಕಾರದ ವಿರುದ್ಧ ದೂರುತ್ತಿದ್ದರು. ಆದರೆ ಈಗ ಕಾಂಗ್ರೆಸ್ ಶಾಸಕರೇ ಅನುದಾನದ ವಿಚಾರವನ್ನು ಪ್ರಸ್ತಾಪಿಸಿ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಲು ಆರಂಭಿಸಿದ್ದಾರೆ.



ನೀವು ಶಾಸಕರಾಗಿ ಎರಡು ವರ್ಷ ಆಗುತ್ತಾ ಬಂದಿದೆ. ಏನು ಕೆಲಸ ಮಾಡಿದ್ದೀರಿ ತೋರಿಸಿ ಎಂದು ಜನ ನನ್ನನ್ನು ಕೇಳುತ್ತಿದ್ದಾರೆ. ಆದರೆ ನನ್ನ ಕ್ಷೇತ್ರ ಅಭಿವೃದ್ಧಿ ಮಾಡಲು ಹಣ ಇಲ್ಲ. ನಮ್ಮದೇ ಸರ್ಕಾರ ಇದ್ದರೂ ಅನುದಾನ ಬಿಡುಗಡೆ ಆಗುತ್ತಿಲ್ಲ ಎಂದು ವಿಜಯನಗರ ಜಿಲ್ಲೆಯ ಹೊಸಪೇಟೆ ಶಾಸಕ ಎಚ್ ಆರ್ ಗವಿಯಪ್ಪ ತಮ್ಮದೇ ಸರ್ಕಾರದ ವಿರುದ್ಧ ಸಿಟ್ಟು ಹೊರಹಾಕಿದ್ದಾರೆ.

ಬೇರೆ ಬೇರೆ ಕಡೆ ಅನುದಾನ ಸಿಗುತ್ತಿದೆ. ಆದರೆ ನನ್ನ ಕ್ಷೇತ್ರಕ್ಕೆ ಕೆಕೆಆರ್‌ಡಿಬಿ ಸೇರಿದಂತೆ ಯಾವ ಅನುದಾನವೂ ಸರಿಯಾಗಿ ಸಿಗುತ್ತಿಲ್ಲ. ಕ್ಷೇತ್ರದಲ್ಲಿ ಯಾವುದೇ ಕಾಮಗಾರಿ ಮಾಡುವುದಕ್ಕೆ ಸಾಧ್ಯವಾಗುತ್ತಿಲ್ಲ. ಎಲ್ಲವನ್ನು ತಿಳಿದುಕೊಳ್ಳುವುದ್ದಕ್ಕೆ ಒಂದೂವರೆ ವರ್ಷ ಕಳೆದು ಬಿಟ್ಟೆ. ಇನ್ನು ಎಷ್ಟು ವರ್ಷ ಹೀಗೆ ಅನುದಾನವಿಲ್ಲದೇ ಇರಲು ಸಾಧ್ಯ ಎಂದು ಹೇಳುವ ಮೂಲಕ ಸರ್ಕಾರಕ್ಕೆ ಚಾಟಿ ಬೀಸಿದರು.

ಈ ಹಿಂದೆ ಇದ್ದ ಬಿಜೆಪಿ ಶಾಸಕ ಆನಂದ್ ಸಿಂಗ್ ತಂದ ಅನುದಾನದಲ್ಲಿಯೇ ಒಂದೂವರೆ ವರ್ಷ ಕೆಲಸ ನಡೆದಿದೆ. ಈಗಲಾದರೂ ನಮಗೆ ಕೆಲಸ ಮಾಡಲು ಅನುದಾನ ಬೇಕಲ್ವಾ? ಕೆಕೆಆರ್‌ಡಿಬಿಯಿಂದ ನೂತನ ವಿಜಯನಗರ ಜಿಲ್ಲೆಗೆ ಒಟ್ಟು 348 ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ. ವಿಜಯನಗರ ಜಿಲ್ಲೆಯ ಬೇರೆ ಬೇರೆ ಕ್ಷೇತ್ರಗಳಿಗೆ 60, 70 ಕೋಟಿ ರೂ. ಅನುದಾನ ನೀಡಿದ್ದಾರೆ. ವಿಜಯನಗರ ಕ್ಷೇತ್ರಕ್ಕೆ ಕೇವಲ 22 ಕೋಟಿ ರೂ. ಹಣ ಬಿಡುಗಡೆ ಮಾಡಲಾಗಿದೆ. ಅದರಲ್ಲಿ ಜಿಲ್ಲಾಸ್ಪತ್ರೆ ಕಟ್ಟಡಕ್ಕೆ 12 ಕೋಟಿ ರೂ. ಅನುದಾನ ನೀಡಿದ್ದೇನೆ. ಉಳಿದ 8 ಕೋಟಿ ರೂ. ಅನುದಾನದಲ್ಲಿ ಕ್ಷೇತ್ರದಲ್ಲಿ ಏನು ಕೆಲಸ ಮಾಡಲು ಸಾಧ್ಯವಾಗುತ್ತೆ ಎಂದು ಪ್ರಶ್ನಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧವೂ ಅಸಮಾಧಾನ ಹೊರ ಹಾಕಿದ ಅವರು, ಜಿಲ್ಲೆಗೆ ಬರುವ ಅನುದಾನದಲ್ಲಿ ಜಿಲ್ಲಾ ಕೇಂದ್ರದ ಅಭಿವೃದ್ಧಿಗೆ ಉಸ್ತುವಾರಿ ಸಚಿವರು 25%ರಷ್ಟು ಅನುದಾನ ಮೀಸಲಿಡಬೇಕು. ಅದು ಜಿಲ್ಲಾ ಉಸ್ತುವಾರಿ ಸಚಿವರ ಕೈಯಲ್ಲಿ ಇರುತ್ತದೆ. ನಮ್ಮ ಜಿಲ್ಲಾ ಉಸ್ತುವಾರಿ ಜಮೀರ್ ಅಹ್ಮದ್ ಅವರು ಅದನ್ನು ಮಾಡಿಲ್ಲ. ಬೇಕಾದ್ರೆ, ಅವರ ವಿವೇಚನೆಗೆ ಬಂದಂತೆ ಅನುದಾನ ಬಳಸಲಿ. ನಾನು ಏನೂ ಕೇಳಲ್ಲ. ಒಟ್ಟಿನಲ್ಲಿ ನನ್ನ ಕ್ಷೇತ್ರದಲ್ಲಿ ಕೆಲಸ ಆಗಬೇಕು ಎಂದು ನೇರವಾಗಿಗೆ ಸಿಟ್ಟು ಹೊರ ಹಾಕಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com